ಸಂಪುಟ: 21, ಸಂಚಿಕೆ: 147, ಪುಟಗಳು: 8, ಬುಧವಾರ, 6 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಬುಧವಾರ 6, ಮಾರ್ಚ್ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಮಾಘ ಮಾಸ, ಕೃಷ್ಣ ಪಕ್ಷ,
- ಬುಧವಾರ, ಏಕಾದಶಿ ತಿಥಿ
- ಪೂರ್ವಾಷಾಡ ನಕ್ಷತ್ರ
- ರಾಹುಕಾಲ : 12:35 ರಿಂದ 2:05
- ಗುಳಿಕಕಾಲ : 11:05 ರಿಂದ 12:35
- ಯಮಗಂಡಕಾಲ : 8:05 ರಿಂದ 9:35

# ಮುಕ್ಕಾಲು ಗಂಟೆಯಲ್ಲಿ ಬರೋಬ್ಬರಿ 10 ಬಸ್ಸಿನಲ್ಲಿ ಬಾಂಬರ್ ಸಂಚಾರ!

**ಬೆಂಗಳೂರು:** ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದಲ್ಲಿ ಉಗ್ರನ ಖತರ್ನಾಕ್ ಪ್ಲಾನ್‌ಗೆ ಪೊಲೀಸರೇ ಸುಸ್ತಾಗಿದ್ದಾರೆ. ಬಾಂಬ್ ಇಡಲು ಐಟಿಪಿಎಲ್ ಬಸ್ಸಿನಲ್ಲಿ ಆಗಮಿಸಿದ್ದ ಬಾಂಬರ್ ಬಾಂಬ್ ಇಟ್ಟ ಬಳಿಕ ಬರೋಬ್ಬರಿ 10 ಬಿಎಂಟಿಸಿ ಬಸ್ ಬಳಸಿದ ವಿಚಾರ ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ.

ಹೌದು. ಮಾರ್ಚ್ 1 ಶುಕ್ರವಾರ ಬೆಳಗ್ಗೆ ಐಟಿಪಿಎಲ್‌ನಿಂದ ಬಸ್‌ನಲ್ಲಿ ಆಗಮಿಸಿದ್ದ ಆರೋಪಿ ಖತರ್ನಾಕ್ ಪ್ಲ್ಯಾನ್ ಮಾಡಿ ತೆರಳಿದ್ದಾನೆ. ಬಸ್ಸು ಹತ್ತಿ ಇಳಿದು ಮತ್ತೆ ಹತ್ತಿ ಪೊಲೀಸರ ದಿಕ್ಕು ತಪ್ಪಿಸುವ ಕೆಲಸ ಮಾಡಿದ್ದಾನೆ.

ಕೆಫೆಯಿಂದ ತೆರಳಿದ ಬಳಿಕ ಕುಂದಲಹಳ್ಳಿ ಬಸ್ ನಿಲ್ದಾಣದಲ್ಲಿ ಬಸ್ಸು ಹತ್ತಿ ಮುಂದಿನ ನಿಲ್ದಾಣದಲ್ಲಿ ಇಳಿದಿದ್ದಾನೆ. ಕೇವಲ ಮುಕ್ಕಾಲು ಗಂಟೆಯಲ್ಲೇ ಬರೋಬ್ಬರಿ 10 ಬಸ್




ಬದಲಾಯಿಸಿದ್ದಾನೆ. ಯಾವ ಬಸ್ಸು ಹತ್ತಬೇಕು? ಯಾವ ಬಸ್ಸಿನಲ್ಲಿ ಇಳಿಯಬೇಕು? ಮುಂದಿನ ನಿಲ್ದಾಣ ಯಾವುದು? ಎಲ್ಲ ವಿಚಾರಗಳು ಆತನಿಗೆ ಸ್ಪಷ್ಟವಾಗಿ ಗೊತ್ತಿತ್ತು. ಹತ್ತು ಬಸ್ಸು ಬದಲಾಯಿಸಿದ್ದರಿಂದ ಆತ ಸ್ಥಳೀಯ ನಿವಾಸಿಯೇ ಆಗಿರಬೇಕು ಅಥವಾ ಹಲವು ಬಾರಿ ಈ ಜಾಗದಲ್ಲಿ ಆ ವ್ಯಕ್ತಿ ಓಡಾಡಿರಬಹುದು ಎಂಬ ಬಲವಾದ ಅನುಮಾನವನ್ನು ಪೊಲೀಸರು ಈಗ ವ್ಯಕ್ತಪಡಿಸಿದ್ದಾರೆ.

ಬಾಂಬರ್ ಪತ್ತೆಗಾಗಿ ರೂಟ್ ಮ್ಯಾಪಿಂಗ್‌ಗೆ ಪೊಲೀಸರು ಇಳಿದಿದ್ದು ಶಂಕಿತ ಓಡಾಡಿದ ಅಷ್ಟೂ ಸಣ್ಣ ಸಣ್ಣ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಮ್ಯಾಪ್ ಮಾಡಿ ಮಾಹಿತಿ ಕಲೆ ಹಾಕಲು ಆರಂಭಿಸಿದ್ದಾರೆ. ಮುಖ್ಯ ರಸ್ತೆಯಿಂದ ಸಣ್ಣ ರಸ್ತೆಯನ್ನು ಸಹ ಪೊಲೀಸರು ಕವರ್ ಮಾಡಿ ತನಿಖೆ ನಡೆಸುತ್ತಿದ್ದಾರೆ.

ಕೆಫೆಗೆ ಬಾಂಬ್ ಇಟ್ಟ ಬಳಿಕ ಆರೋಪಿ ಕುಂದಲಹಳ್ಳಿಯಲ್ಲಿ ಬಸ್ ಹತ್ತಿ ಕಾಡುಗೋಡಿಯಲ್ಲಿ ಇಳಿದಿದ್ದಾನೆ. ಬಳಿಕ ಆತ ಎಲ್ಲಿಗೆ ಹೋದ ಎಂಬ ಬಗ್ಗೆ ಸ್ಪಷ್ಟ ಸುಳಿವು ಸಿಕ್ಕಿಲ್ಲ. ಹೀಗಾಗಿ ಕುಂದಲಹಳ್ಳಿ,

ಪುಟ 2

## ಬೆಂಗಳೂರಿನಲ್ಲಿ ಹೊಸ ನಿಯಮ

# ಒಬ್ಬರಿಗೆ ಒಂದೇ ಕ್ಯಾನ್ ನೀರು!



**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಬೇಸಿಗೆ ಆರಂಭ ಆಗುತ್ತಿದ್ದಂತೆ ಈ ವರ್ಷ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿಯೇ ಇದ್ದು ಒಬ್ಬರಿಗೆ ಒಂದೇ ಕ್ಯಾನ್ ನೀರು ಮಾತ್ರ ನೀಡಲಾಗುತ್ತಿದೆ. ಬೋರ್‌ವೆಲ್‌ನಲ್ಲಿ ನೀರಿಲ್ಲ, ಕಾವೇರಿ ನೀರು ಸರಿಯಾಗಿ ಬರುತ್ತಿಲ್ಲ, ಟ್ಯಾಂಕರ್ ನೀರಿನ ಬೆಲೆ ದುಬಾರಿಯಾದ ಕಾರಣ ಈಗ ಬಹುತೇಕ ಮಂದಿ ಶುದ್ಧ ನೀರಿನ ಘಟಕದತ್ತ ಚಿತ್ತ ಹರಿಸಿದ್ದಾರೆ. ಇಲ್ಲೂ ನೀರಿನ ಅಭಾವದ ಜೊತೆ ಎಲ್ಲರಿಗೂ ನೀರು ಕೊಡಬೇಕಾಗಿರುವುದರಿಂದ ಹೊಸ ನಿಯಮ ಶುರುವಾಗಿದ್ದು ಒಬ್ಬರಿಗೆ ಒಂದೇ ಕ್ಯಾನ್ ನೀರು ನೀಡಲಾಗುತ್ತದೆ.

ಪುಟ 2

## ಇಂದು ದೆಹಲಿಗೆ ರೈತರ ಮೆರವಣಿಗೆ

# ಪೊಲೀಸ್ ಬಿಗಿ ಭದ್ರತೆ

**ದೆಹಲಿ:** ಕನಿಷ್ಠ ಬೆಂಬಲ ಬೆಲೆ ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗಾಗಿ ಇಂದು ಧರಣಿ ನಿರತ ರೈತರು ದೆಹಲಿಗೆ ಪಾದಯಾತ್ರೆ ನಡೆಸಲಿದ್ದಾರೆ. ಈ ನಿಟ್ಟಿನಲ್ಲಿ ರಾಜಧಾನಿಯ ಭದ್ರತೆಯನ್ನು ಹೆಚ್ಚಿಸಲಾಗಿದೆ. ಟಿಕ್ರಿ, ಸಿಂಘು ಮತ್ತು ಘಾಜಿಪುರ ಗಡಿಗಳಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ರೈಲ್ವೆ ಮತ್ತು ಮೆಟ್ರೋ ನಿಲ್ದಾಣಗಳು ಮತ್ತು ಬಸ್ ನಿಲ್ದಾಣಗಳಲ್ಲಿ ಕಟ್ಟುನಿಟ್ಟಿನ ನಿಗಾ ಇರಿಸಲಾಗಿದೆ. ಪಂಜಾಬ್-ಹರಿಯಾಣದ ಶಂಭು ಮತ್ತು ಖಾನೌರಿ ಗಡಿಯಲ್ಲಿ ರೈತರು ಹಲವು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ.

ಪಂಜಾಬ್ ಮತ್ತು ಹರ್ಯಾಣದ ಗಡಿಯನ್ನು 28 ದಿನಗಳವರೆಗೆ ಮುಚ್ಚಲಾಗಿದೆ. ಇದಕ್ಕೆ ಕೇಂದ್ರ ಸರ್ಕಾರವೇ ಹೊಣೆ. ನಮ್ಮ ಕಡೆಯಿಂದ ನಾವು ಯಾವುದೇ ತಡೆ ಮಾಡಿಲ್ಲ. ಹರಿಯಾಣದಲ್ಲಿ 70 ಸಾವಿರ ಪಡೆಗಳನ್ನು ಏಕೆ ನಿಯೋಜಿಸಲಾಗಿದೆ ಯಾಕೆ ನಮ್ಮ ಮೇಲೆ ಅಷ್ಟು ಭಯವೇ ಎಂದು ಪ್ರಶ್ನಿಸಿದರು.

ಕಾಲ್ನಡಿಗೆ, ರೈಲು ಅಥವಾ ಬಸ್‌ನಲ್ಲಿ ದೆಹಲಿಗೆ ತೆರಳಲು ಇತರ ರಾಜ್ಯಗಳ ರೈತರನ್ನು ರೈತ ಮುಖಂಡ ಸರ್ವಾನ್ ಸಿಂಗ್ ಪಂಧೇರ್ ಕೇಳಿಕೊಂಡಿದ್ದಾರೆ. ಇದಲ್ಲದೆ ಶಂಭು ಬಾರ್ಡರ್ ಮತ್ತು ಖಾನೌರಿ ಬಾರ್ಡರ್‌ನಲ್ಲಿ ಕುಳಿತ ರೈತರು ಅಲ್ಲಿಯೇ ಕುಳಿತು ಧರಣಿ ನಡೆಸಲಿದ್ದಾರೆ. ಮಾರ್ಚ್ 10 ರಂದು, ನಾವು ಭಾರತದಾದ್ಯಂತ 12 ರಿಂದ 4 ಗಂಟೆಯವರೆಗೆ ರೈಲು ತಡೆ ನಡೆಸಲು ಕೇಳಿಕೊಂಡಿದ್ದೇವೆ ಎಂದು ರೈತರು ಹೇಳಿದ್ದಾರೆ.

ಪುಟ 2




## 3 ಜಿಲ್ಲೆಗಳಲ್ಲಿ ಎನ್‌ಐಎ ಶೋಧ

# 3 ಜನ ವಶಕ್ಕೆ

**ಬೆಂಗಳೂರು:** ರಾಷ್ಟ್ರೀಯ ತನಿಖಾ ಸಂಸ್ಥೆ ಅಧಿಕಾರಿಗಳು ಮಂಗಳವಾರ (ಮಾ.05) ರಂದು ಬೆಂಗಳೂರು, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಯ ಕೆಲವು ಪ್ರದೇಶಗಳಲ್ಲಿ ಶೋಧ ಕಾರ್ಯ ನಡೆಸಿ ಮೂವರನ್ನು ವಶಕ್ಕೆ ಪಡೆದಿದ್ದಾರೆ. ಬೆಂಗಳೂರಿನ ಸೈಯದ್ ಖೈಲ್, ಮೂಲತಃ ಕೇರಳ ಇಡುಕ್ಕಿ ನಿವಾಸಿ, ಸುಳ್ಯ ತಾಲೂಕಿನ ಕಲ್ಮಡ್ಕ ಗ್ರಾಮದ ಬಿಜು ಅಬ್ರಹಾಂ ಹಾಗೂ ಅತ್ತಾವರ ಗ್ರಾಮದ ನಬೀದ್ ಎಂಬಾತನನ್ನು ವಶಕ್ಕೆ ಪಡೆದಿದ್ದಾರೆ. ಇನ್ನು ಅಧಿಕಾರಿಗಳು ಉತ್ತರ ಕನ್ನಡ ಜಿಲ್ಲೆಯ ಅಂಕೋಲದಲ್ಲಿ ನಾಸಿರ್ ಖಾನ್ ಎಂಬಾತನಿಗಾಗಿ ಹುಡುಕಾಟ ನಡೆಸಿದರು.




ಪುಟ 2

## ಸಂಕ್ಷಿಪ್ತ ಸುದ್ದಿ

### ಹಣ ಡಬಲ್ ಮಾಡುವ ಆಸೆ ಹುಟ್ಟಿಸಿ ವಂಚನೆ ಅರೆಸ್ಟ್



**ಬೆಂಗಳೂರು:** ವಿಡಿಯೋದಲ್ಲಿ ಕಂತೆ ಕಂತೆ ಹಣ ತೋರಿಸಿ ವಂಚಿಸುತ್ತಿದ್ದವನನ್ನ ಬೆಂಗಳೂರಿನ ಸುಬ್ರಹ್ಮಣ್ಯನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ವಂಚಕ ಕಿಶನ್ ಅಲಿಯಾಸ್ ಮಾಕಳಿ ಕಿಶನ್ ಬಂಧಿತ ಆರೋಪಿ. ಈ ಆರೋಪಿ ಟ್ರೇಡಿಂಗ್ ಹೆಸರಿನಲ್ಲಿ ಅಮಾಯಕರಿಗೆ ಬಲೆ ಬೀಸಿ ಲಕ್ಷ ಲಕ್ಷ ಹಣ ಪಡೆದು ವಂಚನೆ ಮಾಡಿದ್ದಾನೆ.

ಪುಟ 2

### ಗಿಫ್ಟ್ ಕೊಟ್ಟಿಲ್ಲವೆಂದು ಗಂಡನಿಗೆ ಚಾಕು ಇರಿದ್ಳು




**ಬೆಂಗಳೂರು:** ಮದುವೆ ವಾರ್ಷಿಕೋತ್ಸವಕ್ಕೆ ಉಡುಗೊರೆ ಕೊಡಲಿಲ್ಲ ಎಂದು ಕೋಪ ಮಾಡಿಕೊಂಡು ಮಹಿಳೆಯೊಬ್ಬರು ತನ್ನ ಗಂಡನಿಗೆ ಚಾಕುವಿನಿಂದ ಇರಿದಿರುವ ಘಟನೆ ನಗರದಲ್ಲಿ ನಡೆದಿದೆ.

ಪುಟ 2

### ಕಾರಿಗೆ ಬಸ್ ಡಿಕ್ಕಿ, ಐವರು ಸ್ಥಳದಲ್ಲೇ ಸಾವು

**ಹರ್ಯಾಣ:** ಹರ್ಯಾಣದ ರೇವಾರಿಯಲ್ಲಿ ಹರ್ಯಾಣ ಬಸ್ ಒಂದು ಕಾರಿಗೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐವರು ಸಾವನ್ನಪ್ಪಿದ್ದಾರೆ.ಐವರು ಮದುವೆ ಸಮಾರಂಭದಿಂದ ಹಿಂದಿರುಗುತ್ತಿದ್ದಾಗ ಮಹೇಂದ್ರಗಢ ರಸ್ತೆಯಲ್ಲಿ ಅಪಘಾತ ಸಂಭವಿಸಿದೆ. ಬಲೆನೊ ಕಾರಿಗೆ ಬಸ್ ಡಿಕ್ಕಿ ಹೊಡೆದಿದ್ದು, ಐವರು ಗಾಯಗೊಂಡಿದ್ದಾರೆ. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ವೈದ್ಯರು ಮೃತಪಟ್ಟಿರುವುದಾಗಿ ಘೋಷಿಸಿದ್ದಾರೆ.

ಪುಟ 2

## ಮಂಡ್ಯ ಕಾಂಗ್ರೆಸ್‌ನಲ್ಲಿ ಭಿನ್ನಮತ ಸ್ಫೋಟ

# ರವೀಂದ್ರ ರಾಜೀನಾಮೆ

**ಮಂಡ್ಯ:** ಲೋಕಸಭೆ ಚುನಾವಣೆಗೆ ಕೆಲವೆ ತಿಂಗಳು ಬಾಕಿ ಇರುವಾಗಲೆ ಮಂಡ್ಯ ಕಾಂಗ್ರೆಸ್‌ನಲ್ಲಿ ಭಿನ್ನಮತ ಸ್ಫೋಟಗೊಂಡಿದೆ. ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ವೆಂಕಟರಮಣ ಗೌಡ ಅಲಿಯಾಸ್ ಸ್ಟಾರ್ ಚಂದ್ರು ಅವರಿಗೆ ಮನ್ನಣೆ ನೀಡಿದ ಹಿನ್ನೆಲೆಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹುದ್ದೆಗೆ ಡಾ.ಹೆಚ್. ಎನ್.ರವೀಂದ್ರ ರಾಜೀನಾಮೆ ನೀಡಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ನನ್ನ ಮೇಲೆ ನಂಬಿಕೆ ಇಟ್ಟು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹುದ್ದೆಯ ಜವಾಬ್ದಾರಿ ಕೊಟ್ಟಿದ್ದರು. ಇದೀಗ ವಾತವರಣ ಕಲುಷಿತವಾಗಿದೆ. ಹೀಗಾಗಿ ಕೆಪಿಸಿಸಿ ಹುದ್ದೆಗೆ ರಾಜೀನಾಮೆ ಕೊಟ್ಟಿದ್ದೇನೆ ಎಂದರು.

ಕೆಪಿಸಿಸಿಯ ಪ್ರತಿಯೊಂದು ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೇನೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ಕೊಡುತ್ತಾರೆ ಎಂಬ ವಿಶ್ವಾಸ ಇತ್ತು. ಕಡೆ ಗಳಿಗೆಯಲ್ಲಿ ಮೇಲುಕೋಟೆ ಕ್ಷೇತ್ರವನ್ನು ರೈತ ಸಂಘಕ್ಕೆ ನೀಡಿದ್ದಾರೆ. ರೈತ ಸಂಘಕ್ಕೆ ಬಿಟ್ಟುಕೊಡುವ ಬಗ್ಗೆ ಸೌಜನ್ಯಕ್ಕೂ ಚರ್ಚೆ ಮಾಡದೆ ತೀರ್ಮಾನ ತೆಗೆದುಕೊಂಡರು. ಕಾರ್ಯಕರ್ತರು, ಸ್ಥಳೀಯರು ನಿಮಗೆ ಗುಲಾಮರು, ನೀವು ಹೇಳಿದ ಹಾಗೆ ಕುಣಿಯುವ ಗೊಂಬೆಗಳು ನಾವು ಎಂದು ಬೇಸರ ವ್ಯಕ್ತಪಡಿಸಿದರು.



ಪಕ್ಷ ಸೂಚಿಸಿದ ಮೆರೆಗೆ ದರ್ಶನ್ ಪುಟ್ಟಣ್ಣಯ್ಯ ಪರ ಪ್ರಚಾರ ಮಾಡಿ ಕೆಲಸ ಮಾಡಿದ್ದೇನೆ. ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದರು. ಕಳೆದ ಲೋಕಸಭೆ ಚುನಾವಣೆಯಲ್ಲಿ ಸುಮಲತಾ ಅಂಬರೀಶ್ ಅವರು ಗೆದ್ದರು. ಮತದಾನ ಮುಗಿದ ನಂತರ ನಟ ದರ್ಶನ್ ಕೂಡ ಕರೆ ಮಾಡಿ ನಿಮ್ಮಿಂದ ಅಪ್ಪಾಜಿ ಅವರ ಗೌರವ ಉಳಿಯಿತು ಅಂತ ಹೇಳಿದರು. ಸುಮಲತಾ ಅಂಬರೀಶ್ ಕೂಡ ಮಾತನಾಡಿ ಜನರೆಲ್ಲ ನಮ್ಮ ಸ್ಟಾರ್ (ಅಂಬರೀಶ್) ಅವರ ಅಭಿಮಾನಿಗಳು, ಆದರೆ ಸ್ಟಾರ್‌ಗಳು ನಿಮಗೆ (ಡಾ.ಹೆಚ್.ಎನ್.ರವೀಂದ್ರ) ಅಭಿಮಾನಿಗಳಾಗಿದ್ದಾರೆ ಅಂದರು.

ಪುಟ 2

## ಭಟ್ಕಳದಲ್ಲಿ ಹನುಮಾನ್ ಧ್ವಜ

# ಸಂಸದ ಹೆಗಡೆ ಮೇಲೆ ಕೇಸ್ ದಾಖಲು

**ಕಾರವಾರ:** ಭಟ್ಕಳದಲ್ಲಿ ಸಾವರ್ಕರ್ ನಾಮಫಲಕ ಮತ್ತು ಹನುಮಾನ್ ಧ್ವಜ ಹಾರಿಸಿದ ಹಿನ್ನೆಲೆ ಸಂಸದ ಅನಂತ್‌ಕುಮಾರ್ ಹೆಗಡೆ ಸೇರಿದಂತೆ ಒಟ್ಟು 21 ಜನರ ಮೇಲೆ ಭಟ್ಕಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.



ಭಟ್ಕಳದ ತೆಂಗಿನಗುಂಡಿಯ ಬಂದರು ಆವರಣದಲ್ಲಿ ಸಾವರ್ಕರ್ ನಾಮಫಲಕ ಮತ್ತು ಹನುಮಾನ್ ಧ್ವಜವನ್ನು ಸಂಸದ ಅನಂತಕುಮಾರ್ ಹೆಗಡೆ ಮುಂದಾಳತ್ವದಲ್ಲಿ ಸೋಮವಾರ ಹಾರಿಸಲಾಗಿತ್ತು. ಪರವಾನಿಗೆ ಪಡೆಯಲಿಲ್ಲ ಎಂದು ಕಳೆದ ತಿಂಗಳಲ್ಲಿ ಭಗವಾಧ್ವಜ ಹಾಗೂ ನಾಮಫಲಕ ತೆರವುಗೊಳಿದ್ದ ಗ್ರಾಮಪಂಚಾಯತ್ ಅಧಿಕಾರಿಗಳು ಅನುಮತಿ ಪಡೆದು ಹಾಕುವಂತೆ ತಿಳಿಸಿದ್ದರು.

ಈ ವಿಷಯ ಸಾಕಷ್ಟು ಚರ್ಚೆಗೆ ಗ್ರಾಸವಾಗಿ ವಿವಾದಕ್ಕೆ ಕಾರಣವಾಗಿತ್ತು. ಆದರೆ ಕಳೆದ ಸೋಮವಾರ ಕಾರ್ಯಕರ್ತರ ಮೂಲಕ ಹನುಮಾನ್ ಧ್ವಜ ಹಾರಿಸಿ, ಸಾವರ್ಕರ್ ನಾಮಫಲಕ ಅಳವಡಿಸಿದ್ದ ಸಂಸದ ಅನಂತ್‌ಕುಮಾರ್ ಹೆಗಡೆ ಏನು ಮಾಡಿಕೊಳ್ಳುತ್ತೀರಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸವಾಲು ಹಾಕಿದ್ದರು.

# ಆಪರೇಷನ್ ಕಮಲ ಮಾಡಲು ಆಫರ್



**ಕಲಬುರಗಿ:** ನನಗೆ ಆಪರೇಷನ್ ಕಮಲ ಮಾಡಲು ಬಿಜೆಪಿ ಪ್ರಭಾವಿ ವ್ಯಕ್ತಿ ಯತ್ನಿಸಿದ್ದಾರೆ ಎಂದು ಕಲಬುರಗಿಯಲ್ಲಿ ಸಿಎಂ ಸಲಹೆಗಾರ ಆಳಂದ ಶಾಸಕ ಬಿ.ಆರ್.ಪಾಟೀಲ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ರಾಜ್ಯದಲ್ಲಿ ಮತ್ತೆ ಆಪರೇಷನ್ ಕಮಲ ಮುನ್ನಲೆಗೆ ಬಂದಿದೆ. ಈ ಕುರಿತು ಮಾತನಾಡಿದ ಬಿ.ಆರ್.ಪಾಟೀಲ್, ಕಳೆದ ಎರಡು ತಿಂಗಳ ಹಿಂದೆ ನನಗೆ ಸಂಪರ್ಕ ಮಾಡಿ ಚುನಾವಣೆ ಖರ್ಚು ಹಾಗು ಪಕ್ಷದಲ್ಲಿ ಸೂಕ್ತ ಸ್ಥಾನಮಾನ ಕೊಡುವುದಾಗಿ ಆಫರ್ ನೀಡಿದ್ದರು. ನನ್ನಂತೆ ಇತರೆ ಮೂರು ಜನ ಶಾಸಕರಿಗೆ ಸಹ ಆಪರೇಷನ್ ಕಮಲ ಮಾಡಲು ಯತ್ನಿಸಲಾಗುತ್ತಿದೆ ಆರೋಪಿಸಿದ್ದಾರೆ.

ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರಿಗೆ ಎಲ್ಲಾ ಮಾಹಿತಿಯನ್ನು ಕೊಟ್ಟಿದ್ದೇವೆ. ನಾನು ಯಾವುದೇ ಕಾರಣಕ್ಕೂ ಆಪರೇಷನ್ ಕಮಲಕ್ಕೆ ಒಳಗಾಗುವುದಿಲ್ಲ ಎಂದು ಬಿ.ಆರ್.ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

## ಐಎಎಸ್ ಅಧಿಕಾರಿಯ ಬಾಡಿಗೆ ಮನೆಯಲ್ಲಿ ನೆಲೆಸಿದ್ದ

# ಪಾಕ್ ಪ್ರೇಮಿ ಮುನಾವರ್!

**ಬೆಂಗಳೂರು:** ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿ ಪಾಕ್ ಪ್ರೇಮ ಮೆರೆದಿದ್ದ ಮುನಾವರ್ ಅಹಮದ್ ಐಎಎಸ್ ಅಧಿಕಾರಿಯ ಮನೆಯಲ್ಲಿ ಬಾಡಿಗೆ ಇದ್ದ. ಹೌದು. ಬೆಂಗಳೂರಿನ ಪ್ರತಿಷ್ಠಿತ ಪ್ರದೇಶಗಳಲ್ಲಿ ಒಂದಾಗಿರುವ ಜಯಮಹಲ್ 1ನೇ ಕ್ರಾಸ್‌ನ ನಂಬರ್ 27ಸಿ ನಂಬರ್‌ನ ಮನೆಯಲ್ಲಿ ಆರೋಪಿ ಮುನಾವರ್ ಕುಟುಂಬದೊಂದಿಗೆ ವಾಸವಾಗಿದ್ದ.

ಪುಟ 2



## ಬೆಂಗಳೂರಿನ ಹೌಸಿಂಗ್ ಸೊಸೈಟಿಯಲ್ಲಿ ನೀರು ದುರ್ಬಳಕೆ ತಡೆಯಲು ಭದ್ರತಾ ಸಿಬ್ಬಂದಿ

# 5000 ರೂ. ದಂಡ!




**ಬೆಂಗಳೂರು:** ಬೆಂಗಳೂರು ನಗರದಲ್ಲಿ ದಿನನಿತ್ಯದ ಬಳಕೆಗೆ ಮತ್ತು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ವಿಚಾರ ಈಗಾಗಲೇ ರಾಜ್ಯದಾದ್ಯಂತ ಸುದ್ದಿಯಾಗಿದೆ. ಇದೀಗ ಬೆಂಗಳೂರಿನ ಹೌಸಿಂಗ್ ಸೊಸೈಟಿಯೊಂದರಲ್ಲಿ ನೀರಿನ ಪೋಲು, ದುರ್ಬಳಕೆ ತಡೆಯುವ ನಿಟ್ಟಿನಲ್ಲಿ ಭದ್ರತಾ ಸಿಬ್ಬಂದಿ ನೇಮಕ ಮಾಡಲಾಗಿದ್ದು, 5000 ರೂ. ವರೆಗೆ ದಂಡ ವಿಧಿಸುವ ಎಚ್ಚರಿಕೆಯನ್ನೂ ನೀಡಲಾಗಿದೆ!

ಪುಟ 2

## ಗದಗ ಜಿಲ್ಲಾ ಆರೋಗ್ಯ ಇಲಾಖೆಯಲ್ಲಿ ಭಾರೀ ಹಗರಣ

# ಅಧಿಕಾರಿಗಳ ನಡುವೆಯೇ ಕಿತ್ತಾಟ

**ಗದಗ:** ಜಿಲ್ಲಾ ಆರೋಗ್ಯ ಇಲಾಖೆಯಲ್ಲಿ ಭಾರಿ ಹಗರಣ ನಡೆದಿರುವುದು ಬಯಲಾಗಿದೆ. ಕಮಿಷನ್ ಗಾಗಿ ಆರೋಗ್ಯ ಇಲಾಖೆ ಅಧಿಕಾರಿಗಳ ನಡುವೆ ಗುದ್ದಾಟ ಶುರುವಾಗಿರುವ ಆರೋಪ ಕೇಳಿ ಬಂದಿದೆ. ಈಗಿನ ಡಿಹೆಚ್‌ಓ ಡಾ. ಎಸ್.ಎಸ್. ನಿಲಗುಂದ ಹಾಗೂ ಹಿಂದಿನ ಡಿಹೆಚ್‌ಓ ಡಾ. ಜಗದೀಶ್ ನುಚ್ಚಿನ ವಿರುದ್ಧ ಗಂಭೀರ ಆರೋಪ ಕೇಳಿ ಬಂದಿದೆ. 2023ರ ವಿಧಾನ ಸಭೆ ಚುನಾವಣೆಯ ಮೆಡಿಕಲ್ ಕಿಟ್ ಖರೀದಿಯಲ್ಲಿ ಹಗರಣ ನಡೆದಿದ್ದು ಆರೋಗ್ಯ ಇಲಾಖೆಯ FDC ಆಗಿರುವ ಹೇಮನಗೌಡ ಪಾಟೀಲ ಅವರಿಂದಲೇ ಹಗರಣ ಬಯಲಾಗಿದೆ. ಈ ಸಂಬಂಧ DHO V/S FDC ನಡುವೆ ಲೆಟರ್ ಫೈಟ್ ಶುರುವಾಗಿದೆ.

DHOಗಳ ವಿರುದ್ಧ FDCಯಿಂದ ಭ್ರಷ್ಟಾಚಾರ ಹಾಗೂ ಮಾನಸಿಕ ಕಿರುಕುಳ



ಆರೋಪ ಕೇಳಿ ಬಂದಿದ್ದು ಒಬ್ಬರಿಗೊಬ್ಬರ ಮೇಲೆ ಭ್ರಷ್ಟಾಚಾರದ ಬಗ್ಗೆ ಆರೋಪಿಸಿ ದೂರು ಸಲ್ಲಿಸಿದ್ದಾರೆ. ಗದಗ ಡಿಹೆಚ್‌ಓ ಡಾ ಎಸ್.ಎಸ್.ನಿಲಗುಂದ ಹಾಗೂ ಹಿಂದಿನ DHO ಜಗದೀಶ್ ನುಚ್ಚಿನ್ ವಿರುದ್ಧ ಹಗ್ಗಜಗ್ಗಾಟ ನಡೆಯುತ್ತಿದೆ. ಹಲವು ಆರೋಪಗಳನ್ನ ಮಾಡಿ ರಾಜ್ಯಪಾಲರಿಗೆ, ಆರೋಗ್ಯ ಇಲಾಖೆ ಕಾರ್ಯದರ್ಶಿ, ಗದಗ ಡಿಸಿ ಹಾಗೂ ಲೋಕಾಯುಕ್ತರಿಗೆ ಎಫ್ ಡಿಸಿ ಹೇಮನಗೌಡ ಪಾಟೀಲರು ದೂರು ಸಲ್ಲಿಸಿದ್ದಾರೆ.

ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಭ್ರಷ್ಟಾಚಾರದ ಬಗ್ಗೆ ಆರೋಪ ಕೇಳಿ ಬಂದಿದೆ. NHM, ARS, ABRK ಹಾಗೂ ಚುನಾವಣೆ ಔಷಧಿ ಕಿಟ್ ಖರೀದಿಯಲ್ಲಿ ಭ್ರಷ್ಟಾಚಾರದ ಆರೋಪ ಕೇಳಿಬಂದಿದೆ. ಸರ್ಕಾರದ ನಿಯಮ ಉಲ್ಲಂಘನೆ ಮಾಡಿ ಚುನಾವಣಾ ಕಿಟ್ ಖರೀದಿಯಲ್ಲಿ 25 ಲಕ್ಷಕ್ಕೂ ಅಧಿಕ ಮೊತ್ತದ ಹಗರಣ ನಡೆದಿದೆ ಎನ್ನಲಾಗುತ್ತಿದೆ. ಸಮಗ್ರವಾಗಿ ತನಿಖೆ ನಡೆಸಿ ಡಿಹೆಚ್‌ಓ ಡಾ. ಎಸ್ ಎಸ್ ನೀಲಗುಂದ ಹಾಗೂ ಹಿಂದಿನ ಡಿಎಚ್ ಓ ಡಾ.ಜಗದೀಶ್ ನುಚ್ಚಿನ್ ಮೇಲೆ ಕಾನೂನು ಕ್ರಮ ಕೈಗೊಳ್ಳಲು ಎಫ್ ಡಿಸಿ ಹೇಮನಗೌಡ ಒತ್ತಾಯಿಸಿದ್ದಾರೆ.

ಚುನಾವಣೆ ಕಿಟ್ ಕಮಿಷನ್ ವಿಚಾರಕ್ಕೆ ಹಾಲಿ, ಮಾಜಿ ಡಿಎಚ್‌ಓ ಗಳು ಜಗಳವಾಡಿದ್ದಾರೆ. ಈ ಹಗರಣ ನಾನೇ ಎಲ್ಲರಿಗೂ ಹೇಳಿದ್ದೇನೆ ಅಂತ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ.

ಪುಟ 2

# ಸಿದ್ದರಾಮಯ್ಯ ವಿರುದ್ಧ ದೇವೇಗೌಡರು ಗರಂ

**ಬೆಂಗಳೂರು:** ನಮಗೆ ಬರಬೇಕಾದ ತೆರಿಗೆ ಹಣ ನೀಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡಿದ್ದಾರೆ. ಈ ವಿಚಾರವಾಗಿ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡ ಮಾತನಾಡಿ, ಸಿದ್ದರಾಮಯ್ಯ ಏಕೆ ಪ್ರಧಾನಿ ಮೋದಿ ಬಗ್ಗೆ ಮಾತಾಡುತ್ತಾರೆ? ನೀವು ಹಣಕಾಸು ಮಂತ್ರಿ ಆಗಿದ್ದಾಗ ಏನ್ಮಾಡಿದ್ರಿ, ಹೇಳಿ? ಬೆಳಿಗ್ಗೆಯಿಂದ ನೀವು ಬರೀ ಮೋದಿ ಮೋದಿ ಅಂತೀರಾ. ಪ್ರಧಾನಿ ಮೋದಿಯವರನ್ನ ಇಡಿ ವಿಶ್ವವೇ ಒಪ್ಪಿದೆ. ನೀವು ಮಾತ್ರ ಬರೀ ಮೋದಿ ಕುರಿತು ಮಾತನಾಡುತ್ತೀರಿ.



ಸಿದ್ದರಾಮಯ್ಯ ಯಾಕೆ ಪ್ರಧಾನಿ ಮೋದಿ ಬಗ್ಗೆ ಮತನಾಡುತ್ತಿರಾ? ಫೈನಾನ್ಸ್ ಕಮಿಟಿ ಸೂಚಿಸಿದ ಹಣ ಬಿಟ್ಟು ಮನಮೋಹನ್ ಸಿಂಗ್ ಅವರು ರಾಜ್ಯಕ್ಕೆ ಬೇರೆ ಏನು ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ನೀರಿ ಸಮಸ್ಯೆ ಸಾಕಷ್ಟು ಇದೆ. ಒಂದು ಟ್ಯಾಂಕರ್‌ಗೆ ಎರಡುವರೆ ಸಾವಿರ ಕೇಳುತ್ತಿದ್ದಾರೆ. ಬೆಂಗಳೂರಿನಲ್ಲಿ ನೀರಿಗೆ ಹಾಹಾಕಾರ ಶುರುವಾಗಿದೆ. ಸೋಮವಾರ ಉಪ ಮುಖ್ಯಮಂತ್ರಿಗಳು ಸಭೆ ಮಾಡಿದ್ದಾರೆ. ಈಗ ನೀವು ಸಭೆ ಮಾಡಿದ್ದಿರಾ, ಇಷ್ಟು ದಿನ ಏನೂ ಮಾಡಿದಿರಿ. ನೀರಿನ ಬಗ್ಗೆ ಎಷ್ಟೆಲ್ಲ ಸಮಸ್ಯೆ ಇದೆ. ಇದರ ಬಗ್ಗೆ ಕೇಳಲು ನಾನು ನೀರಾವರಿ ಇಲಾಖೆಯ ಕಾರ್ಯದರ್ಶಿಗೆ ಕರೆ ಮಾಡಿದ್ದೆ. ಆದರೆ ನನ್ನ ಕರೆ ಸ್ವೀಕರಿಸಲಿಲ್ಲ. ನಾನೇನು ನನ್ನ ಸ್ವಂತ ಕೆಲಸಕ್ಕೆ ಕರೆ ಮಾಡಿದ್ನಾ.? ಆತ ಯಾರು ಅಂತ ವಿಚಾರಿಸಿದೆ. ಸಿದ್ದರಾಮಯ್ಯ ನವರ ದೂರದ ಸಂಬಂಧಿ ಇರಬೇಕು. ಆಡಳಿತ ಹೇಗೆ ನಡಿತಿದೆ ಎಂಬುವುದಕ್ಕೆ ಇದು ಉದಾಹರಣೆ ಎಂದರು.

# ರಾಜ್ಯ ಉಗ್ರಾಣ ನಿಗಮ ಅಧ್ಯಕ್ಷ ಸ್ಥಾನ ನೇಮಕ ಆದೇಶ, ಸಿಎಂ ಸಹಿ ನಕಲು ಮಾಡಿದ ಕಿರಾತಕರು

**ಯಾದಗಿರಿ:** ರಾಜ್ಯ ಉಗ್ರಾಣ ನಿಗಮ ಅಧ್ಯಕ್ಷ ಸ್ಥಾನ ನೇಮಕ ಆದೇಶದ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯನವರ ಹೆಸರಲ್ಲಿ ನಕಲಿ ಸಹಿ ಮಾಡಿದ ಪ್ರಕರಣ ಯಾದಗಿರಿಯಲ್ಲಿ ಬೆಳಕಿಗೆ ಬಂದಿದೆ. ಯಾದಗಿರಿ ಕ್ಷೇತ್ರದ ಕಾಂಗ್ರೆಸ್ ಮುಖಂಡ ಅಬ್ದುಲ್ ನಬಿ ಕಾಡ್ಲೂರನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ನೇಮಕ ಮಾಡಿ ಆದೇಶ ಹೊರಡಿಸಿರುವಂತೆ ನಕಲಿ ಆದೇಶ ಪ್ರತಿಯನ್ನ ಸೃಷ್ಟಿಸಿರುವ ಆರೋಪಿಗಳು ಅದನ್ನು ವೈರಲ್ ಮಾಡಿದ್ದಾರೆ. ಜನ ನಕಲಿ ಆದೇಶವನ್ನು ನಿಜ ಎಂದು ನಂಬಿದ್ದು, ಸಾಕಷ್ಟು ಗೊಂದಲಕ್ಕೆ ಸಹ ಎಡೆ ಮಾಡಿಕೊಟ್ಟಿದೆ. ಇತ್ತೀಚೆಗಷ್ಟೇ ನಿಧನರಾದ ಸುರಪುರ ಕಾಂಗ್ರೆಸ್ ಶಾಸಕ ರಾಜಾ ವೆಂಕಟಪ್ಪ ನಾಯಕರನ್ನು ಉಗ್ರಾಣ ನಿಗಮದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಫೆ.25 ರಂದು ರಾಜಾ ವೆಂಕಟಪ್ಪ ನಾಯಕ ನಿಧನರಾದ ಮೇಲೆ ಉಗ್ರಾಣ ನಿಗಮದ ಅಧ್ಯಕ್ಷ ಸ್ಥಾನ ತೆರುವಾಗಿತ್ತು. ಕೇವಲ ಮೂರು ದಿನದಲ್ಲಿ ತೆರವಾದ ಸ್ಥಾನಕ್ಕೆ ಅಬ್ದುಲ್ ನಬಿ ಕಾಡ್ಲೂರ್ ಅವರನ್ನ ನೇಮ ಮಾಡಿರುವ ನಕಲಿ ಆದೇಶದ ಪ್ರತಿ ಹೊರ ಬಂದಿದೆ. ಈ ನಕಲಿ ಆದೇಶ ಪ್ರತಿಯಲ್ಲಿ ಸಿಎಂ ಸಿದ್ದರಾಮಯ್ಯ ಅವರ ಸಹಿ ಹೋಲುವಂತೆ ನಕಲು ಮಾಡಿರುವುದು ಈಗ ಬಯಲಾಗಿದೆ. ಮಾ.1 ರಂದು ಉಗ್ರಾಣ ನಿಗಮ ಮಂಡಳಿಗೆ ನೇಮಕ ಮಾಡಿ ಆದೇಶ ಹೊರಡಿಸಿರುವ ನಕಲು ಪ್ರತಿ ವೈರಲ್ ಆಗಿದೆ. ಕಳೆದ 4-5 ದಿನಗಳಿಂದ ಸೋಷಿಯಲ್ ಮೀಡಿಯಾಗಳಲ್ಲಿ ಹರಿದಾಡ್ತಿರುವ ಸಿಎಂ ನಕಲು ಆದೇಶ ಪ್ರತಿ ಸಾಕಷ್ಟು ಅನುಮಾನಗಳನ್ನು ಹುಟ್ಟುಹಾಕಿದೆ.

# ಬೇಬಿ ಬೆಟ್ಟ ಟ್ರಯಲ್ ಬ್ಲಾಸ್ಟ್: ಹಲವು ಅನುಮಾನ ಮೂಡಿಸಿದ ಅಧಿಕಾರಗಳ ನಡೆ

**ಮಂಡ್ಯ:** ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸಲು ಹೈಕೋರ್ಟ್ ಆದೇಶ ನೀಡಿದೆ. ಹಾಗಾಗಿ ಇಂದಿನಿಂದ 4 ದಿನಗಳ ಕಾಲ ಟ್ರಯಲ್ ಬ್ಲಾಸ್ಟ್ ನಡೆಯಲಿದೆ ಎಂದು ಹೇಳಲಾಗುತ್ತಿತ್ತು. ಆದರೆ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್‌ಗೆ ಕೋರ್ಟ್ ಆದೇಶವೇ ನೀಡಿಲ್ಲ. ಆದರೂ ಹೈ ಕೋರ್ಟ್ ಆದೇಶ ನೆಪವೊಡ್ಡಿ ಟ್ರಯಲ್ ಬ್ಲಾಸ್ಟ್ ಮಾಡಲು ಜಿಲ್ಲಾಡಳಿತ ಮುಂದಾಗಿದೆ ಎಂಬ ಅಂಶ ಬಯಲಾಗಿದೆ. ಇಂದು ನಡೆದ ತಜ್ಞರ ಸಭೆಯಲ್ಲಿ ಆದೇಶವೇ ಇಲ್ಲದಿರುವ ಮಾಹಿತಿ ಬಹಿರಂಗವಾಗಿದೆ. ಈ ಮೂಲಕ ಅಧಿಕಾರಗಳ ನಡೆ ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಗಣಿಮಾಲೀಕರ ಲಾಬಿಗೆ ಮಣಿದು ಸರ್ಕಾರ ನಕಲಿ ಆದೇಶ ಸೃಷ್ಟಿಸಿತಾ ಎಂಬ ಪ್ರಶ್ನೆ ಎದ್ದಿದೆ.

ಅಧಿಕಾರಗಳ ಸಮೇತ ಜನಪ್ರತಿನಿಧಿಗಳು ಕೂಡ ಹೈಕೋರ್ಟ್ ಆದೇಶ ಇದೆ ಎಂದು ಹೇಳಿಕೆ ನೀಡಿದ್ದರು. ಟ್ರಯಲ್ ಬ್ಲಾಸ್ಟ್‌ಗೆ ಹೈಕೋರ್ಟ್ ಆದೇಶ ಇದೆ ಎಂದು ಡಿಸಿ ಡಾ. ಕುಮಾರ್, ಸಚಿವ ಚಲುವರಾಯಸ್ವಾಮಿ, ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿಕೆ ನೀಡಿದ್ದರು. ಆದರೆ ಇದೀಗ ತಜ್ಞರ ಸಭೆಯಲ್ಲಿ ಆದೇಶ ಇಲ್ಲದಿರುವ ಮಾಹಿತಿ ಬಟಾಬಯಲಾಗಿದೆ. ವಕೀಲರು ಕಾಲಾವಕಾಶ ಕೇಳಿದ್ದ ಪತ್ರವನ್ನೇ ಆದೇಶ ಪ್ರತಿ ಎಂದು ಬಿಂಬಿಸಲಾಗಿದೆ. ಸದ್ಯ ರೈತರ ಹೋರಾಟಕ್ಕೆ ಮಣಿದು ಟ್ರಯಲ್ ಬ್ಲಾಸ್ಟ್ ಮೂಂದೂಡಲಾಗಿದೆ. ಸಭೆ ನಡೆಸಿ ಪರೀಕ್ಷಾರ್ಥ ಸ್ಥಳ ಗುರತಿಸಲು ಬಂದಿದ್ದ ತಜ್ಞರ ತಂಡ ವಾಪಾಸ್ ತೆರಳಿದೆ. ಬೇಬಿ ಬೆಟ್ಟದಲ್ಲಿ ನಡೆಯುತ್ತಿದ್ದ ಗಣಿಗಾರಿಕೆಯಿಂದ ಮೈಸೂರು ಭಾಗದ ಜೀವನಾಡಿಯಾಗಿರುವ ಕೆಆರ್‌ಎಸ್ ಅಣೆಕಟ್ಟೆಗೆ ಹಾನಿ ಆಗುತ್ತದೆ ಎಂದು ಹಲವು ಹೋರಾಟಗಳು ನಡೆದವು. ರೈತ ಸಂಘಟನೆಗಳು, ಸಂಸದೆ ಸುಮಲತಾ ಅಂಬರೀಶ್, ಸಾಮಾಜಿಕ ಕಾರ್ಯಕರ್ತರ ಹೋರಾಟದ ಪ್ರತಿಫಲವಾಗಿ ಹೈಕೋರ್ಟ್ ಬೇಬಿ ಬೆಟ್ಟದಲ್ಲಿ ಗಣಿಗಾರಿಕೆಗೆ ನಿರ್ಬಂಧ ಹೇರಿತ್ತು. ಆದರೆ ಈಗ ಅಧಿಕಾರಿಗಳು, ರಾಜಪ್ರತಿನಿಧಿಗಳು ಹೈಕೋರ್ಟ್ ಆದೇಶ ಇದೆ ಎಂದು ಹೇಳಿ ಬೇಬಿ ಬೆಟ್ಟದ ಗಣಿಗಾರಿಕೆಯಿಂದ ಕೆಆರ್ ಎಸ್ ಅಣೆಕಟ್ಟೆಗೆ ಸಮಸ್ಯೆ ಆಗುತ್ತಾ ಎಂದು ತಿಳಿಯಲು ಟ್ರಯಲ್ ಬ್ಲಾಸ್ಟ್ ಮಾಡಿಸಲು ಮುಂದಾಗಿದ್ದರು. ಸದ್ಯ ಇಂದು ನಡೆದ ತಜ್ಞರ ಸಭೆಯಲ್ಲಿ ಆದೇಶವೇ ಇಲ್ಲದಿರುವ ಮಾಹಿತಿ ಬಹಿರಂಗವಾಗಿದೆ.

# ಕೈದಿಗಳಿಗೆ ನಿಯಮಿತ ಆರೋಗ್ಯ ತಪಾಸಣೆ; ಸಾಂಕ್ರಾಮಿಕ ರೋಗ ಹರಡದಂತೆ ನಿಗಾ!

**ಬೆಂಗಳೂರು:** ಜೈಲಿನಲ್ಲಿರುವ ಕೈದಿಗಳಿಗೂ ನಿಯಮಿತವಾಗಿ ವೈದ್ಯಕೀಯ ತಪಾಸಣೆ ನಡೆಸುವಂತೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಇದರಿಂದಾಗಿ ಕೈದಿಗಳಿಗೆ ಇನ್ಮುಂದೆ ವೈದ್ಯಕೀಯ ತಪಾಸಣೆ ಸೂಕ್ತ ಸಮಯಕ್ಕೆ ನಡೆಯಲಿದೆ. ಜೊತೆಗೆ ಕೈದಿಗಳ ಆರೋಗ್ಯದ ಬಗ್ಗೆಯೂ ಆರೋಗ್ಯ ಇಲಾಖೆ ಗಮನ ಹರಿಸಲಿದೆ ಎಂದು ಇಲಾಖೆ ಆಯುಕ್ತ ಡಿ. ರಂದೀಪ್ ತಿಳಿಸಿದ್ದಾರೆ.

ಯಾವೆಲ್ಲ ತಪಾಸಣೆ?

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ನಿರ್ದೇಶನದ ಮೇರೆಗೆ ಎಲ್ಲ ಕಾರಾಗೃಹದಲ್ಲಿರುವ ಕೈದಿಗಳಿಗೆ ನಿಯಮಿತವಾಗಿ ವೈದ್ಯಕೀಯ ತಪಾಸಣೆ ಮಾಡಬೇಕು ಎಂದು ಆರೋಗ್ಯ ಇಲಾಖೆ ಸೂಚಿಸಿದೆ.ಸಾಂಕ್ರಾಮಿಕ ರೋಗಗಳ ಜತೆಗೆ ಕ್ಷಯ, ಎಚ್‌ಐವಿ, ಹೆಪಟೈಟಿಸ್, ಲೈಂಗಿಕ ರೋಗಗಳು (ಎಸ್‌ಟಿಡಿ) ಸೇರಿ ವಿವಿಧ ಸಮಸ್ಯೆಗಳಿಗೆ ತಪಾಸಣೆ ನಡೆಸಬೇಕು. ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಪರಿಶೀಲನಾ ಸಭೆ ನಡೆಸಿ, ವರದಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

ಸಾಂಕ್ರಾಮಿಕ ರೋಗಗಳ ಸಂದರ್ಭದಲ್ಲಿ ಸಂಬಂಧಪಟ್ಟ ಕಾರ್ಯಕ್ರಮಾಧಿಕಾರಿಗಳು ಜೈಲಿನ ಅಡುಗೆ ಮನೆ, ನೀರು ಸರಬರಾಜು ಸ್ಥಳ, ಕುಡಿಯುವ ನೀರಿನ ಗುಣಮಟ್ಟ, ತ್ಯಾಜ್ಯ ವಿಲೇವಾರಿ ಸ್ಥಳ, ಕೈ ತೊಳೆಯುವ ಸ್ಥಳ, ಶೌಚಾಲಯ ಸೇರಿ ವಿವಿಧೆಡೆ ಪರಿಶೀಲನೆ ನಡೆಸಬೇಕು. ಸೊಳ್ಳೆಯ ಲಾರ್ವ ನಾಶಕ್ಕೆ ಜೈಲು ನಿರ್ವಹಣಾಧಿಕಾರಿಗಳು, ಜೈಲು ಆಸ್ಪತ್ರೆ ಸಿಬ್ಬಂದಿ ಅಥವಾ ಶುಶ್ರೂಷಕರಿಗೆ ಸೂಚನೆ ನೀಡಬೇಕು ಎಂದು ಹೇಳಿದ್ದಾರೆ.

# ಪಾಕ್ ಪರ ಘೋಷಣೆ ಕೂಗುವವರನ್ನು ರಾಜ್ಯದ ಜನತೆ ಕ್ಷಮಿಸುವುದಿಲ್ಲ



**ಬೆಳಗಾವಿ:** ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಾಣ, ಜಮ್ಮು-ಕಾಶ್ಮೀರಕ್ಕೆ ಸಂಬಂಧಿಸಿದ 370ನೇ ವಿಧಿ ರದ್ದು ಸೇರಿದಂತೆ ವಿವಿಧ ಭರವಸೆಗಳನ್ನು ಈಡೇರಿಸಿ ಬಿಜೆಪಿ ನುಡಿದಂತೆ ನಡೆದಿದೆ. ದೂರದೃಷ್ಟಿಯಿರುವ ಬಿಜೆಪಿಯನ್ನು ಜನತೆ ಬೆಂಬಲಿಸುವ ವಿಶ್ವಾಸವಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ತಿಳಿಸಿದರು.

ಚಿಕ್ಕೋಡಿಯಲ್ಲಿ ಇಂದು ಬಿಜೆಪಿ ಬೂತ್ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪಾಕಿಸ್ತಾನದ ಪರ ಇರುವವರನ್ನು ಭಾರತಮಾತೆ ಎಂದೂ ಕ್ಷಮಿಸುವುದಿಲ್ಲ ಎಂದರು. ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗುವ ರಾಜ್ಯಸಭಾ ಸದಸ್ಯರಿರುವ ಕಾಂಗ್ರೆಸ್ ಪಕ್ಷದವರನ್ನು ರಾಜ್ಯದ ಜನತೆ ಬೆಂಬಲಿಸುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನಮ್ಮ ಸರ್ಕಾರ ಇದ್ದಾಗ ಶಾಂತ ಪರಿಸ್ಥಿತಿ ನೆಲೆಸಿತ್ತು. ಈಗ ಬಾಂಬ್ ಸ್ಫೋಟಿಸುತ್ತಿದೆ ಎಂದು ಅವರು ಗಮನ ಸೆಳೆದರು.

ಬಡವರು, ಮಹಿಳೆಯರು (ನಾರಿಶಕ್ತಿ), ರೈತರು, ಯುವಜನತೆಯ ಆಶಯಗಳನ್ನು ಈಡೇರಿಸಿದ ಪಕ್ಷವಾಗಿ ಬಿಜೆಪಿ ಬೆಳೆದಿದೆ. ಬಿಜೆಪಿ ಸಿದ್ಧಾಂತ ಆಧರಿಸಿದ ಪಕ್ಷ. ಮುಸ್ಲಿಮ್ ಮಹಿಳೆಯರಿಗೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ನಾವು ಹೇಳಿದ್ದೆವು. ತ್ರಿವಳಿ ತಲಾಖ್ ಪದ್ಧತಿಯನ್ನು ನಾವು ರದ್ದು ಮಾಡಿದ್ದೇವೆ. ಆದರೆ, ಕಾಂಗ್ರೆಸ್ ಪಕ್ಷ ತುಷ್ಟೀಕರಣ ಕಾರಣಕ್ಕಾಗಿ ಈ ಕಡೆ ಗಮನ ಹರಿಸಿರಲಿಲ್ಲ ಎಂದು ವಿವರಿಸಿದರು.

ವಿಶ್ವದ ಅತ್ಯಂತ ದೊಡ್ಡ ರಾಜಕೀಯ ಪಕ್ಷ ನಮ್ಮದು. ಅಣ್ಣಾಸಾಹೇಬ್ ಜೊಲ್ಲೆಯವರು ಸೇರಿ 303 ಸಂಸದರು ನಮ್ಮ ಪಕ್ಷದವರು ಲೋಕಸಭೆಯಲ್ಲಿದ್ದಾರೆ. ನಮ್ಮ ಯುವಜನರಿಗೆ ತರಬೇತಿ ನೀಡಿ ಪ್ರಧಾನಿ ಮೋದಿಯವರು ಆತ್ಮನಿರ್ಭರರನ್ನಾಗಿ ಮಾಡಿದ್ದಾರೆ ಎಂದು ತಿಳಿಸಿದರು.

ವಿಕಸಿತ ಭಾರತ ಸಂಕಲ್ಪದಲ್ಲಿ ತಮ್ಮನ್ನು ತೊಡಗಿಕೊಳ್ಳುವಂತೆ ಮೋದಿಜೀ ಅವರು ಯುವಜನರಿಗೆ ಪ್ರೋತ್ಸಾಹ ಕೊಟ್ಟಿದ್ದಾರೆ ಎಂದ ಅವರು, ಕಾಂಗ್ರೆಸ್ ಭ್ರಷ್ಟಾಚಾರ, ಕಮಿಷನ್, ಕೌಟುಂಬಿಕವಾದದ ಪಕ್ಷ. 10 ವರ್ಷಗಳ ಹಿಂದೆ ಭಾರತವನ್ನು ಅಸಮರ್ಪಕ ನೀತಿಯುಳ್ಳ ದೇಶವಾಗಿ ನೋಡಲಾಗುತ್ತಿತ್ತು. ಸಮರ್ಥ ನಿರ್ಧಾರ ತೆಗೆದುಕೊಳ್ಳಲಾಗದ ದೇಶ ಎಂದೇ ಭಾರತವನ್ನು ಬಿಂಬಿಸುವ ಸ್ಥಿತಿ ಹಿಂದೆ ಇತ್ತು. 2014ರ ಬಳಿಕ ಮೋದಿಯವರ ನೇತೃತ್ವದಲ್ಲಿ ಭಾರತವು ಆತ್ಮವಿಶ್ವಾಸ ಹೊಂದಿದ ವಿಶ್ವಕ್ಕೇ ದೂರದೃಷ್ಟಿ ಕೊಡುವ ದೇಶವಾಗಿ ಬೆಳೆದುನಿಂತಿದೆ ಎಂದು ನುಡಿದರು. ಸ್ವಾವಲಂಬಿ, ವಿಶ್ವಾಸಯುಕ್ತ ಜನರಿರುವ ದೇಶವನ್ನಾಗಿ ಭಾರತವನ್ನು ಮೋದಿಯವರು ಪರಿವರ್ತಿಸಿದ್ದಾರೆ. ಆತ್ಮನಿರ್ಭರ ದೇಶವಾಗಿ ಅದು ಬದಲಾಗುತ್ತಿದೆ. ಪ್ರಧಾನಿಯವರು ದೇಶವನ್ನು ಆತ್ಮವಿಶ್ವಾಸವುಳ್ಳ ರಾಷ್ಟವಾಗಿ ಪರಿವರ್ತಿಸಿದ್ದನ್ನು ನಾವು ಜನತೆಯ ಮುಂದಿಡಬೇಕು ಎಂದು ಮನವಿ ಮಾಡಿದರು.

# ಡಿಸಿಎಂ ಡಿಕೆಶಿಗೆ ಸುಪ್ರೀಂ ಕೋರ್ಟ್ ಬಿಗ್ ರಿಲೀಫ್

**ನವದೆಹಲಿ:** ಜಾರಿ ನಿರ್ದೇಶನಾಲಯದ ಇಕ್ಕಳದಲ್ಲಿ ಸಿಲುಕಿ ನಲುಗಿದ್ದ ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಸುಪ್ರೀಂಕೋರ್ಟ್ ಬಿಗ್ ರಿಲೀಫ್ ನೀಡಿದೆ.

2018 ರಲ್ಲಿ ಡಿಕೆಶಿ ವಿರುದ್ಧ ದಾಖಲಿಸಿದ್ದ ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ನ್ಯಾ. ಸೂರ್ಯ ಕಾಂತ್ ಮತ್ತು ಕೆವಿ ವಿಶ್ವನಾಥನ್ ಅವರಿದ್ದ ದ್ವಿಸದಸ್ಯ ಪೀಠ ಇಂದು ರದ್ದುಗೊಳಿಸಿದೆ. ಲೋಕಸಭೆ ಚುನಾವಣೆ ಹೊತ್ತಲ್ಲಿ ಸುಪ್ರೀಂ ಕೋರ್ಟ್‌ನ ಈ ಆದೇಶ ಡಿಕೆಶಿಗೆ ಸಿಕ್ಕಿದ ದೊಡ್ಡ ಗೆಲುವು ಎಂದೇ ವಿಶ್ಲೇಷಿಸಲಾಗುತ್ತಿದೆ.

ಆಗಸ್ಟ್ 2019 ರಲ್ಲಿ ಪ್ರಕರಣ ರದ್ದುಪಡಿಸಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿದ್ದ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಡಿ.ಕೆ ಶಿವಕುಮಾರ್ ಮತ್ತು ಇತರೇ ಆರೋಪಿಗಳು ಅರ್ಜಿ ಸಲ್ಲಿಸಿದ್ದರು. ಪ್ರಕರಣ ಸುದೀರ್ಘ ವಿಚಾರಣೆ ನಡೆಸಿದ್ದ ಪೀಠ ಇಂದು ಮಹತ್ವದ ಆದೇಶ ನೀಡಿದೆ.

**ರದ್ದಾಗಿದ್ದು ಯಾಕೆ?:** ಇಂದು ಡಿ.ಕೆ ಶಿವಕುಮಾರ್ ಪರ ಹಿರಿಯ ವಕೀಲ ಸಿದ್ಧಾರ್ಥ್ ಲೂತ್ರಾ, ಇತರ ಆರೋಪಿಗಳ ಪರ ಹಿರಿಯ ವಕೀಲ ಡಾ.ಅಭಿಷೇಕ್ ಮನು ಸಿಂಘ್ವಿ ಮತ್ತು ಎಸ್.ನಾಗಮುತ್ತು ವಾದ ಮಂಡಿಸಿದರು. ಐಪಿಸಿ ಸೆಕ್ಷನ್ 120 ಬಿ (ಕ್ರಿಮಿನಲ್ ಪಿತೂರಿ) ಪ್ರಕರಣ ಕೇವಲ ಶೆಡ್ಯೂಲ್ ಅಪರಾಧಗಳಲ್ಲಿ ಮಾತ್ರ ಬಳಕೆ ಮಾಡಲಾಗುತ್ತದೆ. ಡಿ. ಕೆ ಶಿವಕುಮಾರ್ ಅವರದ್ದು ಆದಾಯ ತೆರಿಗೆ ಪ್ರಕರಣವಾಗಿದೆ. ಆದಾಯ ತೆರಿಗೆ ಪ್ರಕರಣದಲ್ಲಿ 120 ಬಿ ಬಳಕೆ ಸಾಧ್ಯವಿಲ್ಲ. 120 ಬಿ ಆಧರಿಸಿಯೇ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯ ಅಡಿಯಲ್ಲಿ ಇಡಿ ಪ್ರಕರಣ ದಾಖಲಿಸಿದೆ. ಆದರೆ 120 ಬಿ ಏಕಾಂಗಿಯಾಗಿ ಬಳಕೆ ಮಾಡಲು ಸಾಧ್ಯವಿಲ್ಲ, ಯಾವುದಾದರೂ ಇತರೇ ಕ್ರಿಮಿನಲ್ ಪ್ರಕರಣಗಳಲ್ಲಿ ಪೂರಕವಾಗಿರುವ 120 ಬಿ ಬಳಕೆ ಮಾಡಬಹುದು. ಆದರೆ ಜಾರಿ ನಿರ್ದೇಶನಾಲಯ 120 ಬಿ ಆಧರಿಸಿಯೇ ಪ್ರಕರಣ ದಾಖಲಿಸಿ ವಿಚಾರಣೆ ನಡೆಸಿಕೊಂಡು ಬಂಧಿಸಿದೆ. ಇದು ಕಾನೂನು ಬಾಹಿರನಡೆ ಎಂದು ವಾದಿಸಿದರು. ವಾದ ಆಲಿಸಿದ ಕೋರ್ಟ್ ಡಿ.ಕೆ ಶಿವಕುಮಾರ್ ಮತ್ತು ಇತರೆ ಆರೋಪಿಗಳ ಅರ್ಜಿ ಮಾನ್ಯ ಮಾಡಿದ ಕೋರ್ಟ್ 120 ಬಿ ಅಡಿ ದಾಖಲಾಗಿದ್ದ ಪ್ರಕರಣವನ್ನೇ ರದ್ದು ಮಾಡಿತು. 120 ಬಿ ರದ್ದಾದ ಹಿನ್ನಲೆ ಡಿ.ಕೆ ಶಿವಕುಮಾರ್ ಮತ್ತು ಇತರೇ ಆರೋಪಿಗಳ ವಿರುದ್ಧ ಇಡಿ ದಾಖಲಿಸಿದ್ದ ಪ್ರಕರಣ ರದ್ದಾಂತಾಗಲಿದೆ. ಈ ನಡುವೆ ಡಿ.ಕೆ ಶಿವಕುಮಾರ್ ವಿರುದ್ಧ ಆದಾಯ ತೆರಿಗೆ ಕೇಸ್ ಮುಂದುವರಿಯಲಿದ್ದು ಈ ಬಗ್ಗೆ ಮಾಹಿತಿ ಸಲ್ಲಿಸಲು ಸುಪ್ರೀಂ ಕೋರ್ಟ್ ಆರು ವಾರಗಳ ಸಮಯ ನೀಡಿದೆ.

### ಏನಿದು ಪ್ರಕರಣ?

**2017 ರಲ್ಲಿ ಡಿ.ಕೆ ಶಿವಕುಮಾರ್ ನಿವಾಸದ ಮೇಲೆ ಆದಾಯ ತೆರಿಗೆ ದಾಳಿ ನಡೆಸಿತು. ಅವರ ದೆಹಲಿಯ ನಿವಾಸದಲ್ಲಿ ಸುಮಾರು 7 ಕೋಟಿ ನಗದು ವಶಪಡಿಸಿಕೊಳ್ಳಲಾಗಿತ್ತು. ಐಟಿ ಮಾಹಿತಿ ಆಧರಿಸಿ ಪ್ರಕರಣ ದಾಖಲಿಸಿದ್ದ ಇಡಿ ಸುದೀರ್ಘ ವಿಚಾರಣೆಯ 2019ರ ಸೆಪ್ಟೆಂಬರ್‌ನಲ್ಲಿ ಇಡಿ ಬಂಧಿಸಿತ್ತು. 2019 ರ ಅಕ್ಟೋಬರ್ ನಲ್ಲಿ ದೆಹಲಿ ಹೈಕೋರ್ಟ್ ಅವರಿಗೆ ಜಾಮೀನು ನೀಡಿತ್ತು. ನಂತರ ಅದನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿಯಿತು. ತಮ್ಮ ಬಂಧನಕ್ಕೂ ಮುನ್ನ ಡಿ.ಕೆ ಶಿವಕುಮಾರ್ ಮತ್ತು ಇತರರು ತಮಗೆ ಜಾರಿ ಮಾಡಿರುವ ಇಡಿ ಸಮನ್ಸ್ ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆಗಸ್ಟ್ 2019 ರಲ್ಲಿ ನ್ಯಾಯಮೂರ್ತಿ ಅರವಿಂದ್ ಕುಮಾರ್ ಅವರು ಈ ರಿಟ್ ಅರ್ಜಿಗಳನ್ನು ವಜಾಗೊಳಿಸಿದ್ದರು. ಈ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಲಾಗಿತ್ತು.**

## 10 ಬಸ್ಸಿನಲ್ಲಿ ಬಾಂಬರ್ ಸಂಚಾರ!

ಕೆ.ಆರ್.ಪುರ, ಬೈಯಪ್ಪನಹಳ್ಳಿ ಮೆಟ್ರೋ ನಿಲ್ದಾಣ, ಮಾರತ್ತಹಳ್ಳಿ, ಹೆಬ್ಬಾಳ ಹಾಗೂ ಎಚ್‌ಎಎಲ್ ಸೇರಿ ರಾಮೇಶ್ವರಂ ಕೆಫೆಗೆ ವ್ಯಾಪ್ತಿಯ 4-5 ಕಿ.ಮೀ. ಸುತ್ತಲಿನ ಮಾರ್ಗದ ಎಲ್ಲಾ ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲಿಸಲಾಗುತ್ತಿದೆ.

**ಡಮ್ಮಿ ಮೊಬೈಲ್ ಬಳಕೆ:** ಬಾಂಬರ್ ರಸ್ತೆಯಲ್ಲಿ ಬರುವಾಗ ಹೋಟೆಲ್ ಪ್ರವೇಶದ ವೇಳೆ, ಹೋಟೆಲ್ ಒಳಗಡೆ, ನಂತರ ಹೋಟೆಲಿನಿಂದ ತೆರಳುವಾಗ ಮೊಬೈಲಿನಲ್ಲಿ ಮಾತನಾಡಿಕೊಂಡು ಬಂದಿದ್ದಾನೆ. ಈತ ಮಾತನಾಡಿದ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗುತ್ತಿದ್ದಂತೆ ಪೊಲೀಸರು ಟವರ್ ಡಂಪ್ ಮಾಡಿ ಆ ಸಮಯದಲ್ಲಿ ಆ ಜಾಗದಲ್ಲಿ ಸಕ್ರಿಯವಾಗಿದ್ದ ಮೊಬೈಲ್‌ಗಳನ್ನು ಪರೀಕ್ಷೆ ಮಾಡಿದ್ದಾರೆ. ಕೆಫೆಯ ಬಳಿ ಆ ಸಮಯದಲ್ಲಿ ಸಕ್ರಿಯವಾಗಿದ್ದ ಮೊಬೈಲ್ ಕರೆಗಳನ್ನು ಪರಿಶೀಲಿಸಿದ್ದಾರೆ. ಎಲ್ಲಾ ತನಿಖೆಯ ನಂತರ ಆತ ಸಿಮ್ ಸಕ್ರಿಯವಾಗಿರದ ಡಮ್ಮಿ ಮೊಬೈಲ್ ಫೋನ್ ಬಳಸಿದ್ದ ವಿಚಾರ ಗೊತ್ತಾಗಿದೆ.

ಪೊಲೀಸರ ತನಿಖೆಯ ದಾರಿ ತಪ್ಪಿಸಲೆಂದೇ ಮೊಬೈಲ್ ಫೋನಿನಲ್ಲಿ ಮಾತನಾಡಿದಂತೆ ಪೋಸ್ ನೀಡುತ್ತಾ ಬಂದಿದ್ದ. ಕೆಫೆಯಿಂದ ತೆರಳುವಾಗಲೂ ಫೋನಿನಲ್ಲಿ ಮಾತನಾಡುತ್ತಾ ತೆರಳಿದ್ದ.

ಪಾದಚಾರಿ ಮಾರ್ಗ ಬಿಟ್ಟು ರಸ್ತೆಯಲ್ಲಿ ನಡೆದಿರುವುದು, ಡಮ್ಮಿ ಫೋನ್ ಬಳಸಿರುವುದು, ತಲೆಯನ್ನು ಕೆಳಗಡೆ ಹಾಕಿ ಹೆಜ್ಜೆ ಹಾಕಿರುವುದು, ಪರಿಚಯ ಸಿಗದೇ ಇರಲು ಮಾಸ್ಕ್ ಮತ್ತು ಹ್ಯಾಟ್ ಧರಿಸಿರುವುದು, 10 ಬಸ್ಸು ಬದಲಾಯಿಸಿದ್ದನ್ನು ನೋಡಿದಾಗ ಆರೋಪಿ ಮೊದಲೇ ಬಹಳ ಸಿದ್ಧತೆ ನಡೆಸಿ ಕೃತ್ಯ ಎಸಗಿರುವುದು ಸ್ಪಷ್ಟವಾಗುತ್ತಿದೆ.

## ಒಬ್ಬರಿಗೆ ಒಂದೇ ಕ್ಯಾನ್ ನೀರು!

ನಗರದ ಹಲವೆಡೆ ಅದರಲ್ಲೂ ರಾಜರಾಜೇಶ್ವರಿ ನಗರದ ಆರ್‌ಓ ಪ್ಲಾಂಟ್‌ನಲ್ಲಿ ಈ ಬೋರ್ಡ್ ಕಾಣಸಿಗುತ್ತಿದೆ.

ಜನರು ಒಂದೇ ಬಾರಿಗೆ ಮೂರು-ನಾಲ್ಕು ಕ್ಯಾನ್ ಕುಡಿಯುವ ನೀರು ಒಯ್ಯುತ್ತಿದ್ದರು. ಈ ಬಗ್ಗೆ ನಿಮ್ಮ ಪಬ್ಲಿಕ್ ಟಿವಿ ಸುದ್ದಿ ಪ್ರಸಾರ ಮಾಡಿತ್ತು. ಬೋರ್‌ವೆಲ್ ಬತ್ತಿ ಶುದ್ಧ ನೀರಿನ ಘಟಕಗಳಲ್ಲಿ ನೀರಿನಲ್ಲದೇ ಪರದಾಟ ಶುರುವಾಗಿದೆ. ಹೀಗಾಗಿ ಒಬ್ಬರಿಗೆ ಒಂದೇ ಕ್ಯಾನ್ ನೀರು ಎಂಬ ನಿಯಮ ಆರ್‌ಓ ಪ್ಲಾಂಟ್‌ನಲ್ಲಿ ಜಾರಿಯಾಗಿದೆ. ಈಗಾಗಲೇ ಕೆಲವು ಕಡೆ ಬೆಳಗ್ಗೆ 8 ರಿಂದ ರಾತ್ರಿ 8 ವರೆಗೆ ನೀರು ಬಿಡಲಾಗುತ್ತಿತ್ತು. ಇದೀಗ ಬೆಳಗ್ಗೆ ಎರಡು ಗಂಟೆ ಸಂಜೆ ಎರಡು ಗಂಟೆ ನೀರು ಪೂರೈಕೆ ಮಾಡಲಾಗುತ್ತಿದೆ. ಕೆಲವು ಕಡೆ ಆರ್‌ಓ ಪ್ಲಾಂಟ್ ನೀರಿಲ್ಲದೆ ಬಂದ್ ಆಗಿವೆ. ಮಹಾನಗರಿ ಬೆಂಗಳೂರಿನ ಜನತೆಗೆ ಶುದ್ಧ ಕುಡಿಯುವ ನೀರಿನ ಘಟಕಗಳೇ ಸದ್ಯಕ್ಕೆ ಜೀವಾಳ. ಇಲ್ಲಿ ನೀರು ಸಿಕ್ಕರೆ ನೆಮ್ಮದಿ. ಇಲ್ಲೂ ನೀರು ಸಿಗದೇ ಇದ್ದರೆ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಲಿದೆ.

## ಪೊಲೀಸ್ ಬಿಗಿ ಭದ್ರತೆ

1. ಯುನೈಟೆಡ್ ಕಿಸಾನ್ ಮೋರ್ಚಾ ಮತ್ತು ಉತ್ತರ ಪ್ರದೇಶ, ಹರ್ಯಾಣ ಮತ್ತು ಪಂಜಾಬ್‌ನ ಹೆಚ್ಚಿನ ರೈತ ಸಂಘಗಳು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಖಾತರಿಪಡಿಸುವ ಕಾನೂನನ್ನು ಒತ್ತಾಯಿಸಿವೆ.
2. PTI ಪ್ರಕಾರ, ಪ್ರಸಿದ್ಧ ವಿಜ್ಞಾನಿ ಮತ್ತು ಭಾರತದಲ್ಲಿ ಹಸಿರು ಕ್ರಾಂತಿಯ ಪಿತಾಮಹ, M.S. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೆ ತರಲು ಒತ್ತಾಯಿಸಲಾಗುತ್ತಿದೆ.
3. ಅಲ್ಲದೆ, ರೈತರು ಕೃಷಿ ಸಾಲ ಮನ್ನಾ ಮತ್ತು ಪೊಲೀಸರು ರೈತರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯುವಂತೆ ಒತ್ತಾಯಿಸುತ್ತಿದ್ದಾರೆ.
4. ಇದಲ್ಲದೇ, ಲಖಿಂಪುರಿ ಖೇರಿ ಹಿಂಸಾಚಾರದ ಸಂತ್ರಸ್ತರಿಗೆ ನ್ಯಾಯಕ್ಕಾಗಿ ರೈತರು ಒತ್ತಾಯಿಸುತ್ತಿದ್ದಾರೆ.

## 3 ಜನ ವಶಕ್ಕೆ

ಆರೋಪಿಗಳ ಬಗ್ಗೆ ಪೂರಕ ದಾಖಲೆಗಳನ್ನು ಸಂಗ್ರಹಿಸಿದ್ದ ಅಧಿಕಾರಿಗಳು, ಎರಡು ತಂಡಗಳಾಗಿ ಮಂಗಳೂರು ಮತ್ತು ಅಂಕೋಲಾಕ್ಕೆ ಭೇಟಿ ನೀಡಿದ್ದರು.

ಎನ್‌ಐಎ ಅಧಿಕಾರಿಗಳು ಮಂಗಳವಾರ ಏಕಕಾಲಕ್ಕೆ ಕರ್ನಾಟಕ, ತಮಿಳುನಾಡು, ತೆಲಂಗಾಣ, ಪಂಜಾಬ್, ಗುಜರಾತ್ ಮತ್ತು ಪಶ್ಚಿಮ ಬಂಗಾಳದ ವಿವಿಧ ಸ್ಥಳಗಳಲ್ಲಿ ಶೋಧ ಕಾರ್ಯ ನಡೆಸಿದರು. ಈ ವೇಳೆ 25 ಮೊಬೈಲ್ ಫೋನ್‌ಗಳು, 6 ಲ್ಯಾಪ್‌ಟಾಪ್‌ಗಳು ಮತ್ತು 4 ಹಾರ್ಡ್ ಡಿಸ್ಕ್ ಗಳು, ವಿವಿಧ ದಾಖಲೆಗಳು ಮತ್ತು ನಗದು ವಶಪಡಿಸಿಕೊಂಡಿದ್ದಾರೆ.

**ಎನ್ ಐಎ ದಾಳಿ ಏಕೆ:** ಬೆಂಗಳೂರು ಜೈಲಿನಲ್ಲಿರುವ ಕೈದಿಗಳಲ್ಲಿ ಉಗ್ರವಾದ ಬೆಳೆಸುವುದು, ಆತ್ಮಾಹುತಿ ದಾಳಿಗೆ ಪ್ರಚೋದನೆ ನೀಡುವುದು ಸೇರಿದಂತೆ ಹಲವು ಉಗ್ರ ಚಟುವಟಿಕೆಗಳಿಗೆ ಪಿತೂರಿ ನಡೆಸಿರುವ ಕುರಿತು ಮೂಲಗಳಿಂದ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಎನ್‌ಐಎ ದಾಳಿ ನಡೆಸಿದರು. ಎನ್ ಐಎ ಅಧಿಕಾರಿಗಳು ಮಾರ್ಚ್ .04ರ ರಾತ್ರಿ 8 ಗಂಟೆಯಿಂದ ಬೆಳಗ್ಗಿನ ಜಾವ 6 ಗಂಟೆ ವರೆಗೂ ಪರಪ್ಪನ ಅಗ್ರಹಾರದಲ್ಲಿ ಪರಿಶೀಲನೆ ನಡೆಸಿ ನಜೀರ್ ಸೇರಿದಂತೆ ಅನೇಕರ ವಿಚಾರಣೆ ನಡೆಸಿದರು.

**ಉಗ್ರವಾದಕ್ಕೆ ಸಹ ಕೈದಿಗಳ ಬಳಕೆ:** ಶಂಕಿತ ಉಗ್ರ ಜುನೈದ್ ಮತ್ತು ಈತನ ಐವರು ಸಹಚರರು 2017ರಲ್ಲಿ ಉದ್ಯಮಿಯೊಬ್ಬರ ಕೊಲೆ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಸೇರಿದ್ದರು. 2008ರಲ್ಲಿ ಬೆಂಗಳೂರಿನಲ್ಲಿ ಸಂಭವಿಸಿದ್ದ ಸರಣಿ ಸ್ಫೋಟದ ಆರೋಪಿ ಟಿ.ನಜೀರ್, ಪರಪ್ಪನ ಅಗ್ರಹಾರದಲ್ಲಿದ್ದ ಜುನೈದ್ ಅಹಮದ್ ಸಂಪರ್ಕಕ್ಕೆ ಬಂದಿದ್ದನು. ಬಳಿಕ ಜುನೈದ್ ತನ್ನ ಐವರು ಸಹಚರರ ಬ್ರೈನ್ ವಾಶ್ ಮಾಡಿ ಉಗ್ರವಾದಕ್ಕೆ ಪ್ರಚೋದನೆ ನೀಡಿದನು.

ಜೈಲಿನಿಂದ ಹೊರಬಂದ ನಂತರ, ಜುನೈದ್ ನಜೀರ್ ಆದೇಶದಂತೆ ಭಯೋತ್ಪಾದಕ ಚಟುವಟಿಕೆಗಳನ್ನು ಆರಂಭಿಸಿದನು. ಅಲ್ಲದೆ ತನ್ನ ಸಹಚರರಿಗೆ ಕೆಲವರ ಮೂಲಕ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ಪೂರೈಸಿದ್ದನು. ಈ ವಿಚಾರ ತಿಳಿದು ದಾಳಿ ಮಾಡಿದ್ದ ಸಿಸಿಬಿ ಪೊಲೀಸರು ಐವರನ್ನು ಬಂಧಿಸಿದ್ದರು. ಇನ್ನು ಪ್ರಮುಖ ಆರೋಪಿ ಜುನೈದ್ ವಿದೇಶದಲ್ಲಿ ತಲೆಮರೆಸಿಕೊಂಡಿದ್ದಾನೆ. ಸಿಸಿಬಿ ಪೊಲೀಸರು ನಜೀರ್‌ನನ್ನೂ ವಶಕ್ಕೆ ಪಡೆದಿದ್ದಾರೆ. ಸಿಸಿಬಿ ಪೊಲೀಸರು ಈ ಎರಡು ಪ್ರಕರಣವನ್ನು ಎನ್‌ಐಎಗೆ ಹಸ್ತಾಂತರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸದ್ಯ ಎನ್ ಐಎ ಪ್ರಕರಣದ ತನಿಖೆ ನಡೆಸುತ್ತಿದೆ.

## ರವೀಂದ್ರ ರಾಜೀನಾಮೆ

ನಾನು ಲಾಟರಿ ಒಡೆಯಿತು ಅಂದುಕೊಂಡೆ. ನಿಮ್ಮ ಬೆನ್ನಿಗೆ ಕಟ್ಟಿಕೊಂಡು ಓಡಾಡಲು ನಾನು ರಾಕ್‌ಲೈನ್ ಅಲ್ಲ. ಸ್ಮಾರ್ಟ್ ಸಿಟಿ ಪ್ರಾಜೆಕ್ಟ್‌ನಲ್ಲಿ ಯಾವ ಯಾವದೋ ಜಿಲ್ಲೆಯನ್ನ ಸ್ಮಾರ್ಟ್ ಸಿಟಿ ಮಾಡಲು ಹೋಗಿದ್ದಾರೆ. ಮಂಡ್ಯ ಸ್ಮಾರ್ಟ್ ಸಿಟಿ ಮಾಡಬೇಕು ಎಂದು ಕಾಂಗ್ರೆಸ್ ಮತ್ತು ಸಂಸದೆ ಸುಮಲತಾ ಅಂಬರೀಶ್ ವಿರುದ್ಧ ವಾಗ್ದಾಳಿ ಮಾಡಿದರು.

## ಅಧಿಕಾರಿಗಳ ನಡುವೆಯೇ ಕಿತ್ತಾಟ

ನಾನೂ ಏನೇ ತಪ್ಪು ಮಾಡಿದ್ರೆ ಕ್ರಮ ಕೈಗೊಳ್ಳಲಿ. ಡಿಎಚ್ ಓಗಳು ಹಗರಣ ಮಾಡಿದ್ದಾರೆ. ಹೀಗಾಗಿ ಸಾಕಷ್ಟು ಬಾರಿ ಆರೋಗ್ಯ ಇಲಾಖೆ ಮೇಲೆ ಎಸಿಬಿ ದಾಳಿಯಾಗಿದೆ. ಇಲಾಖೆ ಮಾನ ಹರಾಜು ಮಾಡಿದ್ದು ಅಧಿಕಾರಿಗಳು. ಹೀಗಾಗಿ ಸರ್ಕಾರ ಹಗರಣಗಳ ತನಿಖೆ ಮಾಡಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಅಂತ ಒತ್ತಾಯಿಸಿದ್ದಾರೆ.

ಇತ್ತ FDC ಹೇಮನಗೌಡನ ವಿರುದ್ಧವೂ ಡಿಸಿ ಹಾಗೂ ಸಚಿವರಿಗೆ ಡಿಹೆಚ್‌ಓ ಪ್ರತಿದೂರು ನೀಡಿದ್ದಾರೆ. ಜಿಲ್ಲಾ ವೈದ್ಯಕೀಯ ಸಂಘದಿಂದಲೂ FDC ಹೇಮನಗೌಡ ಪಾಟೀಲರ ವಿರುದ್ಧ ಜಿಲ್ಲಾ ಉಸ್ತುವಾರಿ ಸಚಿವರಿಗೆ ದೂರು ನೀಡಲಾಗಿದೆ. ಹೇಮನಗೌಡ ಪಾಟೀಲ್ ಬ್ಲಾಕ್ ಮೇಲರ್ ಆಗಿದ್ದಾರೆ. 25 ವರ್ಷಗಳಿಂದ ಗದಗನ ಡಿಹೆಚ್‌ಓ ಕಚೇರಿಯ ಬಜೆಟ್ ವಿಭಾಗವೊಂದರಲ್ಲೇ ಸೇವೆ ಮಾಡ್ತಿದ್ದಾರೆ. ಹಿಂದಿನ ಹಾಗೂ ಈಗಿನ ಡಿಹೆಚ್‌ಓ ಗಳಿಗೆ ಬ್ಲಾಕ್ ಮೇಲ್ ತಂತ್ರ ಅನುಸರಿಸಿ ತನ್ನ ಕಾರ್ಯ ಸಾಧನೆ ಮಾಡಿಕೊಂಡಿದ್ದಾನೆ. ಹೀಗೆ ಹಲವು ಆರೋಪಗಳನ್ನ ಮಾಡಿ ಹೇಮನಗೌಡರನ್ನ ಬೇರೆ ಜಿಲ್ಲೆಗೆ ವರ್ಗಾವಣೆ ಮಾಡಲು ಡಿಹೆಚ್ ಓಗಳು ದೂರು ನೀಡಿದ್ದಾರೆ. ವೈದ್ಯಕೀಯ ಸಂಘದ ಮೂಲಕ ಸಚಿವ ಹೆಚ್.ಕೆ.ಪಾಟೀಲ್ ಗೆ ದೂರು ನೀಡಲಾಗಿದೆ.

## 5000 ರೂ. ದಂಡ!

ಒಟ್ಟಾರೆ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲು ವಿಶೇಷ ಭದ್ರತಾ ಸಿಬ್ಬಂದಿಯನ್ನು ಸಹ ನಿಯೋಜಿಸಲಾಗುವುದು ಎಂದು ಸೊಸೈಟಿ ಹೇಳಿದೆ.

ಹೆಚ್ಚುತ್ತಿರುವ ನೀರಿನ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ, ದೈನಂದಿನ ನೀರಿನ ಬಳಕೆ ವೇಳೆ ಹೆಚ್ಚು ಜಾಗರೂಕತೆ ವಹಿಸುವಂತೆ ಬೆಂಗಳೂರಿನ ಹಲವಾರು ಹೌಸಿಂಗ್ ಸೊಸೈಟಿಗಳು ನಿವಾಸಿಗಳಿಗೆ ಸೂಚನೆ ನೀಡಿವೆ. ವೈಟ್‌ಫೀಲ್ಡ್, ಯಲಹಂಕ ಮತ್ತು ಕನಕಪುರ ಸೇರಿದಂತೆ ಕೆಲವು ಪ್ರದೇಶಗಳಲ್ಲಿ ನೀರಿನ ತೀವ್ರ ಕೊರತೆ ಎದುರಾಗಿದೆ.

ಅಪಾರ್ಟ್ ಮೆಂಟ್ ಗಳಿಗೆ ಸರಬರಾಜಾಗುತ್ತಿಲ್ಲ ನೀರು

ವೈಟ್‌ಫೀಲ್ಡ್‌ನಲ್ಲಿರುವ ಪಾಮ್ ಮೆಡೋಸ್ ಹೌಸಿಂಗ್

### ಮೊದಲನೇ ಪುಟದಿಂದ...

ಸೊಸೈಟಿಯು ನಿವಾಸಿಗಳಿಗೆ ನೋಟಿಸ್ ಕಳುಹಿಸಿದ್ದು, ಕಳೆದ ನಾಲ್ಕು ದಿನಗಳಿಂದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನೀರು ಸರಬರಾಜಾಗುತ್ತಿಲ್ಲ ಎಂದು ಹೇಳಿದೆ. ಸೊಸೈಟಿಯ ಅಧಿಕಾರಿಗಳು ಬೋರ್‌ವೆಲ್‌ಗಳ ಮೂಲಕ ನಿರ್ವಹಣೆ ಮಾಡುತ್ತಿದ್ದಾರೆ. ಶೀಘ್ರದಲ್ಲೇ ಬೋರ್‌ವೆಲ್‌ಗಳ ನೀರಿನ ಪ್ರಮಾಣ ಕೂಡ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಸೊಸೈಟಿ ಆತಂಕ ವ್ಯಕ್ತಪಡಿಸಿದೆ.

ನೀರಿನ ದುರ್ಬಳಕೆಗೆ ದಂಡ

ಕಠಿಣ ಪರಿಸ್ಥಿತಿಯನ್ನು ನಿಭಾಯಿಸುವುದಕ್ಕಾಗಿ ನೀರಿನ ಬಳಕೆಯನ್ನು ಶೇಕಡಾ 20 ರಷ್ಟು ಕಡಿಮೆ ಮಾಡುವಂತೆ ನಿವಾಸಿಗಳಿಗೆ ಸೂಚಿಸಲು ಸೊಸೈಟಿ ನಿರ್ಧರಿಸಿದೆ. ಇದನ್ನು ಮತ್ತೆ ಮತ್ತೆ ಉಲ್ಲಂಘಿಸಿದಲ್ಲಿ ಹೆಚ್ಚಿನ ದಂಡ ವಿಧಿಸುವುದಾಗಿ ಎಚ್ಚರಿಕೆ ನೀಡಿದೆ. ನೀರಿನ ದುರ್ಬಳಕೆ ಮೇಲೆ ಕಣ್ಣಾವಲಿಡಲು ಸಿಬ್ಬಂದಿ ನೇಮಕ ಮಾಡುವುದಾಗಿಯೂ ಹೇಳಿದೆ.

ಮತ್ತೊಂದೆಡೆ, ಕನಕಪುರದಲ್ಲಿರುವ ಪ್ರೆಸ್ಟೀಜ್ ಫಾಲ್ಕನ್ ಸಿಟಿ ಅಪಾರ್ಟ್‌ಮೆಂಟ್ ಕೂಡ ತನ್ನ 2,500 ಫ್ಲ್ಯಾಟ್ ಗಳ ನಿವಾಸಿಗಳಿಗೆ ನೀರಿನ ಬಳಕೆ ಮಿತಿಗೊಳಿಸುವಂತೆ ಸೂಚನೆಯುಳ್ಳ ಸಂದೇಶ ಕಳುಹಿಸಿದೆ. ಸದ್ಯ ಓವರ್‌ಹೆಡ್ ಟ್ಯಾಂಕ್‌ಗಳಲ್ಲಿ ಮಾತ್ರ ನೀರು ಸಂಗ್ರಹವಾಗಿದ್ದು, ಅದು ಹೆಚ್ಚು ದಿನ ಉಳಿಯುವುದಿಲ್ಲ, ಪೂರೈಕೆ ಸಮಸ್ಯೆ ಇದೆ ಎಂದು ಅಪಾರ್ಟ್‌ಮೆಂಟ್ ತಿಳಿಸಿದೆ.

ಬೆಂಗಳೂರು ಮತ್ತು ರಾಜ್ಯದ ಇತರ ಕಡೆಗಳಲ್ಲಿನ ನೀರಿನ ಸಮಸ್ಯೆ ಬಗ್ಗೆ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿಕೆ ಶಿವಕುಮಾರ್ ಸಭೆ ನಡೆಸಿದ್ದು, ಅಧಿಕಾರಿಗಳಿಗೆ ಹಲವು ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಟ್ಯಾಂಕರ್ ಮಾಫಿಯಾದವರಿಗೂ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

## ಮುನಾವರ್!

ಮುನಾವರ್ ನೆಲೆಸಿದ್ದ ಮನೆ ಜೆ.ಸಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವುದರಿಂದ ಆರೋಪಿ ಮನೆಗೆ ಜೆಸಿ ನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಮುನಾವರ್ ಬಂಧನದ ಬೆನ್ನಲ್ಲೇ ಆತನ ಕುಟುಂಬಸ್ಥರು ಮನೆಗೆ ಬೀಗ ಹಾಕಿ ತೆರಳಿದ್ದಾರೆ.

ರಾಜ್ಯಸಭಾ ಚುನಾವಣೆಯಲ್ಲಿ ಗೆದ್ದ ಬೆನ್ನಲ್ಲೇ ಕಾಂಗ್ರೆಸ್ಸಿನ ನಾಸೀರ್ ಹುಸೇನ್ ಬೆಂಬಲಿಗರಾದ ಬ್ಯಾಡಗಿಯ ಮೊಹಮ್ಮದ್ ಶಾಫಿ ನಾಶಿಪುಡಿ, ಬೆಂಗಳೂರಿನ ಮುನಾವರ್ ಅಹ್ಮದ್, ದೆಹಲಿಯ ಮೊಹಮ್ಮದ್ ಇಲ್ತಾಜ್ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ್ದರು. ಬಂಧಿತ ಮೂವರ ಪೈಕಿ ನಾಶೀಪುಡಿ, ಮುನಾವರ್ ಸ್ನೇಹಿತರಾಗಿದ್ದರೆ ಮಹಮ್ಮದ್ ಇಲ್ತಾಜ್‌ಗೆ ಇಬ್ಬರು ಆರೋಪಿಗಳಿಗೂ ಪರಿಚಯವಿಲ್ಲ. ಬಂಧಿತ ಮೂವರ ಮೊಬೈಲನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲು ಪೊಲೀಸರು ಈಗ ಮುಂದಾಗಿದ್ದಾರೆ.

ಸದ್ಯ ಮೂವರನ್ನು ಕಸ್ಟಡಿಗೆ ಪಡೆದಿರುವ ಪೊಲೀಸರು ಆರೋಪಿಗಳ ಪೂರ್ವ ಪರ ಏನು? ಅವರ ಉದ್ದೇಶ ಏನಾಗಿತ್ತು? ಈ ವೇಳೆ ಬೇರೆ ಯಾರಾದರೂ ಇವರಿಗೆ ಬೆಂಬಲ ನೀಡಿದ್ರಾ? ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ್ದು ಆಕಸ್ಮಿಕವೇ? ಅಥವಾ ಉದ್ದೇಶ ಪೂರ್ವಕವೇ ಎಂಬುದನ್ನು ಪರಿಶೀಲನೆ ನಡೆಸಲಿದ್ದಾರೆ.

## ಅರೆಸ್ಟ್

ನೂರಾರು ಜನ ಇತನನ್ನು ನಂಬಿ ಹಣ ಕಳೆದುಕೊಂಡಿದ್ದಾರೆ.

ವಂಚಕ ಕಿಶನ್ ಕಂತೆ ಕಂತೆ ಹಣದ ವಿಡಿಯೋ ಕಳಿಸಿ ನೀವು ಮಾಡಿದ ಹೂಡಿಕೆ ಹಣಕ್ಕೆ ಅಧಿಕ ಲಾಭಾಂಶ ನೀಡುವುದಾಗಿ ನಂಬಿಸಿ ಜನರನ್ನು ತನ್ನ ಬಲೆಗೆ ಬೀಳಿಸಿಕೊಳ್ಳುತ್ತಿದ್ದ. ಬಳಿಕ ಅವರಿಂದ ಲಕ್ಷ ಲಕ್ಷ ಹಣ ಪಡೆದು ಮೋಸ ಮಾಡುತ್ತಿದ್ದ. ಸದ್ಯ ಗುಣನಿಧಿ ಎಂಬುವರ ದೂರಿನ ಮೇರೆಗೆ ಎಫ್‌ಐಆರ್ ದಾಖಲಿಸಿ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. 15.15 ಲಕ್ಷ ಹಣ ಹೂಡಿಕೆ ಮಾಡಿಸಿಕೊಂಡು ವಂಚನೆ ಮಾಡಿದ್ದಾನೆ ಎಂದು ಗುಣನಿಧಿಯವರು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಸ್ನೇಹಿತ ಗೌತಮ್ ಮೂಲಕ ಗುಣನಿಧಿ ಅವರಿಗೆ ವಂಚಕ ಕಿಶನ್ ಪರಿಚಯವಾಗಿತ್ತು. ಲೋನ್ ಮಾಡಿ ಹಣ ಕೊಡಿಸು ಅದನ್ನು ಹೂಡಿಕೆ ಮಾಡಿ ಲಾಭಾಂಶ ನೀಡುವೆ ಎಂದು ನಂಬಿಸಿ ಲೋನ್‌ಗಾಗಿ ಬ್ರೋಕರ್ ವೆಂಕಟೇಶ್ ಸಂಪರ್ಕಿಸುವಂತೆ ಕಿಶನ್ ತಿಳಿಸಿದ್ದ. ಬ್ರೋಕರ್ ವೆಂಕಟೇಶ್ ದಾಖಲೆ ಪಡೆದು ಬ್ಯಾಂಕ್‌ನಿಂದ ಲೋನ್ ಕೊಡಿಸಿದ್ದರು. ಲೋನ್ ಅಮೌಂಟ್ ಖಿಲಿಉಖ ಮೂಲಕ ಕಿಶನ್ ಅಕೌಂಟ್‌ಗೆ ವರ್ಗಾವಣೆಯಾಗಿತ್ತು. ಬ್ಯಾಂಕ್ ಲೋನ್ ಇಎಂಐ ತಾನೇ ಪಾವತಿಸುವುದಾಗಿ ಕಿಶನ್ ನಂಬಿಸಿದ್ದ. ಮೊದಲ 5-6 ಇಒಖ ಪಾವತಿಸಿದ್ದ ಕಿಶನ್, ಒಂದೇ ವರ್ಷಕ್ಕೆ ಲೋನ್ ಕ್ಲಿಯರ್ ಮಾಡಿ ಪ್ರಾಫಿಟ್ ನೀಡುವ ಆಮಿಷವೊಡ್ಡಿದ್ದ. ಆದರೆ ಯಾವುದೇ ಲಾಭ ನೀಡದೆ ಹಣ ಪಡೆದು ವಂಚನೆ ಮಾಡಿದ್ದಾನೆ.

ವಂಚಕ ಕಿಶನ್, ಇದೇ ರೀತಿ ನೂರಾರು ಜನರನ್ನು ನಂಬಿಸಿ ವಂಚನೆ ಮಾಡಿದ್ದಾನೆ. ಸುಮಾರು 80-100 ಕೋಟಿಗೂ ಹೆಚ್ಚು ಹಣ ಪಡೆದು ವಂಚನೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಕಿಂಗ್ ರಿಯಲ್ ಎಸ್ಟೇಟ್ ಕಂಪನಿ ನಡೆಸುತ್ತಿರುವ ವಂಚಕ ಕಿಶನ್‌ಗೆ ಹಣ ವಾಪಸ್ ಕೇಳಿದರೆ ಗನ್ ತೋರಿಸಿ ಬೆದರಿಸುತ್ತಿರುವ ಆರೋಪ ಕೇಳಿ ಬಂದಿದೆ. ಹೂಡಿಕೆದಾರರು ಜೀವ ಭಯದಿಂದ ದೂರು ನೀಡಲು ಹಿಂಜರಿಯುತ್ತಿದ್ದಾರೆ. ಹೀಗಾಗಿ ವಂಚನೆಗೊಳಗಾದವರು ಬಂದು ದೂರು ನೀಡುವಂತೆ ಬೆಂಗಳೂರು ಉತ್ತರ ವಿಭಾಗದ ಡಿಸಿಪಿ ಸೈದುಲ್ ಅಡಾವತ್ ಮನವಿ ಮಾಡಿದ್ದಾರೆ.

## ಇರಿದ್ಲು

ಬೆಂಗಳೂರಿನ ಬೆಳ್ಳಂದೂರಿನಲ್ಲಿ ಫೆ.27 ರಂದು ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಮದುವೆ ವಾರ್ಷಿಕೋತ್ಸವದ ದಿನ ಮಧ್ಯರಾತ್ರಿ 1:30 ರ ಹೊತ್ತಿಗೆ ಗಂಡನಿಗೆ ಆತನ ಹೆಂಡತಿ ಚಾಕುವಿನಿಂದ ಇರಿದಿದ್ದಾಳೆ.

ಮದುವೆ ವಾರ್ಷಿಕೋತ್ಸವದ ದಿನ ಗಂಡ ನಿದ್ದೆಗೆ ಜಾರಿದ್ದ. ಈ ವೇಳೆ ಅಡುಗೆ ಮನೆಯಿಂದ ಚಾಕು ತಂದು ಪತ್ನಿ ಇರಿದಿದ್ದಾಳೆ. ಚಾಕುವಿನಿಂದ ಇರಿದ ಹಿನ್ನೆಲೆ ಗಂಡನ ಕೈಗೆ ರಕ್ತಗಾಯವಾಗಿದೆ. ಸ್ಥಳೀಯರ ಸಹಾಯದಿಂದ ಗಾಯಾಳುವನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆ ಸಂಬಂಧ ಬೆಳ್ಳಂದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗಂಡ-ಹೆಂಡತಿಗೆ ಪೊಲೀಸರು ಕೌನ್ಸೆಲಿಂಗ್ ನಡೆಸಿದ್ದಾರೆ. ತನಿಖೆ ವೇಳೆ ಮೊದಲ ಬಾರಿಗೆ ಗಿಫ್ಟ್ ನೀಡಿಲ್ಲ ಎಂದು ಮಹಿಳೆ ಕೃತ್ಯ ಎಸಗಿದ್ದಾಳೆ.

ಆರೋಪಿ ಮಹಿಳೆಯ ಗಂಡನ ತಾತ ತೀರಿ ಹೋಗಿದ್ದ. ಈ ಹಿನ್ನೆಲೆ ಗಿಫ್ಟ್ ಆಕೆಯ ಪತಿ ಗಿಫ್ಟ್ ನೀಡಿರಲಿಲ್ಲ ಎನ್ನಲಾಗಿದೆ.

## ಸಾವು

ಅವರು ಹರ್ಯಾಣದ ಚಾರ್ಕಿ ದಾದ್ರಿ ನಿವಾಸಿಗಳಾಗಿದ್ದರು,

ದೆಹಲಿಯ ಬದರ್‌ಪುರದಲ್ಲಿ ಕಾರು ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ, 3 ಮಂದಿ ಸಾವು ದೆಹಲಿಯ ಬಡಾಪುರ ಮೇಲ್ಸೇತುವೆಯಲ್ಲಿ ಬರುತ್ತಿದ್ದ ಟ್ರಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಮೂವರು ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಶನಿವಾರ ಮಧ್ಯರಾತ್ರಿ 12.48 ಕ್ಕೆ ಈ ಘಟನೆ ನಡೆದಿದೆ. ಆಲ್ಟೊದಲ್ಲಿದ್ದ ಏಳು ಮಂದಿ ಫರಿದಾಬಾದ್‌ನಲ್ಲಿ ನಡೆದ ವಿವಾಹ ಸಮಾರಂಭದಲ್ಲಿ ಪಾಲ್ಗೊಂಡು ದೆಹಲಿಗೆ ಹಿಂತಿರುಗುತ್ತಿದ್ದರು ಎಂದು ಪ್ರಾಥಮಿಕ ವಿಚಾರಣೆಯಿಂದ ತಿಳಿದುಬಂದಿದೆ.

ಕಾರು ನಿಯಂತ್ರಣ ತಪ್ಪಿ ಬದರ್‌ಪುರ ಮೇಲ್ಸೇತುವೆಯಲ್ಲಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಎದುರುಗಡೆಯಿಂದ ಬರುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಕಾರು ನಿಯಂತ್ರಣ ತಪ್ಪಿ ಬದರ್ ಪುರ ಮೇಲ್ಸೇತುವೆಯಲ್ಲಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಎದುರುಗಡೆಯಿಂದ ಬರುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಈ ಬಗ್ಗೆ ಕರೆ ಬಂದ ನಂತರ ಅಪಘಾತದ ಬಗ್ಗೆ ಪೊಲೀಸರಿಗೆ ತಿಳಿಯಿತು.

ಚಾಲಕನ ನಿಯಂತ್ರಣ ತಪ್ಪಿ ಕಾರು ಮರಕ್ಕೆ ಡಿಕ್ಕಿ: ಮಗು ಸೇರಿದಂತೆ ಬಳ್ಳಾರಿ ಮೂಲದ ಐವರು ಸಾವು ಚಾಲಕನ ನಿಯಂತ್ರಣ ತಪ್ಪಿ ಕಾರು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಬಳ್ಳಾರಿ ಮೂಲದ ಐವರು ದುರ್ಮರಣ ಹೊಂದಿರುವಂತಹ ಘಟನೆ ಆಂಧ್ರದ ಮೆಹಬೂಬನಗರ ಜಿಲ್ಲೆ ಕೊತಕೋಟ ಬೈಪಾಸ್‌ನಲ್ಲಿ ನಡೆದಿದೆ. ಭೀಕರ ಅಪಘಾತದಲ್ಲಿ ಸ್ಥಳದಲ್ಲೇ ನಾಲ್ವರು ದುರ್ಮರಣ ಹೊಂದಿದ್ದು, ಆಸ್ಪತ್ರೆಯಲ್ಲಿ ಮಗು ಕೊನೆಯುಸಿರೆಳೆದಿದೆ.

ಫಾತೀಮಾ(50), ಅಬ್ದುಲ್‌ರೆಹಮಾನ್(30), ಮಾರಿಯಾ(32), ವಾಸೀಂ(01), ಬುಸ್ರಾ(02) ಮೃತ ದುರ್ದೈವಿಗಳು. ಮತ್ತಿಬ್ಬರ ಸ್ಥಿತಿ ಚಿಂತಾಜನಕ, ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಎರ್ಟಿಗಾ ಕಾರಿನಲ್ಲಿ ಹೈದರಾಬಾದ್ ಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಅಪಘಾತ ಸ್ಥಳಕ್ಕೆ ಆಂಧ್ರಪ್ರದೇಶ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

# ಕಾಂಗ್ರೆಸ್ ಸರ್ಕಾರದಲ್ಲಿ ಶೇ.50ರಷ್ಟು ಕಮಿಷನ್



**ವಿಜಯಪುರ:** ಈ ಸರ್ಕಾರದಲ್ಲಿ 50% ಭ್ರಷ್ಟಾಚಾರ ನಡೆಯುತ್ತಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ಮಾಡಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಶೇ.13ರಷ್ಟು ಕಮಿಷನ್ ಇಲ್ಲದೆ ಗುತ್ತಿಗೆದಾರರಿಗೆ ಎನ್‌ಓಸಿ ನೀಡುತ್ತಿಲ್ಲ. ಎಲ್ಲವೂ ಸೇರಿದರೆ ಶೇಕಡಾ 50ರಷ್ಟು ಕಮಿಷನ್‌ಗೆ ಬಂದು ನಿಲ್ಲುತ್ತದೆ. ನಮ್ಮ ಸರ್ಕಾರದ ವಿರುದ್ಧ 40% ಕಮಿಷನ್ ಆರೋಪ ಮಾಡುತ್ತಿದ್ದರು. ಆದರೆ ಇವರು 50 ಪರ್ಸೆಂಟ್ ಕಮಿಷನ್ ಪಡೆಯುತ್ತಿದ್ದಾರೆ. ಬಿಬಿಎಂಪಿ ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಇದೆ. ನಿಮ್ಮ ಸರ್ಕಾರವೇ ಉತ್ತಮ ಎಂದು ಗುತ್ತಿಗೆದಾರರು ಹೇಳುತ್ತಿದ್ದಾರೆ. ವಿಜಯೇಂದ್ರ ಉತ್ತಮವಾಗಿದ್ದರು ಎಂದು ಗುತ್ತಿಗೆದಾರರು ಹೇಳುತ್ತಿದ್ದಾರೆ ಎಂದರು.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರು ತಡರಾತ್ರಿ ಕರೆ ಮಾಡಿದ್ದರು ಬೆಳಗಾವಿಯಲ್ಲಿ ಬಿಜೆಪಿ ಅಧ್ಯಕ್ಷರ ನೇತೃತ್ವದಲ್ಲಿ ಸಭೆ ನಡೆಯಲಿದೆ. ಇಂದು ವಿಜಯಪುರದಲ್ಲಿ ಶಿವಾಜಿ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದೇನೆ. ನಾಳೆ ನಾನು ಬೆಳಗಾವಿಗೆ ತೆರಳಿ ರಾಷ್ಟ್ರೀಯ ಅಧ್ಯಕ್ಷರ ಸಭೆಯಲ್ಲಿ ಭಾಗಿಯಾಗುತ್ತೇನೆ. ವಿಜಯಪುರ ಲೋಕಸಭಾ ಚುನಾವಣೆ ಟಿಕೆಟ್ ಯಾರಿಗೆ ನೀಡಿದರು ನಾವು ಕೆಲಸ ಮಾಡುತ್ತೇವೆ. ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡೋದು ನಮ್ಮ ಗುರಿ ಎಂದು ಹೇಳಿದ್ದಾರೆ.

ಜಿಗಜಿಣಗಿಗೆ ಆಗಲಿ ಅಥವಾ ಬೇರೆಯಾರೇ ಆಗಲಿ ನಾವು ಪಕ್ಷದ ಪರವಾಗಿ ಕೆಲಸ ಮಾಡುತ್ತೇವೆ. ದಲಿತ ಸಮುದಾಯದ ಯುವಕನಿಗೆ ಟಿಕೆಟ್ ನೀಡಿದರೂ ಅವರ ಪರವಾಗಿ ಕೆಲಸ ಮಾಡುತ್ತೇವೆ. ಮೋದಿ ಪ್ರಧಾನಿ ಮಾಡಿಲು ಎಲ್ಲರೂ ಕೈಜೋಡಸಲಿದ್ದೇವೆ ಎಂದಿದ್ದಾರೆ.

ಸುಳ್ಳು ವಂದತಿ ಬಗ್ಗೆ ನನಗೆ ಗೊತ್ತಿಲ್ಲ

ರಮೇಶ ಜಿಗಜಿಣಗಿಗೆ ಅನಾರೋಗ್ಯದ ವದಂತಿ ವಿಚಾರವಾಗಿ ಮಾತನಾಡಿದ ಅವರು, ಜಿಗಜಿಣಗಿಗೆ ಆರೋಗ್ಯದ ಬಗ್ಗೆ ಅವರ ಪುತ್ರನೇ ಸ್ಪಷ್ಟಪಡಿಸಿದ್ದಾರೆ. ರಾಜಕೀಯ ಕಾರಣಕ್ಕಾಗಿ ಸುಳ್ಳು ವಂದತಿ ಹಬ್ಬಿಸುತ್ತಿದ್ದಾರೆ ಅನ್ನೋದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳಿದ್ದಾರೆ.

ಜಾತಿ ಗಣತಿ ವರದಿ ಸ್ವೀಕಾರದಿಂದ ಸರ್ಕಾರ ಪತನ ಗ್ಯಾರಂಟಿ ಎಂದು ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ. ಲೋಕಾಸಭಾ ಚುನಾವಣೆಯ ನಂತರ ಸರ್ಕಾರ ಬೀಳಲಿದೆ. 50?60 ಶಾಸಕರಿಂದ ಸರ್ಕಾರ ಬೀಳುತ್ತಾ ಅನ್ನೋದು ಆಗ ಗೊತ್ತಾಗುತ್ತೆ. ಈ ಸರ್ಕಾರ ಬಹಳ ದಿನ ಮುಂದೆ ವರೆಯುವುದಿಲ್ಲ. ಜಾತಿ ಗಣತಿ ಸ್ವೀಕಾರ ವಿಚಾರವಾಗಿ ಕಾಂಗ್ರೆಸ್‌ನಲ್ಲೇ ಅಸಮಧಾನ ಭುಗಿಲೆದ್ದಿದೆ. ಕಾಂಗ್ರೆಸ್‌ನ ಶಾಮನೂರ ಶಿವಶಂಕ್ರಪ್ಪ, ಲಕ್ಷ್ಮಿ ಹೆಬ್ಬಾಳಕರ್, ಮಧು ಬಂಗಾರಪ್ಪ, ವಿನಯ ಕುಲಕರ್ಣಿ ಅವರೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಲೋಕಸಭಾ ಚುನಾವಣೆಯ ನಂತರ ಸರಕಾರ ಪತನ ನಿಶ್ಚಿತ ಎಂದು ಕಿಡಿಕಾರಿದ್ದಾರೆ.

# ಸ್ಥೂಲಕಾಯದ ಬಗ್ಗೆ ಅರಿವು ಮೂಡಿಸಿದ ಡಾ.ಶೆಣೈ, ಡಾ.ತೃಪ್ತಿ



**ಮೈಸೂರು:** ವಿಶ್ವ ಸ್ಥೂಲಕಾಯ ದಿನದ ಅಂಗವಾಗಿ ಮೈಸೂರು ಅಡೋಲೆಸೆಂಟ್ ಹೆಲ್ತ್ ಅಕಾಡೆಮಿಯಿಂದ (ಒಂಊಂ) ವಿಜಯ ವಿಠಲ ವಿದ್ಯಾಶಾಲೆಯಲ್ಲಿ ಹದಿಹರೆಯದವರ ವಯಸ್ಸಿನಲ್ಲಿ ಬೊಜ್ಜು ವಿಷಯದಡಿಯಲ್ಲಿ 8 ಮತ್ತು 9ನೇ ತರಗತಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಡಾ.ಯು.ಜಿ.ಶೆಣೈರವರು,ಎಂ.ಬಿ.ಬಿ.ಎಸ್ .ಡಿ.ಸಿ.ಹೆಚ್(ಆಅಊ), ಮಕ್ಕಳ ತಜ್ಞರು,ಒಂಊಂ ಸಂಸ್ಥೆಯ ಅಧ್ಯಕ್ಷರು,ಇವರು ಮಾತನಾಡುತ್ತಾ, ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಕರ ಪ್ರಾಮುಖ್ಯತೆ ಬಗ್ಗೆ ಮಕ್ಕಳಿಗೆ ತಿಳಿಸಿಕೊಟ್ಟರು. ಹದಿಹರೆಯದಲ್ಲಿ ಸ್ಥೂಲಕಾಯತೆಯನ್ನು ಎದುರಿಸಲು ಬೇಕಾದ ಅಮೂಲ್ಯವಾದ ವಿಚಾರಗಳನ್ನು ಮಕ್ಕಳ ಜೊತೆ ಹಂಚಿಕೊಂಡರು.ಹದಿಹರೆಯರಲ್ಲಿ ಆಗುವ ದೈಹಿಕ ಮತ್ತು ಮಾನಸಿಕ ಬದಲಾವಣೆಗಳು, ಅದರ ಪರಿಣಾಮಗಳ ಬಗ್ಗೆ ತಿಳಿಸಿದರು.ಈ ವಯಸ್ಸಿನಲ್ಲಿ ಎದುರಾಗುವ ಕೆಲವು ಸಮಸ್ಯೆಗಳಾದ ದೇಹದಾರ್ಢ್ಯ ಪರಿಕಲ್ಪನೆ, ಗೆಳೆಯರ ಒತ್ತಡ,ಆಹಾರ ಪದ್ಧತಿ,ಅತಿಯಾಗಿ ತಿನ್ನುವುದು, ಪೋಷಕರ ಮಕ್ಕಳ ಸಂಘರ್ಷ ಮುಂತಾದ ವಿಚಾರಗಳ ಬಗ್ಗೆ ವಿವರಿಸಿದರು .ಮಕ್ಕಳು ಈ ವಿಷಯದ ಬಗ್ಗೆ ಪೋಷಕರು, ಶಿಕ್ಷಕರು ಮತ್ತು ಹಿರಿಯರೊಂದಿಗೆ ಮುಕ್ತವಾಗಿ ಮಾತನಾಡುವ ಮೂಲಕ ಪರಿಹಾರವನ್ನು ಕಂಡುಕೊಳ್ಳಬಹುದು ಎಂದು ಮಕ್ಕಳಲ್ಲಿ ಅರಿವು ಮೂಡಿಸಿದರು.ಯಾವುದೇ ಒಳ್ಳೆಯದು, ಕೆಟ್ಟದನ್ನು ಮಾಡುವ ಮುಂಚೆ ಯೋಚಿಸಿ ಎಂದರು.

ಡಾ.ತೃಪ್ತಿ,ಎಂ.ಬಿ.ಬಿ.ಎಸ್,ಅಂತ:ಸ್ರಾವ ಶಾಸ್ತ್ರಜ್ಞೆ (ಇಟಿಜಆಭಿಡಿಟಿಂಟಠರಣ),ಒಂಊಂ ಸಂಸ್ಥೆಯ ಸದಸ್ಯೆ,ಇವರು ಮಾತನಾಡುತ್ತಾ, ಮಕ್ಕಳ ದೇಹದ ಅತಿಯಾದ ತೂಕ ಉಂಟಾಗಲು ಆಲಸ್ಯ, ಪೌಷ್ಠಿಕಾಂಶ ಕಡಿಮೆಯುಳ್ಳ ಆಹಾರ (ಎಣಟಿಞ ಜಿಠಠಜ) ಗಳನ್ನು ತಿನ್ನುವುದು ಕಾರಣ ಎಂದು ತಿಳಿಸಿದರು.ಮಕ್ಕಳು ಆಲಸ್ಯದಿಂದ ಇದ್ದಾಗ, ದೈಹಿಕವಾಗಿ ವ್ಯಾಯಾಮಗಳಲ್ಲಿ ತೊಡಗುವಿಕೆ ಇಲ್ಲದಿದ್ದಾಗ ಕೊಬ್ಬಿನಾಂಶ ದೇಹದಲ್ಲಿ ಹೆಚ್ಚುತ್ತದೆ. ಸಸ್ಯ ಆಹಾರ,ಹಣ್ಣುಗಳನ್ನು ತಿನ್ನುವುದರಿಂದ,ದೈಹಿಕ ವ್ಯಾಯಾಮ ಮಾಡುವುದರಿಂದ,ಮೊಬೈಲ್ ಬಳಕೆ ಕಡಿಮೆ ಮಾಡುವುದರಿಂದ ಕೊಬ್ಬಿನಾಂಶ ತಡೆಯಬಹುದು ಎಂಬುದನ್ನು ತಿಳಿಸಿದರು.

ಸ್ಥೂಲಕಾಯತೆಯು ಮುಂದಿನ ವಯಸ್ಸಿನಲ್ಲಿ ಮಕ್ಕಳಿಗೆ ಉಂಟು ಮಾಡಬಹುದಾದ ವಿವಿಧ ತೊಡಕುಗಳ ಬಗ್ಗೆ ಹಾಗೂ ಇದರಿಂದ ಜೀವನದ ಗುಣಮಟ್ಟ ಕಡಿಮೆಯಾಗುತ್ತದೆ ಎಂಬ ವಿಚಾರಗಳ ಬಗ್ಗೆ ತಿಳಿಸಿದರು. ಈ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳ ಸರ್ವಾಂಗೀಣ ಶ್ರೇಯೋಭಿವೃದ್ಧಿಗೆ ಸಹಕಾರಿಯಾಗುತ್ತದೆ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಮಕ್ಕಳ ಕಾರ್ಯಕ್ಷಮತೆಯು ಬಹುಪಟ್ಟು ಹೆಚ್ಚಾಗುತ್ತದೆ ಎಂದು ಹೇಳುವ ಮೂಲಕ ಮಕ್ಕಳಲ್ಲಿ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಡಾ.ಮಾನಿನಿ,ಒಂಊಂ ಸಂಸ್ಥೆಯ ಕಾರ್ಯದರ್ಶಿ,ಡಾ.ಕನ್ಯಾ,ಒಂಊಂ ಸಂಸ್ಥೆಯ ಖಜಾಂಚಿ, ವೀಣಾ.ಎಸ್. ಎ.ಪ್ರಾಂಶುಪಾಲರು, ವಿಜಯ ವಿಠಲ ವಿದ್ಯಾಶಾಲೆ, ವಿವಿಧ ವಿಭಾಗದ ಮುಖ್ಯಸ್ಥರು, ಶಿಕ್ಷಕರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮನರೇಗಾ ಪ್ರಗತಿಯ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದ

**ಮೈಸೂರು:** ಮಾ .04 ರಂದು ಮೈಸೂರು ಜಿಲ್ಲಾ ಪಂಚಾಯಿತಿಯ ಮಿನಿ ಸಭಾಂಗಣದಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ಎಂ ಗಾಯತ್ರಿ ರವರ ಅಧ್ಯಕ್ಷತೆಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಮುಂದಿನ 3 ತಿಂಗಳು ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇವಿನ ಸಮಸ್ಯೆಯನ್ನು ನಿವಾರಿಸಲು ಕೈಗೊಂಡಿರುವ ಕ್ರಮದ ಕುರಿತು ಹಾಗೂ ಮನರೇಗಾ ಪ್ರಗತಿಯ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಸಲಾಯಿತು. ಸಭೆಯಲ್ಲಿ ಉಪಕಾರ್ಯದರ್ಶಿ(ಅಭಿವೃದ್ಧಿ), ಕಾರ್ಯಪಾಲಕ ಅಭಿಯಂತರರು, ಸಹಾಯಕ ಯೋಜನ ಅಧಿಕಾರಿಗಳು ಹಾಗೂ ವಿಡಿಯೋ ಸಂವಾದದ ಮೂಲಕ ಎಲ್ಲಾ ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಕಾರ್ಯಪಾಲಕ ಅಭಿಯಂತರರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿರಿದ್ದರು.



## ಕೊಡಾರೆ ಪ್ರದೇಶದಲ್ಲಿ ಕಾಡ್ಗಿಚ್ಚು

**ಚಾಮರಾಜನಗರ :** ಬಿಸಿಲಿನ ತಾಪಮಾನಕ್ಕೆ ಕಾಡ್ಗಿಚ್ಚು ಕಾಣಿಸಿಕೊಂಡು 50 ರಿಂದ 60 ಎಕರೆಯಷ್ಟು ಕಾಡಿನ ನೆಲ ಹಾಸು ಬೆಂಕಿಗಾಹುತಿಯಾಗಿರುವ ಘಟನೆ ಚಾಮರಾಜನಗರ ಜಿಲ್ಲೆಯ ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಪುಣಜನೂರು ವಲಯದ ಕೊಡಾರೆ ಪ್ರದೇಶದಲ್ಲಿ ಸಂಭವಿಸಿದೆ. ಚಾಮರಾಜನಗರ ತಾಲ್ಲೂಕಿನ ಪುಣಜನೂರು ಬಲಿಯ ಕೊಡಾರೆ ಪ್ರದೇಶದ ಕಾಡಿನಲ್ಲಿ ನೆಲಹಾಸಿಗೆ ಬೆಂಕಿ ಕಾಣಿಸಿಕೊಂಡಿದ್ದು, ಸೋಮವಾರ ಮದ್ಯಾಹ್ನ ಕಾಣಿಸಿಕೊಂಡ ಬೆಂಕಿಯನ್ನು ಸಂಜೆಯ ತನಕ ಅರಣ್ಯ ಇಲಾಖೆಯ ಸಿಬ್ಬಂದಿಗಳು ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿದ್ದು, ರಾತ್ರಿಯ ವೇಳೆಗೆ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ. ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಕಂಟ್ರಾಕ್ಟರ್ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.

## ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯದರ್ಶನ ಮೇಳ

**ಚಾಮರಾಜನಗರ:** 88ನೇ ತ್ರಿಮೂರ್ತಿ ಶಿವ ಜಯಂತಿ ಮಹೋತ್ಸವ ಹಾಗೂ ವಿಶ್ವ ಪ್ರಸಿದ್ದ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ ಮೇಳ ಉದ್ಘಾಟನಾ ಸಮಾರಂಭ ಮಾ 6 ರಂದು ಸಂಜೆ 4ಕ್ಕೆ ಪ್ರಮುಖ ಬೀದಿಗಳಲ್ಲಿ ಜಿಲ್ಲೆಯ ರಾಜಯೋಗ ವಿದ್ಯಾರ್ಥಿಗಳಿಂದ ಶಾಂತಿ ಶೋಭಾ ಯಾತ್ರೆ, 5.30 ಕ್ಕೆ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ನಡೆಯಲಿದೆ ಎಂದು ಸ್ವಾಮಿ ವಿವೇಕಾನಂದ ರಾಷ್ಟ್ರ ರಾಜ್ಯ ಸದ್ಭಾನಾ ಪ್ರಶಸ್ತಿ ಪುರಸ್ಕ?ತೆ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ತಿಳಿಸಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ 88ನೇ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ ಹಾಗೂ ಜ್ಯೋತಿರ್ಲಿಂಗಗಳ ಪುಣ್ಯದರ್ಶನ ಮೇಳ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ದಿವ್ಯ ಸಾನಿದ್ಯವನ್ನು ಮಸೂರು ಉಪವಲಯದ ಬ್ರಹ್ಮಾಕುಮಾರಿಸ್ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ಅವರು ವಹಿಸಲಿದ್ದಾರೆಂದರು. ಕಾರ್ಯಕ್ರಮದ ಉದ್ಘಾಟನೆಯನ್ನು ಹರವೆ ವಿರಕ್ತ ಮಠದ ಸರ್ಪಭೂಷಣ ಸ್ವಾಮೀಜೀ ನೆರವೇರಿಸಲಿದ್ದು ಜಿಲ್ಲಾಧೀಕಾರಿ ಶಿಲ್ಪಾನಾಗ್ ಅಧ್ಯಕ್ಷತೆ ವಹಿಸಲಿದ್ದಾರೆ. ಬಿಳಿಗಿರಿರಂಗನ ಬೆಟ್ಟದ ವಿಶ್ವಶಾಂತಿನಿಕೇತನ ಆಶ್ರಮದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು. ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ಶ್ರೀಧರ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ್, ತಹಸಿಲ್ದಾರ್ ಐ. ಈ. ಬಸವರಾಜು, ಮಾಜಿ ಶಾಸಕರಾದ ಪರಿಮಳ ನಾಗಪ್ಪ, ಬಾಲರಾಜು, ಭಾಗವಹಿಸಲಿದ್ದಾರೆ. ಕೊಳ್ಳೆಗಾಲ ಬ್ರಹ್ಮಾಕುಮಾರಿಸ್ ಜಿಲ್ಲಾ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಪ್ರಭಾಮಣೀಜೀ ಶಿವ ಜಯಂತಿಯ ಸಂದೇಶ ನೀಡಲಿದ್ದಾರೆ. ಮೇಳದಲ್ಲಿ ವಿಶೇಷವಾಗಿ ಹಾಲೋಗ್ರಾಂ ಲಿಂಗದ ಪ್ರದರ್ಶನವಿರುತ್ತದೆ. ಪ್ರತಿ ನಿತ್ಯ ಬೆಳಗ್ಗೆ ಮತ್ತು ಸಂಜೆ 6.30 ರಿಂದ 8 ರವರೆಗೆ ಸಾರ್ವಜನಿಕರಿಗೆ ಸುಖ ಶಾಂತಿ ಆರೋಗ್ಯಕ್ಕಾಗಿ ಉಚಿತ ಪ್ರವಚನ ನಡೆಯಲಿದೆ ಎಂದು ತಿಳಿಸಿದರು ಓಂ ಶಾಂತಿ ನ್ಯೂಸ್ ಸರ್ವಿಸ್ನ ಬಿ. ಕೆ. ಆರಾಧ್ಯ ಹಾಜರಿದ್ದರು.

## ಧರ್ಮಸ್ಥಳ ಯೋಜನೆಯಿಂದ ಮಹಿಳಾ ದಿನಾಚರಣೆ

ಹುಳಿಯಾರು: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹುಳಿಯಾರು ಬನಶಂಕರಿ ಕಲ್ಯಾಣ ಮಂಟಪದಲ್ಲಿ ಮಾ.7 ರ ಗುರುವಾರ ಬೆಳಗ್ಗೆ 10 ಗಂಟೆಗೆ ಮಹಿಳಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಶಾಸಕ ಸಿ.ಬಿ.ಸುರೇಶ್‌ಬಾಬು ಅವರು ಉದ್ಘಾಟಿಸುವರು. ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್ ಅಧ್ಯಕ್ಷತೆ ವಹಿಸುವರು. ಉಪಾಧ್ಯಕ್ಷೆ ಶೃತಿ ಸನತ್, ವಿದ್ಯಾವಾರಿಧಿ ಶಾಲೆಯ ಕಾರ್ಯದರ್ಶಿ ಕವಿತಾಕಿರಣ್, ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಡಿ.ದಿನೇಶ್, ಜ್ಞಾನವಿಕಾಸ ಯೋಜನಾಧಿಕಾರಿ ಸಂಧ್ಯಾ ವಿ.ಶೆಟ್ಟಿ ಉಪಸ್ಥಿತರಿರುವರು. ಶಿರಾದ ಪ್ರಸೂತಿ ತಜ್ಞರಾದ ಡಾ.ಶಿಲ್ಪ ಅವರು ಆರೋಗ್ಯದ ಅರಿವು, ಹುಳಿಯಾರು ಬ್ರಹ್ಮಕುಮಾರಿ ಸಮಾಜದ ಗೀತಕ್ಕ ಅವರು ಮಹಿಳಾ ದಿನಾಚರಣೆಯ ಬಗ್ಗೆ ಮಾತನಾಡಲಿದ್ದಾರೆ.

## ಚುನಾವಣಾ ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ

**ಮೈಸೂರು:** ಮುಂಬರುವ ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕವಾಗಿ ನಡೆಸಲು ಹಾಗೂ ಯಾವುದೇ ಲೋಪವಾಗದಂತೆ ಅಧಿಕಾರಿಗಳು ತಮಗೆ ವಹಿಸಿದ ಕೆಲಸಗಳನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸಿ ಚುನಾವಣೆಯನ್ನು ಯಶಸ್ವಿಗೊಳಿಸಬೇಕು ಎಂದು ಮೈಸೂರು ಜಿಲ್ಲಾಧಿಕಾರಿಗಳಾದ ಡಾ ಕೆ.ವಿ.ರಾಜೇಂದ್ರ, ಹಾಗೂ ಮಂಡ್ಯ ಜಿಲ್ಲಾಧಿಕಾರಿಗಳಾದ ಡಾ.ಕುಮಾರ ಅವರು ತಿಳಿಸಿದರು.

ಅವರು ಕೆ.ಆರ್.ನಗರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ -2024 ರ ಸಂಬಂಧ ಪೂರ್ವ ಸಿದ್ಧತಾ ಸಭೆಯಲ್ಲಿ ಉಭಯ ಜಿಲ್ಲಾಧಿಕಾರಿಗಳು ಮಾತನಾಡಿದರು.

ಎಲ್ಲ ಮತಗಟ್ಟೆಗಳಿಗೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ನ್ಯೂನತೆಗಳಿದ್ದಲ್ಲಿ ಸರಿಪಡಿಸುವಂತೆ ಎಲ್ಲಾ ಸೆಕ್ಟರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ಅದಕ್ಕೆ ಸಂಬಂಧಿಸಿದ ನಮೂನೆಗಳಾದ ವಿಎಂ1, ವಿಎಂ2, ವಿಎಂ3 ಭರ್ತಿ ಮಾಡುವ ಬಗ್ಗೆ ಆರಕ್ಷಕ ಇಲಾಖೆಯೊಂದಿಗೆ ಬಿಎಲ್‌ಒಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ಭರ್ತಿ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಅಂತರ ಜಿಲ್ಲಾ ಗಡಿಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದ ತಕ್ಷಣ ಅದರ ನಿಯಮಗಳಂತೆ ಚೆಕ್ ಪೋಸ್ಟ್ ನಿರ್ಮಿಸಿ ಅಲ್ಲಿನ ಸಿಬ್ಬಂದಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಿಕೊಟ್ಟು ನಿಯಮಿತವಾಗಿ ವಾಹನ ತಪಾಸಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ವಿವಿಧ ಇಲಾಖೆಗಳ ಸಮನ್ವಯತೆ ಸೆಕ್ಟರ್ ಆಫೀಸರ್‌ಗಳ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ಅತಿ ಮುಖ್ಯವಾಗಿ ಹರಿಯಬೇಕು. ಎಲ್ಲಾ ಅಧಿಕಾರಿಗಳು ಸೆಕ್ಟರ್ ಅಧಿಕಾರಿಗಳ ಕೈಪಿಡಿ, ಇವಿಎಂ ಅಧಿಕಾರಿಗಳ ಕೈಪಿಡಿ ಹಾಗೂ ಚುನಾವಣಾ ಆಯೋಗದಿಂದ ಬರುವ ಎಲ್ಲಾ ಕೈಪಿಡಿ ಮತ್ತು ಸುತ್ತೋಲೆಗಳಂತೆ ಕರ್ತವ್ಯ ನಿರ್ವಹಿಸಬೇಕು ಎಂದರು. ಪೋಸ್ಟರ್ ಮತ್ತು ಬ್ಯಾನರ್‌ಗಳನ್ನು ಸಾರ್ವಜನಿಕ ಪ್ರದೇಶಗಳಿಂದ ನಿಗದಿತ ಅವಧಿಯಲ್ಲಿ ತೆರವುಗೊಳಿಸುವಂತೆ ಹಾಗೂ ಕಾಮಗಾರಿಗಳು ಯಾವ ಹಂತದಲ್ಲಿವೆ ಎಂಬ ಪಟ್ಟಿಯನ್ನು ತಯಾರಿಸಿ ವರದಿ ಪರಿಶೀಲಿಸಲು ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಎಆರ್‌ಒ ಸುಪ್ರಿಯಾ ಬಣಗಾರ್, ಕೆ.ಆರ್ ನಗರ ಮತ್ತು ಸಾಲಿಗ್ರಾಮದ ತಹಶಿಲ್ದಾರ್ ಹಾಗೂ ಕಾರ್ಯನಿರ್ವಾಹಣಾಧಿಕಾರಿ ಉಪಸ್ಥಿತರಿದ್ದರು.



# ಬರನಿರ್ವಹಣೆಗೆ ಕ್ರಮವಹಿಸಿ

## ಜಿಲ್ಲಾಧಿಕಾರಿಗಳ ಜತೆ ಸಿಎಂ ವಿಡಿಯೋ ಸಂವಾದದಲ್ಲಿ ಸೂಚನೆ

**ಮೈಸೂರು:** ಈ ಬಾರಿ ಬರಗಾಲ ಎದುರಾಗಿದೆ. ಹಿಂಗಾರು ಹಾಗೂ ಮುಂಗಾರು ಮಳೆ ಕೊರತೆಯಾಗಿ ಬರಗಾಲ ಪರಿಸ್ಥಿತಿ ಉದ್ಭವಿಸಿದೆ. ಜೂನ್ ಅಂತ್ಯದವರೆಗೆ ಬರ ನಿರ್ವಹಣೆಗೆ ಸೂಕ್ತ ಯೋಜನೆ ರೂಪಿಸಬೇಕು. ಕುಡಿಯುವ ನೀರು ಕೊರತೆ, ಬೆಳೆಹಾನಿ, ಮೇವು ಕೊರತೆ ಸೇರಿದಂತೆ ಇದುವರಗೆ ಆಗಿರುವ ಸಮಸ್ಯೆಗಳು ಮತ್ತು ಮುಂದೆ ಉಸ್ಬವಿಸಬಹುದಾದ ಸಮಸ್ಯೆಗಳ ನಿವಾರಣೆಗೆ ಈಗಲೇ ಸಿದ್ಧತೆ ಮಾಡಿಕೊಳ್ಳಬೇಕು.



ಕುಡಿಯುವ ನೀರು, ಬರ ನಿರ್ವಹಣೆ, ಕೃಷಿ, ಮೇವು ಹಾಗೂ ಉದ್ಯೋಗಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಮಂಗಳವಾರ(ಮಾ.5) ನಡೆದ ವಿಡಿಯೋ ಸಂವಾದದಲ್ಲಿ ಅವರು ಮಾತನಾಡಿದರು.

ಬರಗಾಲದಿಂದ 48 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದೆ. ಮಾರ್ಚ್, ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಪರಿಸ್ಥಿತಿ ಗಂಭೀರವಾಗಲಿದೆ.ಪೂರ್ವ ಮುಂಗಾರು ಮಳೆ ಕೆಲವೆಡೆ ನಿರೀಕ್ಷಿಸಲಾಗಿದೆ.

ಆದಾಗ್ಯೂ ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಸಿಇಒ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಯೋಜನೆ ರೂಪಿಸಬೇಕು. ಮಾಧ್ಯಮಗಳಲ್ಲಿ ಪ್ರಕಟವಾಗುವ ಜನರ ಸಮಸ್ಯೆಗಳ ಕುರಿತ ವರದಿಗಳನ್ನು ಪರಿಶೀಲಿಸಿ, ಅವುಗಳಿಗೆ ತಕ್ಷಣವೇ ಸ್ಪಂದಿಸಬೇಕು.

ಕುಡಿಯುವ ನೀರಿನ ತೊಂದರೆಯಾಗಬಾರದು. ಟ್ಯಾಂಕರ್, ಖಾಸಗಿ ಕೊಳವೆಬಾವಿ ಸೇರಿದಂತೆ ಯಾವುದೇ ಜಲಮೂಲಗಳಿಂದ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ನೀರು ಪೂರೈಕೆಗೆ ಅಗತ್ಯವಿರುವ ಅನುದಾನವನ್ನು ರಾಜ್ಯ ಸರ್ಕಾರ ಒದಗಿಸಲಿದೆ.

ಬರಗಾಲ ಸಂದರ್ಭದಲ್ಲಿ ನರೇಗಾ ಉದ್ಯೋಗ ದಿನಗಳನ್ನು 100 ರಿಂದ 150 ದಿನಗಳಿಗೆ ಹೆಚ್ಚಿಸಬೇಕು ಎಂದು ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ನರೇಗಾ ಉದ್ಯೋಗ ದಿನಗಳನ್ನು ಹೆಚ್ಚಿಸುವುದರಿಂದ ಜನರು ಗುಳೆ ಹೋಗುವುದನ್ನು ತಪ್ಪಿಸಬಹುದು ಎಂದು ಮುಖ್ಯಮಂತ್ರಿಗಳು ಹೇಳಿದರು.

ಕುಡಿಯುವ ನೀರು ಸಮಸ್ಯೆ ಕಂಡುಬಂದಾಗ ಅಧಿಕಾರಿಗಳು ತಕ್ಷಣವೇ ಸ್ಪಂದಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ಜನರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಲು ಅನುಕೂಲವಾಗುವಂತೆ ತಾಲ್ಲೂಕು ಮಟ್ಟದಲ್ಲಿ ಕಂಟ್ರೋಲ್ ರೂಮ್ ಆರಂಭಿಸಬೇಕು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ರಜೆ ಮೇಲೆ ತೆರಳದೇ ಜನರ ಸಮಸ್ಯೆ ನಿವಾರಣೆಗೆ ಶ್ರಮಿಸಬೇಕು. ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಗಳು ನಿಯಮಿತವಾಗಿ ಸಭೆ ನಡೆಸುವ ಮೂಲಕ ಮುಂಜಾಗ್ರತಾ ಕ್ರಮಗಳ ಬಗ್ಗೆ ನಿರ್ಧರಿಸಬೇಕು ಎಂದು ಹೇಳಿದರು.

ಮೇವಿನ ಕಿಟ್ ಗಳನ್ನು ರೈತರಿಗೆ ನೀಡಲಾಗಿದೆ. ರೈತರಯ ಬೆಳೆದ ಮೇವು ಶೇಖರಣೆಗೆ ಕ್ರಮ ವಹಿಸಬೇಕು. ಇದಲ್ಲದೇ ಅಂತರ್ ಜಿಲ್ಲಾ ಮೇವು ಸಾಗಾಣಿಕೆ ಮೇಲೆ ನಿಗಾ ವಹಿಸಬೇಕು. ಬರ ನಿರ್ವಹಣೆಗೆ ಸರಕಾರ ಅನೇಕ ಕ್ರಮಗಳನ್ನು ಈಗಾಗಲೇ ತೆಗೆದುಕೊಂಡಿದೆ. ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಿಂದ ಈ ಬಾರಿ ಬರಗಾಲದ ತೀವ್ರತೆಯಲ್ಲಿಯೂ ಜನರಿಗೆ ಅನುಕೂಲವಾಗಿದೆ.

ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಅನುದಾನವಿದೆ. ಹೆಚ್ಚುವರಿಯಾಗಿ ಪ್ರತಿ ಜಿಲ್ಲೆಗೆ ಎರಡು ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದರು. ವಿದ್ಯುಚ್ಛಕ್ತಿ ತೊಂದರೆಯಾಗಬಾರದು. ಹೊಸ ಕೊಳವೆಬಾವಿಗಳಿಗೆ ಯಾವುದೇ ನೆಪ ಹೇಳದೇ ಕೂಡಲೇ ವಿದ್ಯುತ್ ಸಂಪರ್ಕ ಒದಗಿಸಬೇಕು ಎಂದು ಕೆಪಿಟಿಎಸಿಎಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅಗತ್ಯ ಕಂಡುಬಂದರೆ ಖಾಸಗಿ ಕೊಳವೆಬಾವಿಗಳು ಹಾಗೂ ಟ್ಯಾಂಕರ್ ಗಳ ಮಾಲೀಕರ ಜತೆ ಮುಂಚಿವಾಗಿಯೇ ಒಪ್ಪಂದ ಮಾಡಿಕೊಳ್ಳಬೇಕು. ಹೀಗೆ ಮಾಡುವ ಮೂಲಕ ಜೂನ್ ಅಂತ್ಯದವರೆಗೆ ನೀರು ಕೊರತೆಯಾಗದಂತೆ ಎಚ್ಚರಿಕೆ ವಹಿಸಬಹುದು. ಇದರಲ್ಲಿ ನಿರ್ಲಕ್ಯ ತೋರುವ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಚುನಾವಣಾ ನೀತಿಸಂಹಿತೆ ಜಾರಿಯಾಗಲಿರುವುದರಿಂದ ಚುನಾವಣಾ ಕೆಲಸದ ಜತೆಗೆ ಬರ ನಿರ್ವಹಣೆಯನ್ನು ನಿರ್ಲಕ್ಷಿಸಬಾರದು. ಬರನಿರ್ವಹಣೆಗೆ ನೀತಿಸಂಹಿತೆಯು ಅಡ್ಡಿಯಾಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮುಖ್ಯ ಮಂತ್ರಿಗಳ ಸಭೆಯ ಬಳಿಕ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ರವರು ಬೇಸಿಗೆ ಹಿನ್ನೆಲೆಯಲ್ಲಿ ಕುಡಿಯುವ ನೀರು ಸಮಸ್ಯೆ ಇರುವ ಕಡೆ ಅಧಿಕಾರಿಗಳು ಖುದ್ದು ಭೇಟಿ ಕುಡಿಯುವ ನೀರು ಸಮಸ್ಯೆಯಾಗದಂತೆ ಆದ್ಯತೆಯ ಮೇರೆಗೆ ಅಗತ್ಯ ಕ್ರಮ ವಹಿಸಬೇಕು ತಿಳಿಸಿದರು.

ಚುನಾವಣೆ ಘೋಷಣೆಯಾದರೂ ಬರ ನಿರ್ವಹಣಾ ಕಾರ್ಯಕ್ಕೆ ತೊಂದರೆ ಇಲ್ಲ. ಸಾಕಷ್ಟು ಹಣಕಾಸು ಲಭ್ಯವಿರುವುದರಿಂದ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಕೊರತೆಯಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬರನ್ನು ಕುಡಿಯುವ ನೀರು ಸಮಸ್ಯೆಗೆ ನೋಡೆಲ್ ಇಂಜಿನಿಯರ್ ನೇಮಕ ಮಾಡಬೇಕು. ಅವರು ಪ್ರತಿದಿನ ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಕುಡಿಯುವ ನೀರು ಪೂರೈಕೆ ಮಾಡುವಾಗ ನಿಯಮಿತವಾಗಿ ಕುಡಿಯುವ ನೀರಿನ ಗುಣಮಟ್ಟ ಪರಿಶೀಲನೆ ಮಾಡಿ ನೀರು ಪೂರೈಸಲು ಅಗತ್ಯ ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆ

**ಚಾಮರಾಜನಗರ :** ಬಿಸಿಲಿನ ತಾಪಮಾನ ಲೆಕ್ಕಿಸದೇ ಪವಾಡ ಪುರುಷ ಮಲೆ ಮಹದೇಶ್ವರ ಭಕ್ತರು ದೂರದೂರಿನಿಂದ ಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆ ಮೂಲಕ ಆಗಮಿಸುತ್ತಿದ್ದಾರೆ. ಮಹಾ ಶಿವರಾತ್ರಿ ಸಮೀಪಿಸುತ್ತಿದ್ದಂತೆ ಚಾಮರಾಜನಗರ ಜಿಲ್ಲೆ ಸೇರಿದಂತೆ ರಾಜ್ಯದ ವಿವಿದೆಡೆಗಳಿಂದ ಮಹದೇಶ್ವರ ಭಕ್ತರು ನೂರಾರು ಕಿಲೋ ಮೀಟರ್ ದೂರವನ್ನು ಪಾದಯಾತ್ರೆ ಮೂಲಕ ಆಗಮಿಸಿ ಮಹದೇಶ್ವರ ದರ್ಶನ ಪಡೆಯಲಿರುವರು. ಬಿಸಿಲಿನ ತಾಪಮಾನ ಅಧಿಕವಾಗಿದ್ದನ್ನು ಲೆಕ್ಕಿಸದೆ ಮಹದೇಶ್ವರ ಭಕ್ತರು , ಮಕ್ಕಳು, ಮಹಿಳೆಯರು ಮತ್ತು ವೃದ್ದರು ಪಾದಯಾತ್ರೆ ಮೂಲಕ ಆಗಮಿಸಿ, ರಸ್ತೆಯ ಬದಿಯಲ್ಲಿ ಇರುವ ಮರದ ನೆರಳಿನಲ್ಲಿ ವಿಶ್ರಾಂತಿ ಪಡೆದುಕೊಂಡು ಮತ್ತೇ ಮಹದೇಶ್ವರ ಬೆಟ್ಟದತ್ತ ಹೆಜ್ಜೆ ಹಾಕುತ್ತಿದ್ದಾರೆ. ಪಾದಯಾತ್ರೆಗಳಿಗೆ ಅಲ್ಲಲ್ಲಿ ದಾನಿಗಳು ಕುಡಿಯುವ ನೀರು, ಉಪಹಾರ ವಿತರಣೆ ಮಾಡುವ ವ್ಯವಸ್ಥೆ ಮಾಡಿದ್ದಾರೆ.



## ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಮುಖ್ಯ–ಬಿ.ಎಂ. ಸವಿತಾ

**ಮೈಸೂರು:** ಮಾನಸಿಕವಾಗಿ ದೈಹಿಕವಾಗಿ ಸದೃಢವಾಗಿರಲು ಕ್ರೀಡೆ ಮುಖ್ಯವಾಗಿದ್ದು ಪ್ರತಿಯೊಬ್ಬ ಮಹಿಳೆಯು ಯಾವುದಾದರೊಂದು ಕ್ರೀಡೆಯಲ್ಲಿ ಭಾಗವಿಸಬೇಕೆಂದು ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿಗಳಾದ ಬಿ.ಎಂ. ಸವಿತಾ ಅವರು ಕರೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ನಡೆದ ಮಹಿಳಾ ಕ್ರೀಡಾ ಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಮನೆ ಹಾಗೂ ಕಛೇರಿಗಳಲ್ಲಿ ಎರಡು ಕಡೆಯು ಸಮನಾಗಿ ಕೆಲಸಮಾಡುತ್ತಾರೆ. ಒತ್ತಡಗಳು ಇದ್ದೇ ಇರುತ್ತವೆ. ಒತ್ತಡಗಳನ್ನು ಮರೆಯಲು ಕ್ರೀಡೆ ಅನಿವಾರ್ಯವಾಗಿದ್ದು, ಗಂಡು ಮಕ್ಕಳಂತೆ ನಾವು ಸಹ ಸಾಧನೆ ಮಾಡಬಹುದು ಆದ್ದರಿಂದ ಕ್ರೀಡೆಯಲ್ಲಿ ಸೋಲು ಗೆಲುವನ್ನು ಸಮನಾಗಿ ಸ್ವೀಕರಿಸಬೇಕೆಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಾ.ಕೃಷ್ಣಂರಾಜು ಅವರು ಮಾತನಾಡಿ, ಹೆಣ್ಣು ಮಕ್ಕಳು ಸಹ ಆರೋಗ್ಯವಾಗಿರಬೇಕೆಂದು ಈ ಕ್ರೀಡಾಕೂಟವನ್ನು ಆಯೋಜನೆ ಮಾಡಲಾಗಿದ್ದು, ಯುರೋಪಿಯನ್ ರಾಷ್ಟ್ರಗಳಲ್ಲಿ ಮಹಿಳೆಯರಿಗೆ ಸಮಾನತೆ ಇದೆ. ಆದರೆ ಭಾರತದಲ್ಲಿ ಸಮಾನತೆ ಸಿಕ್ಕಿಲ್ಲದಿದ್ದರೂ ಸಹ ಮಹಿಳೆಯರು ಕೂಡ ಪುರುಷರಷ್ಟೇ ಬಲಾಢ್ಯರಾಗಿದ್ದು ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯರು ತಮ್ಮದೇ ಆದ ಸಾಧನೆಯನ್ನು ಮಾಡಿದ್ದಾರೆ. ಕ್ರೀಡೆ ಮನಸ್ಸಿಗೆ ಉಲ್ಲಾಸವನ್ನು ಕೊಡುತ್ತದೆ. ಕೆಲಸ ಮಾಡುವ ಮಹಿಳೆಯರೂ ಕೂಡ ಹೆಚ್ಚಾಗಿ ಕ್ರೀಡೆಯಲ್ಲಿ ಭಾಗವಹಿಸಬೇಕು ಜೀವನದಲ್ಲಿಯೂ ಸಹ ಪ್ರತಿಯೊಬ್ಬರು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿರಿ. ಸೋಲು, ಗೆಲುವುಗಳನ್ನು ಸಮನಾಗಿ ಸ್ವೀಕರಿಸಿ ಎಲ್ಲರಿಗೂ ಶುಭವಾಗಲಿ ಎಂದರು.

ಸಮಾರಂಭದಲ್ಲಿ ಯುವ ಸಬಲೀಕರಣ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ಹಿರಿಯ ಭೂ ವಿಜ್ಞಾನಿ ಡಾ. ಪುಷ್ಪವತಿ.ಕೆ.ಎನ್. ಎನ್.ಎಸ್.ಎಸ್. ಅಧಿಕಾರಿ ಡಾ. ಲಕ್ಷ್ಮಿ ಪಲೋಡಿ, ಎಂ. ಲಾವಣ್ಯ ವಿಜಯ ಲಕ್ಷ್ಮಿ, ಆರ್. ಸುಂದರೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜಲ ಸಂರಕ್ಷಣಾ ಆಂದೋಲನ

**ಮಂಡ್ಯ:** ಜಿಲ್ಲೆಯ 233 ಗ್ರಾಮ ಪಂಚಾಯಿತಿಗಳಲ್ಲಿ ಜಲ ಸಾಕ್ಷರತೆ, ಜಲಮೂಲಗಳ ಪುನರುಜ್ಜೀವನ ಹಾಗೂ ನಿರ್ಮಾಣ, ಕುಡಿಯುವ ನೀರಿನ ಸದ್ಬಳಕೆ, ಬೂದು ನೀರು ನಿರ್ವಹಣೆ ಹಾಗೂ ಕೆರೆ/ಕಟ್ಟೆಗಳ ಪುನಶ್ಚೇತನ ಕಾರ್ಯಕ್ರಮಗಳನ್ನು ಕೈಗೊಂಡು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಲ ಸಂರಕ್ಷಣೆ ಕುರಿತು ಅರಿವು ಮೂಡಿಸುವುದು ಮೊದಲ ಆದ್ಯತೆಯಾಗಿದೆ.

2024-25 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಜಲಮೂಲ ಸಂರಕ್ಷಣಾ ಕಾಮಗಾರಿಗಳು, ಅನುಮೋದನೆಗೊಂಡಿರುವ ಕಾಮಗಾರಿಗಳನ್ನು ಗುರುತಿಸಿ ಅಂತಹ ಕಾಮಗಾರಿಗಳನ್ನು ಅಭಿವೃದ್ಧಿಪಡಿಸುವಂತಹ ಕೆಲಸ ನಿರ್ವಹಿಸುವಲ್ಲಿ ಗ್ರಾಮ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಮಟ್ಟದ ಅಧಿಕಾರಿಗಳು ಕ್ರಮವಹಿಸುವುದು.

ನೀರು ಜೀವನಾಧಾರ, ನೀರಿಲ್ಲದೆ ಬದುಕಿಲ್ಲ; ನೀರು ಪ್ರಕೃತಿ ಕೊಟ್ಟ ವರದಾನವಾದರೂ, ಇದು ಶಾಶ್ವತವಾದ ಸಂಪತ್ತಲ್ಲ. ಅಂತರ್ಜಲ ಭೂಮಿಯ ಒಳಗಡೆ ಸಿಗುವಂತಹ ಹಾಗೂ ಮಳೆಯ ನೀರು ಭೂಮಿಯಲ್ಲಿ ಹಿಂಗಿ, ಕಲ್ಲು ಪದರುಗಳಲ್ಲಿ ಗಟ್ಟಿ ಶಿಲೆಗಳ ಪದರುಗಳಲ್ಲಿ ಸಿಗುವಂತಹ ನೀರಾಗಿದೆ. ಅಂತರ್ಜಲವು ಬಹಳ ಮುಖ್ಯವಾದ ನೈಸರ್ಗಿಕ ಸಂಪನ್ಮೂಲವಾಗಿದೆ ಮತ್ತು ಆರ್ಥಿಕತೆಯಲ್ಲಿ ಮಹತ್ವದ ಪಾತ್ರವನ್ನು ಹೊಂದಿದೆ. ಕುಡಿಯುವ ನೀರು,ಕೃಷಿಗೆ ಪೂರಕ ನೀರಾವರಿ, ಉತ್ತಮ ಹಸಿರೀಕರಣ ಪರಿಸರ ಮತ್ತು ಆಹಾರಕ್ಕೆ, ಉದ್ಯಮಗಳಿಗೆ ನೀರು ಮುಖ್ಯವಾದ ಮೂಲ. ಈ ನಿಟ್ಟಿನಲ್ಲಿ ಅಂತರ್ಜಲ ಅಭಿವೃದ್ಧಿ ಮತ್ತು ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ ನಮ್ಮೆಲ್ಲರ ಹೊಣೆ.

ಜಲ ಸಂರಕ್ಷಣಾ ಆಂದೋಲನದಡಿ ಕೈಗೊಳ್ಳುವ ಕಾರ್ಯಕ್ರಮದಡಿ ದಿನಾಂಕ 18.03.2024 ಜಲ ಸಾಕ್ಷರತೆ, ಮಾರ್ಚ್ 19 ರಂದು ಕುಡಿಯುವ ನೀರಿನ ಮೂಲಗಳ ಸ್ವಚ್ಛತೆ ಮಾರ್ಚ್ 20 ರಂದು ಸ್ವ-ಸಹಾಯ ಸಂಘದ ಮಹಿಳಾ ಸದಸ್ಯರು ಸಾರ್ವಜನಿಕರೊಂದಿಗೆ ಗುಂಪು ಚರ್ಚೆ, ಮಾರ್ಚ್ 21 ರಂದುವಿಶ್ವ ಜಲ ದಿನಾಚರಣೆ ? ಆಟೋ ಪ್ರಚಾರ, ಮಾರ್ಚ್ 22 ರಂದು ವಿಶ್ವ ಜಲ ದಿನಾಚರಣೆ ಕಾರ್ಯಕ್ರಮ ( ಅನುಷ್ಠಾನಗೊಂಡಿರುವ ಕಾಮಗಾರಿಗಳ ಉದ್ಘಾಟನೆ) ನಡೆಯಲಿದೆ.

ನೀರಿನ ಅಭಾವವನ್ನು ತಡೆಗಟ್ಟಲು ಇರುವ ಒಂದೇ ಮಾರ್ಗವೆಂದರೆ ನೀರಿನ ಸಂಗ್ರಹಣೆಗೆ ಜಲಮೂಲಗಳ ಸಂರಕ್ಷಣೆ. ಬರಗಾಲದ ಪರಿಸ್ಥಿತಿಯಲ್ಲಿ ನೀರನ್ನು ಸರಿಯಾದ ಕ್ರಮದಲ್ಲಿ ಮಿತವ್ಯಯದಿಂದ ಬಳಸುವ ಜಾಗರೂಕಯಿಂದ ಜಲ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ ಈಗಾಗಲೇ ಜಲ ಸಂರಕ್ಷಣೆಗೆ ಸಂಬಂಧಿಸಿದ 168 ಕಾಮಗಾರಿಗಳನ್ನು ಗುರುತಿಸಿ ಅಭಿವೃದ್ದಿಪಡಿಸಲು ಕ್ರಮವಹಿಸಲಾಗಿದೆ. ಮಾರ್ಚ್ 5 ರಂದು ಜಲ ಸಂಪನ್ಮೂಲ ಸಂಬಂಧಿಸಿದ ಕಾಮಗಾರಿಗಳಿಗೆ ಗ್ರಾಮ ಪಂಚಾಯಿತಿಯಲ್ಲಿ ಚಾಲನೆ ನೀಡಲು ಹಾಗೂ ಮಾರ್ಚ್ 18 ರಿಂದ 22 ರವರೆಗೆ ನೀರಿನ ಬಳಕೆ ಮತ್ತು ಜಲ ಮೂಲಗಳ ಸಂರಕ್ಷಣೆಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಚಾರಗೊಳಿಸಲು ಕ್ರಮವಹಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸೀಫ್ ಕೋರಿದ್ದಾರೆ.

ಅಂತರ್ಜಲವೃದ್ಧಿಗೆ ಒತ್ತು ನೀಡುವುದು, ಕೃಷಿ ಉತ್ಪಾದನೆ ಹೆಚ್ಚಿಸುವುದು, ಕುಡಿಯುವ ನೀರಿನ ಕೊರತೆ ನೀಗಿಸುವುದು, ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಹೆಚ್ಚಿಸುವುದು ಹಾಗೂ ಉತ್ತಮ ಪರಿಸರ ಮತ್ತು ಜೀವವೈವಿಧ್ಯತೆ ಸಂರಕ್ಷಣೆ ಮಾಡುವುದು ಈ ಯೋಜನೆಯ ಉದ್ದೇಶವಾಗಿದೆ.

# ಬುಡಕಟ್ಟು ಸಮುದಾಯಗಳ ಪ್ರತಿಭಟನೆ



**ಪಿರಿಯಾಪಟ್ಟಣ:** ಕರ್ನಾಟಕ ಅರಣ್ಯ ಮೂಲ ಬುಡಕಟ್ಟು ಸಮುದಾಯಗಳ ಒಕ್ಕೂಟವು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ತಾಲೂಕು ಆಡಳಿತ ಕಚೇರಿಯ ಮುಂಭಾಗ ಧರಣಿ ನಡೆಸಿ ಶಿರಸ್ತೇದಾರ್ ಶಕೀಲಾಭಾನು ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಧರಣಿಯ ನೇತೃತ್ವವಹಿಸಿದ್ದ ಸಂಘಟನೆಯ ರಾಜ್ಯಾಧ್ಯಕ್ಷರು ಶೈಲೇಂದ್ರ, ಮಾತನಾಡಿ ತಾಲ್ಲೂಕಿನಲ್ಲಿ 38 ಹಾಡಿಗಳಿದ್ದು, 8754 ಸಂಖ್ಯೆಯ ಆದಿವಾಸಿ ಜನಸಂಖ್ಯೆ ಇದ್ದಾರೆ. ಇವರುಗಳಿಗೆ ಅರಣ್ಯ ಹಕ್ಕು ಕಾಯ್ದೆ 2006ರ ನಿಯಮ ತಿದ್ದುಪಡಿ 2012ರ ಪ್ರಕಾರ 21 ಸಮುದಾಯಿಕ ಹಕ್ಕು ಪತ್ರಗಳನ್ನು ಸಮುದಾಯದವರು ಹೋರಾಟ ಮಾಡಿ ಪಡೆದುಕೊಂಡಿದ್ದು ಇವರುಗಳು ಸ್ವತಂತ್ರ ಪೂರ್ವದಿಂದಲೂ ಪಾರಂಪರಿಕವಾಗಿ ಅರಣ್ಯದ ಮೇಲೆ ಅವಲಂಬಿತವಾಗಿ ಜೀವನ ಮಾಡಿಕೊಂಡು ಬಂದಿರುತ್ತಾರೆ.

1972ರ ವನ್ಯಜೀವಿ ಸಂರಕ್ಷಣ ಕಾಯ್ದೆ ಪ್ರಕಾರ ಇವರುಗಳಿಗೆ ಪುನರ್ವಸತಿ ಕಲ್ಪಿಸದೆ ಸ್ಥಳಾಂತರ ಮಾಡಿದ್ದು ಜೀವನೋಪಾಯಕ್ಕೆ ಕೊಡಗು ಮತ್ತು ಕೇರಳಕ್ಕೆ ವಲಸೆ ಹೋಗುವ ಕಾರಣದಿಂದ ಮಕ್ಕಳ ಶಿಕ್ಷಣ ಕುಂಠಿತವಾಗಿದ್ದು, ಬಾಲ್ಯ ವಿವಾಹ ಅತಿ ಹೆಚ್ಚಾಗಿ ಆಗುತ್ತಿರುವುದಲ್ಲದೆ ದುಶ್ಚಟಗಳಿಗೆ ತುತ್ತಾಗುತ್ತಿದ್ದಾರೆ ಇದರಿಂದ್ದ ಇವರುಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ.ಈ ಎಲ್ಲಾ ಸಮಸ್ಯೆಗಳನ್ನು ತಪ್ಪಿಸಲು ಇಲಾಖೆಯೂ ವಿಶೇಷವಾಗಿ ತಾಲೂಕು ಆದಿವಾಸಿ ಮಹಿಳಾ ವಿವಿದ್ದೋದ್ದೇಶ ಸಹಕಾರ ಸಂಘವನ್ನು ರಚನೆ ಮಾಡಿ ಇವರುಗಳ ಸ್ವಯಂ ಉದ್ಯೋಗವನ್ನು ಮಾಡಿಕೊಳ್ಳಲು ಹಾಗೂ ಅರಣ್ಯ ಕಿರು ಉತ್ಪನ್ನಗಳ ಸಂಗ್ರಹದಿಂದ ಜೀವನೋಪಾಯ ಮಾಡಲು ಮತ್ತು ಆರ್ಥಿಕವಾಗಿ ಮುಂದೆ ಬರಲು ಇಲಾಖೆಯು ಸಂಪೂರ್ಣ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು ಮತ್ತು ಅಪೌಸ್ಟಿಕತೆಯನ್ನು ಹೋಗಲಾಡಿಸಲು ಪ್ರತಿ ತಿಂಗಳು ಪೌಷ್ಟಿಕ ಆಹಾರವನ್ನು ಸರ್ಕಾರ ನೀಡಬೇಕು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧಿಕ್ಷಕರಾದ ಧಮಾಯಂತಿ ಹಾಗೂ ಪ್ರತಿಭಟನೆಯಲ್ಲಿ ಮುಖಂಡರಾದ ಜಾನಕಮ್ಮ, ಕೀರ್ತು, ಅನಿಲ್, ಜಯಮ್ಮ, ರೇಣುಕಾ, ಪುಟ್ಟ, ಮಹದೇವ್, ಶುಭಾಷಿಣಿ, ರವಿ, ಪುಟ್ಟಸ್ವಾಮಿ, ಕಮಲಮ್ಮ, ರಾಜಪ್ಪ ಹಾಜರಿದ್ದರು.

## ಬೆಂಗಳೂರು ವಕೀಲರ ಸಹಕಾರ ಸಂಘದ ನಿರ್ದೇಶಕರಾಗಿ ಟಿ.ಬಿ.ಚಂದ್ರೇಗೌಡ ಆಯ್ಕೆ

**ಕೋಲಾರ:** ಬೆಂಗಳೂರು ವಕೀಲರ ಸಹಕಾರ ಸಂಘದ ನಿರ್ದೇಶಕರಾಗಿ ಕೋಲಾರ ತಾಲೂಕಿನ ತಿಮ್ಮಸಂದ್ರ ಗ್ರಾಮದ ವಕೀಲ ಟಿ.ಬಿ.ಚಂದ್ರೇಗೌಡ ಆಯ್ಕೆಯಾಗಿದ್ದಾರೆ. ಸಾರ್ವಜನಿಕ ವಲಯದಲ್ಲಿ ಉತ್ತಮ ಹೆಸರನ್ನು ಗಳಿಸಿರುವ ಟಿ.ಜಿ.ಚಂದ್ರೇಗೌಡ ರೈತ ಕುಟುಂಬದಿಂದ ಬಂದವರಾಗಿದ್ದು,



ಬೆಂಗಳೂರಿನಲ್ಲಿ ನಡೆದ ವಕೀಲರ ಸಹಕಾರ ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಬಹುಮತದಿಂದ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಸಹಕಾರ ಸಂಘದಲ್ಲಿ 9500 ಸದಸ್ಯರಿದ್ದು ಫೆ, 18 ರಂದು ನಡೆದ ಸಂಘದ ನಿರ್ದೇಶಕರ ಚುನಾವಣೆಯಲ್ಲಿ 4200 ಸದಸ್ಯರು ಮತ ಚಲಾಯಿಸಿದ್ದರು. ಅದರಲ್ಲಿ 1700 ಮತಗಳನ್ನು ಗಳಿಸುವ ಮೂಲಕ ನಿರ್ದೇಶಕರಾಗಿ ಗೆಲುವು ಸಾಧಿಸಿದ್ದರು.

ಬೆಂಗಳೂರು ವಕೀಲರ ಸಹಕಾರ ಸಂಘದ ನಿರ್ದೇಶಕರಾಗಿ ಆಯ್ಕೆಯಾಗಿರುವ ಟಿ.ಬಿ.ಚಂದ್ರೇಗೌಡ ಅವರನ್ನು ಹಿರಿಯ ವಕೀಲರಾದ ಕೆ.ವಿ.ಶಂಕರಪ್ಪ, ಬೀಜ ನಿಗಮದ ನಿರ್ದೇಶಕ ವಡಗೂರು ಡಿ.ಎಲ್.ನಾಗರಾಜು, ಕೆ.ಎಂ.ಎಫ್.ನಿರ್ದೇಶಕ ಡಿ.ವಿ.ಹರೀಶ್, ಸಮಾಜ ಸೇವಕ ಮಲ್ಲೇಶ್‌ಬಾಬು, ಟಿಎಪಿಸಿಎಂಎಸ್ ಅಧ್ಯಕ್ಷ ವಡಗೂರು ವಿ.ರಾಮು, ಅಭಿನಂದಿಸಿ ಸಂಘದ ಅಭಿವೃದ್ಧಿಗೆ ಶ್ರಮಿಸುವಂತೆ ಸೂಚಿಸಿದ್ದಾರೆ.

## 15 ಕ್ಕೆ ರಂಗ ಪ್ರಶಸ್ತಿ ಪ್ರಧಾನ

**ಮೈಸೂರು:** ಕದಂಬ ರಂಗ ವೇದಿಕೆ ವತಿಯಿಂದ ಇದೇ. ಮಾ. 15 ರಂದು ಸಂಜೆ 6.30ಕ್ಕೆ ಕಲಾಮಂದಿರದ ಆವರಣದ ಕಿರು ರಂಗಮಂದಿರದಲ್ಲಿ ರೋಟರಿ ಮೈಸೂರು ಉತ್ತರದೊಡನೆ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಶೈಲಜಾ ಮತ್ತು ಉದಯ್‌ಕುಮಾರ್ ಗೆಜ್ಜೆಹೆಜ್ಜೆ ಅವರಿಗೆ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ. ಈ ಕುರಿತು ಜಿಲ್ಲಾ ಪತ್ರಕರ್ತರ ಭವನದಲ್ಲಿ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ಸುದ್ದಿಗಾರರೊಡನೆ ಮಾತನಾಡಿ, ಹಿರಿಯ ಕಲಾವಿದರಾದ ಗಿರಿಜಾ ಲೋಕೇಶ್ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ತಾವು, ಎಂ.ಕೆ. ನಂಜಯ್ಯ, ಎಂ.ಕೆ. ಶ್ರೀಧರ್ ಅತಿಥಿಗಳಾಗಿರುವುದಾಗಿ ತಿಳಿಸಿದರು. ಅಲ್ಲದೆ, ಇದೇ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಮ್ಗೇನ್ ಬೆಲೆನೇ ಇಲ್ವಾ ಎಂಬ ಅರುಣ್ ಸೂರ್ಯ ಅವರ ನಿರ್ದೇಶನದ ಹಾಸ್ಯಮಯ ನಾಡಕ ಪ್ರದರ್ಶನವಾಗಲಿದೆ ಎಂದು ತಿಳಿಸಿದರು ಎಂ.ಕೆ. ನಂಜಯ್ಯ, ರಾಜು, ಸುಬ್ಬನರಸಿಂಹ, ಡಿ. ತಿಪ್ಪಣ್ಣ ಹಾಜರಿದ್ದರು.



## ನಾಳೆ ನೇರ ಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಹಾಗೂ ಮೆ|| ಕರ್ನಾಟಕ ಆಕ್ಸಸರೀಸ್ ಪಾಯಿಂಟ್, ಮೆ|| ರಾಜ್ ಬಯೋ ಆರ್ಗ್ಯಾನಿಕ್, ಮೆ|| ಸೂರ್ಯೋದಯ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿ., ಮೆ|| ಫ್ಯೂಷನ್ ಮೈಕ್ರೋ ಫೈನಾನ್ಸ್ ಲಿ., ಮೆ||ಬಿ.ಜೆಡ್ ಫೈನಾನ್ಸ್ ಪ್ರೈ, ಲಿ.,ಮತ್ತು ಮೆ||ದ್ವಾರಕ ಗ್ರಾಮೀಣ ಫೈನಾನ್ಷಿಯಲ್ ಸರ್ವಿಸಸ್ ಪ್ರೈ, ಲಿ.,ಸಂಸ್ಥೆಗಳ ಸಹಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಮಾರ್ಚ್ 07 ರಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

18 ರಿಂದ 28 ವರ್ಷದೊಳಗಿನ ಆಸಕ್ತ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ(ಯಾವುದೇ ಟ್ರೇಡ್) ಹಾಗೂ ಯಾವುದೇ ಪದವಿ/ ಯು.ಜಿಯಲ್ಲಿ ಉತ್ತೀರ್ಣರಾಗಿದ್ದು, ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ. 08232-295124,8660061488 ಅನ್ನು ಸಂಪರ್ಕಿಸಬಹುದು.

## ಕಾಮಗೆರೆಯಲ್ಲಿ ಸಾರಿಗೆ ಬಸ್ ಡಿಕ್ಕಿ ಸೈಕಲ್ ಸವಾರ ಸ್ಥಳದಲ್ಲೇ ಸಾವು

**ಚಾಮರಾಜನಗರ :** ಸೈಕಲ್ ಸವಾರನಿಗೆ ಸಾರಿಗೆ ಬಸ್ ಡಿಕ್ಕಿ ಹೊಡೆದು ಸ್ಥಳದಲ್ಲೇ ಸಾವನಪ್ಪಿರುವ ಘಟನೆ ಚಾಮರಾಜನಗರ ಜಿಲ್ಲೆಯ ಕಾಮಗೆರೆ ಗ್ರಾಮದ ಎಬಿನೇಜರ್ ಕಾಂಪ್ಲೆಂಕ್ಸ್ ಮುಂಭಾಗ ನಡೆದಿದೆ. ಮಹದೇಶ್ವರ ಬೆಟ್ಟದಿಂದ ಕೊಳ್ಳೇಗಾಲದ ಕಡೆಗೆ ತೆರಳುತ್ತಿದ್ದ ಕೆಎ 57 ಎಫ್ 3764 ಸಂಖ್ಯೆಯ ನಾಗಮಂಗಲ ಘಟಕಕ್ಕೆ ಸೇರಿದ ವಾಹನವು ಕಾಮಗೆರೆ ಗ್ರಾಮದ ಮುಖ್ಯರಸ್ತೆಯಲ್ಲಿ ಎಬಿನೇಜರ್ ಕಾಂಪ್ಲೆಂಕ್ಸ್ ಮುಂಭಾಗ ಸೈಕಲ್ ನಲ್ಲಿ ತೆರಳುತ್ತಿದ್ದ ಅದೇ ಗ್ರಾಮದ ಪರಿಶಿಷ್ಟ ಸಮುದಾಯದ ನಿಂಗಪ್ಪ(60) ವರ್ಷದ ವ್ಯಕ್ತಿಗೆ ಹಿಬ್ಬದಿಯಿಂದ ಡಿಕ್ಕಿ ಹೊಡೆದಪರಿಣಾಮ ಮುಂದಿನ ಚಕ್ರಕ್ಕೆ ಸಿಲುಕಿಕೊಂಡು ತಲೆಯ ಭಾಗಕ್ಕೆ ಬಲವಾದ ಪೆಟ್ಟಾಗಿದ್ದು ಸ್ಥಳದಲ್ಲೇ ಸಾವನಪ್ಪಿದ್ದಾನೆ. ಮೃತ ನಿಂಗಪ್ಪ ಅವರಿಗೆ ಮೂವ್ವರು ಮಕ್ಕಳು ಮತ್ತು ಮೊಮ್ಮಕ್ಕಳು ಇದ್ದಾರೆ ಎಂದು ತಿಳಿದು ಬಂದಿದೆ. ಘಟನೆ ತಿಳಿಯುತ್ತಿದ್ದಂತೆ ಕೊಳ್ಳೇಗಾಲ ಗ್ರಾಮಾಂತರ ಠಾಣೆಯ ಪೊಲೀಸರು ಸ್ಥಳಕ್ಕೆ ಆಗಮಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.ಸ್ಥಳೀಯ ಗ್ರಾಮದ ಜನರು ಡಿಪೋ ವ್ಯವಸ್ಥಾಪಕರು ಸ್ಥಳಕ್ಕೆ ಬರಬೇಕೆಂದು ಪಟ್ಟು ಹಿಡಿದರು. ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್ ಐ ಗಣೇಶ್ ಸ್ಥಳಕ್ಕೆ ಆಗಮಿಸಿ ಮುಂದಿನ ಕ್ರಮ ಕೈಗೊಂಡು ಶವವನ್ನು ತುರ್ತು ವಾಹನದ ಮೂಲಕ ಕೊಳ್ಳೇಗಾಲ ಉಪ ವಿಭಾಗ ಆಸ್ಪತ್ರೆಗೆ ಮಾರಣೋತ್ತರ ಪರೀಕ್ಷೆಗೆ ಕೊಂಡೊಯ್ಯಲಾಗಿದೆ.



## ಸಂವಿಧಾನ ಜಾಗೃತಿ ರಥ ಯಾತ್ರೆ

**ತಿಪಟೂರು. ಸಂವಿಧಾನ ಆಚರಣೆಯ ಅಂಗವಾಗಿ ನಡೆಸಿದಂತಹ ಸಂವಿಧಾನ ಜಾಗೃತಿ ರಥ ಯಾತ್ರೆ ಕಾರ್ಯಕ್ರಮದಲ್ಲಿ ರಾಜ್ಯಕ್ಕೆ ತುಮಕೂರು ಜಿಲ್ಲೆ ಪ್ರಥಮ ಸ್ಥಾನ ಗಳಿಸಿದ್ದು ಅದೇ ರೀತಿ ತುಮಕೂರು ಜಿಲ್ಲೆಯಲ್ಲಿ ತಿಪಟೂರು ತಾಲೂಕು ವಿಜೃಂಭಣೆಯಿಂದ ಮತ್ತು ಯಶಸ್ವಿಯಾಗಿ ಕಾರ್ಯಕ್ರಮ ನಡೆಸಿರುತ್ತಾರೆ ಎಂದು ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರ್ ರವರು ನಗರಸಭೆಯ ಪೌರಯುಕ್ತರವರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ರವರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಗೃಹ ಸಚಿವ ಜಿ.ಪರಮೇಶ್ವರ್. ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಪಂ ಸಿಇಒ ಪ್ರಭು ಜಿ. ಹಾಜರಿದ್ದರು.**

## ಇಷ್ಟಲಿಂಗ ಪೂಜೆಯಿಂದ ಅನಿಷ್ಟಗಳು ದೂರ

**ಹರಿಹರ:** ಶಿವಶಕ್ತಿಯಿಂದ ಈ ಜಗತ್ತು ನಿರ್ಮಾಣಗೊಂಡಿದೆ. ಶಿವನ ಬಿಟ್ಟು ಶಕ್ತಿ ಶಕ್ತಿ ಬಿಟ್ಟು ಶಿವನಿಲ್ಲ. ಇಷ್ಟಲಿಂಗಾರ್ಚನೆಯಿಂದ ಅನಿಷ್ಠಗಳು ದೂರವಾಗಿ ಇಷ್ಟಾರ್ಥಗಳು ಪ್ರಾಪ್ತವಾಗುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸೋಮವಾರ ತಾಲೂಕಿನ ಮಲೇಬೆನ್ನೂರು ಶ್ರೀ ಬೀರಲಿಂಗೇಶ್ವರ ದೇವಾಲಯ ಆವರಣದಲ್ಲಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ನಂತರ ನಡೆದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಜೀವಾತ್ಮ ಪರಮಾತ್ಮನ ಕಿರಣ. ಶಿವನಿಂದ ಬಿನ್ನನಾದ ಜೀವಾತ್ಮ ಮತ್ತೆ ಪರಮಾತ್ಮನಲ್ಲಿ ಒಂದಾಗುವುದೇ ಜೀವನದ ಗುರಿಯಾಗಿದೆ. ಅಂಗಲಿಂಗವಾಗಲು ದೇಹ ದೇವಾಲಯವಾಗಲು ಭವಿ ಭಕ್ತನಾಗಲು ಸಾಧನೆಯ ಮಾರ್ಗವನ್ನು ವೀರಶೈವ ಧರ್ಮದಲ್ಲಿ ಪ್ರತಿಪಾದಿಸಿದ್ದನ್ನು ಕಾಣುತ್ತೇವೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಭಕ್ತ ಮಹೇಶ ಪ್ರಸಾದಿ ಪ್ರಾಣಲಿಂಗಿ ಶರಣ ಮತ್ತು ಐಕ್ಯ ಎಂಬ ಷಟ್ಸ್ಥಲಗಳ ಅನುಸಂಧಾನದಿಂದ ಜೀವಾತ್ಮ ಪರಮಾತ್ಮನಾಗಲು ಸಾಧ್ಯ ಎಂಬುದನ್ನು ಅರ್ಥಪೂರ್ಣವಾಗಿ ಬೋಧಿಸಿದ್ದಾರೆ. ಭೌತಿಕ ಜಂಜಡಗಳಿಂದ ಜೀವಾತ್ಮನ ಅಂತರಂಗ ಮತ್ತು ಬಹಿರಂಗ ಪರಿಶುದ್ಧಗೊಳಿಸುವುದೇ ಗುರುವಿನ ಧರ್ಮವಾಗಿದೆ. ಜಗ ಬೆಳಗಲು ಸೂರ್ಯ ಬೇಕು. ಅಂತರಂಗದ ಅಜ್ಞಾನ ಕಳೆಯಲು ಗುರುವೊಬ್ಬನೇ ಸಮರ್ಥನಾಗಿದ್ದಾನೆ. ಶಿವಪಥವನರಿವೊಡೆ ಗುರು ಪಥ ಮೊದಲು ಎಂಬುದನ್ನು ಅನೇಕ ಅನುಭಾವಿಗಳು ಹೇಳಿದ್ದುಂಟು. ಶ್ರೀ ಬೀರಲಿಂಗೇಶ್ವರ ಮಂಗಲ



ಮೂರ್ತಿಗೆ ರುದ್ರಾಭಿಷೇಕ ಪೂಜೆ ನೆರವೇರಿಸಿ ಸಂಪ್ರೋಕ್ಷಣಾ ವಿಧಿ ಪೂರೈಸಿ ಶುಭ ಹಾರೈಸಿದರು. ರಟ್ಟೀಹಳ್ಳಿ ಕಬ್ಬಿಣಕಂತಿಮಠದ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಗುರು ಶಿಷ್ಯರ ಸಾಮರಸ್ಯದ ವಿಚಾರಗಳನ್ನು ಕುರಿತು ಉಪದೇಶಾಮೃತವನ್ನಿತ್ತರು. ಶ್ರೀ ಬೀರಲಿಂಗೇಶ್ವರ ದೇವಸ್ಥಾನ ಸಮಿತಿ ಗೌರವ ಅಧ್ಯಕ್ಷ ಪೂಜಾರ ರೇವಣಪ್ಪ, ಅಧ್ಯಕ್ಷ ಪೂಜಾರ ನಾಗಪ್ಪ, ಧರ್ಮದರ್ಶಿಗಳಾದ ಪೂಜಾರ ಬಸಪ್ಪ, ಪೂಜಾರ ನಿಂಗಪ್ಪ, ಪೂಜಾರ ಹಾಲೇಶಪ್ಪ, ಜಿಗಳಿ ಇಂದೂಧರ, ಜಿ.ಪಂ. ಮಾಜಿ ಸದಸ್ಯ ಬಿ.ಎನ್.ವಾಗೀಶಸ್ವಾಮಿ, ಬೆನಕೊಂಡಿ ಚಿದಾನಂದಪ್ಪ ಮೊದಲ್ಗೊಂಡು ಗಣ್ಯರು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದವನ್ನು ಪಡೆದರು. ಕಾರ್ಯದರ್ಶಿ ಕೆ.ಪಿ.ಗಂಗಾಧರ ಸ್ವಾಗತಿಸಿ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಹಾಲುಮತ ಸಮಾಜ ಬಾಚಿಧವರು ಶ್ರೀ ರಂಭಾಪುರಿ ಜಗದ್ಗುರುಗಳನ್ನು ನಡೆಮುಡಿ ಮೂಲಕ ಬರಮಾಡಿಕೊಂಡರು. ಡೊಳ್ಳು ಭಜನಾ ಮಂಡಳಿಯವರು ನಡೆಮುಡಿಯಲ್ಲಿ ಪಾಲ್ಗೊಂಡಿದ್ದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಗದರ್ಶನ

# ಕುಡಿವ ನೀರಿಗೆ ಆದ್ಯತೆ

**ಮಂಡ್ಯ:** ಈ ಬಾರಿ ಬರದ ಪ್ರಮಾಣ ಹೆಚ್ಚಿದ್ದು, ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು. ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಕೆ ನೀಡಿದರು.

ಅವರು ಇಂದು ಬೆಂಗಳೂರಿನ ಗೃಹ ಕಛೇರಿ ಕೃಷ್ಣಾದಿಂದ ವೀಡಿಯೋ ಸಂವಾದದ ಮೂಲಕ ರಾಜ್ಯದಲ್ಲಿ ಬರದ ಹಿನ್ನಲೆಯಲ್ಲಿ ಕುಡಿಯುವ ನೀರು, ಬರ ನಿರ್ವಹಣೆ, ಜಾನುವಾರು ಮೇವು, ಉದ್ಯೋಗ ಹಾಗೂ ಕೃಷಿ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಅವರು ಮಾತನಾಡಿದರು.



ಬರ ಪರಿಸ್ಥಿತಿ ಹಿನ್ನಲೆ ರೈತರು ಬೆಳೆದಿದ್ದ ಸುಮಾರು 48 ಲಕ್ಷ ಹೆಕ್ಟೇರ್ ಬೆಳೆ ಹಾನಿ ಆಗಿದೆ. ಇನ್ನೂ ಮಾರ್ಚ್, ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಬರ ಪರಿಸ್ಥಿತಿ ಎದುರಿಸಬೇಕು.

ಮೈಸೂರು ಭಾಗದ ಜಿಲ್ಲೆಗಳಲ್ಲಿ ಸ್ವಲ್ಪ ಮಟ್ಟಿಗೆ ಮುಂಗಾರು ಪೂರ್ವ ಮಳೆ ಬರುವ ಸಾಧ್ಯತೆ ಇದೆ. ಅದಕ್ಕಾಗಿ ಅಧಿಕಾರಿಗಳು ಈಗಿನ ಪರಿಸ್ಥಿಯನ್ನು ಸಮರ್ಥವಾಗಿ ಎದುರಿಸಲು ಮತ್ತು ಮುಂದಿನ ಪರಿಸ್ಥಿಯನ್ನು ಸಮಸ್ಯೆಗಳಿಲ್ಲದೆ ನಿಭಾಯಿಸಲು ಯೋಜನೆಗಳನ್ನು ರೂಪಿಸಿ, ಕಾರ್ಯಪ್ರವೃತ್ತರಾಗಬೇಕೆಂದು ಅವರು ಸೂಚಿಸಿದರು.

ಜನ ಕೆಲಸ ಸಿಕ್ಕಿಲ್ಲ ಅಂತಾ ಗುಳೆ ಹೋಗಬಾರದು. ವಾರಕ್ಕೊಮ್ಮೆ ಜಿಲ್ಲಾಧಿಕಾರಿಗಳು, ಸಿಇಓ ಗಳು ತಮ್ಮ ಜಿಲ್ಲೆಯ ತಹಶಿಲ್ದಾರ, ಆರ್ ಐ, ವಿ.ಎ ಮತ್ತು ಪಿಡಿಓ ಗಳ ಜೊತೆ ಸಭೆ ಜರುಗಿಸಬೇಕು. ಕ್ಷೇತ್ರಮಟ್ಟದ ಸಮಸ್ಯೆಗಳನ್ನು ಸ್ವತಃ ತಿಳಿದು ಕಾರ್ಯಪ್ರವೃತ್ತರಾಗಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶನ ನೀಡಿದರು.

ಪ್ರತಿ ತಾಲೂಕಿನಲ್ಲಿ ಕಂಟ್ರೋಲ್ ರೂಮ್ ಆರಂಭಿಸಿ, ದಿನದ 24 ಗಂಟೆ ಜನರ ಅಹವಾಲು ಆಲಿಸುವ ಮತ್ತು ಪರಿಹಾರ ಕೈಗೊಳ್ಳುವ ಕೆಲಸವಾಗಬೇಕು ಎಂದು ಮಾನ್ಯ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಡಾ: ಕುಮಾರ ಅವರು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು ಜಿಲ್ಲೆಯಲ್ಲಿ ಎರಡು ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಹಾಗೂ 9 ಗ್ರಾಮಗಳಿಗೆ ಖಾಸಗಿ ಬೋರ್ ವೆಲ್ ಮೂಲಕ ನೀರು ನೀಡಲಾಗುತ್ತಿದೆ ಎಂದರು.

370 ಗ್ರಾಮಗಳಲ್ಲಿ ಮುಂದಿನ ದಿನದಲ್ಲಿ ಕುಡಿಯುವ ನೀರಿನ ತೊಂದರೆ ಉಂಟಾಗಬಹುದು ಎಂದು ಅಂದಾಜಿಸಿ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಳ್ಳಲಾಗಿದೆ. ಈ ಗ್ರಾಮಗಳಿಗೆ ಜಲ್ ಜೀವನ್ ಮಿಷನ್ ಯೋಜನೆಯಡಿ ಹೊಸ ಬೋರ್ ವೆಲ್ ವ್ಯವಸ್ಥೆ ಮಾಡಲು ಹಾಗೂ 160 ಖಾಸಗಿ ಬೋರ್ ವೆಲ್ ಗಳನ್ನು ಸಹ ಗುರುತಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ 517939 ಟನ್ ಮೇವು ಲಭ್ಯವಿದ್ದು, 23 ವಾರಗಳ ಕಾಲ ಮೇವಿನ ಕೊರತೆ ಉಂಟಾಗುವುದಿಲ್ಲ ಮುನ್ನಚ್ಚರಿಕಾ ಕ್ರಮವಾಗಿ ಮೇವಿನ ಖರೀದಿಗೆ ಟೆಂಡರ್ ಸಹ ಕರೆಯಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕಂಟ್ರೋಲ್ ರೂಂ ತೆರೆದು ಸಿಬ್ಬಂದಿ ನಿಯೋಜಿಸಬೇಕು. ಕುಡಿಯುವ ನೀರಿನ ಸಮಸ್ಯೆಗಳನ್ನು 24 ಗಂಟೆಯೊಳಗಾಗಿ ಪರಿಹರಿಸಬೇಕು ಎಂದರು.

ಎಸ್ ಡಿ ಆರ್ ಎಫ್ ಅನುದಾನದ ಅಡಿಯಲ್ಲಿ ಪಶು ಸಂಗೋಪನೆ ಇಲಾಖೆಯಿಂದ ಜಿಲ್ಲೆಗೆ ಒಟ್ಟು 18,525 ಮಿನಿ ಮೇವಿನ ಕಿಟ್ ನೀಡಿದ್ದು, ಅರ್ಹ ರೈತರಿಗೆ 17,668 ಮಿನಿ ಮೇವಿನ ಕಿಟ್ ಅನ್ನು ವಿತರಣೆ ಮಾಡಲಾಗಿದೆ ಎಂದರು.

ಜಿಲ್ಲಾಧಿಕಾರಿಗಳ ಡಿ ಡಿ ಆರ್ ಎಫ್ ಹಾಗೂ ತಹಶೀಲ್ದಾರ್ ರವರ ಪಿ ಡಿ ಖಾತೆಯಲ್ಲಿ ಒಟ್ಟು 2179.65 ಲಕ್ಷ ರೂ ಅನುದಾನವಿದೆ. ಕುಡಿಯುವ ನೀರನ್ನು ಒದಗಿಸಲು ಅನುದಾನದ ಕೊರತೆಯಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಶೇಕ್ ತನ್ವಿರ್ ಆಸೀಫ್,ಕಾವೇರಿ ನೀರಾವರಿ ನಿಗಮದ ಚೀಫ್ ಇಂಜಿನಿಯರ್ ಮಹೇಶ್, ಜಿಲ್ಲಾ ಪಂಚಾಯತ್ ಯೋಜನಾ ಅಧಿಕಾರಿ ಸಂಜೀವಪ್ಪ, ಉಪವಿಭಾಗಾಧಿಕಾರಿ ಮಹೇಶ್, ಪಶು ಸಂಗೋಪನ ಇಲಾಖೆಯ ಉಪನಿರ್ದೇಶಕ ಡಾ. ಸುರೇಶ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ. ವಿ. ಎಸ್. ಅಶೋಕ್, ಕಾವೇರಿ ನೀರಾವರಿ ನಿಗಮದ ಎಸ್. ಇ.ರಘುರಾಮ್ , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮೋಹನ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕಿ ರೂಪಶ್ರೀ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ

» **ಮೈಸೂರು ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಹಾಗೂ ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ಸೂಚನೆ**

**ಮಂಡ್ಯ:** ಮುಂಬರುವ ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಮತ್ತು ಪಾರದರ್ಶಕವಾಗಿ ನಡೆಸಲು ಹಾಗೂ ಯಾವುದೇ ಲೋಪವಾಗದಂತೆ ಅಧಿಕಾರಿಗಳು ತಮಗೆ ವಹಿಸಿದ ಕೆಲಸಗಳನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸಿ ಚುನಾವಣೆಯನ್ನು ಯಶಸ್ವಿಗೊಳಿಸಬೇಕು ಎಂದು ಮೈಸೂರು ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ, ಹಾಗೂ ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದರು.

ಕೆ.ಆರ್.ನಗರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ -2024 ರ ಸಂಬಂಧ ಪೂರ್ವ ಸಿದ್ಧತಾ ಸಭೆಯಲ್ಲಿ ಉಭಯ ಜಿಲ್ಲಾಧಿಕಾರಿಗಳು ಮಾತನಾಡಿದರು.

ಎಲ್ಲ ಮತಗಟ್ಟೆಗಳಿಗೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ನ್ಯೂನತೆಗಳಿದ್ದಲ್ಲಿ ಸರಿಪಡಿಸುವಂತೆ ಎಲ್ಲಾ ಸೆಕ್ಟರ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ಅದಕ್ಕೆ ಸಂಬಂಧಿಸಿದ ನಮೂನೆಗಳಾದ ವಿಎಂ1, ವಿಎಂ2, ವಿಎಂ3 ಭರ್ತಿ ಮಾಡುವ ಬಗ್ಗೆ ಆರಕ್ಷಕ ಇಲಾಖೆಯೊಂದಿಗೆ ಬಿಎಲ್‌ಒಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ಭರ್ತಿ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಅಂತರ ಜಿಲ್ಲಾ ಗಡಿಗಳಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾದ ತಕ್ಷಣ ಅದರ ನಿಯಮಗಳಂತೆ ಚೆಕ್ ಪೋಸ್ಟ್ ನಿರ್ಮಿಸಿ ಅಲ್ಲಿನ ಸಿಬ್ಬಂದಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಿಕೊಟ್ಟು ನಿಯಮಿತವಾಗಿ ವಾಹನ ತಪಾಸಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ವಿವಿಧ ಇಲಾಖೆಗಳ ಸಮನ್ವಯತೆ ಸೆಕ್ಟರ್ ಆಫೀಸರ್ ಗಳ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ಅತಿ ಮುಖ್ಯವಾಗಿ ಹರಿಯಬೇಕು. ಎಲ್ಲಾ ಅಧಿಕಾರಿಗಳು ಸೆಕ್ಟರ್ ಅಧಿಕಾರಿಗಳ ಕೈಪಿಡಿ, ಇವಿಎಂ ಅಧಿಕಾರಿಗಳ ಕೈಪಿಡಿ ಹಾಗೂ ಚುನಾವಣಾ ಆಯೋಗದಿಂದ ಬರುವ ಎಲ್ಲಾ ಕೈಪಿಡಿ ಮತ್ತು ಸುತ್ತೋಲೆಗಳಂತೆ ಕರ್ತವ್ಯ ನಿರ್ವಹಿಸಬೇಕು ಎಂದರು.

ಪೋಸ್ಟರ್ ಮತ್ತು ಬ್ಯಾನರ್‌ಗಳನ್ನು ಸಾರ್ವಜನಿಕ ಪ್ರದೇಶಗಳಿಂದ ನಿಗದಿತ ಅವಧಿಯಲ್ಲಿ ತೆರವುಗೊಳಿಸುವಂತೆ ಹಾಗೂ ಕಾಮಗಾರಿಗಳು ಯಾವ ಹಂತದಲ್ಲಿವೆ ಎಂಬ ಪಟ್ಟಿಯನ್ನು ತಯಾರಿಸಿ ವರದಿ ಪರಿಶೀಲಿಸಲು ಅಧಿಕಾರಿಗಳಿಗೆ ತಿಳಿಸಿದರು.

ಎಆರ್‌ಒ ಸುಪ್ರಿಯಾ ಬಣಗಾರ್, ಕೆ.ಆರ್ ನಗರ ಮತ್ತು ಸಾಲಿಗ್ರಾಮದ ತಹಶಿಲ್ದಾರ್ ಹಾಗೂ ಕಾರ್ಯನಿರ್ವಾಹಣಾಧಿಕಾರಿ ಉಪಸ್ಥಿತರಿದ್ದರು.

# ಚುನಾವಣಾ ಸ್ವೀಪ್ ಕಾರ್ಯ ಚುರುಕುಗೊಳಿಸಿ

### ಸಿ.ಇ.ಓ ಪ್ರಕಾಶ್ ಜಿ.ಟಿ. ನಿಟ್ಟಾಲಿ ಸೂಚನೆ

**ಚಿಕ್ಕಬಳ್ಳಾಪುರ:** 2024ರ ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ನೀತಿ ಸಂಹಿತೆ ಯಾವುದೇ ಕ್ಷಣದಲ್ಲಿ ಘೋಷಣೆಆಗಬಹುದು. ಆದ್ದರಿಂದನಿರಂತರವಾಗಿ ಕೈಗೊಳ್ಳುತ್ತಿರುವ ಚುನಾವಣಾ ಮತದಾನ ಜಾಗೃತಿಯ ಸ್ವೀಪ್ ಕಾರ್ಯಕ್ರಮಗಳನ್ನು ಮತ್ತಷ್ಟು ಚುರುಕುಗೊಳಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ ಅವರು ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.

ಮಂಗಳವಾರ ಜಿಲ್ಲಾ ಪಂಚಾಯತ್ ಕಚೇರಿಯ ಹೆಚ್. ನರಸಿಂಹಯ್ಯ ಸಭಾಂಗಣದಲ್ಲಿ ನಡೆದ ಸ್ವೀಪ್("Sweep-Systematic Voters Education and Electoral Program) ಚಟುವಟಿಕೆಗಳ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ 2014ರ ಚುನಾವಣೆಯಲ್ಲಿ ಶೇ. 78.2 ರಷ್ಟು ಮತ್ತು 2019ರಲ್ಲಿ ಶೇ. 78.04 ರಷ್ಟು ಮತದಾನ ಪ್ರಮಾಣವನ್ನು ದಾಖಲಿಸಿ ಉತ್ತಮ ಸಾಧನೆಯನ್ನು ಮಾಡಿ ರಾಜ್ಯದಲ್ಲಿ ಗಮನ ಸೆಳೆದಿತ್ತು. ಆದೇ ರೀತಿ ಮುಂಬರುವ ಲೋಕಸಭಾ ಚುನಾವಣೆಯಲ್ಲೂ ಮತದಾನದ ಪ್ರಮಾಣ ಮತ್ತಷ್ಟು ಹೆಚ್ಚಿಸಲು ಜಿಲ್ಲೆಯಾದ್ಯಂತ ಮತದಾನ ಜಾಗೃತಿಯ ಹಲವು ವಿಭಿನ್ನ, ವಿನೂತನ ಕಾರ್ಯಕ್ರಮಗಳನ್ನು ತಮ್ಮ ಇಲಾಖೆಯ ಹಂತದಲ್ಲಿ ಹಮ್ಮಿಕೊಳ್ಳಬೇಕು. ಜಾಗೃತಿಗಾಗಿ ಬೇಕಾಗುವ ಕಠಪತ್ರ, ಬಿತ್ತಿಪತ್ರ, ಪೋಸ್ಟರ್ ಗಳು, ಬ್ಯಾನರ್ ಗಳನ್ನು ಸಿದ್ದಪಡಿಸಿಕೊಳ್ಳಬೇಕು. ಕೆ.ಎಸ್.ಆರ್.ಟಿ.ಸಿ ಬಸ್ ಟಿಕೆಟ್ ಗಳಲ್ಲಿ ಸರ್ಕಾರಿ ಆಸ್ಪತ್ರೆಗಳ ನೋಂದಣಿ ಸ್ಲಿಪ್ ಗಳಲ್ಲಿ,ಕೋಚಿಮುಲ್ ಉತ್ಪನ್ನಗಳ ಮೇಲೆ,ಇಲಾಖೆಗಳ ಸಾಮಾಜಿಕ ಜಾಲತಾಣಗಳು, ವೆಬ್ ಸೈಟ್ ಗಳಲ್ಲಿ ಮತದಾನದ ಜಾಗೃತಿಯ ಟ್ಯಾಗ್ ಲೈನ್ ಬಳಸಿಕೊಂಡು ಜನರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಪ್ರತಿ ಶಾಲಾ ಕಾಲೇಜುಗಳಲ್ಲಿ ಇ.ಎಲ್.ಸಿ ಕ್ಲಬ್ ಗಳನ್ನು ರಚಿಸಿ ಮಕ್ಕಳಿಂದ ಅವರ ಪೋಷಕರಿಗೆ ಮತದಾನದ ಅರಿವು ಮೂಡಿಸುವ ಕೆಲಸ ಆಗಬೇಕು. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದ ವಸತಿ ಶಾಲೆಗಳ ಮಕ್ಕಳಿಂದ ಪೋಷಕರಿಗೆ ಚುನಾವಣೆಯ ಮಹತ್ವದ ಬಗ್ಗೆ ತಿಳಿಸಿ, ಮತ ಚಲಾಯಿಸುವಂತೆ ಪೋಷಕರಿಗೆ ಪತ್ರ ಬರೆಸಬೇಕು. ಪ್ರತಿ ಗ್ರಾಮಗಳಲ್ಲಿ, ವಾರ್ಡ್ ಗಳಲ್ಲಿ ಘನತ್ಯಾಜ್ಯ ಸಂಗ್ರಹಿಸುವ ವಾಹನಗಳಲ್ಲಿ ಜಾಗೃತಿ ಜಿಂಗಲ್ಸ್ ಗಳನ್ನು ಬಿತ್ತರಿಸಬೇಕು. ಜನಸಂದಣಿ ಸ್ಥಳಗಳಲ್ಲಿ, ಶಾಲಾ ಕಾಲೇಜುಗಳಲ್ಲಿ ಜಾಗೃತಿ ಜಾಥಾ, ರ್‍ಯಾಲಿ, ಪ್ರಬಾತ್ ಪೇರಿ, ಪ್ರತಿಜ್ಞಾವಿಧಿ ಬೋಧನೆ ಮಾಡಲು ದಿನಾಂಕವಾರು ಯೋಜಿತ ರೀತಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಬೇಕು.ಈ ಹಿಂದಿನ ಚುನಾವಣೆಗಳಲ್ಲಿ ಮತದಾನದ ಪ್ರಮಾಣ ಕಡಿಮೆ ಆಗಿರುವ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಉಸ್ತುವಾರಿ ಅಧಿಕಾರಿಗಳು ಹೆಚ್ಚಿನ ಆದ್ಯತೆ ನೀಡಿ ಅರಿವು ಮೂಡಿಸಬೇಕು. ನೀತಿ ಸಂಹಿತೆ ಘೋಷಣೆ ಆದ ಮೇಲೆ ಯಾವುದೇ ಸರ್ಕಾರಿ ಕಾರ್ಯಕ್ರಮ ಆದರೂ ಅದರಲ್ಲಿ ಸ್ವೀಪ್ ಕಾರ್ಯಕ್ರಮವು ಭಾಗವಾಗಿ ಸೇರಿರಬೇಕು ಎಂದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸಲಹೆ ಸೂಚನೆಗಳನ್ನು ನೀಡಿದರು.



### ಥೀಮ್ ಆಧಾರಿತ ಮತಗಟ್ಟೆ ರಚಿಸಿ

ಕಳೆದ ವಿಧಾನಸಭೆ, ಚುನಾವಣೆ ವೇಳೆ ಜಿಲ್ಲೆಯಾದ್ಯಂತ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 9 ವಿಶೇಷ ಮತಗಟ್ಟೆಗಳನ್ನು ರಚಿಸಿ ಮತದಾರರ ಗಮನ ಸೆಳೆಯುವ ಮೂಲಕ ಶೇ. 85 ರಷ್ಟು ಮತದಾನವನ್ನು ಜಿಲ್ಲೆಯಲ್ಲಿ ದಾಖಲಿಸಲಾಗಿತ್ತು. ಈ ವಿಶೇಷ ಮತಗಟ್ಟೆಗಳಲ್ಲಿ ಸಖಿ ಮತಗಟ್ಟೆ, ವಿಶೇಷ ಚೇತನರ ಮತಗಟ್ಟೆ, ಯುವ ಮತಗಟ್ಟೆ, ಸಾಂಪ್ರದಾಯಿಕ ಮಾದರಿ ಮತಗಟ್ಟೆ ಮತ್ತು ಜಿಲ್ಲೆಯ ವಿಶೇಷತೆಯನ್ನು ಬಿಂಬಿಸುವ ಥೀಮ್ ಆಧಾರಿತ ಮತಗಟ್ಟೆಗಳನ್ನು ರಚಿಸಲಾಗಿತ್ತು. ನಮ್ಮ ಜಿಲ್ಲೆಯ ಥೀಮ್ ಆಧಾರಿತ ಮತ್ತು ಸಖಿ ಮತಗಟ್ಟೆಗಳು ಆಕರ್ಷಕವಾಗಿ ಮೂಡಿ ಬಂದು ಜನರನ್ನು ಸೆಳೆದಿದ್ದವು, ಅದೇ ರೀತಿ ಈ ಬಾರಿಯು ಸಕಲ ಸಿದ್ದತೆಗಳನ್ನು ಮಾಡಿಕೊಂಡು ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲು ತಿಳಿಸಿದರು.

ಚುನಾವಣಾ ಆಯೋಗವು ಸ್ವೀಪ್ ಚಟುವಟಿಕೆಗಳ ಘೋಷಣೆಯಾಗಿ ''ಚುನಾವಣಾ ಪರ್ವ ದೇಶದ ಗರ್ವ'' ಎಂಬ ವಾಕ್ಯವನ್ನು ಈ ಬಾರಿ ಆಯ್ಕೆ ಮಾಡಿದೆ. ಅದರಂತೆ ಜಿಲ್ಲೆಯ ಜನರು ಮುಂದಿನ ದಿನಗಳಲ್ಲಿ ಚುನಾವಣಾ ಪ್ರಕ್ರಿಯೆಯಲ್ಲಿ, ಮತದಾನದಲ್ಲಿ ಭಾಗವಹಿಸಿ ಮತದಾನದ ಪ್ರಮಾಣವನ್ನು ಹೆಚ್ಚಿಸಲು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯ ತರಬೇತಿದಾರರಾದ ಪಿ.ಎಲ್.ಸತೀಶ್ ಕುಮಾರ್, ವಿವಿಧ ಅಧಿಕಾರಿಗಳು ಇದ್ದರು.

## ರಾಮಮನಗೂಳಿ, ಮನೋಹರ ಪ್ರಸಾದ್ ಸೇವೆ ನೆನೆದ ಕೆಯೂಡಬ್ಲ್ಯೂಜೆ

**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯೂಡಬ್ಲ್ಯೂಜೆ) ವತಿಯಿಂದ ಏರ್ಪಡಿಸಿದ್ದ ನುಡಿ ನಮನ ಕಾರ್ಯಕ್ರಮದಲ್ಲಿ ಬಾಗಲಕೋಟೆಯ ರಾಮ ಮನಗೂಳಿ, ಮಂಗಳೂರಿನ ಕೆ.ಮನೋಹರ ಪ್ರಸಾದ್ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿತು.

ಕೆಯೂಡಬ್ಲ್ಯೂಜೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಬಾಗಲಕೋಟೆಯ ರಾಮ ಮನಗೂಳಿ ಅವರು ರಾಜ್ಯ ಸಂಘದ ಉಪಾಧ್ಯಕ್ಷರಾಗಿ, ಜಿಲ್ಲಾ ಸಂಘದ ಅಧ್ಯಕ್ಷರಾಗಿ ಸಲ್ಲಿಸಿದ್ದ ಸೇವೆ ಅನನ್ಯ. ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನವನ್ನು ಸಂಘಟನೆ ಮಾಡಿ ಸೈ ಎನ್ನಿಸಿಕೊಂಡಿದ್ದ ಹೆಗ್ಗಳಿಕೆ ಅವರದು ಎಂದರು.

ಸಂಯುಕ್ತ ಕರ್ನಾಟಕ ಬ್ಯೂರೊ ಮುಖ್ಯಸ್ಥರಾಗಿಯೂ ಕೆಲಸ ಮಾಡಿದ ಅವರ ಗರಡಿಯಲ್ಲಿ ಹಲವು ಪತ್ರಕರ್ತರು ಬೆಳೆದಿರುವುದನ್ನು ಶ್ಲಾಘಿಸಿದರು.

ಮಂಗಳೂರಿನ ವಿ.ಮನೋಹರ ಪ್ರಸಾದ್ ಅವರು ಸಂಘದ ಪ್ರತಿಯೊಂದು ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಭಾಗವಹಿಸಿದವರು. ಇತ್ತೀಚೆಗೆ ಮಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ಕ್ರಿಕೆಟ್ ಟೂರ್ನಿ, ಜಿಲ್ಲಾ ಪತ್ರಕರ್ತರ ಸಮ್ಮೇಳನದಲ್ಲಿಯೂ ಭಾಗವಹಿಸಿದ್ದು ಅವರ ಕ್ರೀಯಾಶೀಲತೆಗೆ ಸಾಕ್ಷಿ. ಸುದ್ದಿಮನೆಯಲ್ಲಿ ಹಿರಿಯಣ್ಣನಾಗಿದ್ದ ಅವರ ವೃತ್ತಿ ಬದ್ಧತೆಯನ್ನು ನೆನೆದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ್ ಮಾತನಾಡಿ, ರಾಮ ಮನಗೂಳಿ, ಮನೋಹರ




ಪ್ರಸಾದ್ ಮತ್ತು ದಿಲೀಪ್ ಜೋಷಿಯವರು ನಮ್ಮನ್ನು ಬಿಟ್ಟು ಅಗಲಿರುವುದು ನಿಜಕ್ಕೂ ನೋವಿನ ಸಂಗತಿ. ಮೂವರು ಕನ್ನಡ ಪತ್ರಿಕೋದ್ಯಮಕ್ಕೆ ನೀಡಿದ ಕೊಡುಗೆ ಅಪಾರ. ಮೂವರ ಆತ್ಮಕ್ಕೂ ಭಗವಂತ ಚಿರಶಾಂತಿ ನೀಡಲಿ ಎಂದರು.

ಸಂಯುಕ್ತ ಕರ್ನಾಟಕ ಪತ್ರಿಕೆಯ ಸಹಾಯಕ ಸಂಪಾದಕ ಕೆ.ವಿ. ಪರಮೇಶ್ ಮಾತನಾಡಿ, ರಾಮ ಮನಗೂಳಿಯವರು ತಮ್ಮ ವೃತ್ತಿ ಜೀವನದಲ್ಲಿ 'ಸಂಯುಕ್ತ ಕರ್ನಾಟಕ' ಪತ್ರಿಕೆಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಅಗಲಿಕೆ ನಿಜಕ್ಕೂ ನೋವಿನ ಸಂಗತಿ ಎಂದರು.

ಬೆಂಗಳೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್ ಮಾತನಾಡಿ, ಮಂಗಳೂರಿನ ಮನೋಹರ್ ಪ್ರಸಾದ್ ಪತ್ರಿಕೋದ್ಯಮದಲ್ಲಿ ತನ್ನದೇ ಆದ ಛಾಪು ಮೂಡಿಸಿದವರು. ಹಲವಾರು ವಿಶೇಷ ವರದಿಗಳ ಮೂಲಕ 'ಉದಯವಾಣಿ' ಪತ್ರಿಕೆಗೆ ಭದ್ರ ನೆಲೆ ಒದಗಿಸಿದವರು. ಅವರ ಮಾರ್ಗದರ್ಶನವು ಕರಾವಳಿಯ ಹೆಚ್ಚಿನ ಪತ್ರಕರ್ತರಿಗೆ ಸಿಕ್ಕಿರುವುದು ನಿಜಕ್ಕೂ ಮರೆಯಲಾರದ ವಿಷಯ ಎಂದರು.

ಬೀದರ್ ಘಟಕದ ಪ್ರಧಾನ ಕಾರ್ಯದರ್ಶಿ ಶಿವಕುಮಾರ್, ಹಿರಿಯ ಪತ್ರಕರ್ತೆ ಶಶಿಕಲಾ ಮಾತನಾಡಿ, ಹಿರಿಯ ಪತ್ರಕರ್ತರ ಅಗಲಿಕೆ ಪತ್ರಿಕೋದ್ಯಮಕ್ಕೆ ತುಂಬಲಾರದ ನಷ್ಟ ಎಂದರು. ಕಾಸರಗೋಡು ಕನ್ನಡ ಪತ್ರಕರ್ತರ ಸಂಘದ ಅಧ್ಯಕ್ಷ ಎ.ಆರ್. ಸುಬ್ಬಯ್ಯಕಟ್ಟೆ, ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ರೋಶನಿ ಗೌಡ ಸೇರಿದಂತೆ ಹಲವರು ಸಂತಾಪ ಸಭೆಯಲ್ಲಿ ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಗದಗದ ದಿಲೀಪ್ ಕುಮಾರ್ ಜೋಷಿ ಮತ್ತು ಪತ್ರಿಕಾ ಪ್ರಸರಣಾಧಿಕಾರಿ ಕೊಪ್ಪಳದ ಮಂಜುನಾಥ ದಂಡಿನ ಅವರ ನಿಧನಕ್ಕೂ ಸಂತಾಪ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದಲ್ಲಿ ರಾಜ್ಯ ಪತ್ರಿಕಾ ವಿತರಕರ ಸಂಘದ ಕೆ.ಶಂಭುಲಿಂಗ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸೋಮಶೇಖರ ಗಾಂಧಿ, ದೇವರಾಜು, ಬೆಂಗಳೂರು ನಗರ ಜಿಲ್ಲಾ ಘಟಕದ ಉಪಾಧ್ಯಕ್ಷ ಕೆ.ಎಂ ಜಿಕ್ರಿಯಾ, ಕಾರ್ಯಕಾರಿ ಸಮಿತಿ ಸದಸ್ಯ ಬಸವರಾಜ್, ಕೆ.ಎಸ್. ಸ್ವಾಮಿ ಸೇರಿದಂತೆ ಸಂಘದ ಹಲವಾರು ಹಿರಿಯ-ಕಿರಿಯ ಪತ್ರಕರ್ತರು ಉಪಸ್ಥಿತರಿದ್ದರು.

## ಮಹಿಳೆಯರ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

**ಹುಳಿಯಾರು:** ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಹುಳಿಯಾರು ವತಿಯಿಂದ ಪಶ್ಚಿಮ ಬಂಗಾಳದ ಸಂದೇಶಖಾಲಿಯಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಖಂಡಿಸಿ ಮಂಗಳವಾರ ಪ್ರತಿಭಟನೆ ನಡೆಸಿ ನಾಡಕಛೇರಿ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿತು.

ಬಂಗಾಳದ ಪವಿತ್ರ ಭೂಮಿ ಶಕ್ತಿ ದೇವಿಯ ಆರಾಧನೆಯ ಸ್ಥಳವಾಗಿದೆ. ದುರದೃಷ್ಟವಶಾತ್, ಪ್ರಸ್ತುತ ಪಶ್ಚಿಮ ಬಂಗಾಳದ ಸಂದೇಶಖಾಲಿಯಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರ ಸಂಕುಚಿತ ಮತ ಬ್ಯಾಂಕ್ ರಾಜಕಾರಣದಿಂದಾಗಿ ಮಹಿಳೆಯರಿಗೆ ಗೌರವ ತೋರುವ ಹಾಗೂ ಆಸ್ಮಿತೆಗೆ ಧಕ್ಕೆ ತರುವ ಶಕ್ತಿಗಳು ಉತ್ತುಂಗದಲ್ಲಿದೆ. ಮನುಕುಲದ ಆತ್ಮಸಾಕ್ಷಿಯನ್ನು ಕಲಕುವಂತಹ ಈ ಘಟನೆಯನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತೀವ್ರವಾಗಿ ಖಂಡಿಸುತ್ತದೆ ಎಂದು ಚಿಕ್ಕನಾಯಕನಹಳ್ಳಿ ತಾಲೂಕು ಸಂಚಾಲಕರಾದ ದೀಪಕ್ ಕೆಂಕೆರೆ ತಿಳಿಸಿದರು.

ಪಶ್ಚಿಮ ಬಂಗಾಳದ ಉತ್ತರ 24 ಪರಗಣ ಜಿಲ್ಲೆಯ ಸಂದೇಶಖಾಲಿ ಪ್ರದೇಶದ ಮಹಿಳೆಯರು ಲೈಂಗಿಕವಾಗಿ ಶೋಷಣೆಗೆ ಒಳಗಾಗುತ್ತಿದ್ದಾರೆ ಮತ್ತು ಅವರ ಆಸ್ತಿಯ ಮೇಲೆ ಜಿಹಾದಿ ಗುಂಪು ದಾಳಿ ನಡೆಸುತ್ತಿದೆ. ಸಂತ್ರಸ್ತ ಮಹಿಳೆಯರಲ್ಲಿ ಹೆಚ್ಚಿನವರು ಅತ್ಯಂತ ಹಿಂದುಳಿದ ಮತ್ತು ಪರಿಶಿಷ್ಟ ವರ್ಗಗಳಿಗೆ ಸೇರಿದವರು. ಜಿಹಾದಿಗಳ ಕಿರುಕುಳದಿಂದ ಬೇಸತ್ತು ಅನೇಕ ಕುಟುಂಬಗಳು ಸಂದೇಶಖಾಲಿಯಿಂದ ಪಲಾಯನ ಮಾಡಬೇಕಾಗಿ ಬಂದಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್, ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಿಂದ ಪಶ್ಚಿಮ ಬಂಗಾಳದಲ್ಲಿ



ಮಮತಾ ಬ್ಯಾನರ್ಜಿ ರವರ ನೇತೃತ್ವದಲ್ಲಿ ನಡೆಯುತ್ತಿರುವ ಅಧಿಕಾರ ಪ್ರಾಯೋಜಿತ ಮತ್ತು ಅಧಿಕಾರ ಬೆಂಬಲಿತ ಹಿಂಸೆ ಮತ್ತು ಮಹಿಳೆಯರ ಸಾಮೂಹಿಕ ಆಸ್ಮಿತೆಯ ಮೇಲಿನ ದಾಳಿಯನ್ನು ತಕ್ಷಣವೇ ನಿಗ್ರಹಿಸಿ ಮತ್ತು ಸಂದೇಶಖಾಲಿಯ ಸಂತ್ರಸ್ತ ಮಹಿಳೆಯರಿಗೆ ತ್ವರಿತ ನ್ಯಾಯ ಒದಗಿಸಿ. ಅಲ್ಲದೆ, ಕೇಂದ್ರ ಸಂಸ್ಥೆಯಿಂದ ಇಡೀ ವಿಷಯದ ಬಗ್ಗೆ ಉನ್ನತ ಮಟ್ಟದ ತನಿಖೆಯನ್ನು ನಡೆಸಬೇಕು ಮತ್ತು ಅಂತಹ ಘೋರ ಅಪರಾಧ ಎಸಗುವ ಅಪರಾಧಿಗಳಿಗೆ ಕಠಿಣ ಶಿಕ್ಷೆಯನ್ನು ಖಚಿತಪಡಿಸಿಕೊಳ್ಳಬೇಕೆಂದು ಕೋರಿದರು.

ಪ್ರತಿಭಟನೆಯ ಸಂದರ್ಭದಲ್ಲಿ ಮಾಧ್ಯಮ ಪ್ರಮುಖರಾದ ಸಿದ್ದೇಶ್, ಕಾರ್ಯಕರ್ತರಾದ ಲಿಖಿತ್, ಕಾರ್ತಿಕ್, ಸಂಜಯ್, ದರ್ಶನ್, ಮೋಹನ್ ಕುಮಾರ್, ನವೀನ್ ಕುಮಾರ್, ವೆಂಕಟೇಶ್, ತರುಣ್, ದಯಾನಂದ್, ಶರತ್, ಯಶವಂತ, ಹೇಮಂತ್, ದೀಕ್ಷಿತ್ ಇತರಿದ್ದರು.

# ನಾಮಫಲಕಗಳಲ್ಲಿ ಶೇ.60 ಕಡ್ಡಾಯವಾಗಿ ಕನ್ನಡ ಭಾಷೆ ಬಳಕೆ ಮಾಡಿ

**ಕೋಲಾರ:** ಸರ್ಕಾರದ ನಿಯಮಾನುಸಾರದಂತೆ ನಾಮ ಫಲಕಗಳಲ್ಲಿ ಶೇ.60ರಷ್ಟು ಕಡ್ಡಾಯವಾಗಿ ಕನ್ನಡ ಭಾಷೆ ಬಳಕೆ ಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಜಿಲ್ಲಾಡಳಿತ ಭವನದ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ವೇದಿಕೆಯ ಜಿಲ್ಲಾಧ್ಯಕ್ಷ ಮೇಡಿಹಾಳ ರಾಘವೇಂದ್ರ ಮಾತನಾಡಿ, ಮಾ.13ರೊಳಗೆ ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಅಂಗಡಿ ಮುಂಗಟ್ಟುಗಳ ಮೇಲೆ ಕನ್ನಡ ನಾಮಫಲಕ ಇರಬೇಕು. ಇಲ್ಲದಿದ್ದರೆ ಕಾರ್ಯಕರ್ತರೆ ಬೀದಿಗಿಳಿದು ಅನ್ಯ ಭಾಷ ನಾಮಲಕಗಳನ್ನು ತೆರವುಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ವೇದಿಕೆಯ ಕಾರ್ಯಕರ್ತರು ಹಿಂದೆ ಬೆಂಗಳೂರಿನಲ್ಲಿ ಪ್ರತಿಭಟನೆ ಹಮ್ಮಿಕೊಂಡು ಸಾವಿರಾರು ಕನ್ನಡೇತರ ನಾಮಫಲಕಗಳನ್ನು ಧರೆಗುರುಳಿಸಿದರು. ನಮ್ಮ ಚಳವಳಿಗೆ ರಾಜ್ಯದ ಜನತೆ ವ್ಯಾಪಕ ಬೆಂಬಲ ನೀಡಿದರು. ಕನ್ನಡ ನಾಮಫಲಕ ಬೇಕು ಎಂದು ದಶಕಗಳಿಂದ ಹಂಬಲಿಸುತ್ತಿದ್ದ ಮನಸುಗಳಿಗೆ ಸಮಾಧಾನ ತಂದ ಬಹುದೊಡ್ಡ ಹೋರಾಟ ನಡೆಸಲಾಗುತ್ತಿದ್ದು, ಬೇಡಿಕೆ ಈಡೇರುವ ತನಕ ನಿಲ್ಲಿಸುವುದಿಲ್ಲ ಎಂದರು.

ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕವನ್ನು ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡಿಸಿ ಅನುಮೋದನೆಯನ್ನು ಪಡೆದುಕೊಂಡಿತು. ವಿಧೇಯಕಕ್ಕೆ ರಾಜ್ಯಪಾಲರು ಸಹಿ




ಮಾಡಿರುವುದರಿಂದ ಅದು ಕಾನೂನಾಗಿ ಕೂಡ ಜಾರಿಯಾಗಿದೆ. ಇದು ಕಾನೂನು ಜಾರಿಗೆ ತರಲು ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ತಿಳಿಸಿದರು.

ಭಾಷಾವಾರು ಪ್ರಾಂತ್ಯಗಳ ವಿಂಗಡಣೆ ಆಗಿದ್ದೇ ಆಯಾ ಭಾಗದ ನುಡಿಪರಂಪರೆಯನ್ನು ರಕ್ಷಿಸಲು, ಗೌರವಿಸಲು. ಆದರೆ ಕರ್ನಾಟಕದಲ್ಲಿ ಮಾತ್ರ ಕನ್ನಡಕ್ಕೆ ಅಗೌರವ ತೋರಲಾಗುತ್ತಿದೆ. ಇದನ್ನು ಹೇಗೆ ಸಹಿಸಲು ಸಾಧ್ಯ. ಹಿಂದಿ ರಾಜ್ಯಗಳಲ್ಲಿ ಕನ್ನಡ ನಾಮಫಲಕ ಕೇಳುತ್ತಿಲ್ಲ. ನಮ್ಮ ನಾಡಿನಲ್ಲೇ ನಮ್ಮ ನುಡಿ ಸೊರಗುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಈಗ ಜಾರಿಗೆ ತಂದಿರುವ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕದ ಪ್ರಕಾರ ಎಲ್ಲ ಅಂಗಡಿ ಮುಂಗಟ್ಟುಗಳ ಮೇಲೂ ಶೇ.60ರಷ್ಟು ಕನ್ನಡದ ನಾಮಫಲಕ ಇರಬೇಕು. ಜಾಹೀರಾತು ಫಲಕಗಳು ಕೂಡ ಕನ್ನಡದಲ್ಲಿರಬೇಕು. ಇದನ್ನು ಎಲ್ಲ ಉದ್ಯಮಿಗಳು, ವ್ಯಾಪಾರಸ್ಥರು ಪಾಲಿಸಲು ಜಿಲ್ಲಾಡಳಿತ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು.

ಈ ನೆಲದ ಕಾಯ್ದೆ ಕಾನೂನು ಪಾಲಿಸದವರು ಕರ್ನಾಟಕದಲ್ಲಿ ಇರಲು ಯೋಗ್ಯರಲ್ಲ. ಕಾನೂನು ಪಾಲಿಸುವ ಮನಸು ಇಲ್ಲದಿದ್ದರೆ ತಮ್ಮ ತಮ್ಮ ರಾಜ್ಯಗಳಿಗೆ ವಾಪಸ್ ತೆರಳಲಿ. ಕನ್ನಡಿಗರು ಯಾರ ಅಡಿಯಾಳುಗಳಲ್ಲ, ನಮ್ಮ ನೆಲದಲ್ಲಿ ನಾವು ಸಾರ್ವಭೌಮರು. ಇದನ್ನು ಎಲ್ಲರಿಗೂ ನೆನಪಿಸುವ ಕಾಲವಿದು. ಕನ್ನಡದಲ್ಲಿ ಗ್ರಾಹಕ ಸೇವೆ ಪಡೆಯುವುದು ಕನ್ನಡಿಗನ ಹಕ್ಕು. ಯಾರಾದರೂ ನಿರಾಕರಿಸಿದರೆ ಅದನ್ನು ಸಹಿಸಿಕೊಂಡಿರಲು ಸಾಧ್ಯವಿಲ್ಲ ಎಂದು ಕಿಡಿಕಾರಿದರು.

ನಾವು ಯಾವ ಭಾಷೆಯ ವಿರೋಧಿಗಳಲ್ಲ. ಆದರೆ ಪದೇ ಪದೇ ಕನ್ನಡಕ್ಕೆ, ಕನ್ನಡಿಗರಿಗೆ ಅಪಮಾನ ಆಗುವುದನ್ನು ಸಹಿಸುವುದಿಲ್ಲ, ಕನ್ನಡದಲ್ಲಿ ನಾಮಫಲಕ ಹಾಕದವರು ಕನ್ನಡದ್ರೋಹಿಗಳು, ನಾಡದ್ರೋಹಿಗಳು. ಅಂಥವರ ವಿರುದ್ಧ ನಮ್ಮ ಹೋರಾಟವೇ ಹೊರತು, ಯಾವುದೇ ಭಾಷೆಯ, ಭಾಷಿಕರ ವಿರುದ್ಧವಲ್ಲ, ಉದ್ಯಮಿಗಳು, ವ್ಯಾಪಾರಸ್ಥರು ಸರ್ಕಾರದ ನಿಯಮಾವಳಿ ಪ್ರಕಾರ ನಾಮಫಲಕಗಳನ್ನು ಬದಲಿಸುವ ಮೂಲಕ ಕನ್ನಡೀಕರಿಸಬೇಕು, ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯ ನಂತರ ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ಶಂಕರ್ ವಾಣಿಕ್ಯಾಳ್ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ವೇದಿಕೆಯ ಪದಾಧಿಕಾರಿಗಳಾದ ಡಿ.ಕೆ ಹಳ್ಳಿ ಮುನಿರಾಜು, ವಡಗೂರು ಶಂಕರ್ ರೆಡ್ಡಿ, ಮಂಜುನಾಥ, ಮದಿರಪ್ಪ, ವಿವಿಧ ತಾಲೂಕು ಅಧ್ಯಕ್ಷರಾದ ಮಾಲೂರು ಶ್ರೀನಿವಾಸ, ಬಂಗಾರ ಪೇಟೆ ರಾಮ್ ಪ್ರಸಾದ್, ಮುಳಬಾಗಿಲು ಹುಸೇನ್, ಲೋಕೇಶ್, ಮಂಜುನಾಥ್‌ಗೌಡ, ಭಾಗ್ಯಲಕ್ಷ್ಮಿ, ನಿರ್ಮಲಾ, ಚೌಡೇಗೌಡ, ಗಣೇಶ, ಆಂಜಿ, ಮಾಲೂರು ಸಂತೋಷ್, ಮುರಳಿಧರ ಪಾಲ್ಗೊಂಡಿದ್ದರು.

## ಅಡುಗೆ ಸಿಬ್ಬಂದಿಯ ನೇಮಕಾತಿಗೆ ಅರ್ಜಿ ಆಹ್ವಾನ

**ಕೋಲಾರ:** ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲೆ ವಿಭಾಗ) ಮಾಲೂರು ಶಾಲೆಯಲ್ಲಿ ಅಕ್ಷರ ದಾಸೋಹ ಯೋಜನೆಯಡಿ ಅಡುಗೆ ಸಹಾಯಕರಾಗಿ ಕಾರ್ಯನಿರ್ವಹಿಸಲು ಆಸಕ್ತಿಯುಳ್ಳ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಮಾರ್ಚ್ 13 ರೊಳಗೆ ಮುಖ್ಯಾಧಿಕಾರಿ, ಪುರಸಭೆ ಮಾಲೂರು ಅಥವಾ ಉಪ ಪ್ರಾಂಶುಪಾಲರು ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲೆ ವಿಭಾಗ) ಮಾಲೂರು ಇವರಿಗೆ ಸಲ್ಲಿಸಬಹುದು. ವಯೋಮಿತಿ 30 ವರ್ಷದಿಂದ 40 ವರ್ಷ ವಯಸ್ಸಿನೊಳಗಿನ ಮಹಿಳೆಯರಾಗಿರಬೇಕು. ಅರ್ಜಿ ಸಲ್ಲಿಸಲು ಮಹಿಳೆಯರು ಮಾಲೂರು ಪುರಸಭಾ ವ್ಯಾಪ್ತಿಯಲ್ಲಿ ವಾಸವಿರಬೇಕು. ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಪಡಿತರ ಚೀಟಿ, ಆಧಾರ್‌ಕಾರ್ಡ್, ಮತದಾರರ ಗುರುತಿನ ಚೀಟಿ, ಬ್ಯಾಂಕ್ ಪಾಸ್ ಪುಸ್ತಕದ ನಕಲು ಪ್ರತಿಗಳು ಹಾಗೂ 2 ಫೋಟೋಗಳನ್ನು ಸಲ್ಲಿಸುವುದು. ಆಯ್ಕೆಯಾದ ಸಿಬ್ಬಂದಿಯು ಕರ್ತವ್ಯಕ್ಕೆ ಹಾಜರಾಗುವ ಮುನ್ನಾ ರೂ.100/- ಛಾಪಾ ಕಾಗದದಲ್ಲಿ ಅನುಬಂಧ-ಈ ನಲ್ಲಿ ಸೂಚಿಸಿರುವ ಷರತ್ತುಗಳಿಗೆ ಒಪ್ಪಿರುತ್ತೇನೆಂದು ಮುಚ್ಚಳಿಕೆ ನೀಡಬೇಕು. ಅಡುಗೆ ಸಿಬ್ಬಂದಿಯ ಆಯ್ಕೆಯು ತಾತ್ಕಾಲಿಕವಾಗಿರುತ್ತದೆ. ಮುಖ್ಯ ಅಡುಗೆ ಸಿಬ್ಬಂದಿಯ ಮಾಸಿಕ ಗೌರವ ಧನ ರೂ.3600/- ಆಗಿರುತ್ತದೆ. ವಿಧವೆಯರು, ನೊಂದ ಮಹಿಳೆಯರಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಹಾಗೂ ಅಲ್ಪಸಂಖ್ಯಾತರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದೆಂದು ಮಾಲೂರು ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಂಬೂರಿ ಜವರಯ್ಯ ಸ್ಮರಣಾರ್ಥ ವಿಚಾರ ಸಂಕಿರಣ

**ಮಂಡ್ಯ:** ಕರ್ನಾಟಕ ಜಾನಪದ ಅಕಾಡೆಮಿ, ಕ್ಷೀರಸಾಗರ ಮಿತ್ರಕೂಟ, ಕನ್ನಡ ಮತ್ತು ಇತಿಹಾಸ ವಿಭಾಗ, ಮಂಡ್ಯ ಮಹಿಳಾ ಸರ್ಕಾರಿ ಕಾಲೇಜು(ಸ್ವಾಯತ್ತ) ಹಾಗೂ ಮಂಡ್ಯ ಕರ್ನಾಟಕ ಜಾನಪದ ಪರಿಷತ್ತು, ಕರ್ನಾಟಕ ಲೇಖಕಿಯರ ಸಂಘ, ಮಂಡ್ಯ ಜಿಲ್ಲಾಘಟಕ ಇವರ ಸಹಯೋಗದಲ್ಲಿ ತಂಬೂರಿ ಜವರಯ್ಯ ಸ್ಮರಣಾರ್ಥ ತತ್ವಪದ ಗಾಯನ – ವಿಚಾರ ಸಂಕಿರಣ –ಸಂವಾದ ಕಾರ್ಯಕ್ರಮವನ್ನು ಮಾರ್ಚ್ 07 ರಂದು ಬೆಳಿಗ್ಗೆ 10.30 ಗಂಟೆಗೆ ಮಹಿಳಾ ಸರ್ಕಾರಿ ಕಾಲೇಜಿನ ಎ.ವಿ.ಆರ್. ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಮಂಡ್ಯ ಶಾಸಕರಾದ ಪಿ. ರವಿಕುಮಾರ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಸರ್ಕಾರಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಹೇಮಲತಾ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಡಾ. ಮೀರಾ ಶಿವಲಿಂಗಯ್ಯ ಅವರು ಆಶಯ ನುಡಿಯನ್ನು ಆಡಲಿದ್ದಾರೆ. ಮಂಡ್ಯ ಮ.ಸ.ಕಾ. ಇತಿಹಾಸ ವಿಭಾಗದ ಮುಖ್ಯಸ್ಥರು ಡಾ. ಹೆಚ್. ಕೃಷ್ಣೇಗೌಡ, ಕನ್ನಡ ವಿಭಾಗದ ಮುಖ್ಯಸ್ಥರು ಡಾ. ಕೆ. ಚಂದ್ರಕಾಂತ್, ಕನ್ನಡ ಮತ್ತ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಎನ್. ಉದಯಕುಮಾರ್ ಅವರು ಉಪಸ್ಥಿತಿಯನ್ನು ವಹಿಸಲಿದ್ದಾರೆ. ಮದ್ಯಾಹ್ನ 12 ರಿಂದ 2.30 ರವರೆಗೆ ಪ್ರಗತಿಪರ ಚಿಂತಕರು ಹಾಗೂ ಹಿರಿಯ ಪತ್ರಕರ್ತರಾದ ಡಾ. ಎನ್. ಜಗದೀಶ್ ಕೊಪ್ಪ ಅವರು ವಿಚಾರ ಸಂಕಿರಣಕ್ಕೆ ಚಾಲನೆ ನೀಡಲಿದ್ದು, ಮಂಡ್ಯ ಜಾನಪದ ವಿದ್ವಾಂಸರಾದ ಪ್ರೊ. ವ.ನಂ. ಶಿವರಾಮು ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಡಾ. ಜಿ. ಆನಂದಮೂರ್ತಿ ತುಮಕೂರು ಹಾಗೂ ಮೈಸೂರು ಮಹರಾಜ ತಾಂತ್ರಿಕ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಜಿ. ಉಷಾರಾನಿ ಅವರು ತಂಬೂರಿ ಜವರಯ್ಯರ ತತ್ವಪದಗಳ ವಿಷಯ ಮಂಡನೆ ಮಾಡಲಿದ್ದಾರೆ.

## ಕಾನೂನು ಅರಿವು ಅಗತ್ಯ: ನ್ಯಾ. ಅನಿತಾ ಎನ್.ಪಿ

**ರಾಮನಗರ:** ಆಧುನಿಕ ಜಗತ್ತಿನಲ್ಲಿ ಕಾನೂನು ಉಲ್ಲಂಘನೆ ಪ್ರಕರಣಗಳು ಹೆಚ್ಚುತ್ತಿದ್ದು, ಇದು ಸಮಾಜದ ಮೇಲೆ ವಿವಿಧ ರೀತಿಯ ದುಷ್ಪರಿಣಾಮಗಳನ್ನು ಬೀರುತ್ತಿದೆ, ಅದನ್ನು ತಡೆಗಟ್ಟಲು ಕಾನೂನಿನ ಅರಿವು ಅಗತ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ಅನಿತಾ ಎನ್.ಪಿ ಅವರು ತಿಳಿಸಿದರು. ಅವರು ನಗರದ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜು ಹಾಗೂ ಎನ್.ಎಸ್.ಎಸ್ ಸಂಯೋಜನಾಧಿಕಾರಿಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎಚ್. ಚನ್ನೇಗೌಡ ಮಾತನಾಡಿ, ದೇಶದ ಕಾನೂನು ಉಲ್ಲಂಘನೆಯಿಂದ ಆಗಬಹುದಾದ ಪರಿಣಾಮಗಳು ಮತ್ತು ಗ್ರಾಹಕ ಸಂರಕ್ಷಣಾ ಕಾಯ್ದೆ 2019ರ ಕಾನೂನು ನಿಯಮದ ಹಕ್ಕುಗಳು ಮತ್ತು ಗ್ರಾಹಕರಿಗೆ ವ್ಯಾಪಾರದಲ್ಲಿ ತೊಂದರೆಯಾದಲ್ಲಿ ಸಂಬಂಧಪಟ್ಟ ಪರಿಹಾರಗಳನ್ನು ಗ್ರಾಹಕ ನ್ಯಾಯಾಲಯದ ಮೂಲಕ ಪಡೆಯಬಹುದೆಂದು ತಿಳಿಸಿದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ರೇಣುಕಾದೇವಿ ದೇಶಪಾಂಡೆ ಮಾತನಾಡಿದರು. ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರಾದ ವತ್ಸಲ ಎಸ್.ವಿ., ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## 16ರಂದು ಲೋಕ ಅದಾಲತ್

**ರಾಮನಗರ:** ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಇದೇ ಮಾ. 9ರಂದು ನಡೆಯಬೇಕಿದ್ದ ಮೊದಲನೇ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಅನಿವಾರ್ಯ ಕಾರಣಗಳಿಂದ ಅದರ ಬದಲಿಗೆ ಮಾ. 16ಕ್ಕೆ ಮರು ನಿಗದಿಪಡಿಸಲಾಗಿರುತ್ತದೆ. ಆದ್ದರಿಂದ ರಾಮನಗರ ಜಿಲ್ಲೆಯಾದ್ಯಂತ ಏಕಕಾಲದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಮಾ. 16ರಂದು ನಡೆಸಲಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನ್ಯಾ. ಅನಿತ ಎನ್.ಪಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯದರ್ಶನ ಮೇಳ

**ಚಾಮರಾಜನಗರ:** 88ನೇ ತ್ರಿಮೂರ್ತಿ ಶಿವ ಜಯಂತಿ ಮಹೋತ್ಸವ ಹಾಗೂ ವಿಶ್ವ ಪ್ರಸಿದ್ಧ ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ ಮೇಳ ಉದ್ಘಾಟನಾ ಸಮಾರಂಭ ಮಾ 6 ರಂದು ಸಂಜೆ 4ಕ್ಕೆ ಪ್ರಮುಖ ಬೀದಿಗಳಲ್ಲಿ ಜಿಲ್ಲೆಯ ರಾಜಯೋಗ ವಿದ್ಯಾರ್ಥಿಗಳಿಂದ ಶಾಂತಿ ಶೋಭಾ ಯಾತ್ರೆ, 5.30 ಕ್ಕೆ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ನಡೆಯಲಿದೆ ಎಂದು ಸ್ವಾಮಿ ವಿವೇಕಾನಂದ ರಾಷ್ಟ್ರ ರಾಜ್ಯ ಸದ್ಭಾನಾ ಪ್ರಶಸ್ತಿ ಪುರಸ್ಕ?ತೆ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ತಿಳಿಸಿದರು.



ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ 88ನೇ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ ಹಾಗೂ ಜ್ಯೋತಿರ್ಲಿಂಗಗಳ ಪುಣ್ಯದರ್ಶನ ಮೇಳ ಉದ್ಘಾಟನಾ ಸಮಾರಂಭವನ್ನು ಹ'ವಿ್ಮಕ'ೊಳ'ಲಾಗಿದ'್ದ, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮ?ಸೂರು ಉಪವಲಯದ ಬ್ರಹ್ಮಾಕುಮಾರಿಸ್ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ಅವರು ವಹಿಸಲಿದ್ದಾರೆಂದರು. ಕಾರ್ಯಕ್ರಮದ ಉದ್ಘಾಟನೆಯನ್ನು ಹರವೆ ವಿರಕ್ತ ಮಠದ ಸರ್ಪಭೂಷಣ ಸ್ವಾಮೀಜೀ ನೆರವೇರಿಸಲಿದ್ದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಅಧ್ಯಕ್ಷತೆ ವಹಿಸಲಿದ್ದಾರೆ. ಬಿಳಿಗಿರಿರಂಗನ ಬೆಟ್ಟದ ವಿಶ್ವಶಾಂತಿನಿಕೇತನ ಆಶ್ರಮದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು.

ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶರಾದ ಶ್ರೀಧರ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ್, ತಹಸಿಲ್ದಾರ್ ಐ. ಈ. ಬಸವರಾಜು, ಮಾಜಿ ಶಾಸಕರಾದ ಪರಿಮಳ ನಾಗಪ್ಪ, ಬಾಲರಾಜು, ಭಾಗವಹಿಸಲಿದ್ದಾರೆ. ಕೊಳ್ಳೆಗಾಲ ಬ್ರಹ್ಮಾಕುಮಾರಿಸ್ ಜಿಲ್ಲಾ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಪ್ರಭಾಮಣೀಜೀ ಶಿವ ಜಯಂತಿಯ ಸಂದೇಶ ನೀಡಲಿದ್ದಾರೆ. ಮೇಳದಲ್ಲಿ ವಿಶೇಷವಾಗಿ ಹಾಲೋಗ್ರಾಂ ಲಿಂಗದ ಪ್ರದರ್ಶನವಿರುತ್ತದೆ. ಪ್ರತಿ ನಿತ್ಯ ಬೆಳಗ್ಗೆ ಮತ್ತು ಸಂಜೆ 6.30 ರಿಂದ 8 ರವರೆಗೆ ಸಾರ್ವಜನಿಕರಿಗೆ ಸುಖ ಶಾಂತಿ ಆರೋಗ್ಯಕ್ಕಾಗಿ ಉಚಿತ ಪ್ರವಚನ ನಡೆಯಲಿದೆ ಎಂದು ತಿಳಿಸಿದರು ಗೋಷ್ಠಿಯಲ್ಲಿ ಓಂ ಶಾಂತಿ ನ್ಯೂಸ್ ಸರ್ವಿಸ್ನ ಬಿ. ಕೆ. ಆರಾಧ್ಯ ಹಾಜರಿದ್ದರು.

# ಬರನಿರ್ವಹಣೆ ಮಾಡಲು ಸೂಚನೆ

## ಜಿಲ್ಲಾಧಿಕಾರಿಗಳ ಜತೆ ಸಿಎಂ ವಿಡಿಯೋ ಸಂವಾದ

**ಕೋಲಾರ:** ಹಿಂಗಾರು ಹಾಗೂ ಮುಂಗಾರು ಮಳೆ ಕೊರತೆಯಾಗಿ ಈಗ ಬರಗಾಲ ಪರಿಸ್ಥಿತಿ ಉದ್ಭವಿಸಿದೆ. ಜೂನ್ ಅಂತ್ಯದವರೆಗೆ ಬರ ನಿರ್ವಹಣೆಗೆ ಸೂಕ್ತ ಯೋಜನೆ ರೂಪಿಸಬೇಕು. ಕುಡಿಯುವ ನೀರು ಕೊರತೆ, ಬೆಳೆಹಾನಿ, ಮೇವು ಕೊರತೆ ಸೇರಿದಂತೆ ಇದುವರೆಗೆ ಆಗಿರುವ ಸಮಸ್ಯೆಗಳು ಮತ್ತು ಮುಂದೆ ಉದ್ಭವಿಸಬಹುದಾದ ಸಮಸ್ಯೆಗಳ ನಿವಾರಣೆಗೆ ಈಗಾಗಲೇ ಸಿದ್ಧತೆ ಮಾಡಿಕೊಳ್ಳಬೇಕು. ಕುಡಿಯುವ ನೀರು, ಬರ ನಿರ್ವಹಣೆ, ಕೃಷಿ, ಮೇವು ಹಾಗೂ ಉದ್ಯೋಗಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ಇಂದು ನಡೆದ ವಿಡಿಯೋ ಸಂವಾದದಲ್ಲಿ ಅವರು ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತನಾಡಿದರು.



ಬರಗಾಲದಿಂದ 48 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದೆ. ಮಾರ್ಚ್, ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಪರಿಸ್ಥಿತಿ ಗಂಭೀರವಾಗಲಿದೆ.ಪೂರ್ವ ಮುಂಗಾರು ಮಳೆ ಕೆಲವೆಡೆ ನಿರೀಕ್ಷಿಸಲಾಗಿದೆ. ಆದಾಗ್ಯೂ ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಸಿಇಓ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಯೋಜನೆ ರೂಪಿಸಬೇಕು.

ಮಾಧ್ಯಮಗಳಲ್ಲಿ ಪ್ರಕಟವಾಗುವ ಜನರ ಸಮಸ್ಯೆಗಳ ಕುರಿತ ವರದಿಗಳನ್ನು ಪರಿಶೀಲಿಸಿ, ಅವುಗಳಿಗೆ ತಕ್ಷಣವೇ ಸ್ಪಂದಿಸಬೇಕು. ಕುಡಿಯುವ ನೀರಿನ ತೊಂದರೆಯಾಗಬಾರದು. ಟ್ಯಾಂಕರ್, ಖಾಸಗಿ ಕೊಳವೆಬಾವಿ ಸೇರಿದಂತೆ ಯಾವುದೇ ಜಲಮೂಲಗಳಿಂದ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ನೀರು ಪೂರೈಕೆಗೆ ಅಗತ್ಯವಿರುವ ಅನುದಾನವನ್ನು ರಾಜ್ಯ ಸರ್ಕಾರ ಒದಗಿಸಲಿದೆ. ಬರಗಾಲ ಸಂದರ್ಭದಲ್ಲಿ ನರೇಗಾ ಉದ್ಯೋಗ ದಿನಗಳನ್ನು 100 ರಿಂದ 150 ದಿನಗಳಿಗೆ ಹೆಚ್ಚಿಸಬೇಕು ಎಂದು ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.

ನರೇಗಾ ಉದ್ಯೋಗ ದಿನಗಳನ್ನು ಹೆಚ್ಚಿಸುವುದರಿಂದ ಜನರು ಗುಳೆ ಹೋಗುವುದನ್ನು ತಪ್ಪಿಸಬಹುದು ಎಂದು ಮುಖ್ಯಮಂತ್ರಿಗಳು ಹೇಳಿದರು.

ಕುಡಿಯುವ ನೀರು ಸಮಸ್ಯೆ ಕಂಡುಬಂದಾಗ ಅಧಿಕಾರಿಗಳು ತಕ್ಷಣವೇ ಸ್ಪಂದಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು. ಜನರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಲು ಅನುಕೂಲವಾಗುವಂತೆ ತಾಲ್ಲೂಕು ಮಟ್ಟದಲ್ಲಿ ಕಂಟ್ರೋಲ್ ರೂಮ್ ಆರಂಭಿಸಬೇಕು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ರಜೆ ಮೇಲೆ ತೆರಳದೇ ಜನರ ಸಮಸ್ಯೆ ನಿವಾರಣೆಗೆ ಶ್ರಮಿಸಬೇಕು. ತಾಲ್ಲೂಕುಮಟ್ಟದ ಟಾಸ್ಕ್ ಫೋರ್ಸ್ ಗಳು ಸಮಿತಿಗಳು ನಿಯಮಿತವಾಗಿ ಸಭೆ ನಡೆಸುವ ಮೂಲಕ ಮುಂಜಾಗ್ರತಾ ಕ್ರಮಗಳ ಬಗ್ಗೆ ನಿರ್ಧರಿಸಬೇಕು ಎಂದು ಹೇಳಿದರು.

ಮೇವಿನಕಿಟ್ ಗಳನ್ನು ರೈತರಿಗೆನೀಡಲಾಗಿದೆ. ರೈತರು ಬೆಳೆದ ಮೇವು ಶೇಖರಣೆಗೆ ಕ್ರಮ ವಹಿಸಬೇಕಲ್ಲದೇ ಅಂತರ್ ಜಿಲ್ಲಾ ಮೇವು ಸಾಗಾಣಿಕೆ ಮೇಲೆ ನಿಗಾ ವಹಿಸಬೇಕು. ಬರ ನಿರ್ವಹಣೆಗೆ ಸರಕಾರ ಅನೇಕ ಕ್ರಮಗಳನ್ನು ಈಗಾಗಲೇ ತೆಗೆದುಕೊಂಡಿದೆ. ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನು?ನದಿಂದ ಈ ಬಾರಿ ಬರಗಾಲದ ತೀವ್ರತೆಯಲ್ಲಿಯೂ ಜನರಿಗೆ ಅನುಕೂಲವಾಗಿದೆ. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ 855 ಕೋಟಿ ರೂಪಾಯಿ ಅನುದಾನವಿದೆ. ಹೆಚ್ಚುವರಿಯಾಗಿ ಪ್ರತಿ ಜಿಲ್ಲೆಗೆ ಎರಡು ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದರು.

ವಿದ್ಯುಚ್ಛಕ್ತಿ ತೊಂದರೆಯಾಗಬಾರದು.ಹೊಸ ಕೊಳವೆಬಾವಿಗಳಿಗೆ ಯಾವುದೇ ನೆಪ ಹೇಳದೇ ಕೂಡಲೇ ವಿದ್ಯುತ್ ಸಂಪರ್ಕ ಒದಗಿಸಬೇಕು ಎಂದು ಕೆಪಿಟಿಸಿಎಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಗತ್ಯ ಕಂಡುಬಂದರೆ ಖಾಸಗಿ ಕೊಳವೆಬಾವಿಗಳು ಹಾಗೂ ಟ್ಯಾಂಕರ್ ಗಳ ಮಾಲೀಕರ ಜತೆ ಮುಂಚಿವಾಗಿಯೇ ಒಪ್ಪಂದ ಮಾಡಿಕೊಳ್ಳಬೇಕು. ಹೀಗೆ ಮಾಡುವ ಮೂಲಕ ಜೂನ್ ಅಂತ್ಯದವರೆಗೆ ನೀರು ಕೊರತೆಯಾಗದಂತೆ ಎಚ್ಚರಿಕೆ ವಹಿಸಬಹುದು. ಇದರಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಚುನಾವಣಾ ನೀತಿಸಂಹಿತೆ ಜಾರಿಯಾಗಲಿರುವುದರಿಂದ ಚುನಾವಣಾ ಕೆಲಸದ ಜತೆಗೆ ಬರ ನಿರ್ವಹಣೆಯನ್ನು ನಿರ್ಲಕ್ಷಿಸಬಾರದು. ಬರನಿರ್ವಹಣೆಗೆ ನೀತಿಸಂಹಿತೆಯು ಅಡ್ಡಿಯಾಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸಿಎಂ ವಿಡಿಯೋ ಕಾನ್ಫರೆನ್ಸ್ ಬಳಿಕ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ ಅಕ್ರಂ ಪಾ?ಾ ಅವರು, ಬರ ನಿರ್ವಹಣೆಗೆ ಸಾಕ?ು ಅನುದಾನ ಲಭ್ಯವಿದೆ. ಬೇಸಿಗೆ ಹಿನ್ನೆಲೆಯಲ್ಲಿ ಅಂತರ್ಜಲ ಮಟ್ಟ ಕಾಯ್ದುಕೊಳ್ಳುವ ಅಗತ್ಯವಿರುವುದರಿಂದ ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಕೊಳವೆಬಾವಿಗಳನ್ನು ಕೊರೆಯಲು ಅನುಮತಿ ನೀಡಬೇಕು ಎಂದು ತಿಳಿಸಿದರು.

ಚುನಾವಣೆ ಘೋಷಣೆಯಾದರೂ ಬರ ನಿರ್ವಹಣಾ ಕಾರ್ಯಕ್ಕೆ ತೊಂದರೆ ಇಲ್ಲ. ಸಾಕ?ು ಹಣಕಾಸು ಲಭ್ಯವಿರುವುದರಿಂದ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಕೊರತೆಯಾಗದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಕುಡಿಯುವ ನೀರಿನ ಉದ್ದೇಶಕ್ಕೆ ಕೊರೆಯಲಾಗುವ ಹೊಸ ಕೊಳವೆಬಾವಿಗಳಿಗೆ ತಕ್ಷಣವೇ ವಿದ್ಯುತ್ ಸಂಪರ್ಕ ಒದಗಿಸಬೇಕು. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಪರ ಪದ್ಮಾಬಸವಂತಪ್ಪ, ಕೃಷಿ ಜಂಟಿ ನಿರ್ದೇಶಕಿ ಸುಮಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಶೇಷಾದ್ರಿಪುರಂ ರಾಯರ ಮಠದಲ್ಲಿ ಗುರುಗಳ ಪಟ್ಟಾಭಿಷೇಕ ಮಹೋತ್ಸವ

**ಬೆಂಗಳೂರು :** ಶೇಷಾದ್ರಿಪುರದ ಪ್ಲಾಟ್ ಫಾರಂ ರಸ್ತೆಯಲ್ಲಿರುವ (ಮಂತ್ರಿ ಮಾಲ್ ಮೆಟ್ರೋ ರೈಲ್ವೆ ನಿಲ್ದಾಣದ ಎದುರು) ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಮಾರ್ಚ್ 11 ರಿಂದ 16ರ ವರೆಗೆ ಶ್ರೀ ರಾಘವೇಂದ್ರ ಗುರುಸಾರ್ವಭೌಮರ ಪಟ್ಟಾಭಿಷೇಕ ಮತ್ತು ವರ್ಧಂತ್ಯೋತ್ಸವ ಸಮಾರಂಭವನ್ನು ಆಯೋಜಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ : ಶ್ರೀಮದ್ಭಾಗವತ ಪ್ರವಚನ : ಮಾರ್ಚ್ 11 ರಿಂದ 16 ಪ್ರತಿದಿನ ಸಂಜೆ 6-00 ಗಂಟೆಗೆ ಮ॥ಶಾ॥ಸಂ॥ ಶ್ರೀ ಉಡುಪಿ ಕೃಷ್ಣಾಚಾರ್ಯರಿಂದ ಶ್ರೀಮದ್ಭಾಗವತ ಪ್ರವಚನ. ಭಜನಾಮೃತ : ಪ್ರತಿದಿನ ಸಂಜೆ 5-00 ರಿಂದ 6-00. ಮಾರ್ಚ್ 11 : ಶ್ರೀ ವಿಜಯ ವಿಠಲ ಭಜನಾ ಮಂಡಳಿ (ವಿದ್ಯಾರಣ್ಯಪುರ), ಮಾರ್ಚ್ 12 : ಅಂಭ್ರಣಿ ಭಜನಾ ಮಂಡಳಿ (ರಾಜಾಜಿನಗರ), ಮಾರ್ಚ್ 13 : ಅಲಕನಂದ ಭಜನಾ ಮಂಡಳಿ (ಬಸವೇಶ್ವರನಗರ), ಮಾರ್ಚ್ 14 : ರುಕ್ಮಿಣಿ ಮಹಿಳಾ ಸಂಘ (ರಾಜಾಜಿನಗರ), ಮಾರ್ಚ್ 15 : ಶ್ರೀ ವಿಜಯ ವಿಠಲ ಭಜನಾ ಮಂಡಳಿ (ಈಜುಕೊಳದ ಬಡಾವಣೆ). ಹರಿನಾಮ ಸಂಕೀರ್ತನೆ : ಮಾರ್ಚ್ 16, ಶನಿವಾರ ಸಂಜೆ 7-00ಕ್ಕೆ ಹರಿನಾಮ ಸಂಕೀರ್ತನೆ : ಗಾಯನ : ಶ್ರೀಮತಿ ಸುಷ್ಮಾ ಶ್ರೇಯಸ್, ಕೀ-ಬೋರ್ಡ್ : ಶ್ರೀ ಅಮಿತ್ ಶರ್ಮಾ, ತಬಲಾ : ಶ್ರೀ ಸರ್ವೋತ್ತಮ.

ಈ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಹಾಗೂ ಹರಿವಾಯುಗಳ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ಮಠದ ಪದಾಧಿಕಾರಿಗಳು ವಿನಂತಿಸಿದ್ದಾರೆ.

# ಭೂ ವಿಜ್ಞಾನ ಅಧಿಕಾರಿ ಎನ್.ಚೊಕ್ಕಾರೆಡ್ಡಿ ವಿರುದ್ಧ ಕ್ರಮಕ್ಕೆ ಆಗ್ರಹ

**ಕೋಲಾರ:** ಅಕ್ರಮ ಗಣಿಕಾರಿಕೆಗೆ ಕುಮ್ಮಕ್ಕು ನೀಡುತ್ತಿರುವ ಕೋಲಾರ ತಾಲ್ಲೂಕು ಭೂ ವಿಜ್ಞಾನ ಅಧಿಕಾರಿ ಎನ್. ಚೊಕ್ಕಾರೆಡ್ಡಿ ವಿರುದ್ದ ಸರ್ಕಾರ ತಕ್ಷಣ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಸಾಂಪ್ರದಾಯಿಕವಾಗಿ ಕಲ್ಲು ಗಣಿಗಾರಿಕೆ ನಡೆಸಲು ಬಿ.ಹನುಮಂತಪ್ಪ




ಬಿನ್ ಲೇಟ್ ಸಿ.ಎಮ್ ಬೈಯಣ್ಣ ನವರಿಗೆ ಪರವಾನಗಿಯನ್ನು ಮಂಜೂರು ಮಾಡುವಂತೆ ಕರ್ನಾಟಕ ಸಮತ ಸೈನಿಕ ದಳದ ಜಿಲ್ಲಾಧ್ಯಕ್ಷ ಎಸ್. ಸುಧಾಕರ್ ಒತ್ತಾಯಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಮಾಧ್ಯಮದವರೊಂದಿಗೆ ಅವರು ಮಾತನಾಡುತ್ತಾ, ಕೋಲಾರ ತಾಲ್ಲೂಕು ವೇಮಗಲ್ ಹೋಬಳಿ ತೋರಣಕಂಬದಹಳ್ಳಿ ಗ್ರಾಮದ ಸರ್ವೆ ನಂ 7 ರಲ್ಲಿ 3 ಎಕರೆ ಪ್ರದೇಶದಲ್ಲಿ ತಾಲ್ಲೂಕು ಭೂ ವಿಜ್ಞಾನ ಅಧಿಕಾರಿ ಎನ್.ಚೊಕ್ಕಾರೆಡ್ಡಿ ತಮ್ಮ ಸಂಭಂದಿ ಬೆಂಗಳೂರು ನಿವಾಸಿ ಹಾಗೂ ಬೆಂಗಳೂರು ವಿಶ್ವ ವಿದ್ಯಾಲಯದಲ್ಲಿ ದೈಹಿಕ ಶಿಕ್ಷಕರಾಗಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರ ಡಾ.ಮುನಿರೆಡ್ಡಿ ರವರಿಗೆ ಕಾನೂನು ಬಾಹಿರವಾಗಿ ಗಣಿ ಗುತ್ತಿಗೆ ನೀಡಿರುತ್ತಾರೆಂದು ಆರೋಪಿಸಿದರು.

ಕರ್ನಾಟಕ ಸಮತ ಸೈನಿಕ ದಳದ ಪ್ರಧಾನ ಕಾರ್ಯದರ್ಶಿ ಹಾಗೂ ಗಣಿಗಾರಿಕೆ ಅನುಮತಿ ಕೋರಿ ಅರ್ಜಿ ಸಲ್ಲಿಸಿರುವ ದಾನವಹಳ್ಳಿ ಗ್ರಾಮದ ಬಿ.ಹನುಮಂತಪ್ಪ ಮಾತನಾಡಿ ಸಾಂಪ್ರದಾಯಿಕವಾಗಿ ಕಲ್ಲು ಗಣಿಗಾರಿಕೆ ನಡೆಸುವವರ ಅರ್ಜಿಗಳನ್ನು ಪರಿಗಣಿಸದೆ ಅಕ್ರಮವಾಗಿ ಡಾ.ಮುನಿರೆಡ್ಡಿ ರವರಿಗೆ ಕಾನೂನು ಬಾಹಿರವಾಗಿ 1991 ರಿಂದ 1996 ರವರೆಗೆ 5 ವರ್ಷಗಳ ಕಾಲ ಗಣಿಗಾರಿಕೆ ನಡೆಸಲು ಗುತ್ತಿಗೆ ನೀಡಿದ್ದು,ಇದರ ಬಗ್ಗೆ ಇಲಾಖೆಯ ಗಮನಕ್ಕೆ ಲಿಖಿತ ದೂರು ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಖಂಡನೀಯ. ಡಾ.ಮುನಿರೆಡ್ಡಿ ರವರು ಕಾನೂನು ಬಾಹಿರವಾಗಿ ಸಬ್ ಲೀಸ್ ನೀಡಿದ್ದರೂ ಇದೇ ವ್ಯಕ್ತಿಗೆ ಎರಡನೇ ಬಾರಿ ಹಾಗೂ ಮೂರನೇ ಅವಧಿಗೆ ಗುತ್ತಿಗೆಯನ್ನು ನವೀಕರಣ ಮಾಡಿದ್ದು,ಈ ಪ್ರಕರಣದ ಬಗ್ಗೆ ನ್ಯಾಯಾಲಯದಲ್ಲಿ ದಾಖಲಾಗಿದ್ದರೂ,ಮಾಜಿ ಮುಖ್ಯ ಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಹಿಂದೆ ಗಣಿ ಸಚಿವರಾಗಿದ್ದ ಹಾಲಪ್ಪ ಆಚಾರ್ ರವರುಗಳ ಗುತ್ತಿಗೆ ತಡೆ ಅದೇಶ ಇದ್ದು,ಸದರಿ ಗಣಿ ಗುತ್ತಿಗೆ ಪಡೆದು 30 ವರ್ಷಗಳು ಪೂರ್ಣಗೊಂಡ ಕಾರಣ ಇಲಾಖೆಯ ನಿಯಮಾವಳಿಗಳ ಪ್ರಕಾರ ಮುನಿರೆಡ್ಡಿರವರಿಗೆ ನವೀಕರಣ ಮಾಡಲು ಬರುವುದಿಲ್ಲವೆಂದು ತಿಳಿಸಿದರು. ಆದರೂ ಗಣಿಗಾರಿಕೆಯ ಪಾಲು ಪಡೆಯುತ್ತಿರುವ ಕೋಲಾರ ತಾಲ್ಲೂಕು ಭೂ ವಿಜ್ಞಾನಿ ಎನ್. ಚೊಕ್ಕಾರೆಡ್ಡಿ ತಮಗೆ ಸಿಗುತ್ತಿದ್ದ ಹಣದ ಹೊಳೆ ತಪ್ಪಿಹೋಗುವ ಭಯದಿಂದ ಸತ್ಯಾಂಶಗಳನ್ನು ಮರೆಮಾಚಿ ಸಕ್ಷಮ ಪ್ರಾಧಿಕಾರವನ್ನು ದಾರಿ ತಪ್ಪುವಂತೆ ಮಾಡಿ ಮತ್ತೆ 10 ವರ್ಷಗಳ ಕಾಲ ಗಣಿ ನಡೆಸಲು ಮುನಿರೆಡ್ಡಿರವರಿಗೆ ಸಹಕರಿಸುತ್ತಿರುವ ಬೈಯಣ್ಣ ಮಾಲೀಕತ್ವದ ಮೆ. ಆಂಜನೇಯ ಸ್ಟೋನ್ ಕ್ರಷರ್‌ಗೆ ಸಬ್ ಲೀಸ್ ನೀಡಿರುವ ಗುತ್ತಿಗೆಯನ್ನು ರದ್ದುಪಡಿಸಬೇಕೆಂದು ಒತ್ತಾಯಿಸಿದರು.

ಪ್ರಸ್ತುತ ಗುತ್ತಿಗೆ ನೀಡಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಬೇಕು, ಸದರಿ ಜಮೀನಿನಲ್ಲಿ ಸಾಂಪ್ರದಾಯಿಕವಾಗಿ ಗಣಿಗಾರಿಕೆ ನಡೆಸಲು ಅರ್ಹರಿಗೆ ಗುತ್ತಿಗೆ ನೀಡಬೇಕು ಎಂದು ಅಗ್ರಹಿಸದರಲ್ಲದೆ ನ್ಯಾಯ ದೊರೆಯದಿದ್ದರೆ ಇಲಾಖೆ ಮುಂದೆ ಹೋರಾಟ ಹಮ್ಮಿಕೊಳ್ಳುವ ಎಚ್ಚರಿಕೆ ನೀಡಿದರು.

ಕರ್ನಾಟಕ ಸಮತ ಸೈನಿಕ ದಳದ ಕಾರ್ಯಾಧ್ಯಕ್ಷ ಕೆ.ವೇಣು, ಸಂಘಟನಾ ಕಾರ್ಯದರ್ಶಿ ವೆಂಕಟೇಶ್, ಕೋಲಾರ ತಾಲ್ಲೂಕು ಅಧ್ಯಕ್ಷ ಚಿನ್ನಾ, ಕಾರ್ಮಿಕ ಘಟಕದ ಅಯ್ಯಪ್ಪ, ಮುಖಂಡ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

# ಸರ್ಕಾರಗಳ ನಿರ್ಲಕ್ಷ್ಯದಿಂದ ಕಾವೇರಿ ಸಮಸ್ಯೆಗೆ ಮುಕ್ತಿಯೇ ಸಿಕ್ಕಿಲ್ಲ

**ಚನ್ನಪಟ್ಟಣ:** 75 ವರ್ಷದಿಂದ ನಮ್ಮನ್ನು ಆಳಿದ ಸರ್ಕಾರಗಳು ತಮಿಳುನಾಡಿಗೆ ತಲೆ ಬಾಗಿ ನೀರು ಬಿಟ್ಟಿದ್ದರಿಂದ ಹಾಗೂ ನಮ್ಮ ಹಕ್ಕನ್ನು ಉಳಿಸಿಕೊಳ್ಳುವಲ್ಲಿ ವಕೀಲರು ಸಮರ್ಪಕವಾಗಿ ವಾಸ ಮಾಡದ ಕಾರಣದಿಂದ ಇಂದು ಕಾವೇರಿ ನೀರಿಗೆ ಹಾಹಾಕಾರ ಎದುರಾಗಿದೆ ಎಂದು ಕಸ್ತೂರಿ ಕರ್ನಾಟಕ ಜನಪ್ರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಮಂಗಳವಾರ ನಡೆದ 153 ನೇ ದಿನದ ಹೋರಾಟದಲ್ಲಿ ಮಾತನಾಡಿದ ಅವರು ಕೆಆರ್‌ಎಸ್ ಜಲಾಶಯದಲ್ಲಿ ನೀರು ಖಾಲಿಯಾಗುತ್ತಿದ್ದು ಬೆಂಗಳೂರಿನಲ್ಲಿ ಜನರು 2500 ರೂ. ನೀಡಿ ಮಿನಿ ಟ್ಯಾಂಕರ್‌ನಲ್ಲಿ ನೀರು ಪಡೆಯುಂತಾಗಿದ್ದು ಈಗ ಜನರಿಗೆ ನೀರಿನ ಸಮಸ್ಯೆಯ ಬಿಸಿ ತಟ್ಟುತ್ತಿದೆ. ಶ್ರೀಮಂತರು ಕಾವೇರಿ ನೀರನ್ನೂ ಸಹ ಕೊಳ್ಳಹೊಡೆದು ಕಾವೇರಿ ನೀರಿನಲ್ಲಿ ಕಾರು ತೊಳೆಯುತ್ತಿದ್ದರು. ಕೆರೆಕಟ್ಟೆಗಳನ್ನು ಕೊಳ್ಳೆಹೊಡೆದು ಮನೆ ಕಟ್ಟಿದರು ಈ ಎಲ್ಲವೂ ನೀರಿನ ಹಾಹಾಕಾರಕ್ಕೆ ಕಾರಣವಾಗಿದ್ದು ಇದರಿಂದ ಇಂದು ಎಳೆನೀರು, ಕಬ್ಬು, ಹೈನುಗಾರಿಕೆಯಲ್ಲಿ ಇಳುವರಿಯಾಗುತ್ತಿದ್ದು, ಕಾರ್ಖಾನೆಗಳು, ಸಣ್ಣ ಉದ್ಯಮಗಳು ಸಮಸ್ಯೆಗೆ ಸಿಲುಕಿವೆ. ಅಲ್ಲದೆ ಸಾವಿರಾರು ಅಡಿಗೆ ಇಳಿಡಿರುವ ಕೊಳವೆಬಾವಿಯಿಂದ ಫ್ಲೋರೈಡ್ ನೀರನ್ನು ಕುಡಿದು ಜನರು ಅನಾರೋಗ್ಯಕ್ಕೆ ಒಳಗಾಗುತ್ತಿದ್ದು, ಜೊತೆಗೆ ಜಲಚರ ಜೀವ ಸಂಕುಲ ನಾಶವಾಗುತ್ತಿದೆ. ಈ ಎಲ್ಲವನ್ನು ಗಮನಿಸಬೇಕಾದ ಸರ್ಕಾರದ ಜನಪ್ರತಿನಿಧಿಗಳು ತಮ್ಮ ಕುಟುಂಬಕ್ಕೆ



ಆಸ್ತಿ ಮಾಡಲು ಅಧಿಕಾರ ಹಿಡಿಯಲು ಹೋರಾಟ ಮಾಡುತ್ತಿದ್ದಾರೆ ಹೊರತು. ಕಾವೇರಿ ನೀರಿನ ಸಮಸ್ಯೆ ಬಗ್ಗೆ ಮೇಕೆದಾಟು ಯೋಜನೆ ಅನಿಷ್ಠಾನಕ್ಕೆ ತರುವ ಬಗ್ಗೆ, ಸುಪ್ರಿಂ ಕೋರ್ಟ್ ತೀರ್ಪಿನ ಬಗ್ಗೆ ಪ್ರಾಧಿಕಾರದ ತೀರ್ಪನ್ನು ಪ್ರಶ್ನೆ ಮಾಡುವ ಬಗ್ಗೆ ಗಮನ ನೀಡುತ್ತಿಲ್ಲ ಎಂದು ಆರೋಪ ಮಾಡಿದರು.

ವೇದಿಕೆ ರಾಜ್ಯ ಉಪಾಧ್ಯಕ್ಷರಾದ ಬೆಳಕು ಶ್ರೀಧರ್ ಮಾತನಾಡಿ, ಕಾವೇರಿ ನೀರಿ ನಮ್ಮ ಹಕ್ಕು, ಆದರೆ ಸರ್ಕಾರದ ಜನಪ್ರತಿನಿಧಿಗಳು ಸ್ವಾರ್ಥ ರಾಜಕಾರಣಕ್ಕಾಗಿ ನಮ್ಮ ಹಕ್ಕನ್ನು ಉಳಿಸಿಕೊಳ್ಳಲು ವಿಫಲವಾಗಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಚನ್ನಪಟ್ಟಣ ನೀರಾವರಿ ಪ್ರದೇಶವಾಗಿದ್ದರೂ ಸಹ ಇಂದು ವಾರಕ್ಕ ಒಮ್ಮೆ ನೀರನ್ನು ನೀಡುತ್ತಿದ್ದಾರೆ ಸ್ನಾನಕ್ಕೆ ನೀರು ಬಳಕೆ ಮಾಡಲು ನಾವು ಹಿಂಜರಿಕೆಯಾಗಿದೆ. ನೀರಾವರಿ ಪ್ರದೇಶದಲ್ಲೇ ಇಂತಹ ಪರಿಸ್ಥಿತಿ ಆದರೆ ಬೇರೆ ತಾಲೂಕಿನ ಜನತೆಯ ಪರಿಸ್ಥಿತಿ ಏನಾಗುತ್ತದೆ. ಮುಂದಿನ ದಿನಗಳಲ್ಲಿ ಅಂತರ್ಜಲ ಕುಸಿತವಾಗಿ ಬೋರ್‌ವೆಲ್‌ಗಳು ನಿಂತು ಕೃಷಿಗೂ ಸಮಸ್ಯೆ ಉಂಟಾಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮೇಕೆದಾಟು ಯೋಜನೆಯನ್ನು ಅನುಷ್ಠಾನಕ್ಕೆ ತರಲು ಗಮನ ನೀಡುವ ಜೊತೆಗೆ ನೀರಿನ ಬವಣೆಯನ್ನು ನಿಭಾಯಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು.

ನಿವೃತ್ತ ಪ್ರಾಂಶುಪಾಲ ನಿಂಗೇಗೌಡ(ಎನ್‌ಜಿ) ಮಾತನಾಡಿ, ಕಾವೇರಿ ನೀರಿನ ಸಂಕಷ್ಟ ಸೂತ್ರ ರಚಿಸುವ ಬಗ್ಗೆ ಹಾಗೂ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತರುವ ಬಗ್ಗೆ ರಮೇಶ್‌ಗೌಡರು 152 ದಿನಗಳಿಂದ ಹೋರಾಟ ಮಾಡುತ್ತಿದ್ದು ಈ ಹೋರಾಟದ ಉದ್ದೇಶ ಏನು ಎಂದು ಸೌಜನ್ಯಕ್ಕೂ ಗಮನಿಸದ ಜನತೆಗೆ ಇಂದು ಕುಡಿನೀರಿನ ಸಮಸ್ಯೆ ಬಗ್ಗೆ ಅರಿವಾಗುತ್ತಿದೆ. ಮುಂದಾದರೂ ಜನರು ನೀರಿನ ಸಮಸ್ಯೆ ಬಗ್ಗೆ ಧ್ವನಿ ಎತ್ತಲಿ ಎಂದು ಅಭಿಪ್ರಾಯಿಸಿದರು.

ವೇದಿಕೆ ರಾಜ್ಯ ಉಪಾಧ್ಯಕ್ಷ ರಂಜಿತ್‌ಗೌಡ, ಜಗದಾಪುರ ಕೃಷ್ಣೇಗೌಡ, ಮಂಗಳವಾರಪೇಟೆ ತಿಮ್ಮರಾಜು(ಎಂಟಿಆರ್), ನ್ಯಾಯಾಂಗ ಇಲಾಖೆ ನಿವೃತ್ತ ಸಿಬ್ಬಂದಿ ಕಾಡೇಗೌಡ, ಕೋಡಂಬಹಳ್ಳಿ ರಾಜು, ಪಾನಿಪುರಿ ಕರಿಯಪ್ಪ, ವಿಠಲೇನಹಳ್ಳಿ ರಾಮಕೃಷ್ಣಪ್ಪ, ಜಯರಾಮು, ನಾರಾಯಣ್, ಆರ್. ಶಂಕರ್ ಇತರರು ಇದ್ದರು.

# ರೈತರೇ ಆರೋಗ್ಯವಂತರಾಗಿ ಲೋಕಾರ್ಪಣೆ

**ಚಾಮರಾಜನಗರ:** ಖ್ಯಾತ ಬೆನ್ನುಹುರಿ ತಜ್ಞ ಪ್ರಲಕ್ಷ ಅಸ್ಪತ್ರೆಗಳ ಸಂಸ್ಥಾಪಕ ನಿರ್ದೇಶಕರು ಹಾಗೂ ಚಾ.ನಗರ ಲೋಕಸಭಾ ಕ್ಷೇತ್ರದ ಸ್ಪರ್ಧಾಕಾಂಕ್ಷಿಗಳಾದ ಡಾ. ಎನ್. ಎಸ್. ಮೋಹನ್ ಅವರು ರಚಿಸಿರುವ ಎರಡನೇ ಕೃತಿ ರೈತರೇ ಆರೋಗ್ಯವಂತರಾಗಿ ಕೃತಿ ಮಾ. 6 ರ ಬುಧವಾರ ಮೈಸೂರು ಜಿಲ್ಲೆಯ ಎಚ್.ಡಿ. ಕೋಟೆ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಲೋಕಾರ್ಪಣೆ ಯಾಗಲಿದೆ.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಡಾ. ಎನ್.ಎಸ್. ಮೋಹನ್ ಅವರು, ವೈದ್ಯಕೀಯ ಕ್ಷೇತ್ರದಲ್ಲಿ ನನ್ನ ಅನುಭವ ಹಾಗು ರೈತರೊಂದಿಗಿನ ಒಡನಾಟವನ್ನು ಗಮನಿಸಿ, ರೈತರು ನಮ್ಮ ದೇಶದ ಅನ್ನದಾತರು, ಸೈನಿಕರು ದೇಶವನ್ನು ಕಾಯುವವರು, ಈ ಇವರಿಬ್ಬರು ಆರೋಗ್ಯವಂತರಾದರೆ, ನಮ್ಮ ದೇಶದ ಪ್ರಗತಿ ಸಾಧ್ಯವಾಗಲಿದೆ ಎಂದರು. ನಾನು ಹವ್ಯಾಸಿ ಬರಹಗಾರನಾಗಿದ್ದು, ವೈದ್ಯ ವೃತ್ತಿಯ ಬಿಡುವಿನ ವೇಳೆಯಲ್ಲಿ ಕೃತಿಗಳನ್ನು ಬರೆಯುತ್ತೇನೆ. ನನ್ನ ಎರಡನೇ ಕೃತಿ ರೈತರೇ ಆರೋಗ್ಯವಂತರಾಗಿ ಎಂಬ ಶೀರ್ಷಿಕೆಯಡಿಯಲ್ಲಿ ರೈತರ ಆರೋಗ್ಯದ ಸಮಸ್ಯೆಗಳು ಅದಕ್ಕೆ ಪರಿಹಾರೋಪಾಯಗಳನ್ನು ಕೃತಿಯಲ್ಲಿ ದಾಖಲಿಸುವ ಮೂಲಕ ಉಪಯುಕ್ತವಾದ ಅಂಶಗಳನ್ನು ಕೃತಿಯಲ್ಲಿ ದಾಖಲು ಮಾಡಿದ್ದೇನೆ. ಎಚ್.ಡಿ. ಕೋಟೆಯಲ್ಲಿ ಬೆಳಗ್ಗೆ 10.30ಕ್ಕೆ ನಡೆಯುವ ಸಮಾರಂಭವನ್ನು ರಾಜ್ಯ ರೈತ ಕಿಸಾನ್ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಉದ್ಘಾಟಿಸಲಿದ್ದಾರೆ. ಕೃತಿಯನ್ನು ಮಾಜಿ ಸಚಿವರು ಹಾಗೂ ಶಾಸಕ ಜಿ.ಡಿ. ದೇವೇಗೌಡ ಬಿಡುಗಡೆ ಮಾಡುವವರು. ಕೇಂದ್ರ ಮಾಜಿ ಸಚಿವರು ಹಾಗೂ ಸಂಸದರು ವಿ. ಶ್ರೀನಿವಾಸಪ್ರಸಾದ್ ಅಧ್ಯಕ್ಷತೆ ವಹಿಸುವವರು. ಹಿರಿಯ ಆರ್ ಎಸ್‌ಎಸ್ ಮುಖಂಡ ಮಾ. ವೆಂಕಟರಾಮ್ ಮೊದಲಾದ ಗಣ್ಯರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪಡುವಲ ಮಠದ ಶ್ರೀ ಮಹದೇವಸ್ವಾಮೀಜಿ, ಹಂಚಿಪುರ ಮಠದ ಶ್ರೀ ಚನ್ನಬಸವಸ್ವಾಮೀಜಿ, ದಡದಹಳ್ಳಿ ಮಠದ ಶ್ರೀ ಷಡಕ್ಷರಿ ದೇಶಿಕೇಂದ್ರಸ್ವಾಮೀಜಿ ವಹಿಸಲಿದ್ದಾರೆ. ಆದಿವಾಸಿ ಸಮುದಾಯದ ಹೋರಾಟಗಾರ ಪದ್ಮಶ್ರೀ ಪುರಸ್ಕೃತರಾದ ಸೋಮಣ್ಣ, ಹಿರಿಯ ಮುಖಂಡ ಜೆ.ಪಿ. ಚಂದ್ರಶೇಖರ್, ಪ್ರಗತಿಪರ ರೈತ ಮಲಾರ ಪುಟ್ಟಯ್ಯ ಅವರನ್ನು ಸನ್ಮಾನಿಸಲಾಗುತ್ತದೆ ಎಂದು ತಿಳಿಸಿದರು. ಸಂಜಯ್ ಗಾಂಧಿ ಅಸ್ಪತ್ರೆಯ ಕೀಲು ಮತ್ತು ಮುಳೆ ವಿಭಾಗದ ಮುಖ್ಯಸ್ಥರ ಹುದ್ದೆಗೆ ಸ್ವ ಇಚ್ಛೆಯಿಂದ ರಾಜೀನಾಮೆ ನೀಡಿ ಅದು ಅಂಗೀಕಾರವಾಗಿದೆ. ಚಾ.ನಗರ ಲೋಕಸಭಾ ಕ್ಷೇತ್ರದ ಪ್ರಮುಖ ಆಕಾಂಕ್ಷಿಯಾಗಿದ್ದು, ಕಳೆದ ಅವಧಿಯಲ್ಲಿ ನಾನು ಆಕಾಂಕ್ಷಿಯಾಗಿದ್ದೆ. ನಮ್ಮ ಮಾವ ವಿ. ಶ್ರೀನಿವಾಸಪ್ರಸಾದ್ ಅವರೇ ಸ್ಪರ್ಧೆ ಮಾಡಿದ್ದರಿಂದ ನಾನು ಹಿಂದೆ ಸರಿದೆ. ಈ ಬಾರಿ ವರಿಷ್ಠರು ನನಗೆ ಅವಕಾಶ ಮಾಡಿಕೊಡುತ್ತಾರೆ ಎಂಬ ಆಶಾಭಾವನೆ ಇದೆ. ಹೀಗಾಗಿ ಹುದ್ದೆಗೆ ರಾಜೀನಾಮೆ ನೀಡಿದ್ದೇನೆ. ಡಾ.ಎಂ.ಎಸ್. ಮೋಹನ್ ಬಳಗದ ಅಧ್ಯಕ್ಷ ಕೆ.ಆರ್. ಲೋಕೇಶ್ ಇತರರರು ಇದ್ದಾರೆ.

# ಸಂಜೆ ಟಿಪ್ಸ್



## ಐಎಂಇಎ ವ್ಯವಸ್ಥಾಪಕ ನಿರ್ದೇಶಕರಾಗಿ ಭಾವನಾ ಬಿಂದ್ರಾ ನೇಮಕ

ಲುಬ್ರಿಝೋಲ್ ಕಾರ್ಪೊರೇಷನ್ ತಮ್ಮ ಭಾರತ, ಮಧ್ಯಪ್ರಾಚ್ಯ ಮತ್ತು ಆಫ್ರಿಕಾ (ಐಎಂಇಎ) ಪ್ರದೇಶದ ವ್ಯವಸ್ಥಾಪಕ ನಿರ್ದೇಶಕರಾಗಿ(ಎಂಡಿ) ಭಾವನಾ ಬಿಂದ್ರಾ ಅವರನ್ನು ನೇಮಿಸಿದೆ. ಈ ಹೊಸ ನೇಮಕಾತಿಯು ಆ ಪ್ರದೇಶದಲ್ಲಿ ಲುಬ್ರಿಝೋಲ್‌ನ ತೀವ್ರವಾಗಿ ಬೆಳವಣಿಗೆಗೆ ನೆರವಾಗಲಿದೆ.ಉತ್ಪಾದನಾ ಉದ್ಯಮದಲ್ಲಿ ಎರಡು ದಶಕಗಳ ಅನುಭವವನ್ನು ಹೊಂದಿರುವ ಮತ್ತು ಈ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ರಿಹಾವ್ ಹಾಗೂ ಕಮ್ಮಿನ್ಸ್ ಇಂಡಿಯಾದಂತಹ ಹೆಸರಾಂತ ಕಂಪನಿಗಳ ಜೊತೆಗೆ ಕೆಲಸ ಮಾಡಿರುವ ಭಾವನಾ ಬಿಂದ್ರಾ, ಅವರು ಈ ಪ್ರದೇಶದಲ್ಲಿ ತಮ್ಮ ನಾಯಕತ್ವ ಅನುಭವ ಮತ್ತು ಉದ್ಯಮ ಪರಿಣತಿಯನ್ನು ಬಳಸಿಕೊಂಡು ಲುಬ್ರಿಝೋಲ್‌ನ ಬೆಳವಣಿಗೆಗೆ ಕೊಡುಗೆ ನೀಡಲಿದ್ದಾರೆ. ಲುಬ್ರಿಝೋಲ್ ಐಎಂಇಎ ವ್ಯವಸ್ಥಾಪಕ ನಿರ್ದೇಶಕರಾಗಿ ಭಾವನಾ ಅವರು ಕಂಪನಿಯ ಐಎಂಇಎ ತಂಡವನ್ನು ಮುನ್ನಡೆಸುವ ಜವಾಬ್ದಾರಿ ಹೊಂದಿರುತ್ತಾರೆ ಮತ್ತು ಪ್ರಾದೇಶಿಕ ವಿಧಾನಗಳನ್ನು ಬಳಸಿಕೊಂಡು ಲುಬ್ರಿಝೋಲ್ ಮತ್ತು ಅದರ ಗ್ರಾಹಕರನ್ನು ಅಭಿವೃದ್ಧಿಗೊಳಿಸುವ ಕಾರ್ಯ ನಿರ್ವಹಿಸಲಿದ್ದಾರೆ. ಸ್ಥಳೀಯ ಮಾರುಕಟ್ಟೆಗಳನ್ನು ಬೆಳೆಸಲು ಮತ್ತು ಆ ಪ್ರದೇಶದ ಗ್ರಾಹಕರು, ಪೂರೈಕೆದಾರರು ಮತ್ತು ಪಾಲುದಾರರೊಂದಿಗೆ ಸಂಬಂಧ ಗಟ್ಟಿಗೊಳಿಸಲು ಭಾವನಾ ಕಂಪನಿಯಾದ್ಯಂತ ಇರುವ ಲುಬ್ರಿಝೋಲ್ ನಾಯಕರ ಜೊತೆ ಕೆಲಸ ಮಾಡಲಿದ್ದಾರೆ. ಜೊತೆಗೆ ಅವರು ಭಾರತದ ಪುಣೆಯಲ್ಲಿರುವ ಹೊಸ ಜಾಗತಿಕ ಸಾಮರ್ಥ್ಯ ಕೇಂದ್ರದ ಮೇಲ್ವಿಚಾರಣೆಯನ್ನು ನಡೆಸಲಿದ್ದಾರೆ. ಆ ಕೇಂದ್ರ ಪ್ರಾದೇಶಿಕ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಲುಬ್ರಿಝೋಲ್‌ನ ಪ್ರಾದೇಶಿಕ ಬೆಳವಣಿಗೆಯ ಸಾಮರ್ಥ್ಯಗಳನ್ನು ಹೆಚ್ಚಿಸಲಿದೆ.ಲುಬ್ರಿಝೋಲ್ ಭಾರತ, ಮಧ್ಯಪ್ರಾಚ್ಯ ಮತ್ತು ಆಫ್ರಿಕಾದಾದ್ಯಂತ ಯಶಸ್ಸಿನ ಸುದೀರ್ಘ ಇತಿಹಾಸವನ್ನು ಹೊಂದಿದೆ. ಈ ಪ್ರದೇಶಗಳಲ್ಲಿನ ನಮ್ಮ ಗ್ರಾಹಕರು ಮತ್ತು ಪಾಲುದಾರರಿಗೆ ಹೆಚ್ಚಿನ ಬೆಂಬಲ ಒದಗಿಸಿ ಮತ್ತಷ್ಟು ಬೆಳವಣಿಗೆ ಸಾಧಿಸುವುದನ್ನು ನಾವು ಎದುರು ನೋಡುತ್ತಿದ್ದೇವೆ ಎಂದು ಲುಬ್ರಿಝೋಲ್‌ನ ಹೈ ಗ್ರೋತ್ ರೀಜನ್ಸ್ ಎಸ್ ವಿ ಪಿ ಜೆಟಿ ಜೋನ್ಸ್ ಹೇಳಿದರು.

## ಅವಲಕ್ಕಿ ಉತ್ತಪ್ಪ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಅವಲಕ್ಕಿ- ಅರ್ಧ ಬಟ್ಟಲು, ಮೊಸರು- ಅರ್ಧ ಬಟ್ಟಲು, ರವೆ- ಅರ್ಧ ಬಟ್ಟಲು, ಈರುಳ್ಳಿ- ಸಣ್ಣಗೆ ಹೆಚ್ಚಿದ್ದು 4, ಕ್ಯಾಪ್ಸಿಕಂ- 1, ಕ್ಯಾರೆಟ್- 1, ಹಸಿಮೆಣಸಿನ ಕಾಯಿ- 2-3, ಅವಲಕ್ಕಿ- ಅರ್ಧ ಬಟ್ಟಲು, ಮೊಸರು- ಅರ್ಧ ಬಟ್ಟಲು, ರವೆ- ಅರ್ಧ ಬಟ್ಟಲು, ಈರುಳ್ಳಿ- ಸಣ್ಣಗೆ ಹೆಚ್ಚಿದ್ದು 4, ಕ್ಯಾಪ್ಸಿಕಂ- 1, ಕ್ಯಾರೆಟ್- 1, ಹಸಿಮೆಣಸಿನ ಕಾಯಿ- 2-3, ಬೀನ್ಸ್- ಸ್ವಲ್ಪ (ಸಣ್ಣಗೆ ಹೆಚ್ಚಿದ್ದು), ಕೊತ್ತಂಬರಿ ಸೊಪ್ಪು-ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಸ್ವಲ್ಪ ಬೀನ್ಸ್- ಸ್ವಲ್ಪ (ಸಣ್ಣಗೆ ಹೆಚ್ಚಿದ್ದು), ಕೊತ್ತಂಬರಿ ಸೊಪ್ಪು-ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಸ್ವಲ್ಪ

### ಮಾಡುವ ವಿಧಾನ

ಅವಲಕ್ಕಿಯನ್ನು ಚೆನ್ನಾಗಿ ನೆನೆಸಿ. ನಂತರ ಮಿಕ್ಸಿಯಲ್ಲಿ ನುಣ್ಣಗೆ ರುಬ್ಬಿಕೊಳ್ಳಿ. ಅದಕ್ಕೆ ಅರ್ಧ ಕಪ್ ರವೆ, ಅರ್ಧ ಕಪ್ ಮೊಸರು ಸೇರಿಸಿ. ಬೇಕೆನಿಸಿದರೆ ಸ್ವಲ್ಪ ನೀರು ಹಾಕಿ ದೋಸೆ ಹಿಟ್ಟಿನ ಹದಕ್ಕೆ ರುಬ್ಬಿಕೊಳ್ಳಿ. ನಂತರ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಕಲಸಿ 20 ನಿಮಿಷ ನೆನೆಯಲು ಬಿಡಿ.

ಮತ್ತೊಂದು ಬೌಲ್ ನಲ್ಲಿ ಹೆಚ್ಚಿದ ತರಕಾರಿಗಳನ್ನೆಲ್ಲಾ ಹಾಕಿ, ಸ್ವಲ್ಪ ಉಪ್ಪು ಹಾಕಿ ಮಿಶ್ರಣ ಮಾಡಿ. ನಂತರ ಕಾದ ಕಾವಲಿ ಮೇಲೆ ಮಿಶ್ರಣ ಮಾಡಿರುವ ಹಿಟ್ಟನ್ನು ಹಾಕಿ. ಹುಯ್ದ ದೋಸೆ ಮೇಲೆ ತರಕಾರಿಯನ್ನು ಉದುರಿಸಿ. ಸ್ವಲ್ಪ ಎಣ್ಣೆ ಹಾಕಿ ಚೆನ್ನಾಗಿ ಬೇಯಿಸಿದ್ರೆ, ರುಚಿಯಾದ ಅವಲಕ್ಕಿ ಉತ್ತಪ್ಪ ಸವಿಯಲು ಸಿದ್ಧ.

# ಇಲಿಯಾನಾ ಡಿ ಕ್ರೂಜ್ ರನ್ನೂ ಕಾಡಿದ ಖಿನ್ನತೆ



ತಾಯಿಯಾಗುವ ಪ್ರತಿಯೊಬ್ಬ ಮಹಿಳೆ ಅನೇಕ ಸವಾಲುಗಳನ್ನು ಎದುರಿಸುತ್ತಾಳೆ. ಗರ್ಭಧಾರಣೆ, ಹೆರಿಗೆ ಮಹಿಳೆಯ ಮರುಹುಟ್ಟು. ಈ ವೇಳೆ ಮಹಿಳೆ ದೈಹಿಕ ಹಾಗೂ ಮಾನಸಿಕ ಸಮಸ್ಯೆಗೆ ಒಳಗಾಗ್ತಾಳೆ. ಹೆರಿಗೆ ನಂತ್ರ ಮಾನಸಿಕ ಖಿನ್ನತೆ ಅನೇಕರನ್ನು ಕಾಡುತ್ತದೆ. ಸಾಮಾನ್ಯ ಮಹಿಳೆಯರಿಗೆ ಮಾತ್ರವಲ್ಲ ಬಾಲಿವುಡ್ ಸ್ಟಾರ್ಸ್ ಸೇರಿದಂತೆ ಅನೇಕ ದಿಗ್ಗಜರು ಈ ಬಗ್ಗೆ ಮಾತನಾಡಿದ್ದಾರೆ.

ಈಗ ಇಲಿಯಾನಾ ಡಿ ಕ್ರೂಜ್ ಕೂಡ ಈ ಸಮಸ್ಯೆ ಎದುರಿಸಿದ್ದಾರೆ. ಮಗುವನ್ನು ಸರಿಯಾಗಿ ನೋಡಿಕೊಳ್ಳಲು ಸಾಧ್ಯವಾಗ್ತಿಲ್ಲ ಎನ್ನುವ ನೋವು ಅವರನ್ನು ಕಾಡಿತ್ತಂತೆ. ಅವರ ಸಂಗಾತಿ ಬೆಂಬಲಕ್ಕೆ ನಿಂತ ಕಾರಣ ಈಗ ಎಲ್ಲವೂ ಸರಿಯಾಗಿದೆ ಎಂದಿದ್ದಾರೆ. ಹೆರಿಗೆ ನಂತ್ರ ಕಾಡುವ ಈ ಖಿನ್ನತೆ ಬಗ್ಗೆ ಅನೇಕರಿಗೆ ತಿಳಿದಿಲ್ಲ. ಮತ್ತೆ ಕೆಲವರು ಇದನ್ನು ನಿರ್ಲಕ್ಷ್ಯ ಮಾಡ್ತಾರೆ.

ಹಠಾತ್ ನಿದ್ರೆಯ ಕೊರತೆ ಮತ್ತು ಮಗುವನ್ನು ನಿರಂತರವಾಗಿ ನೋಡಿಕೊಳ್ಳುವುದು ಮತ್ತು ಮನೆ ಕೆಲಸಗಳಂತಹ ಅನೇಕ ಜವಾಬ್ದಾರಿಗಳನ್ನು ಮಾಡುವುದು ತಾಯಿಯನ್ನು ತುಂಬಾ ಸುಸ್ತುಗೊಳಿಸುತ್ತದೆ. ಈ ಕಾರಣದಿಂದಾಗಿ ಮಹಿಳೆಯರು ದೈಹಿಕ ದೌರ್ಬಲ್ಯದಿಂದ ಬಳಲುತ್ತಾರೆ. ಹಾರ್ಮೋನ್ ಅಸಮತೋಲನ ಅವರನ್ನು ಖಿನ್ನತೆಗೆ ದೂಡುತ್ತದೆ.

**ಹೆರಿಗೆ ನಂತ್ರ ಕಾಡುವ ಖಿನ್ನತೆ ಲಕ್ಷಣ:** ನಿರಂತರವಾಗಿ ಕಾಡುವ ದುಃಖ ಮತ್ತು ನಿರಾಶೆ. ಹಸಿವಿನಲ್ಲಿ ಬದಲಾವಣೆ, ಮಗುವಿನೊಂದಿಗೆ ಹೊಂದಿಕೊಳ್ಳುವ ಸಮಸ್ಯೆ ಜೊತೆಗೆ ಕಾರಣವಿಲ್ಲದೆ ಅಳು ಹಾಗೂ ಕೋಪ ಈ ಖಿನ್ನತೆಯ ಮುಖ್ಯ ಲಕ್ಷಣವಾಗಿದೆ.ಮನಸ್ಸು ಸರಿಯಿಲ್ಲ ಎಂದಾಗ ಕುಟುಂಬಸ್ಥರ ಬಳಿ ಸಮಸ್ಯೆ ಹೇಳಿಕೊಳ್ಳಬೇಕು. ನಿಮ್ಮನ್ನು ಸಹಜ ಸ್ಥಿತಿಗೆ ತರಲು ಅವರ ಸಹಾಯ ಪಡೆಯಬೇಕು.

ವ್ಯಾಯಾಮ, ಧ್ಯಾನ, ಯೋಗ ಸೇರಿದಂತೆ ಸಣ್ಣ ಚಟುವಟಿಕೆಯಲ್ಲಿ ನಿಮ್ಮನ್ನು ನೀವು ತೊಡಗಿಸಿಕೊಳ್ಳಬೇಕು. ಒಂಟಿಯಾಗಿ ಇರಬೇಡಿ.

ಎಲ್ಲ ಜವಾಬ್ದಾರಿಯನ್ನು ನೀವು ಹಂಚಿಕೊಳ್ಳಬೇಕು. ಎಲ್ಲ ಕೆಲಸವನ್ನು ನೀವೊಬ್ಬರೇ ಮಾಡುವ ಬದಲು ಕುಟುಂಬಸ್ಥರಿಂದ ಸಹಾಯ ಪಡೆಯಿರಿ. ನಿಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಮಗುವಿನ ಆರೈಕೆ ಮಾಡಿ.

# ಪಾಮ್ ಆಯಿಲ್‌ನ ಪ್ರಯೋಜನಗಳು

ಹೆಲ್ತ್ ಟಿಪ್ಸ್



ಪಾಮ್ ಆಯಿಲ್ ಎಂಬುದು ಪಾಮ್ ಮರದ ಹಣ್ಣಿನಿಂದ ತೆಗೆಯಲ್ಪಡುವ ಮತ್ತು ವ್ಯಾಪಕವಾಗಿ ಬಳಸಲಾಗುವ ಸಸ್ಯಜನ್ಯ ಎಣ್ಣೆಯಾಗಿದೆ. ಅದರ ವಿಶಿಷ್ಟ ಗುಣಲಕ್ಷಣ ಮತ್ತು ವೈವಿಧ್ಯಮಯತೆಯಿಂದಾಗಿ ಅದು ಜಾಗತಿಕ ಕೃಷಿ ಮತ್ತು ಆಹಾರ ಉದ್ಯಮಗಳಲ್ಲಿ ಮಹತ್ವದ ಸ್ಥಾನವನ್ನು ಪಡೆದುಕೊಂಡಿದೆ. ಪಾಮ್ ಮರಗಳು 149 ವರ್ಷಗಳ ಹಿಂದೆ ಅಂದರೆ 1875ರಲ್ಲಿ ಪಶ್ಚಿಮ ಆಫ್ರಿಕಾದಲ್ಲಿ ಪರಿಚಯವಾಗಿ ನಂತರ ಅವುಗಳನ್ನು ಆಗ್ನೇಯ ಏಷ್ಯಾಕ್ಕೆ ಅಲಂಕಾರಿಕ ಉದ್ದೇಶಗಳಿಗೆ ತೆಗೆದುಕೊಂಡು ಹೋಗಲಾಯಿತು. ಪ್ರಸ್ತುತ, ಇಂಡೋನೇಷ್ಯಾ ಮತ್ತು ಮಲೇಷ್ಯಾದಲ್ಲಿ ಪಾಮ್ ಮರಗಳು ವ್ಯಾಪಕವಾಗಿ ಹರಡಿವೆ. ವಿಶ್ವದ ಪಾಮ್ ಎಣ್ಣೆ ಪೂರೈಕೆಯ 85%ಕ್ಕಿಂತ ಹೆಚ್ಚು ಎಣ್ಣೆ ಅಲ್ಲಿಂದಲೇ ಪೂರೈಕೆಯಾಗುತ್ತದೆ ಎಂಬುದು ಗಮನಾರ್ಹ. ಅಷ್ಟೇ ಅಲ್ಲ, ಪಾಮ್ ಆಯಿಲ್ ಅನ್ನು ಪ್ರಪಂಚದಾದ್ಯಂತ 42 ಹೆಚ್ಚುವರಿ ದೇಶಗಳಲ್ಲಿ ಉತ್ಪಾದಿಸಲಾಗುತ್ತದೆ. ಈ ವ್ಯಾಪಕತೆಯಿಂದಲೇ ವಿಶ್ವಾದ್ಯಂತ ಇರುವ ಪಾಮ್ ಆಯಿಲ್ ಉತ್ಪಾದನೆಯ ಜಾಗತಿಕ ಮಹತ್ವವನ್ನು ಅರಿಯಬಹುದಾಗಿದೆ.ಮಲೇಷಿಯಾದ ಪಾಮ್ ಆಯಿಲ್ ಉದ್ಯಮವು ಕಟ್ಟುನಿಟ್ಟಾದ ನಿಯಮಗಳ ಚೌಕಟ್ಟಿನೊಳಗೆ ಕಾರ್ಯನಿರ್ವಹಿಸುತ್ತದೆ. ಅಲ್ಲಿ ಈ ಕುರಿತು ಪ್ರಸ್ತುತ 15 ಕಾನೂನುಗಳು ಮತ್ತು ನಿಬಂಧನೆಗಳು ಇವೆ. ವಿವಿಧ ವಿಧಾನಗಳು ಮತ್ತು ತಂತ್ರಜ್ಞಾನಗಳನ್ನು ಬಳಸುವ ಮೂಲಕ ಪರಿಸರದ ಮೇಲೆ ಉಂಟಾಗುವ ಉದ್ಯಮದ ಪ್ರಭಾವವನ್ನು ಕಡಿಮೆ ಮಾಡುವ ಪ್ರಯತ್ನಗಳು ನಡೆಯುತ್ತಿವೆ. ಈ ಪ್ರಯತ್ನಗಳು ಪಾಮ್ ಪ್ಲಾಂಟೇಷನ್ ಗಳು, ಪಾಮ್ ಆಯಿಲ್ ಮಿಲ್ ಗಳು ಮತ್ತು ಸಂಸ್ಕರಣಾಗಾರಗಳಲ್ಲಿ ಯಶಸ್ವಿಯಾಗಿ ಅಳವಡಿಕೆಯಾಗಿವೆ.

**ಅಪ್ಲಿಕೇಶನ್‌ಗಳ ವೈವಿಧ್ಯಮಯತೆ:** ಪಾಮ್ ಆಯಿಲ್ ನ ವೈವಿಧ್ಯಮತೆಯನ್ನು ಕೈಗಾರಿಕೆಗಳಾದ್ಯಂತ ಕಾಣಬಹುದಾಗಿದೆ. ಆಹಾರ ವಲಯದಲ್ಲಿ, ಇದು ಅಡುಗೆ ಎಣ್ಣೆಗಳು, ಮಾರ್ಗರೀನ್ ಗಳು ಮತ್ತು ಅದರ ವಿಶಿಷ್ಟವಾದ ಸಮತೋಲಿತ ಕೊಬ್ಬಿನಾಮ್ಲಗಳ ಸಂಯೋಜನೆಯಿಂದಾಗಿ ಸಂಸ್ಕರಿಸಿದ ಆಹಾರಗಳಿಗೆ ಬಳಸಲ್ಪಡುತ್ತದೆ. ಅಲ್ಲದೇ ಹೆಚ್ಚಿನ-ತಾಪಮಾನದ ಅಡುಗೆಗೆ ಅದು ಸೂಕ್ತವಾಗಿದೆ. ಆಹಾರದ ಹೊರತಾಗಿ, ಸಾಬೂನುಗಳು, ಶ್ಯಾಂಪೂಗಳು ಮತ್ತು ಸೌಂದರ್ಯವರ್ಧಕಗಳಂತಹ ವೈಯಕ್ತಿಕ ಆರೈಕೆ ವಸ್ತುಗಳಲ್ಲಿ ಬಳಸಲಾಗುತ್ತದೆ. ಎಸ್‌ಎನ್‌ಡಿಟಿ ಮಹಿಳಾ ವಿಶ್ವವಿದ್ಯಾನಿಲಯದ ಆಹಾರ ವಿಜ್ಞಾನ ಮತ್ತು ಪೋಷಣೆ ವಿಭಾಗ ಮತ್ತು ಗೃಹ ವಿಜ್ಞಾನ ಸಂಶೋಧನಾ ವಿಭಾಗ ಮತ್ತು ಸ್ನಾತಕೋತ್ತರ ಅಧ್ಯಯನ ವಿಭಾಗದ ಸಂದರ್ಶಕ ಅಧ್ಯಾಪಕಿಯಾಗಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಹ ಪ್ರಾಧ್ಯಾಪಕಿ ಡಾ. ಮೀನಾ ಮೆಹ್ತಾ ಅವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ, ಪಾಮ್ ಆಯಿಲ್ ನಮ್ಮ ಪ್ರಕೃತಿಯಿಂದ ದೊರೆತ ಸುಸ್ಥಿರ ಮತ್ತು ವೈವಿಧ್ಯಮಯ ಕೊಡುಗೆಯಾಗಿದ್ದು, ಜಗತ್ತಿನ ಪೋಷಣಾ ವಲಯದಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪಾಮ್ ಆಯಿಲ್ ಆಹಾರ ಉತ್ಪಾದನೆಯಿಂದ ಹಿಡಿದು ಆರ್ಥಿಕ ಬೆಳವಣಿಗೆ ಮತ್ತು ಗ್ರಾಮೀಣ ಪ್ರದೇಶದ ಬೆಳವಣಿಗೆಯಲ್ಲಿ ಅಪಾರ ಕೊಡುಗೆ ನೀಡುತ್ತಿದೆ. ಜವಾಬ್ದಾರಿಯುತ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವುದರಿಂದ ನಾವು ಪಾಮ್ ಆಯಿಲ್ ಶಕ್ತಿಯನ್ನು ಬಳಸಿಕೊಂಡು ಎಲ್ಲರಿಗೂ ಆರೋಗ್ಯಕರ, ಹೆಚ್ಚು ಸಮೃದ್ಧ ಭವಿಷ್ಯವನ್ನು ರೂಪಿಸಬಹುದು ಎಂದರು.

ಎಂಪಿಓಸಿ ಮತ್ತು ಮಲೇಶಿಯನ್ ಪಾಮ್ ಆಯಿಲ್ ಕುರಿತು ಹೆಚ್ಚಿನ ಮಾಹಿತಿ ಪಡೆಯಲು ಭೇಟಿ ನೀಡಿ mpoc.org.my

# ಮಹಿಳಾ ಸಬಲೀಕರಣಕ್ಕೆ ಮುಂದಾದ ಅಮೆಜಾನ್ ಇಂಡಿಯಾ




ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಗೆ ಮುಂಚಿತವಾಗಿ, ಅಮೆಜಾನ್ ಇಂಡಿಯಾ ಮಹಿಳಾ ಸಬಲೀಕರಣಕ್ಕೆ ತನ್ನ ನಿರಂತರ ಬದ್ಧತೆಯ ಭಾಗವಾಗಿ ಮುಟ್ಟಿನ ನೈರ್ಮಲ್ಯ, ಉದ್ಯಮಶೀಲತೆ ಅಭಿವೃದ್ಧಿ, ಡಿಜಿಟಲ್ ಆರ್ಥಿಕ ಸಾಕ್ಷರತೆ ಮತ್ತು ಸಾಮಾಜಿಕ ಅರ್ಹತೆಯ ಜಾಗೃತಿಗೆ ಗಮನಹರಿಸುವ ಹಲವಾರು ಪ್ರಮುಖ ಉಪಕ್ರಮಗಳನ್ನು ಘೋಷಿಸಿದೆ. ಇವುಗಳಲ್ಲಿ ಎ) ಶಾಲೆಗಳಲ್ಲಿ ನೈರ್ಮಲ್ಯ ಕರವಸ್ತ್ರಗಳ ಸುಲಭ ಲಭ್ಯತೆ ಮತ್ತು ಮುಟ್ಟಿನ ತ್ಯಾಜ್ಯವನ್ನು ಸುರಕ್ಷಿತವಾಗಿ ವಿಲೇವಾರಿ ಮಾಡುವುದು, 19 ಶಾಲೆಗಳಲ್ಲಿ 1900 ಹದಿಹರೆಯದ ಬಾಲಕಿಯರಿಗೆ ಅನುಕೂಲವಾಗುವುದು, ಬಿ) ಸುಧಾರಿತ ನೈರ್ಮಲ್ಯ ಕರವಸ್ತ್ರ ತಯಾರಿಕಾ ಘಟಕಗಳಲ್ಲಿ ತೊಡಗಿರುವ ಮಹಿಳಾ ಉದ್ಯಮಿಗಳಿಗೆ ಉದ್ಯಮಶೀಲತೆ ಅಭಿವೃದ್ಧಿ ತರಬೇತಿ ನೀಡುವುದು, ಅವರಿಗೆ ಸ್ವಾವಲಂಬನೆಗೆ ಅಗತ್ಯವಾದ ಕೌಶಲ್ಯಗಳನ್ನು ಸಜ್ಜುಗೊಳಿಸುವುದು, ಸಿ) 2000 ಕ್ಕೂ ಹೆಚ್ಚು ಮಹಿಳೆಯರಿಗೆ ಡಿಜಿಟಲ್ ಆರ್ಥಿಕ ಸಾಕ್ಷರತೆ ಕಾರ್ಯಕ್ರಮವನ್ನು ಪ್ರಾರಂಭಿಸುವುದು, ಅವರಿಗೆ ಆರ್ಥಿಕ ಸ್ವಾತಂತ್ರ್ಯಕ್ಕೆ ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳನ್ನು ಸಬಲೀಕರಣಗೊಳಿಸುವುದು, ಡಿ) ಜಾಗೃತಿ ಮೂಡಿಸಲು ಮತ್ತು ಸಾಮಾಜಿಕ ಅರ್ಹತೆ ಯೋಜನೆಗಳಲ್ಲಿ ದಾಖಲಾತಿಗೆ ಅನುಕೂಲವಾಗುವಂತೆ ಸಮುದಾಯ ಶಿಬಿರಗಳು, ಮಹಿಳೆಯರು ಮತ್ತು ಹುಡುಗಿಯರ ಸಬಲೀಕರಣ ಯೋಜನೆಗಳನ್ನು ಉತ್ತೇಜಿಸುವತ್ತ ಗಮನ ಹರಿಸುವುದು. ಈ ಉಪಕ್ರಮಗಳು ಆರ್ಥಿಕ ಸೇರ್ಪಡೆ, ಸಂಪನ್ಮೂಲಗಳ ಲಭ್ಯತೆ ಮತ್ತು ಶಿಕ್ಷಣದ ಮೂಲಕ ದೇಶಾದ್ಯಂತ ಮಹಿಳೆಯರನ್ನು ಸಬಲೀಕರಣಗೊಳಿಸುವ ಅಮೆಜಾನ್ ಇಂಡಿಯಾದ ಬದ್ಧತೆಯನ್ನು ಒತ್ತಿಹೇಳುತ್ತವೆ, ಹೆಚ್ಚು ನ್ಯಾಯಸಮ್ಮತ ಮತ್ತು ಸಮೃದ್ಧ ಸಮಾಜಕ್ಕೆ ಕೊಡುಗೆ ನೀಡುತ್ತವೆ. ಈ ಕಾರ್ಯಕ್ರಮಗಳು ಮಹಿಳೆಯರ ಯೋಗಕ್ಷೇಮವನ್ನು ಸುಧಾರಿಸುವುದಲ್ಲದೆ, ನಮ್ಮ ಸಮುದಾಯಗಳಲ್ಲಿ ಹೆಚ್ಚು ಅಂತರ್ಗತ ಮತ್ತು ಸಮಾನ ಸಂಸ್ಕೃತಿಯನ್ನು ನಿರ್ಮಿಸಲು ಕೊಡುಗೆ ನೀಡುತ್ತವೆ ಎಂದು ನಾವು ದೃಢವಾಗಿ ನಂಬುತ್ತೇವೆ ಎಂದು ಅಮೆಜಾನ್ ಇಂಡಿಯಾದ ಲಾಸ್ಟ್ ಮೈಲ್ ಕಾರ್ಯಾಚರಣೆಗಳ ನಿರ್ದೇಶಕರಾದ ಡಾ. ಕರುಣಾ ಶಂಕರ್ ಪಾಂಡೆ ಹೇಳಿದರು. ಅಮೆಜಾನ್ ಇಂಡಿಯಾ ತನ್ನ ಪರಿಸರ ವ್ಯವಸ್ಥೆಯಾದ್ಯಂತ ಮಹಿಳೆಯರಿಗೆ ಹಲವಾರು ಅವಕಾಶಗಳನ್ನು ಒದಗಿಸಿದೆ, ಇದರಲ್ಲಿ ಮಾರಾಟ ಪಾಲುದಾರರು, ಕಾರ್ಯಾಚರಣೆಯ ಜಾಲದ ಪಾಲುದಾರರು ,ಸಮುದಾಯ ಫಲಾನುಭವಿಗಳು, ಉದ್ಯೋಗಿಗಳು ಮತ್ತು ಸಹವರ್ತಿಗಳು ಸೇರಿದ್ದಾರೆ, ಇವರೆಲ್ಲರೂ ದೇಶಾದ್ಯಂತ ಅಮೆಜಾನ್ ನ ವೈವಿಧ್ಯಮಯ ಗ್ರಾಹಕರ ನೆಲೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಾರೆ. ಕಂಪನಿಯು ತನ್ನ ಸಂಸ್ಥೆಯ ಒಳಗೆ ಮತ್ತು ಹೊರಗೆ ಮಹಿಳೆಯರನ್ನು ಸಬಲೀಕರಣಗೊಳಿಸಲು ವಿವಿಧ ಪ್ರಯೋಜನಗಳು, ಕಾರ್ಯಕ್ರಮಗಳು ಮತ್ತು ಉಪಕ್ರಮಗಳನ್ನು ಪರಿಚಯಿಸುವಲ್ಲಿ ಗಮನಾರ್ಹ ದಾಪುಗಾಲು ಇಟ್ಟಿದೆ. ಈ ಪ್ರಯತ್ನಗಳು ಮಹಿಳಾ ಸಬಲೀಕರಣಕ್ಕೆ ಅಮೆಜಾನ್ನ ಸಮರ್ಪಣೆ ಮತ್ತು ಅದರ ಪರಿಸರ ವ್ಯವಸ್ಥೆಯ ಸಂಸ್ಕೃತಿಯೊಳಗೆ ವೈವಿಧ್ಯತೆ, ಸಮಾನತೆ ಮತ್ತು ಒಳಗೊಳ್ಳುವಿಕೆಯನ್ನು ಉತ್ತೇಜಿಸುವ ಅದರ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ, ಇದರಿಂದಾಗಿ ಒಟ್ಟಾರೆ ಅಮೆಜಾನ್ ಅನುಭವವನ್ನು ಹೆಚ್ಚಿಸುತ್ತದೆ. ಮಹಿಳಾ ಸಬಲೀಕರಣಕ್ಕೆ ತನ್ನ ಬದ್ಧತೆಯನ್ನು ಪುನರುಚ್ಚರಿಸುವ ಮೂಲಕ, ಅಮೆಜಾನ್ ಇಂಡಿಯಾ #SheIsAmazon ಅಭಿಯಾನದ ಮೂರನೇ ಆವೃತ್ತಿಯನ್ನು 49 ನೇ ಅಂತರರಾಷ್ಟ್ರೀಯ ಮಹಿಳಾ ದಿನದ ಸಂದರ್ಭದಲ್ಲಿ #Inspire Inclusionಎಂಬ ವಿಷಯದ ಅಡಿಯಲ್ಲಿ ಪ್ರಾರಂಭಿಸಿದೆ. ಈ ಅಭಿಯಾನವು ಕಂಪನಿಯ ಒಳಗೆ ಮತ್ತು ಹೊರಗೆ ಮಹಿಳೆಯರನ್ನು ಸಬಲೀಕರಣಗೊಳಿಸಲು ಅಮೆಜಾನ್ನೊಳಗೆ ವಿವಿಧ ಘಟಕಗಳು ಜಾರಿಗೆ ತಂದ 49 ವಿಭಿನ್ನ ಕಾರ್ಯಕ್ರಮಗಳು, ಉಪಕ್ರಮಗಳು ಮತ್ತು ಪ್ರಯೋಜನಗಳನ್ನು ಎತ್ತಿ ತೋರಿಸುತ್ತದೆ. ಈ ಉಪಕ್ರಮಗಳು ಮಹಿಳೆಯರ ವೃತ್ತಿಪರ ಪ್ರಯಾಣವನ್ನು ಮುನ್ನಡೆಸುವಲ್ಲಿ ಮಹತ್ವದ ಪಾತ್ರವನ್ನು ವಹಿಸಿವೆ ಮತ್ತು ಅವರ ಸಬಲೀಕರಣಕ್ಕೆ ಅಮೆಜಾನ್ ನ ಸಮರ್ಪಣೆಯ ಸಂಕೇತಗಳಾಗಿವೆ.

# ಕೆಂಪು ತುಟಿಗಾಗಿ ಮನೆಮದ್ದು

## ಬ್ಯೂಟಿ ಟಿಪ್ಸ್



ನಿಮ್ಮ ತುಟಿಗಳು ಕೆಂಪಾಗಿ ಕಾಣುವಂತೆ ಮಾಡಬೇಕೆ? ಇದಕ್ಕೆ ಕೆಲವು ನೈಸರ್ಗಿಕ ವಸ್ತುಗಳನ್ನು ಬಳಸಬಹುದು. ಅದು ಹೇಗೆಂದು ಇಲ್ಲಿ ಕೇಳಿ.

ಕಾಸ್ಮೆಟಿಕ್ಸ್ ಗಳ ಹೊರತಾಗಿಯೂ ನಿಮ್ಮ ತುಟಿಯ ಬಣ್ಣವನ್ನು ಕೆಂಪಗಾಗಿಸಿಕೊಳ್ಳಬಹುದು. ಸ್ಟ್ರಾಬೆರಿ ಹಣ್ಣಿನ ಪೇಸ್ಟ್ ತಯಾರಿಸಿ ಅಥವಾ ಅದರ ರಸವನ್ನು ನಿಮ್ಮ ತುಟಿಗೆ ನಿತ್ಯ ಹಚ್ಚಿಕೊಳ್ಳುವುದರಿಂದ ನಿಮ್ಮ ತುಟಿ ಸಹಜವಾದ ಕೆಂಪು ಬಣ್ಣವನ್ನೇ ಪಡೆಯುತ್ತದೆ.

ಗುಲಾಬಿ ದಳಗಳೂ ಇವೇ ಪ್ರಭಾವವನ್ನು ಬೀರುತ್ತವೆ. ಮೊದಲು ಕೆಂಗುಲಾಬಿಯ ನಾಲ್ಕೈದು ಎಸಳುಗಳನ್ನು ರುಬ್ಬಿ ಅದರ ರಸ ತೆಗೆದು ತುಟಿಗೆ ಹಚ್ಚಿ 15 ನಿಮಿಷದ ಬಳಿಕ ನಿಮ್ಮ ತುಟಿಗಳನ್ನು ತೊಳೆದುಕೊಳ್ಳಿ. ಇದರಿಂದ ನಿಮ್ಮ ತುಟಿಗಳು ಕೆಂಪು ಬಣ್ಣ ಪಡೆದುಕೊಳ್ಳುತ್ತವೆ.

ಬೀಟ್ ರೂಟ್ ಕೂಡಾ ನಿಮ್ಮ ತುಟಿ ಸೌಂದರ್ಯ ಹೆಚ್ಚಿಸಲು ನೆರವಾಗುತ್ತವೆ. ಇದನ್ನು ನಿಮ್ಮ ತುಟಿಗೆ ಉಜ್ಜಿದರೆ ಹಲವು ಗಂಟೆಗಳ ಕಾಲ ಕೆಂಪಗಾಗಿಯೇ ಕಾಣಿಸುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಯತ್ನ ಕಾರ್ಯಾನುಕೂಲ, ಮಿತ್ರರಲ್ಲಿ ಸ್ನೇಹ ವೃದ್ಧಿ, ಧಾರ್ಮಿಕ ಕಾರ್ಯಗಳಲ್ಲಿ ಭಾಗಿ, ಪರರಿಗೆ ಉಪಕಾರ ಮಾಡುವಿರಿ.

**ವೃಷಭ:** ಕುಟುಂಬ ಸೌಖ್ಯ, ಸಂತಾನ ಪ್ರಾಪ್ತಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಮನಸ್ಸಿನಲ್ಲಿ ಭಯಭೀತಿ ನಿವಾರಣೆ.

**ಮಿಥುನ:** ಪ್ರಭಾವಿ ವ್ಯಕ್ತಿಗಳ ಭೇಟಿ, ಭೂ ಲಾಭ, ಪ್ರಜಾ ಕೈಂಕರ್ಯಗಳಲ್ಲಿ ಭಾಗಿ, ಮಹಿಳೆಯರಿಗೆ ವಸ್ತ್ರಾಭರಣ ಪ್ರಾಪ್ತಿ, ಮನಶಾಂತಿ.

**ಕಟಕ:** ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ಆರೋಗ್ಯ ವೃದ್ಧಿ, ವಾಹನ ಖರೀದಿ, ವಿವಾಹ ಯೋಗ, ಮಾತಾ ಪಿತ್ರರಲ್ಲಿ ಪ್ರೀತಿ.

**ಸಿಂಹ:** ವ್ಯಾಪಾರದಲ್ಲಿ ನಿರೀಕ್ಷಿತ ಆದಾಯ, ದ್ರವ್ಯ ಲಾಭ, ವಿದ್ಯಾಭ್ಯಾಸಕ್ಕಾಗಿ ದೂರ ಪ್ರಯಾಣ.

**ಕನ್ಯಾ:** ರಾಜ ಸನ್ಮಾನ, ವಾಹನ ಖರೀದಿ, ಕುಟುಂಬದಲ್ಲಿ ಪ್ರೀತಿ ವಾತ್ಸಲ್ಯ, ಸುಖ ಭೋಜನ, ಅಮೂಲ್ಯ ವಸ್ತುಗಳ ಖರೀದಿ.

**ತುಲಾ:** ಮಾನಸಿಕ ಅಶಾಂತಿ, ವಿಪರೀತ ವ್ಯಸನ, ಸಾಮಾನ್ಯ ಸೌಖ್ಯಕ್ಕೆ ದಕ್ಕೆ, ವ್ಯಾಪಾರ ವ್ಯವಹಾರಗಳಲ್ಲಿ ತೊಂದರೆ, ದೃಷ್ಟಿ ದೋಷ

**ವೃಶ್ಚಿಕ:** ಉತ್ತಮ ಪ್ರಗತಿ, ಶುಭ ಕಾರ್ಯಗಳಲ್ಲಿ ಭಾಗಿ, ಸ್ಥಳ ಬದಲಾವಣೆ, ಶತ್ರುಗಳಿಂದ ತೊಂದರೆ.

**ಧನಸ್ಸು:** ಕೆಲಸ ಕಾರ್ಯಗಳಲ್ಲಿ ಪ್ರಗತಿ, ದೇವತಾ ಕಾರ್ಯಗಳಲ್ಲಿ ಭಾಗಿ, ಶೀಘ್ರದಲ್ಲಿ ಶುಭ ಸುದ್ದಿ, ಉತ್ತಮ ಪ್ರಗತಿ, ಧನ ಲಾಭ.

**ಮಕರ:** ಆದಾಯಕ್ಕಿಂತ ಖರ್ಚು ಜಾಸ್ತಿ, ಭೂ ವ್ಯವಹಾರಗಳಲ್ಲಿ ಅಲ್ಪ ಲಾಭ, ಶತ್ರುಭಾದೆ, ಉದ್ಯೋಗದಲ್ಲಿ ಬಡ್ತಿ, ಸುಖ ಭೋಜನ.

**ಕುಂಭ:** ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಮನಕ್ಲೇಶ, ಅಕಾಲ ಭೋಜನ, ಕೆಲಸದಲ್ಲಿ ಒತ್ತಡ.

**ಮೀನ:** ಸ್ತ್ರೀ ಸೌಖ್ಯ, ಅನಿರೀಕ್ಷಿತ ಖರ್ಚು, ಪುಣ್ಯ ಕ್ಷೇತ್ರ ದರ್ಶನ, ಆಕಸ್ಮಿಕ ದನ ಲಾಭ, ಶ್ರಮಕ್ಕೆ ತಕ್ಕ ಫಲ.

# ನೋ ಹೋಮ್ ವರ್ಕ್ ಡೇ




ಮಾರ್ಚ್ 6 ರಂದು ಆಚರಿಸಲಾಗುವ ನೋ ಹೋಮ್ವರ್ಕ್ ದಿನವು ವಿದ್ಯಾರ್ಥಿಗಳಿಗೆ ಹೋಮ್ವರ್ಕ್ ಅಸೈನ್ಮೆಂಟ್ಗಳಿಂದ ವಿರಾಮವನ್ನು ನೀಡಲು ಪ್ರಯತ್ನಿಸುವ ದಿನವಾಗಿದೆ. ಹೋಮ್ವರ್ಕ್ ಎನ್ನುವುದು ತರಗತಿಯ ಹೊರಗೆ ಪೂರ್ಣಗೊಳಿಸಲು ವಿದ್ಯಾರ್ಥಿಗಳಿಗೆ ಅವರ ಶಿಕ್ಷಕರಿಂದ ನಿಯೋಜಿಸಲಾದ ಕಾರ್ಯಗಳ ಗುಂಪನ್ನು ಸೂಚಿಸುತ್ತದೆ. ಸಾಮಾನ್ಯ ಮನೆಕೆಲಸವು ಅಗತ್ಯವಿರುವ ಯಾವುದೇ ಓದುವಿಕೆ, ಪೂರ್ಣಗೊಳಿಸಬೇಕಾದ ಗಣಿತದ ವ್ಯಾಯಾಮಗಳು, ಪರೀಕ್ಷೆಯ ಮೊದಲು ಪರಿಶೀಲಿಸಬೇಕಾದ ಮಾಹಿತಿ, ಅಥವಾ ಒಳಗೊಂಡಿರುವ ಶಿಕ್ಷಕರ ವಿವೇಚನೆಗೆ ಅನುಗುಣವಾಗಿ ಅಭ್ಯಾಸ ಮಾಡಬೇಕಾದ ಇತರ ಕೌಶಲ್ಯಗಳನ್ನು ಒಳಗೊಂಡಿರುತ್ತದೆ. ಹೋಮ್ವರ್ಕ್ ನಿಯೋಜನೆಗಳು ಎಷ್ಟು ಪರಿಣಾಮಕಾರಿ ಎಂಬ ವಿಷಯವು ವರ್ಷಗಳಿಂದ ಚರ್ಚೆಯಾಗಿದೆ. ಸಾಮಾನ್ಯ ಅರ್ಥದಲ್ಲಿ, ಹೋಮ್ವರ್ಕ್ ವಿಶೇಷವಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಕಾರ್ಯಕ್ಷಮತೆಯನ್ನು ಸುಧಾರಿಸುವುದಿಲ್ಲ. ಥಾಮಸ್ ಮತ್ತು ರುತ್ ರಾಯ್ ದಂಪತಿಗಳು ಹೋಮ್ವರ್ಕ್ ಹೊರತುಪಡಿಸಿ ಇತರ ಚಟುವಟಿಕೆಗಳತ್ತ ಗಮನಹರಿಸಲು ವಿದ್ಯಾರ್ಥಿಗಳಿಗೆ ಸಹಾಯ ಮಾಡುವ ಸಾಧನವಾಗಿ ನೋ ಹೋಮ್ವರ್ಕ್ ಡೇ ಅನ್ನು ರಚಿಸಿದ್ದಾರೆ. ಈ ದಿನದಂದು, ಪೋಷಕರು ತಮ್ಮ ಮಕ್ಕಳಿಗೆ ಮನೆಕೆಲಸದಿಂದ ವಿರಾಮ ನೀಡುತ್ತಾರೆ ಮತ್ತು ಶಾಲೆಯಲ್ಲಿ ಶಿಕ್ಷಕರು ಸಮಾನವಾಗಿ ಹೋಮ್ವರ್ಕ್ ನೀಡುವುದರಿಂದ ವಿರಾಮ ತೆಗೆದುಕೊಳ್ಳುತ್ತಾರೆ ಎಂದು ನಿರೀಕ್ಷಿಸಲಾಗಿದೆ.

ಹೋಮ್ವರ್ಕ್ ಒತ್ತಡಕ್ಕೆ ಕಾರಣವಾಗಬಹುದು, ಇದರಿಂದಾಗಿ ಕಲಿಕೆಯ ಪ್ರಕ್ರಿಯೆಗೆ ವಿರುದ್ಧವಾಗಿರುತ್ತದೆ ಎಂದು ಸಂಶೋಧನೆ ತೋರಿಸಿದೆ. ಮನೆಕೆಲಸವು ಅಭಿವೃದ್ಧಿಗೆ ಅಗತ್ಯವಾದ ಇತರ ಚಟುವಟಿಕೆಗಳಿಗಾಗಿ ಮಕ್ಕಳ ಉಚಿತ ಸಮಯವನ್ನು ತಿನ್ನುತ್ತದೆ ಮತ್ತು ಕಲಿಕೆಯಲ್ಲಿ ಅದರ ಪ್ರಾಮುಖ್ಯತೆಯು ಅಸ್ಪಷ್ಟವಾಗಿದೆ. ಡ್ಯೂಕ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕರು 10 ನಿಮಿಷಗಳ ನಿಯಮವನ್ನು ಹೋಮ್ವರ್ಕ್ಗೆ ಅನ್ವಯಿಸಬೇಕು ಎಂದು ಸಲಹೆ ನೀಡಿದ್ದಾರೆ.ಹೋಮ್ವರ್ಕ್ ಇಲ್ಲದ ದಿನವು ಚಿತ್ರದಿಂದ ಹೋಮ್ವರ್ಕ್ ಅನ್ನು ಸಂಪೂರ್ಣವಾಗಿ ತೆಗೆದುಹಾಕುವುದರ ಬಗ್ಗೆ ಅಲ್ಲ, ಆದರೆ ತೊಡಗಿಸಿಕೊಂಡಿರುವ ಪ್ರತಿಯೊಬ್ಬರೂ ಒಂದು ಹೆಜ್ಜೆ ಹಿಂದಕ್ಕೆ ತೆಗೆದುಕೊಂಡು ವಿಶ್ರಾಂತಿ ಪಡೆಯುವ ಉದ್ದೇಶವನ್ನು ಹೊಂದಿದೆ. ಇದು ಮಕ್ಕಳಿಗೆ ವಿರಾಮ ನೀಡುವುದು. ಒಳ್ಳೆಯ ಕಾದಂಬರಿಯನ್ನು ಓದುವುದು, ಕಲೆಯನ್ನು ರಚಿಸುವುದು, ಕ್ರೀಡೆಯನ್ನು ಆಡುವುದು ಅಥವಾ ಅಂತಹ ಯಾವುದೇ ಚಟುವಟಿಕೆಯಂತಹ ಇತರ ಲಾಭದಾಯಕ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುತ್ತದೆ.

ಸಂಜೆ ಮುಗಿಲು
ಬುಧವಾರ
6.3.2024



# ಕಾನೂನು ಉಲ್ಲಂಘನೆ: ಆಪಲ್ 16 ಕೋಟಿಗೂ ಹೆಚ್ಚು ದಂಡ

**ಬ್ರಸೆಲ್ಸ್:** ಸಂಗೀತ ಪ್ರಸಾರ ಸೇವೆಗಳನ್ನು ನಿರ್ಬಂಧಿಸಿದ ಆಪಲ್ ಗೆ ಇಯು ಆಂಟಿ ಟ್ರಸ್ಟ್ ನಿಯಮಗಳ ಅಡಿಯಲ್ಲಿ 16,500 ಕೋಟಿಗೂ ಹೆಚ್ಚು ದಂಡ ವಿಧಿಸಲಾಗಿದೆ.

ಆಪಲ್ನ ಆಪ್ ಸ್ಟೋರ್ನ ಹೊರಗೆ ಚಂದಾದಾರರಾಗಲು ಅಗ್ಗದ ಮಾರ್ಗಗಳನ್ನು ಕಂಡುಕೊಳ್ಳಬಹುದು ಎಂದು ಐಫೋನ್ ಬಳಕೆದಾರರಿಗೆ ಹೇಳಲು ಇತರ ಸಂಗೀತ ಪ್ರಸಾರ ಸೇವೆಗಳನ್ನು ಆಪ್ ತಡೆಗಟ್ಟಿತ್ತು. ಇದಕ್ಕಾಗಿ ಯುರೋಪಿಯನ್ ಯೂನಿಯನ್ ನಿಯಂತ್ರಕರು ಆಪಲ್ ಗೆ 16,500 ಕೋಟಿಗೂ ಹೆಚ್ಚು ದಂಡ ವಿಧಿಸಿದ್ದಾರೆ.

ಇಯು ಆಂಟಿ ಟ್ರಸ್ಟ್ ನಿಯಮಗಳ ಅಡಿಯಲ್ಲಿ ಇದು ಕಾನೂನು ಬಾಹಿರವಾಗಿದೆ ಎಂದು ಇಯು ಆಂಟಿಟ್ರಸ್ಟ್ ಮುಖ್ಯಸ್ಥ ಮಾರ್ಗರೆಥ್ ವೆಸ್ಟೇಜರ್ ಹೇಳಿದ್ದಾರೆ. ಇಯು ಕಾನೂನನ್ನು ಉಲ್ಲಂಘಿಸಿದ್ದಕ್ಕಾಗಿ ಆಪಲ್ಗೆ ದಂಡ ವಿಧಿಸಿರುವುದು ಇದೇ ಮೊದಲು. 2019ರಲ್ಲಿ ಸ್ವೀಡಿಷ್ ಸ್ಟ್ರೀಮಿಂಗ್ ಸೇವೆ ನೀಡುವ ಸ್ಪೋಟಿಫೈ ಆಪಲ್ ವಿರುದ್ಧ ದೂರು ನೀಡಿತ್ತು. ಇದೀಗ ಇಯು ಆಂಟಿ ಟ್ರಸ್ಟ್ ನೀಡಿರುವ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವುದಾಗಿ ಆಪಲ್ ಹೇಳಿದೆ.

# ಎಲೋನ್ ಮಸ್ಕ್ ವಿರುದ್ಧ FIR



**ನವದೆಹಲಿ:** ಮಾಜಿ ಸಿಇಒ ಪರಾಗ್ ಅಗರ್ವಾಲ್ ಸೇರಿದಂತೆ ಟ್ವಿಟರ್ನ ಮಾಜಿ ಉನ್ನತ ಅಧಿಕಾರಿಗಳು ಎಲೋನ್ ಮಸ್ಕ್ ವಿರುದ್ಧ ಮೊಕದ್ದಮೆ ಹೂಡಿದ್ದಾರೆ, ಅವರು ಸಾಮಾಜಿಕ ಮಾಧ್ಯಮ ಕಂಪನಿಯನ್ನು ವಹಿಸಿಕೊಂಡ ನಂತರ ಸುಮಾರು 130 ಮಿಲಿಯನ್ ಡಾಲರ್ ಬಾಕಿ ಉಳಿಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ಕ್ಯಾಲಿಫೋರ್ನಿಯಾ ಫೆಡರಲ್ ನ್ಯಾಯಾಲಯದಲ್ಲಿ ಸೋಮವಾರ ದಾಖಲಾದ ಮೊಕದ್ದಮೆಯಲ್ಲಿ, ಮಸ್ಕ್ ''ತನ್ನೊಂದಿಗೆ ಭಿನ್ನಾಭಿಪ್ರಾಯ ಹೊಂದಿರುವ ಯಾರ ವಿರುದ್ಧವೂ ಒರಟಾಗಿ ವರ್ತಿಸಲು ತನ್ನ ಸಂಪತ್ತು ಮತ್ತು ಅಧಿಕಾರವನ್ನು ಬಳಸುತ್ತಿದ್ದಾರೆ'' ಎಂದು ಆರೋಪಿಸಿದೆ. ಮಸ್ಕ್ ತನ್ನ ಬಿಲ್ಗಳನ್ನು ಪಾವತಿಸುವುದಿಲ್ಲ, ನಿಯಮಗಳು ಅವನಿಗೆ ಅನ್ವಯಿಸುವುದಿಲ್ಲ ಎಂದು ನಂಬುತ್ತಾರೆ'' ಎಂದು ಅದು ಹೇಳಿದೆ. 57.4 ಮಿಲಿಯನ್ ಡಾಲರ್ ಲಾಭ ಕೋರಿರುವ ಮಾಜಿ ಸಿಇಒ ಪರಾಗ್ ಅಗರ್ವಾಲ್, 44.5 ಮಿಲಿಯನ್ ಡಾಲರ್ ಕೇಳುತ್ತಿರುವ ಮಾಜಿ ಸಿಎಫ್ಒ ನೆಡ್ ಸೆಗಲ್, ಮಾಜಿ ಮುಖ್ಯ ಕಾನೂನು ಅಧಿಕಾರಿ ವಿಜಯಾ ಗಡ್ಡೆ ಮತ್ತು ಕಂಪನಿಯ ಅಂದಿನ ಜನರಲ್ ಕೌನ್ಸೆಲ್ ಸೀನ್ ಎಡ್ಜೆಟ್ ಈ ಮೊಕದ್ದಮೆಯ ಹಿಂದೆ ಇದ್ದಾರೆ.

## ಇಸ್ರೇಲ್‌ನಲ್ಲಿ ಕ್ಷಿಪಣಿ ದಾಳಿ



**ಇಸ್ರೇಲ್:** ಉತ್ತರ ಇಸ್ರೇಲ್ ಮೇಲೆ ದಕ್ಷಿಣ ಲೆಬನಾನ್ ನಿಂದ ನಡೆದ ಕ್ಷಿಪಣಿ ದಾಳಿಯಲ್ಲಿ ಒಬ್ಬರು ಮೃತಪಟ್ಟು ಏಳು ಮಂದಿ ಗಾಯಗೊಂಡಿದ್ದಾರೆ. ಇಲ್ಲಿನ ಜನರು ಸುರಕ್ಷಿತ ಪ್ರದೇಶಗಳಿಗೆ ತೆರಳುವಂತೆ ಇಸ್ರೇಲಿ ಆರ್ಮಿ ರೇಡಿಯೋ ಹೇಳಿದೆ. ಇಸ್ರೇಲ್ ನಲ್ಲಿ ಕ್ಷಿಪಣಿ ದಾಳಿಗೆ ಕೇರಳ ರಾಜ್ಯದ ಕೊಲ್ಲಂನ ಪ್ಯಾಟ್ ನಿಬಿನ್ ಮ್ಯಾಕ್ಸ್ವೆಲ್ ಮೃತಪಟ್ಟಿದ್ದು, ಜೋಸೆಫ್ ಜಾರ್ಜ್ ಬುಷ್, ಮತ್ತು ಪಾಲ್ ಮೆಲ್ವಿನ್ ಎಂಬವರಿಬ್ಬರು ಗಾಯಗೊಂಡಿದ್ದಾರೆ.ಉತ್ತರ ಇಸ್ರೇಲ್ ನ ಹೆಜ್ಬೊಲ್ಲಾದಲ್ಲಿ ನಡೆದ ಕ್ಷಿಪಣಿ ದಾಳಿಗೆ ಅವರು ಬಲಿಯಾಗಿದ್ದಾರೆ. ಪ್ಯಾಟ್ ನಿಬಿನ್ ಮ್ಯಾಕ್ಸ್ವೆಲ್ ಅವರ ಪತ್ನಿ ಏಳು ತಿಂಗಳ ಗರ್ಭಿಣಿಯಾಗಿದ್ದು, ಅವರಿಗೆ ಐದು ವರ್ಷದ ಮಗಳಿದ್ದಾಳೆ ಎಂದು ಪ್ಯಾಟ್ ನಿಬಿನ್ ಮ್ಯಾಕ್ಸ್ವೆಲ್ ಅವರ ತಂದೆ ಪಾಥ್ರೋಸ್ ಮ್ಯಾಕ್ಸ್ವೆಲ್ ತಿಳಿಸಿದ್ದಾರೆ.ಪ್ಯಾಟ್ ನಿಬಿನ್ ಎರಡು ತಿಂಗಳ ಹಿಂದೆಯಷ್ಟೇ ಕೆಲಸಕ್ಕಾಗಿ ಇಸ್ರೇಲ್ಗೆ ತೆರಳಿದ್ದರು. ಅವರ ಪಾರ್ಥೀವ ಶರೀರವನ್ನು ಮುಂದಿನ ನಾಲ್ಕು ದಿನಗಳಲ್ಲಿ ಅಂತ್ಯಕ್ರಿಯೆಗಾಗಿ ಭಾರತಕ್ಕೆ ತರುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

## ಸಮುದ್ರದ ಅಡಿಯಲ್ಲಿ ಡೇಟಾ ಕೇಬಲ್ಗಳಿಗೆ ಕತ್ತರಿ

**ದೆಹಲಿ:** ಜಾಗತಿಕ ಇಂಟರ್ನೆಟ್ ಮತ್ತು ದೂರಸಂಪರ್ಕವನ್ನು ಸಂಪರ್ಕಿಸಲು ಕೆಂಪು ಸಮುದ್ರದ ಅಡಿಯಲ್ಲಿ ಮೂರು ಡೇಟಾ ಕೇಬಲ್ಗಳನ್ನು ಕಡಿತಗೊಳಿಸಲಾಗಿದೆ, ಇದರಿಂದ ಪ್ರಪಂಚದಾದ್ಯಂತ ಇಂಟರ್ನೆಟ್ ಸೇವೆಗಳಲ್ಲಿ ವ್ಯತ್ಯಾಸವನ್ನು ಉಂಟುಮಾಡುತ್ತದೆ. ಹಾಂಕಾಂಗ್ ಮೂಲದ ಊಉಅ ಗ್ಲೋಬಲ್ ಕಮ್ಯುನಿಕೇಷನ್ಸ್ ಈ ಸಮಸ್ಯೆಯ ಕುರಿತು ಹೇಳಿಕೆಯಲ್ಲಿ ಮಾಹಿತಿ ನೀಡಿದೆ, ಇದು ಜಾಗತಿಕ ಇಂಟರ್ನೆಟ್ ಟ್ರಾಫಿಕ್ನ ಸರಿಸುಮಾರು 25% ರಷ್ಟು ಪರಿಣಾಮ ಬೀರುತ್ತದೆ. ಇನ್ನೂ ಕಾರ್ಯನಿರ್ವಹಿಸುತ್ತಿರುವ 11 ಕೇಬಲ್ಗಳ ಮೂಲಕ ಜಾಗತಿಕ ಟ್ರಾಫಿಕ್ ಅನ್ನು ಮರುಹೊಂದಿಸುವ ಮೂಲಕ ಟ್ರಾಫಿಕ್ ಸಮಸ್ಯೆಗಳನ್ನು ಕಡಿಮೆ ಮಾಡಲು ಕಂಪನಿಗಳು ಈಗಾಗಲೇ ಕ್ರಮಗಳನ್ನು ತೆಗೆದುಕೊಳ್ಳುತ್ತಿವೆ ಎನ್ನಲಾಗಿದೆ.



# ನನ್ನ ದೇಹ ನನ್ನ ಹಕ್ಕು

## ಫ್ರಾನ್ಸ್‌ನಲ್ಲಿ ಗರ್ಭಪಾತಕ್ಕೆ ಅನುಮತಿ



**ವರ್ಸೈಲ್ಸ್:** ಗರ್ಭಪಾತಕ್ಕೆ ಸಂವಿಧಾನಕವಾಗಿ ಮಹಿಳೆಯರಿಗೆ ಹಕ್ಕು ಸ್ಥಾನಮಾನ ನೀಡಿದ ವಿಶ್ವದ ಮೊದಲ ದೇಶ ಎನ್ನುವ ಖ್ಯಾತಿಗೆ ಫ್ರಾನ್ಸ್ ಇದೀಗ ಪಾತ್ರವಾಗಿದೆ.

ಉಭಯ ಸದನಗಳ ಅಧಿವೇಶನದಲ್ಲಿ ಸೋಮವಾರ ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯುಯೆಲ್ ಮ್ಯಾಕ್ರನ್ ಅವರ ಸರ್ಕಾರ ಮಂಡಿಸಿದ ಮಸೂದೆಗೆ 780 ಮತಗಳಿಂದ ಅನುಮೋದನೆ ದೊರೆತಿದ್ದು, ಇದಕ್ಕೆ ವಿರುದ್ಧವಾಗಿ ಕೇವಲ 72 ಮತಗಳು ಚಲಾವಣೆಯಾಗಿದೆ.

ದೇಶದಲ್ಲಿ ಗರ್ಭಪಾತವನ್ನು ಕಾನೂನುಬದ್ಧಗೊಳಿಸುವ ಕ್ರಮಕ್ಕೆ ಫ್ರಾನ್ಸ್ನ ಶೇ. 80ರಷ್ಟು ಮಂದಿ ಬೆಂಬಲಿಸಿದ್ದಾರೆ.

ಈ ಬಗ್ಗೆ ಪ್ರಧಾನಿ ಗೇಬ್ರಿಯಲ್ ಅಟಲ್ ಮಾತನಾಡಿ, ಹೆಣ್ಣಿನ ದೇಹ ಅವರದ್ದು ಅವರ ಪರವಾಗಿ ಯಾರೂ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಿಲ್ಲ ಎಂದಿದ್ದಾರೆ.

ಫ್ರಾನ್ಸ್ನ 1974 ರ ಕಾನೂನು ಪ್ರಕಾರ ಮಹಿಳೆಯರು ಗರ್ಭಪಾತಕ್ಕೆ ಕಾನೂನುಬದ್ಧ ಹಕ್ಕು ಹೊಂದಿದ್ದರು. ಆದರೆ ಅದಕ್ಕೆ ಆಗ ತೀವ್ರ ವಿರೋಧ ವ್ಯಕ್ತವಾಗಿತ್ತು.

ಸದನದಲ್ಲಿ ಗರ್ಭಪಾತ ಹಕ್ಕು ಸಂವಿಧಾನಕ್ಕೆ ಸೇರ್ಪಡೆಯಾದಾಗ ಗರ್ಭಪಾತ ಹಕ್ಕಿಗಾಗಿ ಹೋರಾಡುತ್ತಿರುವ ಕಾರ್ಯಕರ್ತರು ಐಫೆಲ್ ಟವರ್ ಮುಂದೆ ಚಪ್ಪಾಳೆ ತಟ್ಟಿ ಸಂಭ್ರಮ ವ್ಯಕ್ತಪಡಿಸಿದರು.

### ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅನಿಸಿಕೆ

# ಮಾದಕ ದ್ರವ್ಯ ಮುಕ್ತ ಗುರಿಯನ್ನು ಸಾಧಿಸುವೆಡೆ ಭಾರತ ವೇಗವಾಗಿ ಸಾಗುತ್ತಿದೆ

**ನವದೆಹಲಿ:** ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಮಾದಕವಸ್ತು ವ್ಯಾಪಾರ ಮತ್ತು ಅದರ ದುಷ್ಪರಿಣಾಮಗಳನ್ನು ಎದುರಿಸುವಲ್ಲಿ ಮೋದಿ ಸರ್ಕಾರದ ಯಶಸ್ಸಿನ ಕುರಿತು ಮೂರು ವೀಡಿಯೊಗಳನ್ನು ಬಿಡುಗಡೆ ಮಾಡಿದರು. ದೇಶದಲ್ಲಿ ಡ್ರಗ್ಸ್ ಪತ್ತೆ, ಜಾಲಗಳ ನಾಶ, ಅಪರಾಧಿಗಳ ಬಂಧನ ಮತ್ತು ಮಾದಕ ವ್ಯಸನಿಗಳ ಪುನರ್ವಸತಿ ಮೂಲಕ, ಮಾದಕ ದ್ರವ್ಯ ಮುಕ್ತ ಭಾರತದ ಗುರಿಯನ್ನು ಸಾಧಿಸುವತ್ತ ಮೋದಿ ಸರ್ಕಾರ ವೇಗವಾಗಿ ಸಾಗುತ್ತಿದೆ. ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ ಮಾದಕ ದ್ರವ್ಯ ಮುಕ್ತ ಭಾರತವು ಮುಂಬರುವ ಪೀಳಿಗೆಗೆ ಬಹುದೊಡ್ಡ ಕೊಡುಗೆಯಾಗಲಿದೆ.

ಸ್ವಾತಂತ್ರ್ಯದ ಸುವರ್ಣ ಯುಗದಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ಕಟ್ಟುನಿಟ್ಟಿನ ಧೋರಣೆ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ಸಮರ್ಥ ಮಾರ್ಗದರ್ಶನದಲ್ಲಿ, ಮಾದಕ ದ್ರವ್ಯ ವ್ಯಾಪಾರವನ್ನು ತಡೆಗಟ್ಟಲು ಸಿದ್ಧತೆಗಳು ಭರದಿಂದ ನಡೆಯುತ್ತಿವೆ, ಈ ಕ್ರಮಗಳ ಮೂಲಕ ಮಾದಕ ದ್ರವ್ಯಗಳ ಜಪ್ತಿ ಮತ್ತು ಬಂಧನಗಳ ಸಂಖ್ಯೆಯಲ್ಲಿ ತೀವ್ರ ಹೆಚ್ಚಳವಾಗಿದೆ. ಶಾ ಅವರ ನಿಷ್ಠುರ ನೀತಿಗಳಿಂದಾಗಿ, ಸರ್ಕಾರಗಳು ಮತ್ತು ಏಜೆನ್ಸಿಗಳ ನಡುವಿನ ಸಮನ್ವಯ, ಸಹಕಾರ ಮತ್ತು ಸಹಯೋಗದ ಮೂಲಕ, ಮಾದಕವಸ್ತು ವಶಪಡಿಸಿಕೊಳ್ಳುವಿಕೆಯಲ್ಲಿ ಮತ್ತು ಪ್ರಕರಣಗಳ ದಾಖಲೆಗಳಲ್ಲಿ ವೃದ್ಧಿಯಾಗಿದೆ.



ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ ಗೃಹ ಸಚಿವಾಲಯವು ಅಕ್ರಮ ಮಾದಕ ದ್ರವ್ಯದ ವ್ಯಾಪಾರವನ್ನು ತಡೆಯಲು ನಡೆಸಿದ ಬಹುಮುಖ ಪ್ರಯತ್ನಗಳಿಂದ, ವಶಪಡಿಸಿಕೊಂಡ ಮಾದಕವಸ್ತುಗಳ ಪ್ರಮಾಣವು ಸುಮಾರು 100% ಹೆಚ್ಚಾಗಿವೆ ಮತ್ತು ಅದನ್ನು ವ್ಯವಹರಿಸುವವರ ವಿರುದ್ಧ ದಾಖಲಾಗುವ ಪ್ರಕರಣಗಳು 152% ಹೆಚ್ಚಾಗಿವೆ.

ಅಂಕಿಅಂಶಗಳ ಪ್ರಕಾರ, 2006 ರಿಂದ 2013 ರ ಅವಧಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ 1257 ಇತ್ತು, ಇದು 2014–2023 ರ ಅವಧಿಯಲ್ಲಿ 3 ಪಟ್ಟು ಏರಿಕೆಯಾಗಿ 3755 ಕ್ಕೆ ತಲುಪಿದೆ. 2006–13 ರ ಅವಧಿಯಲ್ಲಿ 1363 ಬಂಧನಗಳಾಗಿದ್ದವು, ಇವು 4 ಪಟ್ಟು ಹೆಚ್ಚಿ 2014–23 ಅವಧಿಯಲ್ಲಿ ಬಂಧನಗಳ ಸಂಖ್ಯೆ 5745 ಕ್ಕೆ ತಲುಪಿದೆ. 2006–13ರಲ್ಲಿ ವಶಪಡಿಸಿಕೊಂಡಿದ್ದ 1.52 ಲಕ್ಷ ಕೆಜಿ ಡ್ರಗ್ಸ್ ಪ್ರಮಾಣ ಮೋದಿ ಆಡಳಿತದಲ್ಲಿ ದ್ವಿಗುಣಗೊಂಡು 3.95 ಲಕ್ಷ ಕೆಜಿಗೆ ತಲುಪಿದೆ. 2006–13ರ ಅವಧಿಯಲ್ಲಿ ವಶಪಡಿಸಿಕೊಂಡ ಡ್ರಗ್ಸ್ ಮೌಲ್ಯವು ರೂ.768 ಕೋಟಿಯಿತ್ತು, ಇದು ಮೋದಿ ಸರ್ಕಾರದ ಅವಧಿಯಲ್ಲಿ 30 ಪಟ್ಟು ಹೆಚ್ಚಾಗಿ ರೂ.22,000 ಕೋಟಿಗೆ ತಲುಪಿದೆ.

ಮೋದಿಯವರ ನಾಯಕತ್ವ ಮತ್ತು ಶಾ ಅವರ ದೂರದೃಷ್ಟಿಯಿಂದಾಗಿ, ಮಾದಕ ದ್ರವ್ಯ ವಿರೋಧಿ ಸಂಸ್ಥೆಗಳು 12,000 ಕೋಟಿ ರೂಪಾಯಿ ಮೌಲ್ಯದ 12 ಲಕ್ಷ ಕಿಲೋಗ್ರಾಂಗಳಷ್ಟು ಡ್ರಗ್ಸ್‌ಅನ್ನು ನಾಶಪಡಿಸುವ ಅಭೂತಪೂರ್ವ ಕೆಲಸವನ್ನು ಮಾಡಿವೆ. ಮಾದಕ ದ್ರವ್ಯ ಮುಕ್ತ ಭಾರತದ ಕನಸನ್ನು ನನಸಾಗಿಸಲು ಕೇಂದ್ರ ಮತ್ತು ರಾಜ್ಯ ಮಾದಕ ದ್ರವ್ಯ ಕಾನೂನು ಜಾರಿ ಸಂಸ್ಥೆಗಳ ನಡುವೆ ಉತ್ತಮ ಒಗ್ಗಟ್ಟು ಮತ್ತು ಹೊಂದಾಣಿಕೆಗಾಗಿ 2019 ರಲ್ಲಿ ನಾಲ್ಕು ಹಂತದ ಓಅಔಖಆ ಕಾರ್ಯವಿಧಾನವನ್ನು ಬಲಪಡಿಸಲಾಯಿತು.

ಮೋದಿ ಸರಕಾರದಲ್ಲಿ, ಮಾದಕ ವ್ಯಸನ ಮುಕ್ತ ನವ ಭಾರತ ನಿರ್ಮಾಣಕ್ಕೆ ಅಮಿತ್ ಶಾ ಅವರ ತಂತ್ರಗಾರಿಕೆಗಳು ಫಲ ನೀಡುತ್ತಿರುವುದಕ್ಕೆ ಕೇವಲ ನಮ್ಮ ದೇಶವಲ್ಲದೇ ಜಗತ್ತಿನಾದ್ಯಂತದ ಜನರು ಸಾಕ್ಷಿಯಾಗಿದ್ದಾರೆ.

# ಸಂದೇಶ್‌ಖಾಲಿ ಹಿಂಸಾಚಾರ ಪ್ರಕರಣ: ಸಿಬಿಐ ತನಿಖೆಗೆ ಆದೇಶ

ಕೋಲ್ಕತ್ತಾ: ಪ್ರಕರಣದ ಸಿಬಿಐ ತನಿಖೆಗೆ ಕೋಲ್ಕತ್ತಾ ಹೈಕೋರ್ಟ್ ಆದೇಶಿಸಿದೆ. ತೃಣಮೂಲ ಕಾಂಗ್ರೆಸ್‌ನ ಮಾಜಿ ನಾಯಕ ಮತ್ತು ಸಂದೇಶ್ ಖಾಲಿಯ ಪ್ರಬಲ ನಾಯಕ ಶೇಖ್ ಷಹಜಹಾನ್‌ನನ್ನು ಸಿಬಿಐ ವಶಕ್ಕೆ ಒಪ್ಪಿಸುವಂತೆ ಹೈಕೋರ್ಟ್ ಪಶ್ಚಿಮ ಬಂಗಾಳ ಪೊಲೀಸರಿಗೆ ಆದೇಶಿಸಿದೆ.

ತೃಣಮೂಲ ಕಾಂಗ್ರೆಸ್‌ನ ಮಾಜಿ ನಾಯಕ ಶೇಖ್ ಷಹಜಹಾನ್ ಮನೆ ಮೇಲೆ ದಾಳಿ ನಡೆಸಲು ಜಾರಿ ನಿರ್ದೇಶನಾಲಯ ತಂಡ ಹೊರಟಿದ್ದ ವೇಳೆ ಅಧಿಕಾರಿಗಳನ್ನು ತಡೆದು ಕಿಡಿಗೇಡಿಗಳ ಗುಂಪು ದಾಳಿ ನಡೆಸಿತ್ತು. ಈ ಪ್ರಕರಣದ ವಿಚಾರಣೆ ನಡೆಸಿದ ಕೋಲ್ಕತ್ತಾ ಹೈಕೋರ್ಟ್ ಕೇಂದ್ರೀಯ ತನಿಖಾ ದಳ ತನಿಖೆಗೆ ಆದೇಶಿಸಿದೆ. ನ್ಯಾಯಾಲಯದ ಆದೇಶದಂತೆ ಆರೋಪಿ ಷಹಜಹಾನ್‌ನನ್ನು ಪೊಲೀಸರು ಸಿಬಿಐಗೆ ಹಸ್ತಾಂತರಿಸಿದ್ದಾರೆ.

ಕೋಲ್ಕತ್ತಾ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಟಿಎಸ್ ಶಿವಜ್ಞಾನಂ ಅವರಿದ್ದ ಏಕಸದಸ್ಯ ಪೀಠವು ನಜತ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಸಂಖ್ಯೆ 8 ಮತ್ತು 9 ಮತ್ತು ಬಂಗಾವ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಸಂಖ್ಯೆ 18ನ್ನು ಸಿಬಿಐ ತನಿಖೆಗೆ ಒಳಪಡಿಸುವಂತೆ ಆದೇಶಿಸಿದೆ. ಈ ಹಿಂದೆ, ಸಂದೇಶಖಾಲಿ ಘಟನೆಯ ತನಿಖೆಗಾಗಿ ಹೈಕೋರ್ಟ್ ವಿಶೇಷ ತನಿಖಾ ತಂಡವನ್ನು (ಎಸ್‌ಐಟಿ) ರಚಿಸಿತ್ತು. ಇದೀಗ ವಿಭಾಗೀಯ ಪೀಠವು ಎಸ್‌ಐಟಿಯನ್ನು ರದ್ದುಗೊಳಿಸಿ ಸಿಬಿಐ ತನಿಖೆಗೆ ಆದೇಶಿಸಿದೆ.ಪಡಿತರ ಹಗರಣ ಪ್ರಕರಣದಲ್ಲಿ ಷಹಜಹಾನ್ ಮನೆ ಮೇಲೆ ಜ.5 ರಂದು ಇಡಿ ಅಧಿಕಾರಿಗಳು ದಾಳಿಗೆ ತೆರಳುತ್ತಿದ್ದಾಗ, ಆರೋಪಿಯ ಬೆಂಬಲಿಗರು ದಾಳಿ ಮಾಡಿದ್ದರು. ದಾಳಿಯಲ್ಲಿ ಮೂವರು ಇಡಿ ಅಧಿಕಾರಿಗಳು ಗಾಯಗೊಂಡಿದ್ದರು.

# ವಿಶ್ವದ್ಯಾಂತ ಮೆಟಾದ 'ಫೇಸ್ಬುಕ್, ಇನ್ಸ್ಟಾಗ್ರಾಮ್' ಸರ್ವರ್ ಡೌನ್

**ನವದೆಹಲಿ:** ಸಾಮಾಜಿಕ ಮಾಧ್ಯಮ ದೈತ್ಯ ಫೇಸ್ಬುಕ್ ಭಾರತ ಸೇರಿ ವಿಶ್ವದ್ಯಾಂತ ಸರ್ವರ್ ಡೌನ್ ಆಗಿದ್ದು, ಲಕ್ಷಾಂತರ ಬಳಕೆದಾರರು ತಮ್ಮ ಖಾತೆಗಳನ್ನು ಪ್ರವೇಶಿಸಲು ಸಾಧ್ಯವಾಗಲಿಲ್ಲ.

ಪ್ರಪಂಚದಾದ್ಯಂತದ ಬಳಕೆದಾರರು ತಮ್ಮ ಫೇಸ್ಬುಕ್ ಪ್ರೊಫೈಲ್ಗಳನ್ನು ಲಾಗ್ ಇನ್ ಮಾಡುವಲ್ಲಿ ಮತ್ತು ಪ್ರವೇಶಿಸುವಲ್ಲಿ ತೊಂದರೆ ಅನುಭವಿಸುತ್ತಿದ್ದಾರೆ. ಇನ್ಸ್ಟಾಗ್ರಾಮ್ ಮತ್ತು ವಾಟ್ಸಾಪ್ ಸೇರಿದಂತೆ ಕಂಪನಿಯ ಒಡೆತನದ ಇತರ ಸೇವೆಗಳಲ್ಲಿ ಸಮಸ್ಯೆಗಳನ್ನ ವರದಿ ಮಾಡಿದ್ದಾರೆ.

ಬಳಕೆದಾರರು ತಮ್ಮ ಫೇಸ್ಬುಕ್ ಖಾತೆಗಳಿಂದ ಲಾಗ್ ಔಟ್ ಆಗುವುದು, ಮತ್ತೆ ಲಾಗ್ ಇನ್ ಮಾಡುವುದು ಅಸಾಧ್ಯವಾಗುವಂತಹ ವಿವಿಧ ಸಮಸ್ಯೆಗಳನ್ನ ವರದಿ ಮಾಡುತ್ತಿದ್ದಾರೆ. ಅಂತೆಯೇ, ಇನ್ಸ್ಟಾಗ್ರಾಮ್ ಬಳಕೆದಾರರು ತಮ್ಮ ಫೀಡ್ಗಳನ್ನ ರಿಫ್ರೆಶ್'ಗೊಳಿಸಲು ತೊಂದರೆಗಳನ್ನ ಎದುರಿಸುತ್ತಿದ್ದಾರೆ. ಕೆಲವು ವ್ಯಕ್ತಿಗಳಿಗೆ ಸ್ಟೋರಿ ಮತ್ತು ಕಾಮೆಂಟ್ಗಳು ಲೋಡ್ ಆಗಲು ವಿಫಲವಾಗಿವೆ. ಮೆಟಾ ಅಭಿವೃದ್ಧಿಪಡಿಸಿದ ಥ್ರೆಡ್ಸ್ ಎಂಬ ಅಪ್ಲಿಕೇಶನ್ ಸಹ ಸಂಪೂರ್ಣ ಸ್ಥಗಿತವನ್ನ ಅನುಭವಿಸುತ್ತಿದೆ, ಬಿಡುಗಡೆಯಾದ ನಂತರ ದೋಷ ಸಂದೇಶವನ್ನ ಪ್ರದರ್ಶಿಸುತ್ತದೆ.



## ಹಿಮಾಚಲ ಪ್ರದೇಶದ ರಾಜ್ಯಸಭಾ ಸಂಸದ ಸ್ಥಾನಕ್ಕೆ ಜೆಪಿ ನಡ್ಡಾ ರಾಜೀನಾಮೆ



**ಶಿಮ್ಲಾ:** ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ಹಿಮಾಚಲ ಪ್ರದೇಶದ ರಾಜ್ಯಸಭಾ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಅವರ ರಾಜೀನಾಮೆಯನ್ನು ರಾಜ್ಯಸಭಾ ಅಧ್ಯಕ್ಷರು ಅಂಗೀಕರಿಸಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ಇತ್ತೀಚೆಗೆ ನಡೆದ ರಾಜ್ಯಸಭಾ ಚುನಾವಣೆಯಲ್ಲಿ ಗುಜರಾತ್‌ನಿಂದ ಸದನಕ್ಕೆ ಆಯ್ಕೆಯಾದ ಕಾರಣ ಹಿಮಾಚಲ ಪ್ರದೇಶದ ರಾಜ್ಯಸಭಾ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಜೆಪಿ ನಡ್ಡಾ ಅವರು ಗುಜರಾತ್ ನಿಂದ ರಾಜ್ಯಸಭಾ ಸದಸ್ಯರಾಗಿ 13 ದಿನಗಳ ಹಿಂದೆ ಫೆಬ್ರವರಿ 20 ರಂದು ಅವಿರೋಧವಾಗಿ ಆಯ್ಕೆಯಾದರು. ಲೋಕಸಭಾ ಚುನಾವಣೆಗೆ ಪಕ್ಷದ ಅಭ್ಯರ್ಥಿಗಳ ಮೊದಲ ಪಟ್ಟಿ ಹೊರಬಂದ ನಂತರ ನಡ್ಡಾ ರಾಜೀನಾಮೆ ನೀಡಿದರು. ಹಿಮಾಚಲದಿಂದ ನಡ್ಡಾ ಅವರ ಅಧಿಕಾರಾವಧಿಯಲ್ಲಿ 14 ದಿನಗಳಿದ್ದವು. ಆದರೆ ಅದಕ್ಕೂ ಮೊದಲು ನಡ್ಡಾ ಅವರು ರಾಜ್ಯಸಭಾ ಸಂಸದ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಫೆ. 27 ರಂದು ಚುನಾವಣೆ: ಫೆಬ್ರವರಿ 27 ರಂದು 15 ರಾಜ್ಯಗಳ 56 ಸ್ಥಾನಗಳಿಗೆ ರಾಜ್ಯಸಭಾ ಚುನಾವಣೆ ನಡೆದಿತ್ತು. ಈ ಪೈಕಿ 41 ಸ್ಥಾನಗಳಲ್ಲಿ ಅಭ್ಯರ್ಥಿಗಳು ಅವಿರೋಧವಾಗಿ ಗೆದ್ದಿದ್ದಾರೆ. ಯುಪಿಯಲ್ಲಿ 10, ಹಿಮಾಚಲದಲ್ಲಿ 1 ಮತ್ತು ಕರ್ನಾಟಕದ 4 ಸ್ಥಾನಗಳಿಗೆ ಮತದಾನ ನಡೆದಿದೆ. ಈ ಪೈಕಿ ಯುಪಿಯ 10 ಸ್ಥಾನಗಳ ಪೈಕಿ 8 ಬಿಜೆಪಿ ಮತ್ತು 2 ಎಸ್‌ಪಿ ಪಾಲಾಗಿದೆ. ಹಿಮಾಚಲದಲ್ಲಿ ಬಿಜೆಪಿ ಗೆಲುವು ಸಾಧಿಸಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ 3 ಸ್ಥಾನಗಳನ್ನು ಗೆದ್ದರೆ, ಬಿಜೆಪಿ 1 ಸ್ಥಾನವನ್ನು ಗೆದ್ದಿದೆ.

# ಭಾರತೀಯ ಸೇನೆ ಇಲ್ಲಿ ಇರಬಾರದು: ಮಾಲ್ಡೀವ್ಸ್ ಅಧ್ಯಕ್ಷ



**ದೆಹಲಿ:** ಮೇ 10ರ ಬಳಿಕ ಭಾರತೀಯ ಸೇನೆಯ ಯಾರೂ ನಮ್ಮ ದೇಶದಲ್ಲಿ ಇರಬಾರದು ಎಂದು ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮೊಯಿಝು ಆಗ್ರಹಿಸಿದ್ದಾರೆ.

ಇತ್ತೀಚೆಗೆ ಭಾರತದ ಜೊತೆಗೆ ಸಂಬಂಧ ಹಳಸಿದ ಬೆನ್ನಲ್ಲೇ ಚೀನಾದ ಜೊತೆ ಮಾಲ್ಡೀವ್ಸ್ ಕೈ ಜೋಡಿಸಿತ್ತು. ತನ್ನ ನೆಲದಲ್ಲಿದ್ದ ಭಾರತೀಯ ಸೈನಿಕರನ್ನು ತೆರವುಗೊಳಿಸಲು ಸೂಚಿಸಿತ್ತು.

ಇದರ ಬೆನ್ನಲ್ಲೇ ಭಾರತ–ಮಾಲ್ಡೀವ್ಸ್ ನಡುವಿನ ಸಂಬಂಧ ಹದಗೆಡಲು ಶುರುವಾಗಿತ್ತು. ಇದಕ್ಕೆಲ್ಲಾ ಚೀನಾ ಜೊತೆಗಿನ ಬಾಂಧವ್ಯವೇ ಕಾರಣ ಎಂಬ ಮಾತುಗಳೂ ಕೇಳಿ ಬಂದಿತ್ತು.

ಇದೀಗ ಮತ್ತೊಮ್ಮೆ ಭಾರತೀಯ ಸೈನಿಕರು ಸಮವಸ್ತ್ರದಲ್ಲಿ ಅಥವಾ ಸಾಮಾನ್ಯ ದಿರಿಸಿನಲ್ಲಿಯೇ ಸರಿ ನಮ್ಮ ದೇಶದಲ್ಲಿ ಮೇ 10 ರ ಬಳಿಕ ಇರಕೂಡದು ಎಂದು ಮೊಹಮ್ಮದ್ ಮೊಯಿಝು ಆದೇಶಿಸಿದ್ದಾರೆ. 'ಭಾರತೀಯ ಸೈನಿಕರು ನಮ್ಮ ದೇಶದಿಂದ ಹೋಗಲ್ಲ. ಮತ್ತೆ ಸಮವಸ್ತ್ರ ಬಿಟ್ಟು ಸಾಮಾನ್ಯ ದಿರಿಸಿನಲ್ಲಿ ಇಲ್ಲಿಯೇ ಇರಲಿದ್ದಾರೆ ಎಂಬಿತ್ಯಾದಿ ಸುದ್ದಿಗಳು ಹರಡುತ್ತಿವೆ. ಆದರೆ ಇದೆಲ್ಲಾ ಸುಳ್ಳು. ಯಾರೂ ಮೇ 10 ರ ನಂತರ ನಮ್ಮ ದೇಶದಲ್ಲಿ ಇರಬಾರದು' ಎಂದಿದ್ದಾರೆ.

ಭಾರತೀಯ ಸೈನಿಕರು ಮಾಲ್ಡೀವ್ಸ್ ನಲ್ಲಿ ಮಾನವೀಯ ಮತ್ತು ವೈದ್ಯಕೀಯ ತುರ್ತು ಸಂದರ್ಭದಲ್ಲಿ ಸಹಾಯ ಮಾಡುವುದು ಇತ್ಯಾದಿ ಕೆಲಸಗಳನ್ನು ಮಾಡುತ್ತಿದ್ದಾರೆ. ಆದರೆ ಮಾಲ್ಡೀವ್ಸ್ ಈಗ ಈ ಕೆಲಸಗಳಿಗೆ ಶ್ರೀಲಂಕಾ ಸೇನೆಯೊಂದಿಗೆ ಒಪ್ಪಂದ ಮಾಡಿಕೊಂಡಿದೆ. ಆ ಮೂಲಕ ಭಾರತೀಯ ಸೇನೆಗೆ ನಿಮ್ಮ ಅಗತ್ಯವಿಲ್ಲ ಎಂದು ಪರೋಕ್ಷವಾಗಿ ಹೇಳಿದ್ದಾರೆ.

# ಅಮೆರಿಕದಲ್ಲಿ ವಿಮಾನ ಪತನ, 5 ಸಾವು

**ವಾಷಿಂಗ್ಟನ್:** ಅಮೆರಿಕದ ಟೆನೆಸ್ಸೀ ರಾಜ್ಯದ ನ್ಯಾಶ್ವಿಲ್ಲೆ ನಗರದ ಹೆದ್ದಾರಿ ಪಕ್ಕ ಲಘು ವಿಮಾನವೊಂದು ಪತನಗೊಂಡು 5 ಮಂದಿ ಸಾವನ್ನಪ್ಪಿರುವುದಾಗಿ ನಗರದ ಪೊಲೀಸ್ ಇಲಾಖೆ ಹೇಳಿದೆ. ಒಂದು ಇಂಜಿನ್ನ ಲಘು ವಿಮಾನ ತಾಂತ್ರಿಕ ದೋಷದಿಂದ ಪತನಗೊಂಡಿರುವ ಸಾಧ್ಯತೆಯಿದೆ. ಸೋಮವಾರ ತಡರಾತ್ರಿ ನ್ಯಾಶ್ವಿಲ್ಲೆಯ ಜಾನ್ಟ್ಯೂನ್ ವಿಮಾನ ನಿಲ್ದಾಣದ ನಿಯಂತ್ರಣ ಕಚೇರಿಗೆ ವಿಮಾನದ ಪೈಲಟ್ ತುರ್ತು ಸಂದೇಶ ರವಾನಿಸಿದ್ದು ಇಂಜಿನ್ನಲ್ಲಿ ಸಮಸ್ಯೆ ಕಾಣಿಸಿಕೊಂಡಿದ್ದು ವಿದ್ಯುತ್ ಪೂರೈಕೆ ಸ್ಥಗಿತಗೊಂಡಿರುವುದರಿಂದ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶಕ್ಕೆ ಅನುಮತಿ ಕೋರಿದ್ದಾನೆ. ಕೆಲ ಕ್ಷಣದಲ್ಲೇ ವಿಮಾನ ನಿಲ್ದಾಣದ ಹೊರಗಿರುವ ಹೆದ್ದಾರಿಯ ಬಳಿ ವಿಮಾನ ಪತನಗೊಂಡಿದೆ ಎಂದು ಮೂಲಗಳನ್ನು ಉಲ್ಲೇಖಿಸಿ ಸ್ಥಳೀಯ ಮಾಧ್ಯಮ ವರದಿ ಮಾಡಿದೆ.



# ಮಾಲ್ಡೀವ್ಸ್‌ಗೆ ಚೀನಾದಿಂದ ಉಚಿತ ಮಿಲಿಟರಿ ನೆರವು

**ಮಾಲೆ:** ಭಾರತದೊಂದಿಗಿನ ರಾಜತಾಂತ್ರಿಕ ವಿವಾದದ ನಡುವೆ, ಮಾಲ್ಡೀವ್ಸ್ ಚೀನಾದಿಂದ ಉಚಿತ ಮಿಲಿಟರಿ ನೆರವು ಪಡೆಯಲಿದೆ. ಚೀನಾ ಸೋಮವಾರ ಮಾಲ್ಡೀವ್ಸ್ ಜತೆ ರಕ್ಷಣಾ ಸಹಕಾರ ಒಪ್ಪಂದಕ್ಕೆ ಸಹಿ ಹಾಕಿದ್ದು ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸಲು ಉಚಿತ ಮಿಲಿಟರಿ ನೆರವು ಒದಗಿಸುವುದಾಗಿ ಘೋಷಿಸಿದೆ. ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರವನ್ನು ಹೆಚ್ಚಿಸುವ ಕುರಿತು ಚರ್ಚಿಸಲು ಮಾಲ್ಡೀವ್ಸ್ ನ ರಕ್ಷಣಾ ಸಚಿವ ಮುಹಮ್ಮದ್ ಘಸನ್ ಮೌಮೂನ್ ಚೀನಾದ ಅಂತರಾಷ್ಟ್ರೀಯ ರಕ್ಷಣಾ ಸಹಕಾರ ವಿಭಾಗದ ಸಹಾಯಕ ನಿರ್ದೇಶಕ ಮೇಜರ್ ಜನರಲ್ ಝೂಂಗ್ ಬವೋಕುನ್ರನ್ನು ಭೇಟಿಯಾಗಿದ್ದರು. ಮಾಲ್ಡೀವ್ಸ್ ನಲ್ಲಿರುವ ಭಾರತದ ಸೇನಾ ಸಿಬಂದಿಗಳನ್ನು ವಾಪಾಸು ಕಳುಹಿಸಲು ಮಾಲ್ಡೀವ್ಸ್ ಅಧ್ಯಕ್ಷ ಮುಹಮದ್ ಮುಯಿಝ್ಝು ಗಡುವು ವಿಧಿಸಿದ ಬಳಿಕ ಈ ಭೇಟಿ ನಡೆದಿದೆ. ಈ ಸಂದರ್ಭ ಮಾಲ್ಡೀವ್ಸ್ ಗೆ ಉಚಿತ ಮಿಲಿಟರಿ ನೆರವು, 12 ಪರಿಸರ ಸ್ನೇಹಿ ಆಂಬ್ಯುಲೆನ್ಸ್ ಗಳನ್ನು ಉಚಿತವಾಗಿ ಒದಗಿಸುವ ಒಪ್ಪಂದಕ್ಕೆ ಸಹಿ ಹಾಕಲಾಗಿದೆ ಎಂದು ಮಾಲ್ಡೀವ್ಸ್ ನ ಮಾಧ್ಯಮಗಳು ವರದಿ ಮಾಡಿವೆ. ಮಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ಬಗ್ಗೆ ಮಾಹಿತಿ ನೀಡಲಾಗಿದ್ದು ಮಾಲ್ಡೀವ್ಸ್ ಗೆ ಚೀನಾದ ರಾಯಭಾರಿ ವಾಂಗ್ ಲಿಕ್ಸಿನ್ ಮತ್ತಿತರ ಪ್ರಮುಖರು ಉಪಸ್ಥಿತರಿದ್ದರು.



# ಇಸ್ರೇಲ್ ಮೇಲೆ ಕ್ಷಿಪಣಿ ದಾಳಿ: ಭಾರತೀಯ ವ್ಯಕ್ತಿ ಸಾವು

**ಜೆರುಸಲೆಂ:** ಲೆಬನಾನ್ನಿಂದ ಉಡಾಯಿಸಲ್ಪಟ್ಟ ಟ್ಯಾಂಕ್–ನಿಗ್ರಹ ಕ್ಷಿಪಣಿ ದಾಳಿಗೆ ಸೋಮವಾರ ಇಸ್ರೇಲ್ನ ಉತ್ತರ ಗಡಿ ಸಮೀಪ ಭಾರತೀಯ ನಾಗರಿಕರೊಬ್ಬರು ಮೃತಪಟ್ಟು ಇತರ ಇಬ್ಬರು ಗಾಯಗೊಂಡಿದ್ದಾರೆ. ಉತ್ತರ ಗಡಿಯ ಮಾರ್ಗಲಿಯೊಟ್ ಸಮುದಾಯವಿರುವ ಸ್ಥಳದಲ್ಲಿ ಈ ದಾಳಿ ನಡೆದಿದೆ.

ಮೃತ ವ್ಯಕ್ತಿ ಹಾಗೂ ಇತರ ಇಬ್ಬರು ಗಾಯಾಳುಗಳು ಕೇರಳ ಮೂಲದವರೆಂದು ತಿಳಿದು ಬಂದಿದೆ. ಉತ್ತರ ಇಸ್ರೇಲ್ನ ಗಲೀಲೀ ಪ್ರಾಂತ್ಯದ ಸಮುದಾಯ ಕೃಷಿ ಸಮುದಾಯ ಮೊಶವ್ ಎಂಬಲ್ಲಿನ ಪ್ಲಾಂಟೇಶನ್ ಮೇಲೆ ಈ ಕ್ಷಿಪಣಿ ಬಿದ್ದಿದೆ.

ಕೇರಳದ ಕೊಲ್ಲಂನ ಪಟ್ನಬಿನ್ ಮ್ಯಾಕ್ಸ್ವೆಲ್ ಮೃತಪಟ್ಟಿದ್ದಾರೆ. ಬುಶ್ ಜೋಸೆಫ್ ಜಾರ್ಜ್ ಮತ್ತು ಪೌಲ್ ಮೆಲ್ವಿನ್ ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ದಾಳಿಯನ್ನು ಲೆಬನಾನ್ನಲ್ಲಿರುವ ಹಝ್ಬುಲ್ಲಾ ಪಡೆ ನಡೆಸಿರಬೇಕೆಂದು ಸಂಶಯಿಸಲಾಗಿದೆ. ಈ ಗುಂಪು ಹಮಾಸ್ಗೆ ಬೆಂಬಲವಾಗಿ ಅಕ್ಟೋಬರ್ 8ರಿಂದ ಇಸ್ರೇಲ್ ಮೇಲೆ ರಾಕೆಟ್, ಕ್ಷಿಪಣಿ ಮತ್ತು ಡ್ರೋನ್ ದಾಳಿ ನಡೆಸುತ್ತಿದೆ.

ಸೋಮವಾರದ ದಾಳಿಯಲ್ಲಿ ಒಟ್ಟು ಏಳು ವಿದೇಶಿ ಕೆಲಸಗಾರರು ಗಾಯಗೊಂಡಿದ್ದಾರೆಂದು ಎಂಡಿಎ ಹೇಳಿದ್ದು ಈ ದಾಳಿಗೆ ಪ್ರತಿಯಾಗಿ ಇಸ್ರೇಲ್ ಪಡೆ ಶೆಲ್ ದಾಳಿ ನಡೆಸಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಕನ್ನಡತಿಯರ ಜಡೆ ಜಗಳದ ಮಧ್ಯೆ ಮೀನಾಕ್ಷಿಗೆ ಸಿಕ್ತು ಬಂಪರ್ ಆಫರ್



ಟಾಲಿವುಡ್‌ನಲ್ಲಿ ಶ್ರೀಲೀಲಾ ಹವಾ ಕಮ್ಮಿಯಾದಂತಿದೆ. ರಶ್ಮಿಕಾಗೆ ಠಕ್ಕರ್ ಕೊಟ್ಟಿದ್ದ ಶ್ರೀಲೀಲಾಗೆ ಪೈಪೋಟಿ ಕೊಟ್ಟಿದ್ದಾರೆ ಮೀನಾಕ್ಷಿ ಚೌಧರಿ. ‘ಗುಂಟೂರು ಖಾರಂ’ ಸಿನಿಮಾ ನಂತರ ಮೀನಾಕ್ಷಿಗೆ ಬಂಪರ್ ಆಫರ್‌ಗಳು ಅರಸಿ ಬರುತ್ತಿವೆ. ಶ್ರೀಲೀಲಾರನ್ನೇ ಮೀರಿ ಬೆಳೆಯುವ ಸೂಚನೆ ಸಿಕ್ತಿದೆ. ಕನ್ನಡತಿಯರ ಜಡೆ ಜಗಳದ ಮಧ್ಯೆ ಮೀನಾಕ್ಷಿಗೆ ಬಿಗ್ ಚಾನ್ಸ್ ಸಿಕ್ಕಿದೆ.

ಇತ್ತೀಚೆಗೆ ಶ್ರೀಲೀಲಾ ನಟಿಸಿದ 4–5 ಸಿನಿಮಾಗಳು ಮಕಾಡೆ ಮಲಗಿದ್ದವು. ಗುಂಟೂರು ಖಾರಂ ಚಿತ್ರದಲ್ಲಿ ಮಹೇಶ್ ಬಾಬುಗೆ ಶ್ರೀಲೀಲಾ ಫಸ್ಟ್ ಹೀರೋಯಿನ್ ಆಗಿದ್ರೆ, ಮೀನಾಕ್ಷಿ ಸೆಕೆಂಡ್ ಲೀಡ್ ನಾಯಕಿಯಾಗಿ ನಟಿಸಿದ್ದರು. ಈ ಚಿತ್ರದ ನಂತರ ಲೀಲಾ ಲಕ್ ಬದಲಾಗುತ್ತೆ ಎಂದುಕೊಂಡವರ ಲೆಕ್ಕಾಚಾರ ಉಲ್ಟಾ ಆಗಿದೆ. ಶ್ರೀಲೀಲಾ ಬದಲು ಮೀನಾಕ್ಷಿಗೆ ಬೇಡಿಕೆ ಜಾಸ್ತಿಯಾಗಿದೆ.

2021ರಲ್ಲಿ ತೆಲುಗಿನ ಕಿಲಾಡಿ, ಹಿಟ್ ಸಿನಿಮಾಗಳಲ್ಲಿ ನಟಿಸಿದ ಮೀನಾಕ್ಷಿ ಮಹೇಶ್ ಬಾಬು ಜೊತೆ ನಟಿಸಿದ ಮೇಲೆ ಸ್ಟಾರ್ ನಟರಿಗೆ ನಾಯಕಿಯಗಿದ್ದಾರೆ. ದಳಪತಿ ವಿಜಯ್ ನಟನೆಯ 68ನೇ ಚಿತ್ರಕ್ಕೆ ಮೀನಾಕ್ಷಿ ಹೀರೋಯಿನ್ ಆಗಿದ್ದಾರೆ. ವಿಶ್ವಕ್ ಸೇನ್, ವರುಣ್ ತೇಜ್, ದುಲ್ಕರ್ ಸಲ್ಮಾನ್ ಜೊತೆ ನಟಿಸುವ ಆಫರ್ ಸಿಕ್ಕಿದೆ.

ಅದಷ್ಟೇ ಅಲ್ಲ, ಮೆಗಾಸ್ಟಾರ್ ಚಿರಂಜೀವಿ ನಟನೆಯ ‘ವಿಶ್ವಂಭರ’ ಸಿನಿಮಾದಲ್ಲಿ ಮೀನಾಕ್ಷಿಗೆ ಉತ್ತಮ ಪಾತ್ರ ಸಿಕ್ಕಿದೆಯಂತೆ. ತೆಲುಗಿನಲ್ಲಿ ಬೇಡಿಕೆಯಿದ್ದ ಶ್ರೀಲೀಲಾ ಸಾಲು ಸಾಲು ಸಿನಿಮಾದಲ್ಲಿ ನಟಿಸಿದ್ದರು. ಈಗ ಆ ಸ್ಥಾನಕ್ಕೆ ಮೀನಾಕ್ಷಿ ಬಂದಿದ್ದಾರೆ. ನಿರ್ಮಾಪಕರು ಕೂಡ ಮೀನಾಕ್ಷಿಗೆ ಮಣೆ ಹಾಕ್ತಿದ್ದಾರೆ. ಓಡೋ ಕುದುರೆಗೆ ಗಾಳ ಹಾಕೋಕೆ ಟಾಲಿವುಡ್ ರೆಡಿಯಾಗಿದೆ.






# ‘ಯುಐ’ ಸಾಂಗ್ ಔಟ್- ಕಾಯ್ತಿದ್ದವರಿಗೆ ಟ್ರೋಲ್ ಸಾಂಗ್ ಕೊಟ್ಟ ಉಪ್ಪಿ

ನಟ ಕಮ್ ನಿರ್ದೇಶಕ ರಿಯಲ್ ಸ್ಟಾರ್ ಉಪ್ಪಿ ತಮ್ಮ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಎಲ್ಲರೂ ಕಾತರದಿಂದ ಎದುರು ನೋಡ್ತಿದ್ದ ಯುಐ ಚಿತ್ರದ ಸಾಂಗ್ ಈಗ ರಿಲೀಸ್ ಆಗಿದೆ. 5 ಭಾಷೆಯಲ್ಲಿ ರಿಲೀಸ್ ಆದ ಹಾಡಿನ ಸ್ಪೆಷಾಲಿಟಿ ಏನು? ಯಾವ ಕಂಟೆಂಟ್ ಮೇಲೆ ಉಪ್ಪಿ ಫೋಕಸ್ ಮಾಡಿದ್ದಾರೆ. ಕಾಯ್ತಿದ್ದವರಿಗೆ ಟ್ರೋಲ್ ಸಾಂಗ್ ಕೊಟ್ಟಿದ್ದಾರೆ.

ರಿಯಲ್ ಸ್ಟಾರ್ ಉಪೇಂದ್ರ ಮತ್ತೊಮ್ಮೆ ಮ್ಯಾಜಿಕ್ ಮಾಡಿದ್ದಾರೆ. ಪ್ರತಿ ಕಂಟೆಂಟ್‌ನಲ್ಲೂ ಒಂದು ಸ್ಪೆಷಲ್ ಎಲಿಮೆಂಟ್‌ನ ನಿಮ್ಮ ಮುಂದೆ ಇಡಲು ಸಖತ್ ತಯಾರಿ ಮಾಡಿಕೊಂಡಿದ್ದಾರೆ. ಇಂದು ಹೊಸದೊಂದು ಹಾಡು ರಿಲೀಸ್ ಮಾಡಿದ್ದಾರೆ. ಟ್ರೋಲ್ ಆದ ಸೋಷಿಯಲ್ ಮೀಡಿಯಾದ ಕಂಟೆಂಟ್ ಮೇಲೆ ಸಾಂಗ್ ಮಾಡಿ ಮತ್ತೆ ಗಮನ ಸೆಳೆದಿದ್ದಾರೆ. ಚಾಲ್ತಿಯಲ್ಲಿರುವ ಎಲ್ಲಾ ವಿಚಾರಗಳ ಮೇಲೆ ಉಪ್ಪಿ ಗಮನ ಹರಿಸಿದ್ದಾರೆ. ಸಾಂಗ್ ನೋಡಿದವರು ಈ ವಿಚಾರಕ್ಕೆ ಉಪ್ಪಿ ಸ್ಪೆಷಲ್ ಅಂತಿದ್ದಾರೆ.

ಸದ್ಯ ಟ್ರೋಲ್ ಸಾಂಗ್‌ಗೆ ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ಮಸ್ತ್ ಆಗಿ ಹೆಜ್ಜೆ ಹಾಕಿದ್ದಾರೆ. ಯುಐ ಬೆಡಗಿ ಡ್ಯಾನ್ಸ್‌ಗೆ ಪ್ಲಸ್ ಲಿರಿಕ್ಸ್‌ಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಮುಂಬೈನ ಯುಟ್ಯೂಬ್ ಹೆಡ್ ಆಫೀಸ್ ನಲ್ಲಿ ಈ ಸಾಂಗ್ ಲಾಂಚ್ ಮಾಡಲಾಗಿದೆ. ಬೆಳ್ಳುಳ್ಳಿ ಕಬಾಬ್, ಕರಿಮಣಿ ಮಾಲೀಕ, ಗುಮ್ಮಿಸಿಕೊಳ್ತೀಯಾ, ತಗಡು ಹೀಗೆ ನಾ ನಾ ವೈರಲ್ ಆದ ಪದಗಳನ್ನೇ ಬಳಸಿ ಯುಐ ಟ್ರೋಲ್ ಸಾಂಗ್ ರಿಲೀಸ್ ಮಾಡಿ ಸೈ ಎನಿಸಿಕೊಂಡಿದ್ದಾರೆ. 5 ಭಾಷೆಗಳಲ್ಲಿ ರೆಡಿಯಾಗಿರುವ ಹಾಡಿಗೆ ಆಯಾ ಭಾಷೆಗೆ ಅನುಸಾರ ಟ್ರೋಲ್‌ಗಳನ್ನ ಕಂಟೆಂಟ್ ಆಗಿ ಬಳಸಲಾಗಿದೆ. ಹಾಡು ಮತ್ತೆ ಮತ್ತೆ ನೋಡಬೇಕು ಅರ್ಥ ಮಾಡಿಕೊಳ್ಳಬೇಕು ಅಂತ ಫೀಲ್ ಕೊಡ್ತಿದೆ. ಒಟ್ನಲ್ಲಿ ಉಪ್ಪಿ ನಯಾ ಐಡಿಯಾಗೆ ಫ್ಯಾನ್ಸ್ ಬೋಲ್ಡ್ ಆಗಿದ್ದಾರೆ. ಲಹರಿ ಸಂಸ್ಥೆ ಜೊತೆ ಶ್ರೀಕಾಂತ್ ಸೇರಿಕೊಂಡು ‘ಯುಐ’ಗೆ ಬಂಡವಾಳ ಹಾಕಿದ್ದಾರೆ.




# ‘ರೋಸಿ’ ಸಿನಿಮಾದಲ್ಲಿ ಒರಟ ಪ್ರಶಾಂತ್

ಲೂಸ್ ಮಾದ ಯೋಗಿ ಇದೀಗ 50ನೇ ಚಿತ್ರದ ಮೂಲಕ ಸದ್ದು ಮಾಡುತ್ತಿದ್ದಾರೆ. ‘ರೋಸಿ’ ಸಿನಿಮಾದಲ್ಲಿ ಭಿನ್ನ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಶ್ರೀನಗರ ಕಿಟ್ಟಿ ಬೆನ್ನಲ್ಲೇ ಇದೀಗ ಒರಟ ಪ್ರಶಾಂತ್ ಕೂಡ ‘ರೋಸಿ’ ಚಿತ್ರತಂಡವನ್ನು ಸೇರಿಕೊಂಡಿದ್ದಾರೆ. ‘ರೋಸಿ’ ಚಿತ್ರದಲ್ಲಿ ಸಖತ್ ರಗಡ್ ಆಗಿ ಪ್ರಶಾಂತ್ ಕಾಣಿಸಿಕೊಂಡಿದ್ದಾರೆ.



ಒರಟ ಪ್ರಶಾಂತ್ ಮಾಡುತ್ತಿರುವ ಪಾತ್ರದ ಹೆಸರು ಸ್ವಾಮಿ ಅಣ್ಣ ಎಂದು. ಚಿತ್ರತಂಡ ಒರಟ ಪ್ರಶಾಂತ್ ಅವರ ಪಾತ್ರವನ್ನು ಪೋಸ್ಟರ್ ಮೂಲಕ ಪರಿಚಯಿಸಿದ್ದಾರೆ. ಇದರಲ್ಲಿ ಖಡಕ್ ಮಾಸ್ ಪಾತ್ರದ ಮೂಲಕ ಅವರು ಗಮನ ಸೆಳೆದಿದ್ದಾರೆ. ಈ ಸಿನಿಮಾ ಬಗ್ಗೆ ಇರುವ ನಿರೀಕ್ಷೆ ಈಗ ಹೆಚ್ಚಾಗಿದೆ. ಒರಟನ ನಯಾ ಅವತಾರ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ.

‘ರೋಸಿ’ ಚಿತ್ರಕ್ಕೆ ಶೂನ್ಯ ಅವರ ನಿರ್ದೇಶನ ಇದೆ. ಈ ಚಿತ್ರ ಪಕ್ಕಾ ಗ್ಯಾಂಗ್‌ಸ್ಟರ್ ಸಿನಿಮಾವಾಗಿದ್ದು, ಒರಟ ಪ್ರಶಾಂತ್ ನಮ್ಮ ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಸ್ವಾಮಿ ಅಣ್ಣ ಎಂಬುದು ಅವರ ಪಾತ್ರದ ಹೆಸರು. ಈ ಸಿನಿಮಾದಲ್ಲಿ ಇನ್ನೂ ಎರಡು ಮುಖ್ಯ ಪಾತ್ರಗಳಿವೆ. ಸದ್ಯದಲ್ಲೇ ಮಾಹಿತಿ ರಿವೀಲ್ ಮಾಡುತ್ತೇವೆ ಎಂದಿದ್ದಾರೆ ನಿರ್ದೇಶಕ ಶೂನ್ಯ.

‘ರೋಸಿ’ ಸಿನಿಮಾ ಚಿತ್ರೀಕರಣ ಮುಗಿದಿದ್ದು, ಸದ್ಯದಲ್ಲೇ ಚಿತ್ರದ ಟ್ರೈಲರ್ ರಿಲೀಸ್ ಆಗಲಿದೆ. ಚಿತ್ರಕ್ಕೆ ಗುರುಕಿರಣ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಚಿತ್ರಕ್ಕೆ ಛಾಯಾಗ್ರಾಹಣ ಎಸ್.ಕೆ.ರಾವ್, ಹರೀಶ್ ಕೊಮ್ಮೆ ಸಂಕಲನ ಸಿಕ್ಕಿದೆ. ನಿರ್ಮಾಪಕರಾದ ಡಿ.ವೈ.ರಾಜೇಶ್ ಹಾಗೂ ಡಿ.ವೈ.ವಿನೋದ್ ನಿರ್ಮಾಣ ಮಾಡಿದ್ದಾರೆ.




## ಮುಂಬೈ ವಿರುದ್ಧ ಡೆಲ್ಲಿಗೆ 29 ರನ್‌ಗಳ ಗೆಲುವು

# ಮೆಗ್ ಲ್ಯಾನಿಂಗ್, ರಾಡ್ರಿಗಾಸ್ ಫಿಫ್ಟಿ

**ನವದೆಹಲಿ:** ಮೆಗ್ ಲ್ಯಾನಿಂಗ್ ಮತ್ತು ಜೆಮಿಮಾ ರಾಡ್ರಿಗಾಸ್ ಅಮೋಘ ಅರ್ಧಶತಕ ನೆರವಿನಿಂದ ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ 29 ರನ್‌ಗಳ ಭರ್ಜರಿ ಜಯ ಸಾಧಿಸಿತು.

ದೆಹಲಿಯಲ್ಲಿ ಮಂಗಳವಾರ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ 4 ವಿಕೆಟ್ ನಷ್ಟಕ್ಕೆ 192 ರನ್ ಗಳಿಸಿತು. 193 ಸವಾಲಿನ ರನ್ ಗುರಿ ಬೆನ್ನತ್ತಿದ ಮುಂಬೈ ತಂಡವು 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 163 ರನ್ ಅಷ್ಟೇ ಗಳಿಸಿ ಸೋಲೊಪ್ಪಿಕೊಂಡಿತು.

ಟಾಸ್ ಗೆದ್ದ ಮುಂಬೈ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿತು. ಮೊದಲು ಬ್ಯಾಟ್ ಮಾಡಿದ ಡೆಲ್ಲಿ ಉತ್ತಮ ಶುಭಾರಂಭ ನೀಡಿತು. ಆರಂಭಿಕರಾಗಿ ಫೀಲ್ಡಿಗಿಳಿದ ಮೆಗ್ ಲ್ಯಾನಿಂಗ್ ಅರ್ಧಶತಕ (53 ರನ್, 6 ಫೋರ್, 2 ಸಿಕ್ಸ್) ಬಾರಿಸಿ ಗಮನ ಸೆಳೆದರು. ಮತ್ತೆ ಜೆಮಿಮಾ ರಾಡ್ರಿಗಾಸ್ ಕೂಡ ಔಟಾಗದೇ (69 ರನ್, 8 ಫೋರ್, 3 ಸಿಕ್ಸ್) ಫಿಫ್ಟಿ ಬಾರಿಸಿ ಮಿಂಚಿದರು. ಇವರ ಜೊತೆಗೆ ಶಫಾಲಿ ವರ್ಮಾ 28, ಆಲಿಸ್ ಕ್ಯಾಪ್ಸಿ 19, ಮರಿಜಾನ್ನೆ ಕಪ್ 11 ರನ್ ಸಿಡಿಸಿ ತಂಡದ ಗೆಲುವಿಗೆ ನೆರವಾದರು.

193 ರನ್ ಗುರಿ ಬೆನ್ನತ್ತಿದ ಮುಂಬೈ ತಂಡ ಆರಂಭಿಕ ಆಘಾತ ಎದುರಿಸಿತು. ಬ್ಯಾಟಿಂಗ್ ವೈಫಲ್ಯದಿಂದಾಗಿ ಡೆಲ್ಲಿ ವಿರುದ್ಧ ಸೋಲನುಭವಿಸಿತು. ಅಮನ್ಜೋತ್ ಕೌರ್ (42), ಹೇಲಿ ಮ್ಯಾಥ್ಯೂಸ್ (29), ಸಜೀವನ್ ಸಜನ (24 ರನ್ ಔಟಾಗದೆ) ಬಿಟ್ಟರೆ ಬೇರೆ ಯಾವ ಬ್ಯಾಟರ್ ಕೂಡ ಹೆಚ್ಚು ಹೊತ್ತು ಕ್ರೀಸ್‌ನಲ್ಲಿ ಉಳಿಯಲಿಲ್ಲ.



**ಜೆಸ್ ಜೊನಾಸೆನ್ ಮಿಂಚು:** ಡೆಲ್ಲಿ ತಂಡದ ಪರ ಬೌಲರ್ ಜೆಸ್ ಜೊನಾಸೆನ್ 3 ವಿಕೆಟ್ ಕಿತ್ತು ಮಿಂಚಿದರು. ಸಂಘಟಿತ ಬೌಲಿಂಗ್ ನೆರವಿನಿಂದ ಮುಂಬೈ ವಿರುದ್ಧ ಡೆಲ್ಲಿ ಗೆಲುವು ದಾಖಲಿಸಿತು. ಮರಿಜಾನ್ನೆ ಕಪ್ 2 ಹಾಗೂ ಶಿಖಾ ಪಾಂಡೆ, ಟಿಟಾಸ್ ಸಾಧು, ರಾಧಾ ಯಾದವ್ ತಲಾ 1 ಒಂದು ವಿಕೆಟ್ ಕಿತ್ತರು.

**ಅಂಕಪಟ್ಟಿಯಲ್ಲಿ ಡೆಲ್ಲಿ ಅಗ್ರಸ್ಥಾನ:** ಮಹಿಳೆಯರ ಪ್ರೀಮಿಯರ್ ಲೀಗ್ ಅಂಕಪಟ್ಟಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಅಗ್ರ ಸ್ಥಾನದಲ್ಲಿದೆ. ಮುಂಬೈ ತಂಡ ಎರಡನೇ ಸ್ಥಾನದಲ್ಲೇ ಮುಂದುವರಿದಿದೆ.

# ಸೋಲಿನಿಂದ ಕಂಗೆಟ್ಟಿರುವ ಗುಜರಾತ್‌ಗೆ ಆರ್‌ಸಿಬಿ ಸವಾಲು

ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ಇಂದು ನಡೆಯಲಿರುವ ವುಮೆನ್ಸ್ ಪ್ರೀಮಿಯರ್ ಲೀಗ್ ನ 13ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿದೆ. ಈಗಾಗಲೇ ನಾಲ್ಕು ಪಂದ್ಯಗಳನ್ನಾಡಿರುವ ಗುಜರಾತ್ ಜೈಂಟ್ಸ್ ತಂಡವು ಇದುವರೆಗೆ ಒಂದೇ ಒಂದು ಪಂದ್ಯ ಗೆದ್ದಿಲ್ಲ.

ಇದೀಗ ದ್ವಿತೀಯಾರ್ಧದ ಮೊದಲ ಪಂದ್ಯದಲ್ಲೇ ಬಲಿಷ್ಠ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸುತ್ತಿದೆ. ಈ ಪಂದ್ಯದಲ್ಲಿ ಗೆಲ್ಲುವ ಮೂಲಕ ಗೆಲುವಿನ ಖಾತೆ ತೆರೆಯುವ ಇರಾದೆಯಲ್ಲಿದೆ ಬೆತ್ ಮೂನಿ ಪಡೆ. ಅತ್ತ ಆರ್‌ಸಿಬಿ ತಂಡವು ಆಡಿರುವ 5 ಪಂದ್ಯಗಳಲ್ಲಿ 3 ಜಯ ಸಾಧಿಸಿದೆ. ಈ ಮೂಲಕ ಅಂಕಪಟ್ಟಿಯಲ್ಲಿ 2ನೇ ಸ್ಥಾನ ಅಲಂಕರಿಸಿದೆ.

ಒಂದು ವೇಳೆ ಗುಜರಾತ್ ಜೈಂಟ್ಸ್ ವಿರುದ್ಧ ಇಂದು ಆರ್ ಸಿಬಿ ತಂಡ ಜಯ ಸಾಧಿಸಿದರೆ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಲಿದೆ. ಸದ್ಯ 5 ಪಂದ್ಯಗಳಲ್ಲಿ 4 ಗೆಲುವು ದಾಖಲಿಸಿರುವ ಡೆಲ್ಲಿ ಕ್ಯಾಪಿಟಲ್ಸ್ ತಂಡವು ಪಾಯಿಂಟ್ಸ್ ಟೇಬಲ್ ನಲ್ಲಿ ಮೊದಲ ಸ್ಥಾನದಲ್ಲಿದೆ.




**ಉಭಯ ತಂಡಗಳ ಮುಖಾಮುಖಿ:** ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಇದುವರೆಗೆ 3 ಪಂದ್ಯಗಳಲ್ಲಿ ಮುಖಾಮುಖಿಯಾಗಿದೆ. ಈ ವೇಳೆ ಆರ್ ಸಿಬಿ 2 ಪಂದ್ಯಗಳಲ್ಲಿ ಜಯ ಸಾಧಿಸಿದರೆ, ಗುಜರಾತ್ ಜೈಂಟ್ಸ್ ಒಂದು ಮ್ಯಾಚ್ ನಲ್ಲಿ ಗೆಲುವು ದಾಖಲಿಸಿದೆ. ಇನ್ನು ಈ ಬಾರಿಯ ಮೊದಲಾರ್ಧದಲ್ಲಿ ನಡೆದ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ವಿರುದ್ಧ ಆರ್ ಸಿಬಿ 8 ವಿಕೆಟ್ ಗಳ ಭರ್ಜರಿ ಗೆಲುವು ದಾಖಲಿಸಿತ್ತು. ಹೀಗಾಗಿ ಇಂದಿನ ಪಂದ್ಯದಲ್ಲೂ ಗೆಲ್ಲುವ ಫೇವರೇಟ್ ತಂಡವಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಗುರುತಿಸಿಕೊಂಡಿದೆ.

# ನನ್ನ ಶಾಲೆ ನನ್ನ ಜವಾಬ್ದಾರಿ ಕಾರ್ಯಕ್ರಮಕ್ಕೆ ಚಾಲನೆ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಾವು ಕಲಿತ ಶಾಲೆಗೆ ವೈಯಕ್ತಿಕವಾಗಿ 10 ಲಕ್ಷ ರೂ. ದೇಣಿಗೆ ನೀಡಿದ್ದಾರೆ. ಈ ದೇಣಿಗೆಯನ್ನು ನೀಡುವ ಮೂಲಕ ನನ್ನ ಶಾಲೆ ನನ್ನ ಜವಾಬ್ದಾರಿ ಎಂಬ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ. ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ನಮ್ಮ ಶಾಲೆ, ನಮ್ಮ ಜವಾಬ್ದಾರಿ ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ಬಲವರ್ಧನೆ ಕಾರ್ಯಕ್ರಮಕ್ಕೆ ಸಿಎಂ ಚಾಲನೆ ನೀಡಿದರು.

ಕಾರ್ಯಕ್ರಮ ಚಾಲನೆ ವೇಳೆ ಸಿಎಂ ಸಿದ್ದರಾಮಯ್ಯ ತಾನು ಓದಿದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ 10 ಲಕ್ಷ ದೇಣಿಗೆ ನೀಡಿದರು. ಸಿದ್ದರಾಮಯ್ಯ ಅವರು ತಾವು ಪ್ರಾಥಮಿಕ ಶಿಕ್ಷಣ ಪಡೆದ ಕುಪ್ಪೇಗಾಲ ಹಾಗೂ ಸಿದ್ದರಾಮನಹುಂಡಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ತಲಾ ? 10 ಲಕ್ಷ ವೈಯಕ್ತಿಕ ನೆರವು ನೀಡುವ ಮೂಲಕ ಯೋಜನೆ ಉದ್ಘಾಟನೆ ಮಾಡಿದರು. ಈ ವೇಳೆ ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಂದಾಯ ಸಚಿವ ಕೃಷ್ಣಬೈರೇಗೌಡ, ಉನ್ನತ ಶಿಕ್ಷಣ ಸಚಿವ ಸುಧಾಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶಾಲೆಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ‘ನನ್ನ ಶಾಲೆ, ನನ್ನ ಜವಾಬ್ದಾರಿ’ ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಶಿಕ್ಷಣದಿಂದ ಜೀವನ ಉಜ್ವಲಗೊಳಿಸಿಕೊಂಡ ಹಳೆ ವಿದ್ಯಾರ್ಥಿಗಳು ನಾವು ಓದಿದ ಶಾಲೆಗಳ ಅಭಿವೃದ್ಧಿಗೆ ಹಣ ನೀಡಿ ಅಭಿವೃದ್ಧಿಯ ಜವಾಬ್ದಾರಿಯನ್ನು ಹೊತ್ತಿಕೊಳ್ಳಬೇಕು ಎಂಬ ಸಂದೇಶ ಸಾರಿದೆ.

ಇನ್ನು ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಸಿಎಂ ಸಿದ್ದರಾಮಯ್ಯನವರು ತಾವು ಕಲಿತ ಸಿದ್ದರಾಮನಹುಂಡಿ ಹಾಗೂ ಕುಪ್ಪೆಗಾಲ ಸರ್ಕಾರಿ ಶಾಲೆಯ ಮಕ್ಕಳೊಡನೆ ಸಂವಾದ ನಡೆಸಿದರು. ವೈಚಾರಿಕತೆ, ವೈಜ್ಞಾನಿಕತೆ ಬೆಳೆಸಿಕೊಳ್ಳಲು ವಿದ್ಯಾರ್ಥಿಗಳಿಗೆ ಸಿಎಂ ಸಲಹೆ ನೀಡಿದರು. ಮಕ್ಕಳು ಸಂವಿಧಾನ ಪೀಠಿಕೆ ಹೇಳಿದರು. ಆಗ ಸಂವಿಧಾನವನ್ನು ಅರಿತುಕೊಳ್ಳಬೇಕು ಎಂದ ಮುಖ್ಯಮಂತ್ರಿಗಳು ಮಕ್ಕಳಿಗೆ ಹೇಳಿದರು. ಸಂವಿಧಾನ ಏನು ಹೇಳುತ್ತದೆ ಹೇಳಿ ನೋಡೋಣ ಎಂದು ಮಕ್ಕಳನ್ನು ಕೇಳಿದಾಗ ಮಕ್ಕಳು ಸಂವಿಧಾನದ ಪೂರ್ಣ ಪೀಠಿಕೆಯನ್ನು ಹೇಳಿದರು.



ಕೇವಲ ಕಂಠಪಾಠ ಮಾಡಿದರೆ ಸಾಲದು, ಅದರ ತಿರುಳನ್ನು ಅರಿತು ಅದರಂತೆ ನಡೆಯಬೇಕು. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಸಂವಿಧಾನದ ತಿರುಳು. ಸಮಾನತೆ ಸಮಸಮಾಜ ನಿರ್ಮಾಣವಾಗಬೇಕು. ಬುದ್ಧ, ಬಸವ, ಅಂಬೇಡ್ಕರ್ ಅವರು ಇದನ್ನೇ ಹೇಳಿಕೊಂಡು ಬಂದಿದ್ದರೂ ಇದು ಪೂರ್ಣವಾಗಿ ಹೋಗಿಲ್ಲ. ಇದೆಲ್ಲ ಓದಿ ಅರ್ಥ ಮಾಡಿಕೊಂಡು ಮಕ್ಕಳು ಮನುಷ್ಯತ್ವ ಬೆಳೆಸಿಕೊಳ್ಳಬೇಕು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು. ಸರ್ಕಾರಿ ಶಾಲೆಗಳಲ್ಲಿ ಕೆಲವು ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಶಾಲೆಯ ಅಭಿವೃದ್ಧಿಗೆ ಸರ್ಕಾರ ಉಚಿತ ಶಿಕ್ಷಣ ನೀಡುತ್ತಿದೆ. ಸಂವಿಧಾನ ಜಾರಿಗೆ ಬಂದ ನಂತರ ಉಚಿತ ಶಿಕ್ಷಣವನ್ನು ಮೂಲಭೂತ ಹಕ್ಕನ್ನಾಗಿ ಮಾಡಿದೆ. ಹಾಗಾಗಿ ಎಲ್ಲರಿಗೂ ಶಿಕ್ಷಣ ಕಡ್ಡಾಯವಾಗಿದೆ ಎಂದು ಸಿಎಂ ಮಕ್ಕಳಿಗೆ ತಿಳಿ ಹೇಳಿದರು.

ಸಿಎಂ ಸಿದ್ದರಾಮಯ್ಯನವರು ಈ ಹಿಂದೆ ಕುಪ್ಪೆಗಾಲ ಶಾಲೆಗೆ 1 ಎಕರೆ ಜಾಗ ನೀಡಿ ಅಲ್ಲಿ 8 ಶಾಲಾ ಕೊಠಡಿಗಳನ್ನು, 2 ಶೌಚಾಲಯ ಹಾಗೂ ಕಾಂಪೌಂಡ್ ಒಳಗೊಂಡಂತೆ ಹೊಸ ಕಟ್ಟಡವನ್ನು ಕಟ್ಟಿಸಿದ್ದರು. ಇದೀಗ ಆ ಶಾಲೆಗೆ 10 ಲಕ್ಷ ರೂಪಾಯಿ ದೇಣಿಗೆ ನೀಡಿದ್ದಾರೆ. ಇದರಿಂದ ಶಾಲೆಗೆ ಬೇಕಾದ ಕಂಪ್ಯೂಟರ್, ಸ್ಮಾರ್ಟ್ ಟಿವಿ, ಪ್ರೊಜೆಕ್ಟರ್, ಬ್ಯಾಂಡ್ ಸೆಟ್, ಮೇಜು, ಕುರ್ಚಿ, ಬೆಂಚು ಖರೀದಿ ಮಾಡಲು ನೆರವಾಗಲಿದೆ.

ಕುಪ್ಪೆಗಾಲ ಶಾಲೆಗೆ ಈ ಹಿಂದೆ ಜಾಗ ನೀಡಿ ಹೊಸ ಕಟ್ಟಡವನ್ನು ಸಿದ್ದರಾಮಯ್ಯ ನಿರ್ಮಿಸಿಕೊಟ್ಟಿದ್ದರು. ಅವರು ಇದೀಗ ನಮ್ಮ ಶಾಲೆಗೆ ದೇಣಿಗೆ ನೀಡುತ್ತಿರುವುದು ತುಂಬಾ ಖುಷಿಯ ವಿಚಾರ. ಈ ಹಣದಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ಬೇಕಾದ ಪರಿಕರಗಳನ್ನು ಖರೀದಿಸಿ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಈ ಮೂಲಕ ಶ್ರಮಿಸಲಾಗುವುದು ಎಂದು ಶಾಲೆಯ ಮುಖ್ಯೋಪಾಧ್ಯಾಯ ಬಿ.ಭಾಗ್ಯ ಅವರು ತಿಳಿಸಿದ್ದಾರೆ.

# ನ್ಯಾಯಮೂರ್ತಿಗಳಿಗೆ ಸಾಷ್ಟಾಂಗ ನಮಸ್ಕಾರ ಎಂದ ಡಿಕೆಶಿ

**ಬೆಂಗಳೂರು:** ಇಡಿ ಪ್ರಕರಣದಲ್ಲಿ ಬಿಗ್ ರಿಲೀಫ್ ವಿಚಾರವಾಗಿ ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ‘ಸುಪ್ರೀಂಕೋರ್ಟ್ ಹಾಗೂ ನ್ಯಾಯಮೂರ್ತಿಗಳಿಗೆ ಸಾಷ್ಟಾಂಗ ನಮಸ್ಕಾರ ಎಂದಿದ್ದಾರೆ. ಬೆಂಗಳೂರಿನ ಗೃಹಕಚೇರಿ ಕೃಷ್ಣಾದಲ್ಲಿ ಮಾತನಾಡಿದ ಅವರು, ‘ಸುಪ್ರೀಂ ರಿಲೀಫ್ ನೀಡಿದ ಮಾಹಿತಿ ಸಿಕ್ಕಿದ್ದು, ಕಷ್ಟದ ಜೀವನದ ದೊಡ್ಡ ಸಂತೋಷದ ಇವತ್ತು. ವಕೀಲರುಗಳಿಂದ ಫೋನಿನ ಸುರಿಮಳೆ ಬರುತ್ತಿದೆ. ನಾನೇನೂ ತಪ್ಪು ಮಾಡಿಲ್ಲ. ಇಡಿ ಅಧಿಕಾರಿಗಳಿಂದ ಕ್ರಮ ಆಗಿದ್ದು ತಪ್ಪು ಎನ್ನುವ ಮಾಹಿತಿ ಗೊತ್ತಾಗ್ತಿದೆ. ಈಗಲೂ ಸಿಬಿಐನವರು ಏನೇನು ಮಾಡ್ತಿದ್ದಾರೆಂದು ಸದ್ಯದಲ್ಲೇ ಹೇಳುವೆ ಎಂದರು.

‘ಸುರ್ಜೇವಾಲ ಸೇರಿದಂತೆ ಎಲ್ಲರೂ ಸುಪ್ರೀಂಕೋರ್ಟ್‌ನಲ್ಲಿ ಇದ್ದರು. ಸುಪ್ರೀಂಕೋರ್ಟ್‌ನ ತೀರ್ಪಿನ ಮುಂದೆ ಮತ್ತೇನಿದೆ. ಜೈಲಿಗೆ ಹೋಗುವಾಗಲೂ ಆತ್ಮವಿಶ್ವಾಸದಿಂದಲೇ ಹೋಗಿದ್ದೆ, ಈಗಲೂ ಅದೇ ಆತ್ಮ ವಿಶ್ವಾಸದಲ್ಲಿದ್ದೇನೆ. ಸಿಬಿಐನವರು ಈಗಲೂ ನನ್ನ ಸುತ್ತಮುತ್ತಲಿನವರಿಗೆ ಕಿರುಕುಳ ನೀಡುತ್ತಿದ್ದಾರೆ. ಆದರೆ, ಯಾರೂ ಕೂಡ ವಿರೋಧಿಗಳಿಲ್ಲ, ಎಲ್ಲಾ ಪ್ರಕೃತಿಯ ನಿಯಮ ಎಂದಿದ್ದಾರೆ. ಇದೇ ವೇಳೆ ಕಲ್ಲು ಕಡಿದ್ರೆ ಆಕೃತಿ, ಪೂಜಿಸಿದ್ರೆ ಸಂಸ್ಕೃತಿ ಎಂಬ ಗಾದೆ ಮಾತು ಹೇಳಿದ್ದಾರೆ.



**ಘಟನೆ ವಿವರ:** ದೆಹಲಿಯಲ್ಲಿರುವ ಡಿಕೆ ಶಿವಕುಮಾರ್ ನಿವಾಸದಲ್ಲಿ 2018 ಆಗಸ್ಟ್ ತಿಂಗಳಲ್ಲಿ ಅಪಾರ ಪ್ರಮಾಣದ ನಗದು ಪತ್ತೆಯಾಗಿತ್ತು. ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದಾಗ ಅಪಾರ ಪ್ರಮಾನದ ನಗದು ಪತ್ತೆಯಾಗಿತ್ತು. ಆಗ ಅವರ ವಿರುದ್ಧ ಅಕ್ರಮ ಹಣ ವರ್ಗಾವಣೆ ಪ್ರಕರಣ ದಾಖಲಿಸಲಾಗಿತ್ತು. ಇದನ್ನು ಪ್ರಶ್ನಿಸಿ ಅವರು ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದರು. ಆದರೆ, ಜಾರಿ ನಿರ್ದೇಶನಾಲಯ ನೀಡಿದ ಸಮನ್ಸ್ ಅನ್ನು ರದ್ದುಗೊಳಿಸಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿತ್ತು. ಇದರ ವಿರುದ್ಧ ಡಿಕೆ ಶಿವಕುಮಾರ್ ಸುಪ್ರೀಂಕೋರ್ಟ್ ಮೆಟ್ಟಿಲೇರಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com